

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜನವರಿ 28 ಬುಧವಾರ 2026


46

ಸಂಪುಟ: 46 | ಸಂಚಿಕೆ: 279 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಕುಕ್ಕರಹಳ್ಳಿ ಕೆರೆಯಲ್ಲಿ ಮೊಸಳೆ ದರ್ಶನ!

- ದಡದಲ್ಲಿ ಬಿಸಿಲು ಕಾಯುತ್ತಾ ಮಲಗಿದ್ದ ಮೊಸಳೆ ಮೊಬೈಲ್‌ನಲ್ಲಿ ಸೆರೆ
- ಕೆರೆಯ ಕೊಳಕು ನೀರಲ್ಲೇ ಈಜುವ ಸಾಹಸಕ್ಕೆ ಕೈ ಹಾಕಿದ ಪ್ರವಾಸಿಗ!



ಮೈಸೂರು, ಜ. 27– ಮೈಸೂರು ಕುಕ್ಕರಹಳ್ಳಿ ಕೆರೆಯ ದಡದಲ್ಲಿ ಬಾರೀ ಗಾತ್ರದ ಮೊಸಳೆ ಕಾಣಿಸಿಕೊಂಡಿದೆ. ಮಾನಸಗಂಗೋತ್ರಿಯ ಸ್ಟೇಡಿಯಂ ಕಡೆಯ ಗೇಟ್ ಮೂಲಕ ಪ್ರವೇಶಿಸಿ, ಕೆರೆಯ ಹಿಂದಿನ ಏರಿಯ ಮೇಲೆ ರಂಗಾಯಣದ ಕಡೆಗೆ ಹಾದು ಹೋಗುವಾಗ ಪರಿಸರ ಪ್ರಿಯ ವಿಕಾಸ್‌ಗೌಡರ ಕಣ್ಣಿಗೆ ಕೆರೆ ದಡದಲ್ಲಿ ಮೊಸಳೆ ಮಲಗಿರುವುದು ಕಂಡಿದೆ.

ಕುಕ್ಕರಹಳ್ಳಿ ಕೆರೆಯಲ್ಲಿ ಮೊಸಳೆಗಳಿರುವುದು ಗೊತ್ತಿರುವ ಸಂಗತಿಯೇ ಆದರೂ ಅವುಗಳು ಜನರ ಕಣ್ಣಿಗೆ ಬೀಳುವುದು ಅಪರೂಪ. ಆದರೆ, ನನ್ನ ಕಣ್ಣಿಗೆ ನಾಲ್ಕು ಬಾರಿ ಮೊಸಳೆಗಳು ಕಾಣಿಸಿಕೊಂಡಿವೆ ಎಂದು ವಿಕಾಸ್‌ಗೌಡರು ಅಚ್ಚರಿ ಸಂಗತಿ ತಿಳಿಸಿದ್ದಾರೆ.

ಬಿಸಿಲು ಹೆಚ್ಚಾಗುತ್ತಿರುವ ಸಂದರ್ಭದಲ್ಲಿ ಮೈ ಕಾಯಿಸಿಕೊಳ್ಳುವ ಸಲುವಾಗಿ ಮೊಸಳೆಗಳು ದಡಕ್ಕೆ ಬಂದು ಮಲಗುವುದು ಸರ್ವೇ ಸಾಮಾನ್ಯ. ಆದರೆ ಜನರು ಕೆರೆ ಆಜುಬಾಜಲ್ಲಿ ಓಡಾಡುವಾಗ ಎಚ್ಚರವಾಗಿರುವುದು ಒಳ್ಳೆಯದು ಎಂದು ಅವರು ಹೇಳಿದ್ದಾರೆ.

ಕುಕ್ಕರಹಳ್ಳಿ ಕೆರೆ ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರಲಿದ್ದು, ವಿವಿ ಆಡಳಿತವೇ ಕೆರೆ ನಿರ್ವಹಣೆ ಮಾಡುತ್ತಾ ಬರುತ್ತಿದೆ. ಕೆರೆಯಲ್ಲಿ ಮೊಸಳೆಗಳಿವೆ. ಯಾರು ಕೂಡ ಕೆರೆಗೆ ಇಳಿಯುವ, ಈಜುವ ಸಾಹಸಕ್ಕೆ ಕೈಹಾಕಬಾರದೆಂದು ಕೆರೆ ತೀರದಲ್ಲಿ ಅಲ್ಲಲ್ಲಿ ಎಚ್ಚರಿಕಾ ಫಲಕಗಳನ್ನು ಅಳವಡಿಸಲಾಗಿದೆ.

ಹುಚ್ಚು ಸಾಹಸ: ಈ ನಡುವೆ ಮೈಸೂರಿಗೆ ಬಂದಿದ್ದ ಪ್ರವಾಸಿಗರೊಬ್ಬರು ಸೋಮವಾರ ಮಧ್ಯಾಹ್ನ ಕುಕ್ಕರಹಳ್ಳಿ ಕೆರೆಯಲ್ಲಿ ಈಜುವ ಸಾಹಸಕ್ಕೆ ಕೈ ಹಾಕಿದ್ದಾರೆ. ಆತ ಕೆರೆ ನೀರಿನಲ್ಲಿ ಮುಳುಗಿ ಏಳುತ್ತಿರುವುದನ್ನು ಕಂಡ ದಡದಲ್ಲಿ ಇದ್ದವರೊಬ್ಬರು, 'ಹೇ, ಇದು ಕೊಳಕು ನೀರು, ಈಜ ಬಾರದು' ಎಂದು ಕೂಗಿ ಹೇಳುವ ವೀಡಿಯೋವೊಂದು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ. ಈ ರೀತಿ ಈಜುವ ಸಾಹಸಕ್ಕೆ ಮುಂದಾದರೆ, ಅಕಸ್ಮಾತ್ ಮೊಸಳೆ ಬಾಯಿಗೆ ತುತ್ತಾಗುವ ಸಾಧ್ಯತೆ ಹೆಚ್ಚಿದೆ ಹಾಗಾಗಿ ಮೈಸೂರು ವಿಶ್ವವಿದ್ಯಾನಿಲಯ ಹಗಲು ವೇಳೆಯೂ ಕೆರೆಗೆ ಕಾವಲುಗಾರರ ನಿಯೋಜಿಸುವುದು ಅವಶ್ಯ ಎಂಬ ಆಗ್ರಹವೂ ಕೇಳಿ ಬರುತ್ತಿದೆ.



ಕುಕ್ಕರಹಳ್ಳಿ ಕೆರೆಯಲ್ಲಿ ಮುಳುಗೇಳುತ್ತಿರುವ ಪ್ರವಾಸಿಗ.

ಜಿ ರಾಮ್ ಜಿ ಪರ-ವಿರುದ್ಧ ಶಕ್ತಿ ಪ್ರದರ್ಶನ

- ಸ್ವಾತಂತ್ರ್ಯ ಉದ್ಯಾನವನದಲ್ಲಿ ಪ್ರತಿಭಟನೆ ಬಳಿಕ ರಾಜ್ಯಪಾಲರಿಗೆ ಕಾಂಗ್ರೆಸ್ ಮನವಿ
- ವಿಧಾನಸೌಧ-ವಿಕಾಸಸೌಧದ ನಡುವಿನ ಗಾಂಧಿ ಪ್ರತಿಮೆ ಬಳಿ ಬಿಜೆಪಿ-ಜೆಡಿಎಸ್ ಧರಣಿ



ಜಿ ರಾಮ್ ಜಿ ಖಂಡಿಸಿ ಫ್ರೀಡಂ ಪಾರ್ಕ್‌ನಲ್ಲಿ ಕಾಂಗ್ರೆಸ್ ಪ್ರತಿಭಟನೆ

ಬೆಂಗಳೂರು, ಜ.27(ಕೆಎಂಶಿ)–ಕೇಂದ್ರ ಸರ್ಕಾರ ನೂತನವಾಗಿ ಜಾರಿಗೆ ತಂದಿರುವ ವಿಬಿ–ಜಿ–ರಾಮ್–ಜಿ ಕಾಯಿದೆ ಪರ ಮತ್ತು ವಿರೋಧವಾಗಿ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಭಾರೀ ಶಕ್ತಿ ಪ್ರದರ್ಶನವೇ ಇಂದು ನಡೆಯಿತು.

ಮನರೇಗಾ ಯೋಜನೆ ಮರುಸ್ಥಾಪಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಸ್ವಾತಂತ್ರ್ಯ ಉದ್ಯಾನವನದಲ್ಲಿ ಕಾಂಗ್ರೆಸ್ ಬೃಹತ್ ಪ್ರತಿಭಟನೆ ನಡೆಸಿ, ಲೋಕ ಭವನಕ್ಕೆ ತೆರಳಿ ರಾಜ್ಯಪಾಲರಿಗೆ ಮನವಿ ಸಲ್ಲಿಸಿತು.

ಮತ್ತೊಂದೆಡೆ ವಿಧಾನಸೌಧ–ವಿಕಾಸಸೌಧ ನಡುವಿನ ಮಹಾತ್ಮ ಗಾಂಧಿ ಪ್ರತಿಮೆ ಬಳಿ ಪ್ರತಿಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಶಾಸಕರು ಧರಣಿ ಕುಳಿತು, ಕೇಂದ್ರ ಸರ್ಕಾರದ ನೂತನ ಯೋಜನೆ ಬೆಂಬಲಿಸಿ ರಾಜ್ಯ ಸರ್ಕಾರದ ನಿಲುವನ್ನು ಟೀಕಿಸಿದರು.

ಕೆಪಿಸಿಸಿ ಆಯೋಜಿಸಿದ್ದ ಪ್ರತಿಭಟನಾ ಸಭೆಯಲ್ಲಿ ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ರಾಜ್ಯ ಉಸ್ತುವಾರಿ ಹಾಗೂ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ, ಕೆಲವು ಸಚಿವರು, ಶಾಸಕರು ಭಾಗವಹಿಸಿ, ■ 6ನೇ ಪುಟಕ್ಕೆ

ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್‌ಗಳಿಗೆ ಗಾಂಧೀಜಿ ಹೆಸರು

ಬೆಂಗಳೂರು, ಜ.27(ಕೆಎಂಶಿ)– ರಾಜ್ಯದ 6000 ಗ್ರಾಪಂಗಳ ಕಚೇರಿಗೆ ಮಹಾತ್ಮಾ ಗಾಂಧಿ ಹೆಸರನ್ನು ಇಡುವ ಬಗ್ಗೆ ಮುಂದಿನ ಬಜೆಟ್‌ನಲ್ಲಿ ಘೋಷಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ತಿಳಿಸಿದ್ದಾರೆ.


ಮನರೇಗಾ ಮರು ಸ್ಥಾಪನೆ: ಮನರೇಗಾ ಕಾಯ್ದೆ ರದ್ದು ಕುರಿತು ಚರ್ಚಿಸಲು ವಿಶೇಷ ಅಧಿವೇಶನ ಕರೆಯಲಾಗಿದೆ. ಬಿಜೆಪಿ ಚರ್ಚೆಗೆ ಅವಕಾಶ ನೀಡುತ್ತಿಲ್ಲ. ಆದರೂ ಸರ್ಕಾರ ಖಂಡನಾ ನಿರ್ಣಯ ಕೈಗೊಳ್ಳಲಿದೆ. ಕೇಂದ್ರ ಸರ್ಕಾರದ ಜನ ವಿರೋಧಿ ನೀತಿಯನ್ನು ■ 6ನೇ ಪುಟಕ್ಕೆ



ವಿಧಾನಸೌಧ ಆವರಣ ಗಾಂಧಿ ಪ್ರತಿಮೆ ಮುಂದೆ ಬಿಜೆಪಿ–ಜೆಡಿಎಸ್ ಧರಣಿ.

ಕೆಸಿ ನಗರದಲ್ಲಿ ಕೆರೆಗೆ ಕಾಂಪೌಂಡ್ ನಿರ್ಮಾಣ
ವಿಧಾನಸಭೆಯಲ್ಲಿ ನಾಳೆ ಪ್ರಸ್ತಾಪ

ಮೈಸೂರು, ಜ.27– ಮೈಸೂರಿನ ಕೆ.ಸಿ.ನಗರದ ಕೆರೆಗೆ ಏಕಾಏಕಿ ಕಾಂಪೌಂಡ್ ನಿರ್ಮಾಣ ಸಂಬಂಧ ವಿಧಾನಸಭೆಯಲ್ಲಿ ಗುರುವಾರ ಗಮನ ಸೆಳೆಯುವ ಸೂಚನೆಯಡಿ ಪ್ರಸ್ತಾಪಿಸುವುದಾಗಿ ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ತಿಳಿಸಿದ್ದಾರೆ.



ಟಿ.ಎಸ್.ಶ್ರೀವತ್ಸ

ಕೆರೆ ಸುತ್ತ ಕಾಂಪೌಂಡ್ ನಿರ್ಮಿಸುತ್ತಿರುವುದು ಬೆಳಕಿಗೆ ಬಂದ ಬಳಿಕ ತಮ್ಮ ದೂರಿನನ್ವಯ ತಹಶೀಲ್ದಾರ್ ಇಂದು ಸ್ಥಳ ಪರಿಶೀಲನೆ ನಡೆಸಿದ್ದಾರೆ. ಈ ಬಗ್ಗೆ ತಾವು ವಿಚಾರಿಸಿದಾಗ ಕಾಂಪೌಂಡ್ ಹಾಕುತ್ತಿರುವ ಸ್ಥಳ ಕೆರೆ ಎಂಬುದು ಖಚಿತವಾಗಿದೆ ಎಂದರು. ಹಾಗಿದ್ದರೆ ಕಾಂಪೌಂಡ್ ಏಕೆ ತೆರವು ಮಾಡಿಸಿಲ್ಲ ಎಂದು ಪ್ರಶ್ನಿಸಿದ್ದಕ್ಕೆ, ನೋಟೀಸ್ ನೀಡಿದ್ದೇನೆ. ಸದ್ಯಕ್ಕೆ ಕೆಲಸ ಸ್ಥಗಿತಗೊಳಿಸಲು ಆದೇಶ ನೀಡಿದ್ದೀನಿ. ಅದರಂತೆ ಕೆಲಸ ನಿಲ್ಲಿಸಿದ್ದಾರೆ ಎಂದರು. ಅಲ್ಲಾ, ಕೆರೆ ಎಂದು ತಿಳಿದ ಮೇಲೆ ಕೂಡಲೇ ಕಾಂಪೌಂಡ್ ಧ್ವಂಸ ಮಾಡಿ, ಜಾಗವನ್ನು ಸರ್ಕಾರದ ವಶಕ್ಕೆ ತೆಗೆದುಕೊಂಡು, ಕಬಳಿಕೆಗೆ ಯತ್ನಿಸಿದ ವ್ಯಕ್ತಿ ವಿರುದ್ಧ ಪ್ರಕರಣ ದಾಖಲಿಸುವುದನ್ನು ಬಿಟ್ಟು ನೋಟೀಸ್ ನೀಡಿದ್ದೀರಾ ಎಂದು ಪ್ರಶ್ನಿಸಿದ್ದಾಗಿ 'ಮೈಸೂರು ಮಿತ್ರ'ನಿಗೆ ಶ್ರೀವತ್ಸ ತಿಳಿಸಿದ್ದಾರೆ. ಈ ವಿಷಯವನ್ನು ಇಷ್ಟಕ್ಕೆ ಬಿಡುವ ಪ್ರಶ್ನೆಯೇ ಇಲ್ಲ. ■ 6ನೇ ಪುಟಕ್ಕೆ

> ಸ್ಥಳ ಪರಿಶೀಲಿಸಿದ್ದೇನೆ. ಅಲ್ಲಿ ಕಾಂಪೌಂಡ್ ಕಾಮಗಾರಿ ನಡೆಯುತ್ತಿತ್ತು. ತಕ್ಷಣ ಸ್ಥಗಿತಗೊಳಿಸಲು ಹೇಳಿದ್ದೇನೆ. ಸಂಬಂಧಪಟ್ಟ ಸರ್ವೆ ಸಿಬ್ಬಂದಿಗೆ ಕೂಡಲೇ ಸರ್ವೆ ಮಾಡಿ, ವರದಿ ನೀಡುವಂತೆ ಸೂಚಿಸಿದ್ದೇನೆ. ಅದು ಕೆರೆಯೇ ಆಗಿದ್ದರೆ ಜಿಲ್ಲಾಧಿಕಾರಿಗಳಿಗೆ ವರದಿ ನೀಡುತ್ತೇನೆ. ಇಲ್ಲವೇ ಅದು ಕೃಷಿ ಭೂಮಿ ಎಂದು ತಿಳಿದುಬಂದರೆ ಕಾಮಗಾರಿ ಮುಂದುವರೆಸಲು ಅವಕಾಶ ಮಾಡಿಕೊಡಬೇಕಾಗುತ್ತದೆ ಸದ್ಯ ಯಾವುದೇ ಕಾಮಗಾರಿ ನಡೆಸದಂತೆ ತಿಳಿಸಿದ್ದೇನೆ.
> -ಮಹೇಶ್ ಕುಮಾರ್,
> ತಹಶೀಲ್ದಾರ್
> ಮೈಸೂರು ತಾಲೂಕು



ಅಧಿಕಾರ ಹಂಚಿಕೆ ಗೊಂದಲಕ್ಕೆ
ಫೆ.2ರ ವೇಳೆಗೆ ತೆರೆ

- ಪ್ರಿಯಾಂಕ್ ಗಾಂಧಿ ಮಧ್ಯ ಪ್ರವೇಶ
- ಜ.31ಕ್ಕೆ ಸಿಎಂ, ಡಿಸಿಎಂಗೆ ಬುಲಾವ್



ಬೆಂಗಳೂರು, ಜ.27(ಕೆಎಂಶಿ)– ಕರ್ನಾಟಕ ಕಾಂಗ್ರೆಸ್‌ನಲ್ಲಿನ ಅಧಿಕಾರ ಹಂಚಿಕೆ ಗೊಂದಲ ನಿವಾರಣೆಗೆ ಪಕ್ಷದ ನಾಯಕಿ ಪ್ರಿಯಾಂಕಾ ಗಾಂಧಿ ಮಧ್ಯ ಪ್ರವೇಶ ಮಾಡಿದ್ದಾರೆ.




ಪ್ರಿಯಾಂಕಾ ಗಾಂಧಿ

ಪ್ರಿಯಾಂಕಾ ಪ್ರವೇಶದ ನಂತರ ಪಕ್ಷದ ಅಧಿನಾಯಕ ರಾಹುಲ್ ಗಾಂಧಿ ಜನವರಿ 31ರಂದು ದೆಹಲಿಗೆ ಬರುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರುಗಳಿಗೆ ಆಹ್ವಾನ ನೀಡಲು ನಿರ್ಧರಿಸಿದ್ದಾರೆ. ವಿಬಿ–ಜಿ–ರಾಮ್–ಜಿ ವಿರೋಧಿಸಿ ನಿರ್ಣಯ ಕೈಗೊಳ್ಳಲು ಜನವರಿ 30ರವರೆಗೆ ವಿಧಾನಮಂಡಲದ ವಿಶೇಷ ಅಧಿವೇಶನ ಕರೆಯಲಾಗಿದೆ. ಅಧಿವೇಶನ ಮುಗಿಸಿಕೊಂಡು ದೆಹಲಿಗೆ ಬರುವಂತೆ ಉಭಯ ನಾಯಕರಿಗೂ ಈಗಾಗಲೇ ಎಐಸಿಸಿ ಸಂದೇಶ ರವಾನಿಸಿದೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.

ಅಧಿಕಾರ ಹಂಚಿಕೆ ಗೊಂದಲಕ್ಕೆ ಸಂಬಂಧಿಸಿದಂತೆ ಫೆಬ್ರವರಿ 2ರ ವೇಳೆಗೆ ಎಐಸಿಸಿ ಮಹತ್ವದ ನಿರ್ಣಯ ಕೈಗೊಳ್ಳಲಿದ್ದು, ■ 6ನೇ ಪುಟಕ್ಕೆ

ಚಾಮುಂಡಿಬೆಟ್ಟದ ನಂದಿ ಮಾರ್ಗದಲ್ಲಿ ಪ್ರಾಯೋಗಿಕವಾಗಿ ವಾಹನ ಸಂಚಾರ

■ ಹಲವು ವರ್ಷದ ಬಳಿಕ ಕೊನೆಗೂ ಸಂಚಾರ ಭಾಗ್ಯ ■ ಮೈಸೂರಿನ ಬ್ಯಾಕ್ ಡ್ರಾಪ್‌ನಲ್ಲಿ ಫೋಟೋ ತೆಗೆಸಿಕೊಳ್ಳುತ್ತಿರುವ ಜನರು ■ ಶೇಕಡ 20ರಷ್ಟು ತಡೆ ಗೋಡೆ ಕಾಮಗಾರಿ, ಡಾಂಬರೀಕರಣ ಮಾತ್ರ ಬಾಕಿ



ವೈಜ್ಞಾನಿಕ ರೀತಿ ನಿರ್ಮಾಣಗೊಳ್ಳುತ್ತಿರುವ ಚಾಮುಂಡಿಬೆಟ್ಟದ ನಂದಿ ಮಾರ್ಗದ ರಸ್ತೆಯಲ್ಲಿ ಸಂಚರಿಸುತ್ತಿರುವ ವಾಹನಗಳು

ಮೈಸೂರು, ಜ.27(ಬಿಎಲ್‌ಯು)– ಭಾರೀ ಮಳೆಯ ವೇಳೆ ಭೂ ಕುಸಿತದ ಪರಿಣಾಮ ಕಳೆದ ಆರು ವರ್ಷಗಳ ಹಿಂದೆ ಮುಚ್ಚಲ್ಪಟ್ಟಿದ್ದ ಚಾಮುಂಡಿಬೆಟ್ಟದ ನಂದಿ ಮಾರ್ಗದಲ್ಲಿ ಪ್ರಾಯೋಗಿಕವಾಗಿ ವಾಹನ ಸಂಚಾರ ಆರಂಭವಾಗಿದೆ.

ತಡೆ ಗೋಡೆ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದ್ದು, ಇನ್ನು ಈ ರಸ್ತೆಗೆ ಡಾಂಬರೀಕರಣ ಆಗಿಲ್ಲ. ರಸ್ತೆಯಲ್ಲಿ ಇನ್ನೂ ಹಳ್ಳ–ಕೊಳ್ಳಗಳಿದ್ದು, ಸಮತಟ್ಟು ಕಾರ್ಯ ನಡೆಯುತ್ತಿದೆ. ಆದರೂ ಪ್ರಾಯೋಗಿಕವಾಗಿ ವಾಹನ ಸಂಚಾರಕ್ಕೆ ಮುಕ್ತಗೊಳಿಸಲಾಗಿದೆ.

ಚಾಮುಂಡಿಬೆಟ್ಟಕ್ಕೆ ಬರುವ ಪ್ರವಾಸಿಗರು ಈ ಮಾರ್ಗದಲ್ಲಿ ಸಾಗಿ, ನಂದಿ ದರ್ಶನ ಪಡೆದು ಬರುತ್ತಿದ್ದಾರೆ. ಹಲವು ವರ್ಷಗಳ ನಂತರ ಈ ಮಾರ್ಗದಲ್ಲಿ ಸಾಗುತ್ತಿರುವ ಹಿನ್ನೆಲೆಯಲ್ಲಿ ಸಂತಸಗೊಂಡಿರುವ ಜನರು ರಸ್ತೆ ಮಧ್ಯೆ ನಿಂತು ಮೈಸೂರು ನಗರದ ಬ್ಯಾಕ್ ಡ್ರಾಪ್‌ನಲ್ಲಿ ಫೋಟೋ ತೆಗೆಸಿಕೊಳ್ಳುವುದು ಸಾಮಾನ್ಯವಾಗಿದೆ.

ಪದೇ ಪದೆ ಭೂ ಕುಸಿತವಾಗಿರುವ ಹಿನ್ನೆಲೆಯಲ್ಲಿ ಇಂಡಿಯನ್ ಇನ್ಸಿಟ್ಯೂಟ್ ಆಫ್ ಸೈನ್ಸ್ ತಜ್ಞರ ಸಲಹೆಯಂತೆ ರೈನ್ ಫೋರ್ಸ್ಡ್ ಅರ್ಥ್ ರಿಟೈನ್ ಸೆಕ್ಟರ್ ವೈಜ್ಞಾನಿಕ ವಿಧಾನದಲ್ಲಿ ರಸ್ತೆ ನಿರ್ಮಿಸಲಾಗಿದೆ. ಭೂ ಕುಸಿತವಾಗದಂತೆ ಸ್ಟೀಲ್ ಬಳಸಿ ಸುಭದ್ರ ತಡೆಗೋಡೆ ನಿರ್ಮಾಣ ಮಾಡಲಾಗಿದೆ. ಇದರಿಂದ ಮತ್ತೆ ಭೂ ಕುಸಿತದ ಅಪಾಯವಿಲ್ಲ ಎಂದು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಈಗ ಪ್ರಾಯೋಗಿಕವಾಗಿ ವಾಹನ ಸಂಚಾರಕ್ಕೆ ಮುಕ್ತಗೊಳಿಸಲಾಗಿದೆ. ಹೆಚ್ಚಿನ ಸಂಖ್ಯೆಯ ವಾಹನಗಳು ಸಂಚರಿಸಿದಾಗ ರಸ್ತೆ ಸೆಟ್ಟಾಗುತ್ತದೆ ಎಂಬ ಹಿನ್ನೆಲೆಯಲ್ಲಿ ವಾಹನ ಸಂಚಾರಕ್ಕೆ ಅವಕಾಶ ಕಲ್ಪಿಸಲಾಗಿದೆ.

ಶೇಕಡ 20ರಷ್ಟು ತಡೆಗೋಡೆ ನಿರ್ಮಾಣ ಕಾರ್ಯ ಬಾಕಿ ಇದ್ದು, ಡಾಂಬರೀಕರಣ ಮಾಡಬೇಕಿದೆ. ತಡೆಗೋಡೆ ಸಮೇತ ರಸ್ತೆ ಪುನರ್ ನಿರ್ಮಾಣ ಕಾರ್ಯ ಪೂರ್ಣಗೊಂಡ ನಂತರ ವಾಹನ ■ 6ನೇ ಪುಟಕ್ಕೆ



ವಿಜಯನಗರದಲ್ಲಿ ಹಿಂದು ಸಮಾಜೋತ್ಸವ



ವಿಜಯನಗರ 4ನೇ ಹಂತದಲ್ಲಿ ಹಿಂದು ಸಮಾಜೋತ್ಸವದ ಮೆರವಣಿಗೆ ನಡೆಯಿತು.

ಮೈಸೂರು,ಜ.27–ಮೈಸೂರಿನ ಚಾಮುಂಡೇಶ್ವರಿ ಕ್ಷೇತ್ರ ವ್ಯಾಪ್ತಿಯ ವಿಜಯನಗರ 4ನೇ ಹಂತದಲ್ಲಿ ಹಿಂದೂ ಸಮಾಜೋತ್ಸವ ಕಾರ್ಯಕ್ರಮ ನಡೆಯಿತು.

ಅಲಂಕೃತ ತೆರೆದ ವಾಹನದಲ್ಲಿ ಭಾರತಾಂಬೆಯ ಫೋಟೋವನ್ನಿಟ್ಟು ವಿಜಯನಗರ ಬಡಾವಣೆಯ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ಮಾಡಲಾಯಿತು. ಅನ್ನಪೂರ್ಣೇಶ್ವರಿ ದೇವಸ್ಥಾನದಿಂದ ವಿವಿಧ ರಸ್ತೆಗಳ ಮೂಲಕ ಪಟೇಲ್ ಕನ್ವೆನ್ಷನ್ ಹಾಲ್‌ವರೆಗೆ ಜರುಗಿದ ರಥೋತ್ಸವದಲ್ಲಿ ನೂರಾರು ಮಂದಿ ಭಾಗವಹಿಸಿದ್ದರು.

ಮೆರವಣಿಗೆಯುದ್ದಕ್ಕೂ ಜಯ ಘೋಷಗಳು ಮೊಳಗಿದವು. ಪ್ರಮುಖ ವೃತ್ತ ಹಾಗೂ ಜಂಕ್ಷನ್‌ಗಳಲ್ಲಿ ವಾದ್ಯದ ಸದ್ದಿಗೆ ಜನರು ಹೆಜ್ಜೆ ಹಾಕಿ ಸಂಭ್ರಮಿಸಿದರು. ರಾಮ–ಲಕ್ಷ್ಮಣ, ಭಗತ್‌ಸಿಂಗ್ ಸೇರಿದಂತೆ ವಿವಿಧ ವೇಷಧಾರಿಗಳು ಮೆರವಣಿಗೆ ಮೆರಗು ಹೆಚ್ಚಿಸಿದರು. ಶೋಭಾಯಾತ್ರೆಯ ನಂತರ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ರಾಮಕೃಷ್ಣ ಆಶ್ರಮದ ಅಘಹರಾನಂದಜೀ ಸ್ವಾಮೀಜಿ ಮಾತನಾಡಿ, ಹಿಂದೂ ಸಮಾಜದ ಇತಿಹಾಸವನ್ನು ಜನರಿಗೆ ತಿಳಿಸಿದರು. ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಜೇಷ್ಠ ಪ್ರಚಾರಕ ದಾ.ಮ ರವೀಂದ್ರ ಮುಖ್ಯ ಭಾಷಣ ಮಾಡಿದರು.

ಹಿಂದೂ ಸಮಾಜೋತ್ಸವ ಸಮಿತಿಯ ಪದಾಧಿಕಾರಿಗಳು, ಸ್ತ್ರೀ ಸಂಘದ ಮಹಿಳೆಯರು ಸೇರಿದಂತೆ ನೂರಾರು ಮಂದಿ ಉಪಸ್ಥಿತರಿದ್ದರು.



ಮೈಸೂರಿನ ಶಕ್ತಿನಗರದಲ್ಲಿ ನಡೆದ ಹಿಂದೂ ಸಮಾಜೋತ್ಸವ ಕಾರ್ಯಕ್ರಮದಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ, ಮಾಜಿ ಸಂಸದ ಪ್ರತಾಪ್ ಸಿಂಹ, ಮಾಜಿ ಮೇಯರ್ ಸಂದೇಶ್ ಸ್ವಾಮಿ, ಬಿಜೆಪಿ ಮುಖಂಡ ಹೆಚ್.ಜಿ.ಗಿರಿಧರ್ ಮತ್ತಿತರರು ಭಾಗವಹಿಸಿದ್ದರು.

ಅಂಬೇಡ್ಕರ್ ಪ್ರತಿಮೆಗೆ ಪುಷ್ಪ ನಮನ...



ಚಾಮರಾಜ ಕ್ಷೇತ್ರದ ವಾರ್ಡ್ ನಂ.5 ಕುಂಬಾರಕೊಪ್ಪಲಿನಲ್ಲಿ ಸಂವಿಧಾನ ಶಿಲ್ಪಿ ಡಾ.ಅಂಬೇಡ್ಕರ್ ಪ್ರತಿಮೆಗೆ ಮಾಜಿ ಶಾಸಕ ಎಲ್.ನಾಗೇಂದ್ರ ಪುಷ್ಪ ನಮನ ಸಲ್ಲಿಸಿದರು. ಈ ವೇಳೆ ನಗರ ಕಾರ್ಯದರ್ಶಿ ಎಂ.ಎಸ್.ಪುನೀತ್, ಎಸ್‌ಟಿ ಮೋರ್ಚಾ ಅಧ್ಯಕ್ಷ ಪಡುವಾರಹಳ್ಳಿ ರಾಮಕೃಷ್ಣ, ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ನಿರ್ದೇಶಕರಾದ ಕೆ.ಗಿರೀಶ್, ಎನ್.ಯೋಗಾನಂದ್, ಅಶ್ವಥ್‌ಗೌಡ, ಕೇಬಲ್ ವೆಂಕಟೇಶ, ಎಸ್.ಪ್ರವೀಣ್, ಫೋಟೋ ನಾಗೇಶ್, ಕೆ.ಎಲ್.ರಮೇಶ್, ಆದಿಶಕ್ತಿ ಲೋಕೇಶ್, ಚಾಮರಾಜ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಮಂಜು, ರವಿ, ಸರ್ವೇಶ್, ಕಾರ್ತಿಕ್, ಕಿರಣ ಇದ್ದರು.

ಅನುವಾದಕ ಡಾ.ತಿಪ್ಪೇಸ್ವಾಮಿ ನಿಧನ



ಮೈಸೂರು,ಜ.27(ಪಿಎಂ)– ಮೈಸೂರು ವಿವಿ ಹಿಂದಿ ಅಧ್ಯಯನ ವಿಭಾಗದ ಮಾಜಿ ಮುಖ್ಯಸ್ಥರೂ ಆದ ವಿಶ್ರಾಂತ ಹಿಂದಿ ಪ್ರಾಧ್ಯಾಪಕ ಹಾಗೂ ಮೈಸೂರು ವಿವಿ ಬಾಬು ಜಗಜೀವನರಾಂ ಅಧ್ಯಯನ ಕೇಂದ್ರದ ವಿಶ್ರಾಂತ ಸಂದರ್ಶಕ ಪ್ರಾಧ್ಯಾಪಕ ಡಾ.ತಿಪ್ಪೇಸ್ವಾಮಿ (80) ವಯೋಸಹಜ ಅನಾರೋಗ್ಯದಿಂದ ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ಮಂಗಳವಾರ ಸಂಜೆ ನಿಧನರಾದರು.

ಮೃತರು ಪತ್ನಿ ಬಿ.ಎಸ್.ನಾಗರತ್ನ, ಪುತ್ರರಾದ ಕೆ.ಟಿ.ಪುನೀತ್‌ಕುಮಾರ್, ಕೆ.ಟಿ. ಯತೀಶ್‌ಕುಮಾರ್ ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ನಾಳೆ (ಜ.28ರ ಬುಧವಾರ) 12 ಗಂಟೆಯೊಳಗೆ ಮೈಸೂರಿನ ವಿದ್ಯಾರಣ್ಯಪುರಂನ ವೀರಶೈವ ರುದ್ರಭೂಮಿ ಇಲ್ಲವೇ ಜಯಪುರ ಗ್ರಾಮದಲ್ಲಿರುವ ಮೃತರ ತೋಟದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಗುವುದು. ಅವರಿಗೆ ಮೈಸೂರಿನ ಕುವೆಂಪುನಗರದಲ್ಲಿರುವ ಡಾ.ತಿಪ್ಪೇಸ್ವಾಮಿ ಅವರ (ನಂ.369, 'ಅನುವಾದ', ಎ.ಬಿ. ಬ್ಲಾಕ್, ಕುವೆಂಪುನಗರ, ಮೈಸೂರು) ನಿವಾಸದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ ಎಂದು ಕುಟುಂಬದ ವರ್ಗ ತಿಳಿಸಿದೆ.

ತಿಪ್ಪೇಸ್ವಾಮಿಯವರ ಪರಿಚಯ: ಹಿಂದಿಯಿಂದ ಕನ್ನಡಕ್ಕೆ ಮತ್ತು ಕನ್ನಡದಿಂದ ಹಿಂದಿಗೆ ಸಾಹಿತ್ಯ, ಶಾಸ್ತ್ರೀಯ, ಸಾಂಸ್ಕೃತಿಕ ಕೃತಿಗಳನ್ನು ಭಾಷಾಂತರಿಸುವಲ್ಲಿ ಡಾ.ತಿಪ್ಪೇಸ್ವಾಮಿ ಅವರು ಮಹತ್ವದ ಕೊಡುಗೆ ನೀಡಿದ್ದಾರೆ. ಇವರು 1946ರ ಜೂ.11ರಂದು ತುಮಕೂರು ಜಿಲ್ಲೆಯ ಕೊರಟಗೆರೆಯಲ್ಲಿ ಜನಿಸಿದರು. ಇವರು ಸಾಹಿತ್ಯ ಕ್ಷೇತ್ರಕ್ಕೆ ನೀಡಿದ ಕೊಡುಗೆಗಾಗಿ ಹಲವು ಪ್ರತಿಷ್ಠಿತ ಪ್ರಶಸ್ತಿಗಳು ಇವರಿಗೆ ಸಂದಿವೆ.

ತುಮಕೂರಿನ ಸರ್ಕಾರಿ ಕಾಲೇಜಿನಲ್ಲಿ ಪದವಿ ಪಡೆದ ಇವರು, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಹಿಂದಿ ಎಂ.ಎ ಪದವಿಯಲ್ಲಿ ಪ್ರಥಮ ರ್‍ಯಾಂಕ್‌ನಲ್ಲಿ ಉತ್ತೀರ್ಣರಾದರು. ಇವರು ಮಾಧ್ಯಮಿಕ ಶಿಕ್ಷಣದಿಂದ ಬಿಎವರೆಗೆ ಹಿಂದಿಯನ್ನು ಐಚ್ಛಿಕ ವಿಷಯವಾಗಿ ಅಧ್ಯಯನ ನಡೆಸಿ ಇತರರಿಗೆ ಮಾದರಿಯಾದವರು. ಕೊಚ್ಚಿನ್ ವಿಶ್ವವಿದ್ಯಾನಿಲಯದಲ್ಲಿ ಪ್ರೌಢ ಪ್ರಬಂಧ ಮಂಡಿಸಿ ಪಿಹೆಚ್‌ಡಿ ಪಡೆದವರು.

1973ರಿಂದ 2006ರವರೆಗೆ ಮೈಸೂರು ವಿವಿಯ ಹಿಂದಿ ಅಧ್ಯಯನ ವಿಭಾಗದಲ್ಲಿ ಸೇವೆ ಸಲ್ಲಿಸಿದ ತಿಪ್ಪೇಸ್ವಾಮಿ ಅವರ ಅನುವಾದ ಸಾಹಿತ್ಯ ಸೇವೆ ಅನನ್ಯವಾದುದು ಎಂಬುದಕ್ಕೆ ಅವರು ನೀಡಿದ ಮೌಲಿಕ ಕೃತಿಗಳೇ ಸಾಕ್ಷಿಯಾಗುತ್ತವೆ.

ಡಾ.ತಿಪ್ಪೇಸ್ವಾಮಿಯವರು ಕನ್ನಡ–ಹಿಂದಿ ಸಾಹಿತ್ಯ ಕ್ಷೇತ್ರಗಳಲ್ಲಿ ಸಲ್ಲಿಸಿದ ಸೇವೆಗೆ ಕೇಂದ್ರ ಸಾಹಿತ್ಯ ಅಕಾಡೆಮಿ, ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಪ್ರೇಮಚಂದ್ ರಾಷ್ಟ್ರೀಯ ಪ್ರಶಸ್ತಿ, ಕರ್ನಾಟಕ ಅನುವಾದ ಸಾಹಿತ್ಯ ಅಕಾಡೆಮಿಯ ಗೌರವ ಪ್ರಶಸ್ತಿ, ಗೋಯೆಂಕಾ ಪ್ರಶಸ್ತಿ, ದ್ವಿವಾಗೀಶ್ ಪುರಸ್ಕಾರ ಸೇರಿದಂತೆ ಹತ್ತಾರು ಪ್ರಶಸ್ತಿ–ಪುರಸ್ಕಾರಗಳು ಇವರಿಗೆ ಸಂದಿವೆ.

ಹಿರಿಯ ಅಥ್ಲೀಟ್, ಬೆಸ್ಟ್ ಟ್ರಾಫಿಕ್ ವಾರ್ಡನ್ ಪ್ರಭಾಮಣಿ



ಮೈಸೂರು, ಜ.27– ರಾಷ್ಟ್ರ ಮತ್ತು ಅಂತರರಾಷ್ಟ್ರೀಯ ಹಿರಿಯರ ಕ್ರೀಡಾಕೂಟಗಳಲ್ಲಿ ಪಾಲ್ಗೊಂಡು ಹಲವು ಪ್ರಶಸ್ತಿ ಪಡೆದಿದ್ದ, ಮೈಸೂರಲ್ಲಿ ಬೆಸ್ಟ್ ಟ್ರಾಫಿಕ್ ವಾರ್ಡನ್ ಕೀರ್ತಿಗೂ ಭಾಜನರಾಗಿದ್ದ ಮೈಸೂರಿನ ಗಾಯತ್ರಿಪುರಂ ನಿವಾಸಿ ಪ್ರಭಾಮಣಿ(81) ನಿಧನರಾಗಿದ್ದಾರೆ.

ಮೈಸೂರಿನ ಗಾಯತ್ರಿಪುರಂನಲ್ಲಿ ವಾಸವಿದ್ದ ಪ್ರಭಾಮಣಿ ಅವರು ಹೆಬ್ಬಾಳು ಬಡಾವಣೆಯಲ್ಲಿರುವ ಪುತ್ರಿ ಕಮಲಾ ಮೋಹನ್ ಅವರ ಮನೆಗೆ ತೆರಳಿದ್ದರು. ಸೋಮವಾರ(ಜ.26) ಬೆಳಗ್ಗೆ 7.30ರಲ್ಲಿ ಮಗಳ ಮನೆಯಲ್ಲಿ ಹಠಾತ್ ನಿಧನ ರಾಗಿದ್ದಾರೆ. ಅವರು ಹಿರಿಯ ಕ್ರೀಡಾಪಟುವಾಗಿದ್ದು, ದೇಶ, ವಿದೇಶದಲ್ಲಿ ನಡೆದ ಹಲವು ಹಿರಿಯರ ಕ್ರೀಡಾಕೂಟದಲ್ಲಿ ಪಾಲ್ಗೊಂಡು ಜಾವೆಲಿನ್ ಥ್ರೋ, ಗುಂಡು ಎಸೆತ(ಶಾಟ್‌ಪುಟ್) ಹಾಗೂ ಡಿಸ್ಕಸ್ ಥ್ರೋದಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ, ಹಲವು ಪ್ರಶಸ್ತಿ ಮುಡಿಗೇರಿಸಿಕೊಂಡಿದ್ದಾರೆ. ಅಲ್ಲದೆ, ಕಳೆದ 30 ವರ್ಷದಿಂದ ಮೈಸೂರು ಸಂಚಾರ ಪೊಲೀಸರಿಗೆ ಸುಗಮ ವಾಹನ ಸಂಚಾರಕ್ಕೆ ನೆರವು ನೀಡುವ ನಿಟ್ಟಿನಲ್ಲಿ ಟ್ರಾಫಿಕ್ ವಾರ್ಡನ್ ಆಗಿ ಸೇವೆ ಸಲ್ಲಿಸುತ್ತಿದ್ದರು. ಉತ್ತಮ ಸೇವೆಯಿಂದ 'ಬೆಸ್ಟ್ ಟ್ರಾಫಿಕ್ ವಾರ್ಡನ್' ಬಿರುದಿಗೂ ಪಾತ್ರರಾಗಿದ್ದರು. ಮೃತರ ಅಂತ್ಯಕ್ರಿಯೆ ಸೋಮವಾರ ಸಂಜೆ ಚಾಮುಂಡಿಬೆಟ್ಟದತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿದೆ. ಪ್ರಭಾಮಣಿ ಅವರು ಓರ್ವ ಪುತ್ರ, ಪುತ್ರಿ ಸೊಸೆ, ಮರಿಮಕ್ಕಳು, ಅಪಾರ ಬಂಧು ವರ್ಗ ಅಗಲಿದ್ದಾರೆ.

ಅಂಚೆ ಕಚೇರಿಗಳಲ್ಲಿ ಕನ್ನಡ ಬಳಕೆಗೆ ಆಗ್ರಹಿಸಿ ಕರ್ನಾಟಕ ಸೇನಾಪಡೆ ಪ್ರತಿಭಟನೆ



ಮೈಸೂರಿನ ಪ್ರಧಾನ ಅಂಚೆ ಕಚೇರಿ ಎದುರು ಕರ್ನಾಟಕ ಸೇನಾ ಪಡೆಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಜ.27(ಎಂಕೆ)– ಅಂಚೆ ಕಚೇರಿಗಳಲ್ಲಿ ಕನ್ನಡ ಭಾಷೆ ಬಳಕೆಗೆ ಒತ್ತಾಯಿಸಿ ಕರ್ನಾಟಕ ಸೇನಾ ಪಡೆ ವತಿಯಿಂದ ಕಪ್ಪು ಪಟ್ಟಿ ಧರಿಸಿ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ಪ್ರಧಾನ ಅಂಚೆ ಕಚೇರಿ ಎದುರು ಜಮಾವಣೆಗೊಂಡ ಸೇನಾ ಪಡೆ ಕಾರ್ಯಕರ್ತರು, ಅಂಚೆ ಕಚೇರಿಯ ಎಲ್ಲಾ ಸೇವೆಗಳಲ್ಲಿಯೂ ಕನ್ನಡ ಭಾಷೆಯ ಬಳಕೆಯಾಗಬೇಕು. ಅಂಚೆ ಇಲಾಖೆ ಕನ್ನಡ ಭಾಷೆ ವಿಷಯದಲ್ಲಿ ಮಲತಾಯಿ ಧೋರಣೆ ಅನುಸರಿಸುತ್ತಿದೆ ಎಂದು ಧಿಕ್ಕಾರ ಕೂಗಿ ಆಕ್ರೋಶ ಹೊರಹಾಕಿದರು.

ಅಂಚೆ ಕಚೇರಿಯಲ್ಲಿ ನೀಡುವ ಉಳಿತಾಯ ಖಾತೆ, ಆರ್‌ಡಿ ಸೇರಿದಂತೆ ಇನ್ನಿತರೆ ಸೇವೆಗಳ ಚಲನ್‌ಗಳಲ್ಲಿ ಒಂದು ಕಡೆ ಇಂಗ್ಲಿಷ್ ಹಾಗೂ ಮತ್ತೊಂದು ಕಡೆಯಲ್ಲಿ ಹಿಂದಿ ಭಾಷೆ ನಮೂದಿಸಿದ್ದು, ಕನ್ನಡ ಭಾಷೆಯನ್ನು ಕಡೆಗಣಿಸಲಾಗಿದೆ. ಹಿಂದಿ ಮತ್ತು ಇಂಗ್ಲಿಷ್ ಭಾಷೆ ಬಾರದ ಸ್ಥಳೀಯರಿಗೆ ಇದರಿಂದ ತೊಂದರೆಯಾಗುವುದಲ್ಲದೆ ಅಂಚೆ ಇಲಾಖೆಯ ಕನ್ನಡ ವಿರೋಧಿ ಧೋರಣೆ ಅತ್ಯಂತ ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ತಮಿಳುನಾಡಿನಲ್ಲಿರುವ ಅಂಚೆ ಇಲಾಖೆ ಕಚೇರಿಗಳಲ್ಲಿ ತಮಿಳು ಭಾಷೆಗೆ ಆದ್ಯತೆ ನೀಡಲಾಗಿದೆ. ಇಂಗ್ಲಿಷ್ ಜೊತೆಗೆ ತಮಿಳು ಭಾಷೆಗೆ ಆದ್ಯತೆ ನೀಡಲಾಗಿದೆ. ಆದರೆ, ಕರ್ನಾಟಕದಲ್ಲಿ ಆಡಳಿತ ಭಾಷೆ ಕನ್ನಡವಾಗಿದ್ದರೂ ಅಂಚೆ ಇಲಾಖೆ ಕನ್ನಡ ಭಾಷೆಯನ್ನು ಕಡೆಗಣಿಸಿರುವುದು ಸರಿಯಲ್ಲ. ಈ ಕುರಿತು ರಾಜ್ಯ ಸರ್ಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಕೂಡಲೇ ಅಂಚೆ ಇಲಾಖೆಗೆ ಕನ್ನಡ ಭಾಷೆ ಕಡ್ಡಾಯ ಬಳಕೆಗೆ ಸೂಚನೆ ನೀಡಬೇಕು ಎಂದು ಆಗ್ರಹಿಸಿದರು. ಬಳಿಕ ಪ್ರಧಾನ ಅಂಚೆ ಕಚೇರಿ ಅಧಿಕಾರಿಗಳಿಗೆ ಕನ್ನಡ ಕಡ್ಡಾಯ ಬಳಕೆಗೆ ಮನವಿ ಸಲ್ಲಿಸಲಾಯಿತು.

ಕರ್ನಾಟಕ ಸೇನಾಪಡೆ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್‌ಗೌಡ, ಮುಖಂಡರಾದ ಗೋಲ್ಡನ್ ಸುರೇಶ್, ಪ್ರಭುಶಂಕರ್, ಪ್ರಜೀಶ್, ಕೃಷ್ಣಪ್ಪ, ಡಾ.ಮೊಗಣ್ಣಚಾರ್, ಬೋಗಾದಿ ಸಿದ್ದೇಗೌಡ, ಶಿವಲಿಂಗಯ್ಯ, ಶಿವಕುಮಾರ್, ನೇಹಾ, ಡಾ.ನರಸಿಂಹೇಗೌಡ, ಭಾಗ್ಯಮ್ಮ, ವರಕೂಡು ಕೃಷ್ಣೇಗೌಡ, ಮಂಜುಳಾ, ಜ್ಯೋತಿ, ಗೀತಾಗೌಡ, ಇಂದಿರಾ, ಸುಜಾತಾ, ರಾಧಾಕೃಷ್ಣ, ಸುಶೀಲ, ವಾಣಿ, ಗೀತಾ, ಕೆಪಿ.ನಾಗಣ್ಣ, ತಾಯೂರು ಗಣೇಶ್, ಬಸವರಾಜು, ಪ್ರಭಾಕರ್, ಶಿವರಾಂ, ಕುಮಾರ್‌ಗೌಡ, ಶ್ರೀನಿವಾಸ್, ಅಶೋಕ್, ನಾರಾಯಣಗೌಡ, ರಘು ಅರಸ್, ದರ್ಶನ್‌ಗೌಡ, ಮಹದೇವಸ್ವಾಮಿ, ಪರಿಸರ ಚಂದ್ರು, ಪ್ರಮೋದ್, ತ್ಯಾಗರಾಜ್, ಗಣೇಶ್‌ಪ್ರಸಾದ್, ಸ್ವಾಮಿಗೌಡ, ರವೀಶ್, ರವಿನಾಯಕ್ ಮತ್ತಿತರರಿದ್ದರು.

ರಾಷ್ಟ್ರಪತಿ ಪದಕ ಪುರಸ್ಕೃತ ಸೀಮಾ ಲಾಟ್ಕರ್, ಪುಟ್ಟಮಾದಯ್ಯರಿಗೆ ಅಭಿನಂದನೆ





ಮೈಸೂರು, ಜ.27(ಬಿಎಲ್‌ಯು)–ರಾಷ್ಟ್ರಪತಿ ಪದಕ ಗೌರವಕ್ಕೆ ಪಾತ್ರರಾಗಿರುವ ಮೈಸೂರು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಹಾಗೂ ಮೈಸೂರು ಮೂಲದ ಡಿಐಜಿಪಿ ಎಂ.ಪುಟ್ಟಮಾದಯ್ಯ ಅವರನ್ನು ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ಬಿ.ಎಂ.ರಾಮು ಅಭಿನಂದಿಸಿದ್ದಾರೆ. ಸೀಮಾ ಲಾಟ್ಕರ್ ಅವರು ಮೈಸೂರು ನಗರದ ಕಾನೂನು ಸುವ್ಯವಸ್ಥೆ ಕಾಪಾಡಲು ಶ್ರಮಿಸುತ್ತಿದ್ದಾರೆ, ಕಲ್ಬುರ್ಗಿಯ ಪೊಲೀಸ್ ತರಬೇತಿ ಶಾಲೆಯ ಪ್ರಿನ್ಸಿಪಾಲ್ ಆಗಿರುವ ಪುಟ್ಟಮಾದಯ್ಯ ಅವರು ಯುವ ಪೊಲೀಸ್ ಅಧಿಕಾರಿಗಳಿಗೆ ಮಾರ್ಗದರ್ಶಕರಾಗಿದ್ದಾರೆ. ಈ ಇಬ್ಬರು ಅಧಿಕಾರಿಗಳಿಗೆ ಪ್ರಶಸ್ತಿ ಸಂದಿರುವುದು ಅರ್ಥಪೂರ್ಣ ಹಾಗೂ ಪ್ರಶಂಸಾರ್ಹ ಎಂದು ರಾಮು ತಿಳಿಸಿದ್ದಾರೆ.

ವಿಶ್ವೇಶ್ವರಯ್ಯ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಗಣರಾಜ್ಯೋತ್ಸವ



ಮೈಸೂರು,ಜ.27–ಮೈಸೂರಿನ ವಿಶ್ವೇಶ್ವರಯ್ಯ ಕೈಗಾರಿಕಾ ತರಬೇತಿ ಸಂಸ್ಥೆಯ ಆವರಣದಲ್ಲಿ 77ನೇ ಗಣರಾಜ್ಯೋತ್ಸವದಲ್ಲಿ ವಿಧಾನಪರಿಷತ್ ಮಾಜಿ ಸದಸ್ಯರೂ ಆದ ಮಾಜಿ ಉಪಸಭಾಪತಿ ಮರಿತಿಬ್ಬೇಗೌಡ ಧ್ವಜಾರೋಹಣ ನೆರವೇರಿಸಿದರು.

ಸಂಸ್ಥೆಯ ಅಧ್ಯಕ್ಷ ಕೆ.ಎ.ನಾಗಪ್ರಸಾದ್, ಗೌರವ ಕಾರ್ಯದರ್ಶಿ ಆರ್.ಎಸ್.ಕುಮಾರ್, ಖಜಾಂಚಿ ಎಸ್.ವಿ.ವೆಂಕಟೇಶ್, ಜಂಟಿ ಕಾರ್ಯದರ್ಶಿ, ಆಡಳಿತಾಧಿಕಾರಿ ಹೆಚ್.ಎ. ಪ್ರಭಾಕರ, ಧರ್ಮದರ್ಶಿ ನಂ.ಶ್ರೀಕಂಠ ಕುಮಾರ್, ಎಂ.ಡಿ.ಶ್ರೀನಿವಾಸ್ ಸೇರಿದಂತೆ ಧರ್ಮದರ್ಶಿಗಳು, ಪ್ರಾಂಶುಪಾಲರು ಹಾಗೂ ಸಿಬ್ಬಂದಿವರ್ಗ, ತರಬೇತಿದಾರರು ಭಾಗವಹಿಸಿದ್ದರು. ಇದೇ ವೇಳೆ ವಿಶ್ವೇಶ್ವರಯ್ಯ ಎಜುಕೇಷನಲ್ ಟ್ರಸ್ಟ್‌ನ ಸ್ಥಾಪಕ ಅಧ್ಯಕ್ಷರಾದ ದಿವಂಗತ ಜಿ.ಎಲ್.ನಾರಾಯಣ್ ಅವರ ಧರ್ಮಪತ್ನಿ ಶ್ರೀಮತಿ ಸುಶೀಲಾ ನಾರಾಯಣ್, ಪ್ರಥಮ ವರ್ಷದ ಪುಣ್ಯಸ್ಮರಣೆ ದಿನದ ಅಂಗವಾಗಿ ಅವರ ಮಗಳು ಮತ್ತು ಅಳಿಯ ಶ್ರೀಮತಿ ಶೈಲಾ ರಾವ್, ವೆಂಕಟ್‌ರಾವ್ ಅವರು ಸಂಸ್ಥೆಯ ಆರ್ಥಿಕವಾಗಿ ಹಿಂದುಳಿದಿರುವ ತರಬೇತಿದಾರರಿಗೆ ಧನಸಹಾಯ ಮಾಡಿದರು.

ಖೇಲೋ ಇಂಡಿಯಾ ಚಳಿಗಾಲದ ಕ್ರೀಡಾಕೂಟ; ಕರ್ನಾಟಕಕ್ಕೆ ಐದು ಪದಕ

ಚಿನ್ನ, ಕಂಚು ಗೆದ್ದ ಮೈಸೂರು ಕ್ರೀಡಾಪಟುಗಳು



ಖೇಲೋ ಇಂಡಿಯಾ ಚಳಿಗಾಲದ ಕ್ರೀಡಾಕೂಟದಲ್ಲಿ ಚಿನ್ನದ ಪದಕ ಪಡೆದ ಶ್ರೀವತ್ಸ ಎಸ್.ರಾವ್ (ಮಧ್ಯದವರು) ಸಂಭ್ರಮ.

ಮೈಸೂರು, ಜ.27– ಭಾರತ ಕ್ರೀಡಾ ಪ್ರಾಧಿಕಾರವು ನಡೆಸಿದ ಖೇಲೋ ಇಂಡಿಯಾ ಚಳಿಗಾಲದ ಕ್ರೀಡಾಕೂಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿದ್ದ ಮೈಸೂರಿನ ಕ್ರೀಡಾಪಟುಗಳು ಉತ್ತಮ ಸಾಧನೆ ಮಾಡಿದ್ದಾರೆ.

ಮೈಸೂರಿನ ಶ್ರೀವತ್ಸ ಎಸ್.ರಾವ್, ಲಾಂಗ್ ಟ್ರ್ಯಾಕ್ 1000 ಮೀಟರ್ ಸ್ಪರ್ಧೆಯಲ್ಲಿ ಚಿನ್ನ ಗೆದ್ದಿದ್ದಾರೆ. ಇದೇ ವಿಭಾಗದ 500 ಮೀಟರ್ ಸ್ಪರ್ಧೆಯಲ್ಲಿ ಬಿ.ಟಿ.ಹರ್ಷಿತ್ ಕಂಚಿನ ಪದಕ ಗೆದ್ದಿದ್ದಾರೆ.

ಐದು ಸಾವಿರ ಮೀಟರ್ ರಿಲೇಯಲ್ಲಿ ಶ್ರೀವತ್ಸ.ಎಸ್.ರಾವ್, ಓಂಕಾರ ಯೋಗರಾಜ್, ಜಿ.ವಿ.ರಾಘವೇಂದ್ರ ಮತ್ತು ಧೀಮಂತ್ ಮಹೇಶ್ ಒಳಗೊಂಡ ಪುರುಷರ ತಂಡ ಹಾಗೂ ಶ್ರೀಜಾ ಎಸ್.ರಾವ್, ಶ್ರೀಧನ್ಯ.ಪಿ.ಭಾರದ್ವಾಜ್, ಹಿರಣ್ಮಯಿ ರಾಮಗಣೇಶ್ ಮತ್ತು ಸಹಸ್ರ ನೆಲಟೂರಿ ಅವರನ್ನೊಳಗೊಂಡ ಮಹಿಳಾ ತಂಡವು ತಲಾ ಬೆಳ್ಳಿ ಪದಕ ಗೆದ್ದವು. ಇನ್ನು ಜಿ.ವಿ. ರಾಘವೇಂದ್ರ, ಓಂಕಾರ ಯೋಗರಾಜ್, ಶ್ರೀಜಾ ಎಸ್.ರಾವ್ ಮತ್ತು ಸಹಸ್ರ ನೆಲಟೂರಿ ತಂಡವು ಮಿಶ್ರ ರಿಲೇಯಲ್ಲಿ ಕಂಚಿನ ಪದಕ ಗೆದ್ದಿತು.

ಪದಕ ವಿಜೇತ ಮೈಸೂರು ಕ್ರೀಡಾಪಟುಗಳು ಏಕಲವ್ಯ ಪ್ರಶಸ್ತಿ ಪುರಸ್ಕೃತರಾದ ಕೆ.ಶ್ರೀಕಂಠರಾವ್ ಹಾಗೂ ಡಾ.ವರ್ಷ ಎಸ್.ಪುರಾಣಿಕ್ ಮಾರ್ಗದರ್ಶನದಲ್ಲಿ ಉನ್ನತಿನಗರದ ರಾವ್ಸ್ ಇಂಟರ್‌ನ್ಯಾಷನಲ್ ಟ್ರ್ಯಾಕ್ ಮತ್ತು ಕೆಎಸ್‌ಆರ್ ಇನ್‌ಡೋರ್ ರೋಲರ್ ಸ್ಕೇಟಿಂಗ್ ಟ್ರ್ಯಾಕ್‌ನಲ್ಲಿ ತರಬೇತಿ ಪಡೆದಿದ್ದಾರೆ. ಹಾಗೆಯೇ ಬೆಂಗಳೂರು ಕ್ರೀಡಾಪಟುಗಳಿಗೆ ರಾಷ್ಟ್ರೀಯ ತಂಡದ ತರಬೇತುದಾರರಾದ ಜಿ.ವಿ.ರಾಘವೇಂದ್ರ ಹಾಗೂ ಪ್ರತೀಕ್ ರಾಜಾ ತರಬೇತಿ ನೀಡಿದ್ದಾರೆ.

ರಾಜ್ಯಕ್ಕೆ 5ನೇ ಸ್ಥಾನ: ಕ್ರೀಡಾಕೂಟದಲ್ಲಿ ಹರಿಯಾಣ ತಂಡವು ಒಟ್ಟಾರೆ 7(4 ಚಿನ್ನ, 1 ಬೆಳ್ಳಿ ಹಾಗೂ 2 ಕಂಚು) ಪದಕಗಳನ್ನು ಗೆದ್ದು ಸಮಗ್ರ ಪ್ರಶಸ್ತಿ ಮುಡಿಗೇರಿಸಿಕೊಂಡಿದೆ. ಆತಿಥೇಯ ಲಡಾಖ್(2 ಚಿನ್ನ, 5 ಬೆಳ್ಳಿ ಹಾಗೂ 4 ಕಂಚು) ಎರಡನೇ ಸ್ಥಾನ, ಮಹಾರಾಷ್ಟ್ರ (2 ಚಿನ್ನ, 3 ಬೆಳ್ಳಿ ಹಾಗೂ 2 ಕಂಚು) ಮೂರನೇ ಸ್ಥಾನ, ತೆಲಂಗಾಣ(ತಲಾ 2 ಚಿನ್ನ, ಬೆಳ್ಳಿ ಹಾಗೂ ಕಂಚು) 4ನೇ ಸ್ಥಾನ ಹಾಗೂ ಕರ್ನಾಟಕ 1 ಚಿನ್ನ, 2 ಬೆಳ್ಳಿ ಮತ್ತು 2 ಕಂಚು ಪದಕಗಳಿಸಿ ಐದನೇ ಸ್ಥಾನ ಪಡೆದುಕೊಂಡಿದೆ.

ಡಾ.ವಿಜಯಾ ದಬ್ಬೆ ಸ್ಮರಣಾರ್ಥ

ಲಲಿತ ಪ್ರಬಂಧ, ಕವನ ಸ್ಪರ್ಧೆ



ಮೈಸೂರು,ಜ.27(ಜಿಎ)–ಮೈಸೂರಿನ ಸಮತಾ ಅಧ್ಯಯನ ಕೇಂದ್ರವು ಯುವ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಸಂಸ್ಥೆಯ ಸ್ಥಾಪಕ ಅಧ್ಯಕ್ಷೆ ಡಾ.ವಿಜಯಾ ದಬ್ಬೆ ಅವರ ಸ್ಮರಣಾರ್ಥ ರಾಜ್ಯಮಟ್ಟದ ಲಲಿತ ಪ್ರಬಂಧ ಮತ್ತು ಕವನ ಸ್ಪರ್ಧೆಯನ್ನು ಆಯೋಜಿಸಿದೆ.

ಲಲಿತ ಪ್ರಬಂಧ ಸ್ಪರ್ಧೆಯಲ್ಲಿ 20 ರಿಂದ 40 ವಯೋಮಾನದ ಲೇಖಕಿಯರು, ಕವನ ಸ್ಪರ್ಧೆಗೆ 20ರಿಂದ 35 ವಯೋಮಾನದ ವಿದ್ಯಾರ್ಥಿ, ಯುವಜನರು ಭಾಗವಹಿಸಬಹುದು. ಲಲಿತ ಪ್ರಬಂಧ ಪದಮಿತಿ 1,500. ಕವನ ಸ್ಪರ್ಧೆಗೆ ಒಂದು ಕವನ ಮಾತ್ರ ಕಳುಹಿಸಬೇಕು.

ಈ ಮೊದಲು ಎಲ್ಲಿಯೂ ಪ್ರಕಟ ಆಗಿರಬಾರದು. ವಯಸ್ಸಿನ ಖಚಿತತೆಗೆ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ ಅಥವಾ ಆಧಾರ್ ಲಗತ್ತಿಸಬೇಕು. ಎರಡೂ ಸ್ಪರ್ಧೆಗಳಿಗೆ ಒಂದೇ ಮೊತ್ತದ (ಪ್ರಥಮ ರೂ. 5 ಸಾವಿರ, ದ್ವಿತೀಯ ರೂ. 3 ಸಾವಿರ, ತೃತೀಯ ರೂ. 2 ಸಾವಿರ) ಪ್ರತ್ಯೇಕ ಬಹುಮಾನಗಳಿರುತ್ತವೆ. ವಿಜೇತರು ಮತ್ತು ತೀರ್ಪುಗಾರರ ಮೆಚ್ಚುಗೆ ಪಡೆಯುವ ತಲಾ ಹತ್ತು ಸ್ಪರ್ಧಿಗಳಿಗೆ ಮೇ ಕೊನೆಯ ವಾರ ಒಂದು ದಿನದ ಸಾಹಿತ್ಯ ಕಮ್ಮಟ ಆಯೋಜಿಸಲಾಗುವುದು.

ಕತೆ, ಕವನಗಳನ್ನು ಹಾಳೆಯ ಒಂದು ಮಗ್ಗುಲಲ್ಲಿ ಸ್ಪಷ್ಟವಾಗಿ ಬರೆದು ಅಥವಾ ಟೈಪ್ ಮಾಡಿ. ಪ್ರತ್ಯೇಕ ಹಾಳೆಯಲ್ಲಿ ಹೆಸರು, ವಿಳಾಸ, ಫೋನ್ ಸಂಖ್ಯೆ, ಇ–ಮೇಲ್ ವಿವರ ನಮೂದಿಸಿ ಮಾ.15ರೊಳಗೆ ಶ್ರೀಮತಿ ವಿಜಯಾರಾವ್, ಮನೆ ನಂಬರ್ 861, 14ನೇ ಮೇನ್, ವಿಜಯನಗರ ಮೊದಲನೇ ಹಂತ, ಮೈಸೂರು. ಪಿನ್ ಕೋಡ್ 570017 ಕಳಿಸಿ, ಹೆಚ್ಚಿನ ಮಾಹಿತಿಗಾಗಿ 98454 22855 ಸಂಪರ್ಕಿಸಿ ಎಂದು ಪ್ರಕಟಣೆಯಲ್ಲಿ ಕೋರಲಾಗಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

28.1.2026 ಬುಧವಾರ, ಮಳೆ ನಕ್ಷತ್ರ: ಶ್ರವಣ 24.01.2026 ರಿಂದ 05.02.2026 ವಿಶ್ವಾವಸು ನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಮಾಘ ಮಾಸ, ಶುಕ್ಲ ಪಕ್ಷ, ತಿಥಿ: ದಶಮಿ, ನಕ್ಷತ್ರ: ಕೃತ್ತಿಕಾ, ರಾಹುಕಾಲ: ಮಧ್ಯಾಹ್ನ 12 ರಿಂದ 1.30 ರವರೆಗೆ

- **ಕೊಡವ ಸಮಾಜ, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಅಭಿಮಾನಿ ಬಳಗ** : ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಅವರ 127ನೇ ಜನ್ಮ ದಿನ, ಅತಿಥಿಗಳು : ಶಾಸಕ ಕೆ.ಹರೀಶ್‌ಗೌಡ, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ಜಿ.ಟಿ. ದೇವೇಗೌಡ, ಟಿ.ಎಸ್. ಶ್ರೀವತ್ಸ, ಸಿ.ಎನ್. ಮಂಜೇಗೌಡ, ಜಿ.ಡಿ. ಹರೀಶ್‌ಗೌಡ, ಕೆ.ವಿವೇಕಾನಂದ, ಮಾಜಿ ಸಂಸದ ಪ್ರತಾಪ್ ಸಿಂಹ, ಬಿಜೆಪಿ ನಗರಾಧ್ಯಕ್ಷ ಎಲ್. ನಾಗೇಂದ್ರ, ಮಾಜಿ ಮೇಯರ್‌ಗಳಾದ ಎಂ.ಜೆ. ರವಿಕುಮಾರ್, ಶ್ರೀಕಂಠಯ್ಯ, ಪಾಲಿಕೆ ಮಾಜಿ ಸದಸ್ಯರಾದ ಮಾಳೇಟಿರ ಸುಬ್ಬಯ್ಯ, ಶ್ರೀಮತಿ ಪ್ರಮೀಳಾ ಭರತ್, ಕೊಡವ ಸಮಾಜದ ಅಧ್ಯಕ್ಷ ಪೊಂಜಾಂಡ ಎ. ಗಣಪತಿ, ಕೊಡವ ಸಮಾಜ ಸಾಂಸ್ಕೃತಿಕ ಮತ್ತು ಸ್ಪೋರ್ಟ್ಸ್ ಕ್ಲಬ್ ಅಧ್ಯಕ್ಷ ಮುಕ್ಕಾಟಿರ ಸಿ. ಅಶೋಕ್, ಬಳಗದ ಅಧ್ಯಕ್ಷ ನಾಯಕಂಡ ತಿಮ್ಮಯ್ಯ, ಸ್ಥಳ: ಫೀಲ್ಡ್ ಮಾರ್ಷಲ್ ಕಾರ್ಯಪ್ಪ ವೃತ್ತ, ಬೆಳಗ್ಗೆ 8.30ಕ್ಕೆ.
- **ಶ್ರೀ 101 ಗಣಪತಿ ದೇವಸ್ಥಾನ ಟ್ರಸ್ಟ್** : 42ನೇ ಪ್ರತಿಷ್ಠಾಪನಾ ವಾರ್ಷಿಕೋತ್ಸವ, ಮುಡುಕುತೊರೆ ಪಾರ್ವತಿ ಅಮ್ಮನವರಿಗೆ ವಿಶೇಷ ಪೂಜೆ, ಶ್ರೀ ವೀರಭದ್ರೇಶ್ವರ ಸ್ವಾಮಿಯ ಪ್ರತಿಷ್ಠಾಪನಾ ವಾರ್ಷಿಕೋತ್ಸವ, ಪಾರ್ವತಿ ಅಮ್ಮನವರಿಗೆ ಪಂಚಾಮೃತ, ರುದ್ರಾಭಿಷೇಕ ಅಲಂಕಾರ, ಮಹಾಮಂಗಳಾರತಿ, ಪ್ರಸಾದ ವಿನಿಯೋಗ, ಸ್ಥಳ: ಗಣಪತಿ ದೇವಸ್ಥಾನ, ಅಗ್ರಹಾರ, ಬೆಳಗ್ಗೆ 9ಕ್ಕೆ.
- **ಕಾವೇರಿ ಆಯುರ್ವೇದ ಆಸ್ಪತ್ರೆ:** ರಕ್ತ ಪದರ, ದೃಷ್ಟಿ ಮತ್ತು ನೇತ್ರ ಪರೀಕ್ಷಾ ಶಿಬಿರ. ಮೋತಿಯಾ ಬಿಂದು (cataract) ತಪಾಸಣೆ ಹಾಗೂ ಆರಂಭಿಕ ಹಂತದ ನಿರ್ವಹಣೆ, ದೃಷ್ಟಿ ದೋಷಗಳ (Refractive errors) ತಿದ್ದುಪಡಿ, ಅಂಬ್ಲಾಯೋಪಿಯಾ ನಿರ್ವಹಣೆ, ಮಧು ಮೇಹ ರೆಟಿನೋಪತಿ ಬಗ್ಗೆ ಜಾಗೃತಿ ಹಾಗೂ ತಪಾಸಣೆ, ರೆಟಿನಿಟಿಸ್ ಫಿಗ್ಮೆಂಟೋಸಾ ನಿರ್ವಹಣೆ, ಕಂಪ್ಯೂಟರ್ ವಿಷನ್ ಸಿಂಡ್ರೋಮ್ ನಿರ್ವಹಣೆ, ಭಂಗು, ಚರ್ಮರೋಗ ಕುರಿತು ಉಚಿತ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ. ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ರಿಂದ.
- **ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ** : ಸಹಕಾರಿಗಳಿಗೆ ತರಬೇತಿ ಕಾರ್ಯಕ್ರಮ, ಉದ್ಘಾಟನೆ : ಮಾಜಿ ಮುಡಾ ಅಧ್ಯಕ್ಷ ಹೆಚ್.ವಿ. ರಾಜೀವ್, ಅಧ್ಯಕ್ಷತೆ : ನಿರ್ದೇಶಕ ಎಸ್.ಕೆ. ಮಂಜುನಾಥ್, ಮುಖ್ಯ ಅತಿಥಿಗಳು : ಬಿ. ಮಹದೇವಸ್ವಾಮಿ, ಶ್ರೀಮತಿ ಎಸ್.ಎಂ. ಶಶಿರೇಖಾ, ಭಾಸ್ಕರ್ ಹೆಗಡೆ ಕಾಗೇರಿ, ಎಸ್.ಆರ್. ನಾರಾಯಣರಾವ್, ಸ್ಥಳ: ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್, ಜೆಎಲ್‌ಬಿ ರಸ್ತೆ, ಬೆಳಗ್ಗೆ 10.30ಕ್ಕೆ.
- **ಮೈಸೂರು ವಿವಿ ಪ್ರಸಾರಾಂಗ, ಹಿಂದೂಸ್ಥಾನ್ ಕಾಲೇಜು** : ಪ್ರಚಾರೋಪನ್ಯಾಸ, ಪ್ರಾಸ್ತಾವಿಕ ನುಡಿ : ಪ್ರಸಾರಾಂಗ ನಿರ್ದೇಶಕ ಪ್ರೊ. ಎಂ. ನಂಜಯ್ಯ ಹೊಂಗನೂರು, ಅಧ್ಯಕ್ಷತೆ : ಪ್ರಿನ್ಸಿಪಾಲ್ ಡಾ.ಸಿ.ಜೆ. ಪ್ರಿಯಾ, ಉಪಸ್ಥಿತರು : ಕನ್ನಡ ಸಹಾಯಕ ಪ್ರಾಧ್ಯಾಪಕ ಡಾ. ಆರ್. ಶಿವಕುಮಾರ್, ಸ್ಥಳ: ಕಾಲೇಜು ಸಭಾಂಗಣ, ಬೆಳಗ್ಗೆ 11ಕ್ಕೆ.
- **ಶ್ರೀ ನಟರಾಜ ಮಹಿಳಾ ವಸತಿ ಪ್ರಥಮ ದರ್ಜೆ ಕಾಲೇಜು** : ಮತದಾರರ ದಿನಾಚರಣೆ, ಸಾನ್ನಿಧ್ಯ : ಶ್ರೀನಟರಾಜ ಪ್ರತಿಷ್ಠಾನ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಉದ್ಘಾಟನೆ : ಕರ್ನಾಟಕ ವೈದ್ಯಕೀಯ ಪರಿಷತ್ ಸದಸ್ಯ ಡಾ.ಹೆಚ್.ಎನ್. ರವೀಂದ್ರ, ಅಧ್ಯಕ್ಷತೆ : ಶ್ರೀ ನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ.ಎಸ್. ಶಿವರಾಜಪ್ಪ, ಉಪಸ್ಥಿತರು : ಪ್ರಿನ್ಸಿಪಾಲ್ ಡಾ. ಎಂ. ಶಾರದಾ, ಶ್ರೀಮತಿ ಹೆಚ್.ಎ. ಪೂರ್ಣಿಮಾ, ಸ್ಥಳ: ಶ್ರೀ ನಟರಾಜ ಸಭಾ ಭವನ, ಬೆಳಗ್ಗೆ 11ಕ್ಕೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಅಂಚೆ ದನಿ ಪಾರಿವಾಳದಿಂದ ಡ್ರೋನ್‌ವರೆಗೆ ಅಂಚೆ ಪಯಣ – ಬಾನುಲಿ ಸರಣಿ, ಪ್ರಸ್ತುತಿ–ಡಾ. ಅಮ್ಮ ಸಂದ್ರ ಸುರೇಶ್, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಎಂ. ಎಸ್. ಲಕ್ಷ್ಮೀಶ, ವ್ಯಾಖ್ಯಾನ–ಡಾ. ಮ. ರಾಮಕೃಷ್ಣ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಚಿತ್ರಗೀತೆಗಳು, 9.05 ಗರ್ಭಕಂಠದ ಕ್ಯಾನ್ಸರ್ ಕುರಿತ ಜಾಗೃತಿ ಕಾರ್ಯಕ್ರಮ, ಪ್ರಾಯೋಜಕರು : ಇಂಡಿಯನ್ ಕ್ಯಾನ್ಸರ್ ಸೊಸೈಟಿ, ಕರ್ನಾಟಕ ಛಾಪ್ಟರ್, 9.15 ವೃತ್ತಿ ಮಾರ್ಗದರ್ಶನ, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ – ಶಿವಕುಮಾರ್ ಶರ್ಮಾ – ಸಂತೂರ್ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಜನಪದ ಸಂಗೀತ, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಕಲಾವತಿ ಅವಧೂತ್ .ವಿ – ಹಾಡುಗಾರಿಕೆ, 4.00 ಮಹಿಳಾರಂಗ–ಸಾಮಾಜಿಕ ಜಾಲತಾಣದ ಅತಿಯಾದ ಬಳಕೆ, ಕೌಟುಂಬಿಕ ನೆಮ್ಮದಿಯನ್ನು ಕಲಕುತಿದೆಯೇ ಕುರಿತು ಮಾತುಕತೆ. ಭಾಗವಹಿಸಿದ್ದಾರೆ–ಕೆ.ಎಸ್.ಓ.ಯು. ಪತ್ರಿಕೋದ್ಯಮ ವಿಭಾಗದ ಸಹ ಪ್ರಾಧ್ಯಾಪಕರಾದ ಹೇಮಲತಾ, ಉದ್ಯಮಿ ಶ್ರೀವಿದ್ಯಾ ಕಾಮತ್ ಹಾಗೂ ಲೇಖಕಿ ಕುಸುಮ ಆಯರಹಳ್ಳಿ, 4.30 ಹಿಂದಿ ಚಿತ್ರಗೀತೆಗಳು, 4.45 ಹಿಂದಿ ಪಾಠ, ಪ್ರಸ್ತುತಿ – ಕಿಶೂರ್ ಎಂ. ಕಾಕಡೆ, 5.00 ಕಟ್ಟೋಣ ಬನ್ನಿ ನಿರ್ಮಾಣ ತಾಂತ್ರಿಕತೆಗಳನ್ನ ಕುರಿತ ಪ್ರಾಯೋಜಿತ ಬಾನುಲಿ ಸರಣಿ, ಪ್ರಾಯೋಜಕರು–ಅಸೋಸಿಯೇಷನ್ ಆಫ್ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ ಇಂಡಿಯಾ, ಮೈಸೂರು ಛಾಪ್ಟರ್. ವಿಷಯ–ಗೃಹಗಳಲ್ಲಿ ಬಳಸಬಹುದಾದ ನವೀಕರಿಸಬಹುದಾದ ಇಂಧನ, ಭಾಗವಹಿಸುತ್ತಾರೆ–ಮೈಸೂರಿನ ನ್ಯಾಷನಲ್ ಇನ್ಸಿಟ್ಯೂಟ್ ಆಫ್ ಇಂಜಿನಿಯರಿಂಗ್‌ನ ಕ್ರಸ್ಟ್ ವಿಭಾಗದ ಶ್ಯಾಮಸುಂದರ್ ಮತ್ತು ಅರುಣ್ ಸೋಲಾರ್‌ನ ಸಂಸ್ಥಾಪಕ ನಿರ್ದೇಶಕರಾದ ಆರ್. ವೈ ಅರುಣ್, ಪ್ರಸ್ತುತಿ–ಎನ್.ಕೇಶವಮೂರ್ತಿ, 6.50 ಕೃಷಿರಂಗ–ಹಲೋ ಕೃಷಿರಂಗ–ಪ್ರಾಯೋಜಿತ ನೇರ ಫೋನ್–ಇನ್ ಕಾರ್ಯಕ್ರಮ, ಬಾನುಲಿ ಬೇಸಾಯ–ದಣಿವರಿಯದ ಕೃಷಿಗೆ ನಮ್ಮ ಸಹಾಯ, ಪ್ರಸ್ತುತಿ–ಆರ್. ಲೋಕೇಶ್ವರಿ, 7.45 ನಕ್ಷತ್ರ ಲೋಕ ಸಿನಿ ಸೆಲೆಬ್ರಿಟಿಗಳೊಂದಿಗೆ ಮಾತುಕತೆ, 8.00 ಚಿತ್ರಗೀತೆಗಳು, 9.30 ಕ್ರೀಡಾಲೋಕ, 10.00 ಜನಪದ ಸಂಗೀತ, 10.30 ಸವಿನೆನಪು

- **ಮುದ್ದುರಾಮ ಬಳಗ, ಜೆಎಸ್‌ಎಸ್ ಮಹಿಳಾ ಕಾಲೇಜು** : ಉಪನ್ಯಾಸ ಮಾಲಿಕೆ, ಪ್ರಾಸ್ತಾವಿಕ ನುಡಿ: ಮುದ್ದುರಾಮ ಬಳಗದ ಸಂಚಾಲಕ ಡಾ. ಹೆಚ್.ಬಿ. ಬೆಟ್ಟಸ್ವಾಮಿ, ಅಧ್ಯಕ್ಷತೆ : ಜೆಎಸ್‌ಎಸ್ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ. ಮೊರಬದ ಮಲ್ಲಿಕಾರ್ಜುನ, ವಾಚನ : ವಿದುಷಿ ಶುಭಾ ರಾಘವೇಂದ್ರ, ವ್ಯಾಖ್ಯಾನ : ವಾಗ್ಮಿ, ಚಿಂತಕ ಪ್ರೊ. ಎಂ. ಕೃಷ್ಣೇಗೌಡ, ಉಪಸ್ಥಿತರು : ಕಾಲೇಜು ಪ್ರಿನ್ಸಿಪಾಲ್ ಡಾ. ರೇಚಣ್ಣ, ಸ್ಥಳ: ನವಜ್ಯೋತಿ ಸಭಾಂಗಣ, ಕಾಲೇಜು ಆವರಣ, ಬೆಳಗ್ಗೆ 11.30ಕ್ಕೆ.
- **ಪ್ರಿಯದರ್ಶನ ಸಾಂಸ್ಕೃತಿಕ ವೇದಿಕೆ, ಶ್ರೀರಂಗಪಟ್ಟಣ** : ರಾಮಾಯಣ ಪ್ರವಚನ ಮಾಲಿಕೆ, ವಿಮರ್ಶಕ, ಚಿಂತಕ ವಿದ್ವಾನ್ ಗ.ನಾ. ಭಟ್ಟ ಅವರಿಂದ ಕಿಷ್ಕಿಂದಕಾಂಡ–ಪ್ರವಚನ ಎಂಟನೆಯ ಸರಣಿ, ಸ್ಥಳ: ನಾದಬ್ರಹ್ಮ ಸಂಗೀತ ಸಭಾ, ಕೆ. ವಾಸುದೇವಾಚಾರ್ಯ ಭವನ, ಜೆಎಲ್‌ಬಿ ರಸ್ತೆ, ಸಂಜೆ 6ಕ್ಕೆ
- **ಶ್ರೀ ಸುಬ್ರಹ್ಮಣ್ಯ ಸ್ವಾಮಿ ದೇವಸ್ಥಾನ, ಶ್ರೀ ಸುಬ್ರಹ್ಮಣ್ಯ ಸ್ವಾಮಿ ಟೆಂಪಲ್ ಟ್ರಸ್ಟ್:** 60ನೇ ವರ್ಷದ ತೈಪೂಸಂ ಮಹೋತ್ಸವ–2026, ಪೂಜಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು. ಚಂದನ ಟಿವಿ ಗಾಯಕರಾದ ರಾಘವೇಂದ್ರ ರತ್ನಾಕರ್ ಹಾಗೂ ತಂಡದವರಿಂದ ದೇವರನಾಮ, ಎಂ.ಎನ್. ಕಾಮಾಕ್ಷಿ ತಂಡದವರಿಂದ ಶ್ರೀ ಲಕ್ಷ್ಮೀಕಾಂತ ಭಜನಾ ಮಂಡಳಿ ಅವರಿಂದ ದೇವರನಾಮ, ಭಕ್ತಿಗೀತೆಗಳು, ಸ್ಥಳ: ದೇವಸ್ಥಾನದ ಪ್ರಾಂಗಣ, ವಿಶ್ವೇಶ್ವರನಗರ. ಸಂಜೆ 6.30ಕ್ಕೆ.
- **ಸಾಧನಾ ಮಂದಿರ(ಮೈಸೂರು):** ಸರಳವಾಗಿ ಕಲಿತು ಅರ್ಥ, ಸಂಕೇತ, ಮಹತ್ವ, ಪ್ರಾಮುಖ್ಯತೆ, ಪ್ರಯೋಜನ ಹಾಗೂ ವಿಧಾನಗಳ ಸಹಿತ ಸರಸ್ವತಿ ಪೂಜೆ ವಿಶೇಷ ತರಬೇತಿ ಸ್ವಾಮಿ ಹಂಸಾನಂದ ಅವರಿಂದ. ಸ್ಥಳ: ಶ್ರೀ ಪ್ರಸನ್ನ ಮಹಾಗಣಪತಿ ದೇವಸ್ಥಾನ, ಗಣಪತಿ ಟೆಂಪಲ್ ರಸ್ತೆ, ಎನ್.ಆರ್.ಮೊಹಲ್ಲಾ, ಸಂಜೆ 6.30 ರಿಂದ.
- **ರಂಗವಲ್ಲಿ ಸಂಸ್ಥೆ, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಬೆಂಗಳೂರು** : ತಟ್ಟೆ ಇಡ್ಲಿ ರಾದ್ಧಾಂತ ಪತ್ತೇದಾರಿ ಹಾಸ್ಯ ನಾಟಕ ಪ್ರದರ್ಶನ, ನಿರ್ದೇಶನ : ರಂಗಾಯಣದ ಹಿರಿಯ ಕಲಾವಿದ ಮಾಯಸಂದ್ರ ಕೃಷ್ಣಪ್ರಸಾದ್, ಬೆಳಕಿನ ವಿನ್ಯಾಸ : ಮಧು ನೀನಾಸಂ, ರಂಗ ವಿನ್ಯಾಸ : ಹೆಚ್.ಕೆ. ದ್ವಾರಕಾನಾಥ್ ರಂಗವಿನ್ಯಾಸ, ಸಂಗೀತ ಹಿನ್ನೆಲೆ : ಉದಿತ್ ಹರಿತಸ್, ಸ್ಥಳ: ಕಿರು ರಂಗಮಂದಿರ, ಸಂಜೆ 7ಕ್ಕೆ.

ಮೈಸೂರಿನಲ್ಲಿ ಸಂಭ್ರಮದ ಗಣರಾಜ್ಯೋತ್ಸವ

● ಜಿಲ್ಲೆಯಲ್ಲಿ 10 ಸಾವಿರ ಕೋಟಿಯ ನಾನಾ ಯೋಜನೆಗಳ ಕಾಮಗಾರಿ ಪ್ರಗತಿ ● ಧ್ವಜಾರೋಹಣದ ಬಳಿಕ ಜಿಲ್ಲಾ ಉಸ್ತುವಾರಿ ಸಚಿವ ಡಾ.ಮಹದೇವಪ್ಪ ಮಾಹಿತಿ ● ಅನ್ನಭಾಗ್ಯ ಯೋಜನೆಯಲ್ಲಿ 1,04,380 ಕ್ವಿಂಟಾಲ್ ಅಕ್ಕಿ ವಿತರಣೆ ● ಯುವನಿಧಿ ಅಭ್ಯರ್ಥಿಗಳಿಗೆ 35.71 ಕೋಟಿ ಹಣ ಪಾವತಿ ● 38.58 ಕೋಟಿ ಮಹಿಳೆಯರ ಉಚಿತ ಪ್ರಯಾಣಕ್ಕೆ 984.50 ಲಕ್ಷ ವೆಚ್ಚ ● 9.60 ಲಕ್ಷ ಗೃಹ ಜ್ಯೋತಿ ಮನೆಗಳಿಗೆ 1093.73 ಕೋಟಿ ಖರ್ಚು



ಮೈಸೂರಿನ ಬನ್ನಿಮಂಟಪ ಮೈದಾನದಲ್ಲಿ ಸೋಮವಾರ ನಡೆದ 77ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಧ್ವಜಾರೋಹಣ ನೆರವೇರಿಸಿ, ರಾಷ್ಟ್ರಧ್ವಜಕ್ಕೆ ನಮಿಸಿದರು.



ಗಣರಾಜ್ಯೋತ್ಸವ ಸಮಾರಂಭದಲ್ಲಿ ಶಾಲಾ ಮಕ್ಕಳು ಸೇರಿದಂತೆ ವಿವಿಧ ತುಕಡಿಗಳು ಪರೇಡ್ ನಡೆಸಿದವು.



ಶಾಲಾ ಮಕ್ಕಳು ಯಕ್ಷಗಾನ ಸೇರಿದಂತೆ ಇತರೆ ಜಾನಪದ ಕಲಾ ಪ್ರದರ್ಶನ ನೀಡಿದರು.

ಮೈಸೂರು, ಜ.27(ಬಿಎಲ್‌ಯು)– ಮೈಸೂರು ಜಿಲ್ಲೆಯಲ್ಲಿ 10 ಸಾವಿರ ಕೋಟಿ ರೂಪಾಯಿಗಳ ವಿವಿಧ ಅಭಿವೃದ್ಧಿ ಕಾಮಗಾರಿ ಕೈಗೊಂಡಿದ್ದು, ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿಗೂ ಒತ್ತು ನೀಡಲಾಗಿದೆ ಎಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ತಿಳಿಸಿದ್ದಾರೆ.

ಮೈಸೂರಿನ ಬನ್ನಿಮಂಟಪ ಪಂಜಿನ ಕವಾಯತು ಮೈದಾನದಲ್ಲಿ ಸೋಮವಾರ ನಡೆದ ಸಂಭ್ರಮದ 77ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಜನಪರ ಆಡಳಿತ ನೀಡುವುದರ ಜೊತೆಗೆ ಆಡಳಿತ ಯಂತ್ರವನ್ನು ಜನ ಸಾಮಾನ್ಯರ ಬಳಿ ಕೊಂಡ್ಯೊಯ್ಯುವುದು ನಮ್ಮ ಸರ್ಕಾರದ ಮೂಲ ಉದ್ದೇಶವಾಗಿದೆ. ಸಮಾಜದ ಶ್ರೇಯೋಭಿವೃದ್ಧಿ ಸಂವಿಧಾನದ ಅಂತಿಮ ಆಶಯವೆಂದು ಮನಗಂಡು ಅಭಿವೃದ್ಧಿ ಪಥದಲ್ಲಿ ದಾಪುಗಾಲಿಡುತ್ತಿದ್ದೇವೆ ಎಂದು ಹೇಳಿದರು.

ಗ್ಯಾರಂಟಿಗಳ ವಿಶ್ವಾಸ: ಆರ್ಥಿಕ ಸಬಲೀಕರಣ, ಮಹಿಳಾ ಸಬಲೀಕರಣ, ಸಾಮಾಜಿಕ ನ್ಯಾಯ ಮತ್ತು ಸಮಾನತೆಯ ಜಾರಿಗೊಳಿಸಲು ಪಂಚ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿ, ಮುನ್ನೆಡೆಸಲಾಗುತ್ತಿದೆ. ಅನ್ನ ಭಾಗ್ಯ ಯೋಜನೆಯಡಿ 1,04,380 ಕ್ವಿಂಟಾಲ್ ಅಕ್ಕಿಯನ್ನು ಸಮರ್ಪಕವಾಗಿ ಪೂರೈಸಲಾಗುತ್ತಿದ್ದು, 2023ರ ಜುಲೈನಿಂದ 2024ರವರೆಗೆ ಐದು ಕೆ.ಜಿ. ಅಕ್ಕಿ ಬದಲಾಗಿ 620 ಕೋಟಿ ಹಣವನ್ನು ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಪಾವತಿ ಮಾಡಲಾಗಿದೆ ಎಂದರು.

ಯುವನಿಧಿ ಯೋಜನೆಯಡಿ ನೋಂದಣಿಯಾಗಿರುವ ಜಿಲ್ಲೆಯ 15,392 ಅಭ್ಯರ್ಥಿಗಳಿಗೆ ಈವರೆಗೆ 35.71 ಕೋಟಿ ರೂ. ನಿರುದ್ಯೋಗ ಭತ್ಯೆ ನೀಡಲಾಗಿದೆ. 9.60 ಲಕ್ಷ ಗೃಹ ಜ್ಯೋತಿ ಯೋಜನೆಗಾಗಿ ಈವರೆಗೆ 1093.73 ಕೋಟಿ ನೀಡಲಾಗಿದೆ. ಶಕ್ತಿ ಯೋಜನೆಯಡಿ 38.58 ಕೋಟಿ ಟಿಕೆಟ್‌ಗಳನ್ನು ಮಹಿಳೆಯರ ಉಚಿತ ಪ್ರಯಾಣಕ್ಕೆ ನೀಡಲಾಗಿದ್ದು, ಇದಕ್ಕಾಗಿ 984.50 ಕೋಟಿ ವ್ಯಯಿಸಲಾಗಿದೆ. 6,73,050 ಗೃಹಲಕ್ಷ್ಮಿ ಫಲಾನುಭವಿಗಳಿಗೆ ತಲಾ 2 ಸಾವಿರ ರೂಪಾಯಿಯಂತೆ 3,096 ಕೋಟಿಯನ್ನು ಡಿಬಿಟಿ ಮೂಲಕ ಸಂದಾಯ ಮಾಡಲಾಗಿದೆ ಎಂದು ಪಂಚ ಗ್ಯಾರಂಟಿ ಯೋಜನೆಗಳ ವಿವರಣೆ ನೀಡಿದರು.

ಸ್ವಚ್ಛ ನಗರಿ ವಿಶ್ವಾಸ: ರಾಜ್ಯ ಸರ್ಕಾರ ಗ್ರೇಟರ್ ಮೈಸೂರು ರಚನೆ ಮಾಡಿದ್ದು, ಈ ಬಾರಿಯ ಸ್ವಚ್ಚ ಸರ್ವೇಕ್ಷಣೆಯಲ್ಲಿ 7 ಸ್ಟಾರ್ ಗಾರ್ಬೇಜ್ ಫ್ರಿ ಸಿಟಿ ಪ್ರಮಾಣೀಕರಣ ಪಡೆಯುವ ಮಹತ್ವಾಕಾಂಕ್ಷೆಯ ಗುರಿ ಹೊಂದಲಾಗಿದೆ. ಮೈಸೂರು ನಗರ ಪಾಲಿಕೆಯಲ್ಲಿ ಪ್ರಸಕ್ತ ಸಾಲಿನಲ್ಲಿ 220 ಕೋಟಿ ಆಸ್ತಿ ತೆರಿಗೆ ಸಂಗ್ರಹಿಸಿದ್ದು, 60 ಸಾವಿರ ಇ–ಸ್ವತ್ತು ದಾಖಲೆ ಒದಗಿಸಲಾಗಿದೆ. 2025–26ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯ ವಿವಿಧ ಯೋಜನೆಯಡಿ 50.46 ಕೋಟಿ ನೀಡಲಾಗಿದೆ. ಮೈಸೂರಿನಲ್ಲಿ 8 ಹಾಗೂ ಹುಣಸೂರಿನಲ್ಲಿ 1 ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯ ನಿರ್ಮಾಣಕ್ಕೆ 59.60 ಕೋಟಿ ಮಂಜೂರು ಮಾಡಲಾಗಿದೆ ಎಂದು ತಿಳಿಸಿದರು.

ಧ್ವಜಾರೋಹಣಕ್ಕೂ ಮುನ್ನ ಡಾ.ಮಹದೇವಪ್ಪ ಅವರು ಪಥ ಸಂಚಲನದ ಪರಿವೀಕ್ಷಣೆ ನಡೆಸಿದರು. ತರುವಾಯ ಪರೇಡ್‌ನಲ್ಲಿ ಭಾಗಿಯಾಗಿದ್ದ 26 ತುಕಡಿಗಳು, ಸಚಿವರಿಗೆ ಗೌರವ ವಂದನೆ ಸಲ್ಲಿಸಿದವು.

ಸ್ವಚ್ಚ ಸರ್ವೇಕ್ಷಣೆ ಹಿನ್ನೆಲೆಯಲ್ಲಿ ಕಸ ವಿಂಗಡಣೆ ಮತ್ತು ವೈಜ್ಞಾನಿಕ ಮಾದರಿ ತ್ಯಾಜ್ಯ ನಿರ್ವಹಣೆ, ಏಕ ಬಳಕೆ ಪ್ಲಾಸ್ಟಿಕ್ ಬಳಕೆ ನಿಷೇದ ಸೇರಿದಂತೆ ಸ್ವಚ್ಚ ಮೈಸೂರು ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಪ್ರಸ್ತುತಪಡಿಸಲಾಯಿತು. ಇದೇ ವೇಳೆ ಶಾಲಾ ಮಕ್ಕಳು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಪ್ರದರ್ಶಿಸಿದರು.

ಚಾಮರಾಜನಗರ ಸಂಸದ ಸುನೀಲ್ ಬೋಸ್, ಶಾಸಕರಾದ ತನ್ವೀರ್ ಸೇಠ್, ಸಿ.ಎನ್.ಮಂಜೇಗೌಡ, ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಪ್ರಾದೇಶಿಕ ಆಯುಕ್ತ ನಿತೇಶ್ ಪಾಟೀಲ್, ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ, ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಎಸ್.ಯುಕೇಶ್ ಕುಮಾರ್, ನಗರಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್, ಅಪರ ಜಿಲ್ಲಾಧಿಕಾರಿ ಡಾ.ಶಿವರಾಜ್, ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

▶ ಮೈಸೂರು ವಿಳ್ಳೆದೆಲೆ, ಮೈಸೂರು ಮಲ್ಲಿಗೆ, ನಂಜನಗೂಡು ರಸಬಾಳೆ ಸೇರಿದಂತೆ ಮೈಸೂರಿನ ಭೌಗೋಳಿಕ ಸೂಚಕ(ಜಿಐ ಟ್ಯಾಗ್) ಹೊಂದಿರುವ ವಸ್ತುಗಳನ್ನು ರಫ್ತು ಮಾಡಲು ಎಪಿಇಡಿಎದ ಜೊತೆ ಕೈ ಜೋಡಿಸಲಾಗಿದೆ. ಭೌಗೋಳಿಕ ಗುರುತು ಹೊಂದಿರುವ ಈ ಬೆಳೆಗಳ ವಿಸ್ತೀರ್ಣ ಹೆಚ್ಚಿಸಲು ಉತ್ತೇಜನ ಹಾಗೂ ಅಗತ್ಯ ತರಬೇತಿ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ.
– ಡಾ. ಹೆಚ್.ಸಿ. ಮಹದೇವಪ್ಪ
ಜಿಲ್ಲಾ ಉಸ್ತುವಾರಿ ಸಚಿವ

ಬಂದು ಸಹಿ ಹಾಕಿ ಪೇರಿ ಕಿತ್ತರು

ಗಣರಾಜ್ಯೋತ್ಸವ ಸಮಾರಂಭದಲ್ಲಿ ಕಡ್ಡಾಯವಾಗಿ ಭಾಗಿಯಾಗಬೇಕೆಂದು ಜಿಲ್ಲಾಡಳಿತ ಸರ್ಕಾರದ ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಕಟ್ಟಾಜ್ಞೆ ಹೊರಡಿಸಿತ್ತು. ಪ್ರವೇಶ ದ್ವಾರದಲ್ಲೆ 32 ಇಲಾಖೆಗಳ ಅಧಿಕಾರಿಗಳು ಹಾಗೂ ನೌಕರರ ಹಾಜರಾತಿ ಪಟ್ಟಿಯನ್ನೂ ಇಡಲಾಗಿತ್ತು ಸಹಿ ಹಾಕಿ, ಕಾರ್ಯಕ್ರಮ ಸ್ಥಳದಲ್ಲಿ ಆಸೀನರಾಗಲಿ ಎಂದು ಈ ವ್ಯವಸ್ಥೆ ಮಾಡಲಾಗಿತ್ತು. ಆದರೆ ಜಿಲ್ಲಾಡಳಿತದ ಎಚ್ಚರಿಕೆಗೆ ಕಿವಿಗೊಡದೆ ಶೇಕಡ 80 ರಷ್ಟು ಸರ್ಕಾರಿ ಉದ್ಯೋಗಿಗಳು ಸಮಾರಂಭಕ್ಕೆ ಗೈರಾಗಿದ್ದರು. ಉಳಿದವರು ಬಂದು ಹಾಜರಾತಿ ಪಟ್ಟಿಯಲ್ಲಿ ಸಹಿ ಮಾಡಿ, ಸಮಾರಂಭ ನಡೆಯುತ್ತಿದ್ದ ಮೈದಾನಕ್ಕೂ ಕಾಲಿಡದೆ ಪೇರಿ ಕಿತ್ತರು. ಗೈರಾದವರ ಪಟ್ಟಿಯನ್ನು ಜಿಲ್ಲಾಧಿಕಾರಿ ಕಚೇರಿಗೆ ಸಲ್ಲಿಸಲಿದ್ದು, ಅವರ ವಿರುದ್ಧ ಏನು ಕ್ರಮ ಕೈಗೊಳ್ಳುತ್ತಾರೆ ಎಂಬುದನ್ನು ಕಾದು ನೋಡಬೇಕು ಎಂದು ಸ್ಥಳದಲ್ಲಿದ್ದ ಅಧಿಕಾರಿಯೊಬ್ಬರು ತಿಳಿಸಿದರು. ಅತ್ತ ಸಾರ್ವಜನಿಕರೂ ಕೂಡ ಬೆರಳೆಣಿಕೆ ಯಷ್ಟು ಮಾತ್ರ ಆಗಮಿಸಿದ್ದರಿಂದ ಇಡೀ ಬನ್ನಿಮಂಟಪ ಮೈದಾನದ ಆಸನಗಳು ಬಣಗುಟ್ಟುತ್ತಿದ್ದವು.

ಅಶ್ವವಿಲ್ಲದೆ ಮೊದಲ ಬಾರಿಗೆ ನಡೆದ ಪರೇಡ್

ಗಣರಾಜ್ಯೋತ್ಸವ ಸಮಾರಂಭದಲ್ಲಿ ಪರೇಡ್ ಕಮಾಂಡೆಂಟ್ ಅವರು ಇದೇ ಮೊದಲ ಬಾರಿಗೆ ಅಶ್ವಾರೋಹಿದಳದ ಕುದುರೆ ಇಲ್ಲದೆ ಪಥ ಸಂಚಲನದ ನೇತೃತ್ವ ವಹಿಸಿದ್ದರು.

ಪ್ರತಿ ವರ್ಷ ಗಣರಾಜ್ಯೋತ್ಸವ ಸಂದರ್ಭದಲ್ಲಿ ಪರೇಡ್‌ನ ಪ್ರಧಾನ ದಳಪತಿ ಅಶ್ವವೇರಿ ಬಂದು, ಕಾರ್ಯಕ್ರಮ ಆರಂಭಕ್ಕೆ ಜಿಲ್ಲಾ ಉಸ್ತುವಾರಿ ಸಚಿವರ ಅನುಮತಿ ಕೇಳುತ್ತಿದ್ದರು. ಅಲ್ಲದೆ ಪರೇಡ್ ಮುಂದೆ ಸಾಗುವುದರಿಂದ ಹಿಡಿದು ಕಾರ್ಯಕ್ರಮದ ಮುಕ್ತಾಯಕ್ಕೆ ಅನುಮತಿ ಕೇಳುವವರೆಗೂ ಅಶ್ವ ಪ್ರಮುಖ ಪಾತ್ರ ವಹಿಸುತ್ತಿತ್ತು.

ಆದರೆ ಗ್ಲಾಂಡರ್ಸ್ ರೋಗದ ಭೀತಿಯ ಹಿನ್ನೆಲೆಯಲ್ಲಿ ಮೈಸೂರಿನ ಪೊಲೀಸ್ ಅಶ್ವಾರೋಹಿ ದಳದ ಯಾವ ಕುದುರೆಗಳನ್ನು ಹೊರಗೆ ಬಿಡುತ್ತಿಲ್ಲ. ವೈರಸ್ ಹರಡದಂತೆ ಈ ಮೂಲಕ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ. ಇದರಿಂದ ಸಿಎಆರ್ ನ ಅಸಿಸ್ಟೆಂಟ್ ಪರೇಡ್ ಕಮಾಂಡರ್ ಸತೀಶ್, ಕುದುರೆ ಏರದೆ ಕಾಲ್ನಡಿಗೆಯಲ್ಲೇ ಪರೇಡ್‌ನ ಎಲ್ಲಾ ಪ್ರಕ್ರಿಯೆ ನಡೆಸಿದರು.

ಯೂರೋಪಿಯನ್ ಯೂನಿಯನ್ ಬೃಹತ್ ಮಾರುಕಟ್ಟೆಗೆ ಭಾರತ ಪ್ರವೇಶಕ್ಕೆ ಕ್ಷಣಗಣನೆ



ನವದೆಹಲಿ, ಜ.27– ಯುರೋಪಿಯನ್ ಯೂನಿಯನ್ ಮಾರುಕಟ್ಟೆಯಲ್ಲಿ ಭಾರತ ತನ್ನ ರಫ್ತಿನ 99 ಪ್ರತಿಶತಕ್ಕೂ ಹೆಚ್ಚಿನ ಮೌಲ್ಯಕ್ಕೆ ರಿಯಾಯಿತಿ ಸುಂಕದಲ್ಲಿ ಅಭೂತಪೂರ್ವ ಮಾರುಕಟ್ಟೆ ಪ್ರವೇಶವನ್ನು ಪಡೆಯಲಿದೆ.

ಭಾರತ–ಯುರೋಪಿಯನ್ ಯೂನಿಯನ್ ಒಕ್ಕೂಟ, ಐತಿಹಾಸಿಕ ವಾಣಿಜ್ಯ– ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕಿದ್ದು, ದೇಶೀಯ ಕಾರ್ಮಿಕ–ಉದ್ಯಮ ವಲಯಗಳಿಗೆ ಉತ್ತೇಜನ ನೀಡುತ್ತದೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಮಂಗಳವಾರ ಹೇಳಿದ್ದಾರೆ.

ಜನವರಿ 27 ರಂದು ಎರಡೂ ಕಡೆಯವರು ಮುಕ್ತ ವ್ಯಾಪಾರ ಒಪ್ಪಂದಕ್ಕೆ ಮಾತುಕತೆಗಳ ಮುಕ್ತಾಯವನ್ನು ಘೋಷಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತ ಮತ್ತು ಇಯು, ಯುರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಮತ್ತು ಯುರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೊ ಕೋಸ್ಟಾ 'ಮದರ್ ಆಫ್ ಆಲ್ ಡೀಲ್ಸ್'ಗೆ ಸಹಿ ಹಾಕಿದ್ದಾರೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಈ ಒಪ್ಪಂದ ದೇಶದ ಜಾಗತಿಕ ವ್ಯಾಪಾರ ವ್ಯವಹಾರಗಳಲ್ಲಿ ತೊಡಗಿಸಿಕೊಳ್ಳುವಿಕೆಯಲ್ಲಿ ಒಂದು ಕಾರ್ಯತಂತ್ರದ ಪ್ರಗತಿಯಾಗಿದ್ದು, 1.4 ಶತಕೋಟಿ ಜನರಿಗೆ ಯುಎಸ್‌ಡಿ 20 ಟ್ರಿಲಿಯನ್ ಇಯು ಮಾರುಕಟ್ಟೆಯಲ್ಲಿ ವಿಶಾಲ ಅವಕಾಶಗಳನ್ನು ತೆರೆಯುತ್ತದೆ ಎಂದು ಗೋಯಲ್ ಹೇಳಿದರು.

ಇದು ನಮ್ಮ ರಫ್ತಿನ 99 ಪ್ರತಿಶತಕ್ಕೂ ಹೆಚ್ಚು ಮೌಲ್ಯಕ್ಕೆ ಅಭೂತಪೂರ್ವ ಮಾರುಕಟ್ಟೆ ಪ್ರವೇಶವನ್ನು ನೀಡುವ ಒಪ್ಪಂದವಾಗಿದೆ. ನಮ್ಮ ಕಾರ್ಮಿಕ ವಲಯಗಳಿಗೆ ಬೃಹತ್ ಅವಕಾಶವನ್ನು ಒದಗಿಸುತ್ತದೆ ಮತ್ತು ಮೇಕ್ ಇನ್ ಇಂಡಿಯಾವನ್ನು ಬಲಪಡಿಸುತ್ತದೆ ಎಂದು ಸಚಿವರು ಹೇಳಿದರು.

ಜಾಗತಿಕ ವ್ಯಾಪಾರದ ಮೂರನೇ ಒಂದು ಭಾಗವನ್ನು ಹೊಂದಿರುವ ನಾಲ್ಕನೇ ಮತ್ತು ಎರಡನೇ ಅತಿದೊಡ್ಡ ಆರ್ಥಿಕತೆಗಳ ನಡುವೆ ಈ ಪಾಲುದಾರಿಕೆಯನ್ನು ರೂಪಿಸಲಾಗಿದೆ ಎಂದು ಅವರು ಹೇಳಿದರು.

ಇದು ಭಾರತೀಯ ವ್ಯವಹಾರಗಳಿಗೆ ಬೃಹತ್ ವ್ಯಾಪಾರ ಮತ್ತು ಹೂಡಿಕೆ ಅವಕಾಶಗಳನ್ನು ಸೃಷ್ಟಿಸುತ್ತದೆ ಮತ್ತು ಎಂಎಸ್‌ಎಂಇಗಳು, ಮಹಿಳೆಯರು, ಯುವಕರು, ಕುಶಲಕರ್ಮಿಗಳು, ಕಾರ್ಮಿಕರು, ವಿದ್ಯಾರ್ಥಿಗಳು, ನುರಿತ ವೃತ್ತಿಪರರು, ಮೀನುಗಾರರು, ರೈತರು ಮತ್ತು ರಫ್ತುದಾರರಿಗೆ ಪ್ರಯೋಜನವನ್ನು ನೀಡುತ್ತದೆ.

ಸೂಕ್ಷ್ಮ ವಲಯಗಳನ್ನು ರಕ್ಷಿಸಲು ಕಾಳಜಿ ವಹಿಸುವುದರೊಂದಿಗೆ, ಗ್ರಾಮೀಣ ಜೀವನೋಪಾಯವನ್ನು ಸಹ ಸುರಕ್ಷಿತಗೊಳಿಸಲಾಗಿದೆ ಮತ್ತು ಹೆಚ್ಚಿನ ಮೌಲ್ಯದ ಇಯು ಮಾರುಕಟ್ಟೆಯಲ್ಲಿ ವಿಸ್ತರಿಸಲು ಸಾಮರ್ಥ್ಯವನ್ನು ತೆರೆಯಲಾಗಿದೆ. ಎಂದು ಅವರು ಹೇಳಿದರು. ನಮ್ಮ ನುರಿತ ಭಾರತೀಯ ವೃತ್ತಿಪರರಿಗೆ ಜಾಗತಿಕ ಅವಕಾಶಗಳನ್ನು ವಿಸ್ತರಿಸಲು ಸಹಾಯ ಮಾಡುವ ಭವಿಷ್ಯಕ್ಕೆ ಸಿದ್ಧವಾದ ಚಲನಶೀಲತೆಯ ಚೌಕಟ್ಟಿನೊಂದಿಗೆ ಸೇವಾ ವಲಯದಲ್ಲಿ ದೊಡ್ಡ ಗೆಲುವು ಸಾಧಿಸಲಾಗಿದೆ ಎಂದು ಅವರು ಹೇಳಿದರು.

ಈ ಒಪ್ಪಂದ 'ಭವಿಷ್ಯದ ದ್ವಾರ' ಎಂದು ಅವರು ಹೇಳಿದರು ಏಕೆಂದರೆ ಇದು ಭಾರತ ಹೆಚ್ಚಿನ ಮೌಲ್ಯದ ಉದ್ಯೋಗಗಳನ್ನು ಸೃಷ್ಟಿಸಲು, ನಾವೀನ್ಯತೆಯನ್ನು ಹೆಚ್ಚಿಸಲು ಮತ್ತು ಪ್ರತಿಭೆ ಮತ್ತು ಸುಸ್ಥಿರ ಆರ್ಥಿಕ ಬೆಳವಣಿಗೆಗೆ ಜಾಗತಿಕವಾಗಿ ಸ್ಪರ್ಧಾತ್ಮಕ ಕೇಂದ್ರವಾಗಿ ತನ್ನ ಸ್ಥಾನವನ್ನು ದೃಢವಾಗಿ ಭದ್ರಪಡಿಸಿಕೊಳ್ಳಲು ಅನುವು ಮಾಡಿಕೊಡುತ್ತದೆ.


ಐಷಾರಾಮಿ ಕಾರುಗಳು, ಮದ್ಯ, ಔಷಧ, ಎಲೆಕ್ಟ್ರಾನಿಕ್, ಯಂತ್ರೋಪಕರಣ, ಉಕ್ಕು, ರಸಾಯನಿಕ ಪದಾರ್ಥ ಅಗ್ಗ



ನವದೆಹಲಿ, ಜ.27– 18 ವರ್ಷಗಳ ಕಾಯುವಿಕೆಯ ನಂತರ ಭಾರತ ಮತ್ತು ಯುರೋಪಿಯನ್ ಒಕ್ಕೂಟದ ನಡುವಿನ ಮುಕ್ತ ವ್ಯಾಪಾರ ಒಪ್ಪಂದ ವೈನ್, ವಿಸ್ಕಿಯ ಅಭಿಮಾನಿಗಳು ಮತ್ತು ಆಟೋಮೊಬೈಲ್ ವಹಿವಾಟಿಗೆ ಸುಗ್ಗಿ ತರಲಿದೆ.

ಯುರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ 'ಎಲ್ಲಾ ವ್ಯಾಪಾರ ಒಪ್ಪಂದಗಳ ತಾಯಿ' ಎಂದು ಬಣ್ಣಿಸಿದ್ದ ಈ ವ್ಯಾಪಾರ ಒಪ್ಪಂದ ಭಾರತೀಯ ಸರಕುಗಳಿಗೆ ಯುರೋಪಿಯನ್ ಮಾರುಕಟ್ಟೆಗಳನ್ನು ತೆರೆಯುತ್ತದೆ. ಅದೇ ಸಮಯದಲ್ಲಿ, ಇದು ಸುಂಕಗಳನ್ನು ಕಡಿಮೆ ಮಾಡುವ ಮೂಲಕ ಭಾರತದಲ್ಲಿ ಆಮದು ಮಾಡಿಕೊಂಡ ಯುರೋಪಿಯನ್ ವಸ್ತುಗಳನ್ನು ಅಗ್ಗವಾಗಿಸುತ್ತದೆ.

ಮರ್ಸಿಡಿಸ್, ಬಿಎಂಡಬ್ಲ್ಯೂ, ಆಡಿ ಕಾರುಗಳು ಅಗ್ಗ: ಮರ್ಸಿಡಿಸ್, ಬಿಎಂಡಬ್ಲ್ಯೂ ಮತ್ತು ಆಡಿಯಂತಹ ಯುರೋಪಿಯನ್ ಕಾರುಗಳು ಪ್ರಸ್ತುತ ಶೇಕಡಾ 100 ಕ್ಕಿಂತ ಹೆಚ್ಚು ಆಮದು ಸುಂಕವನ್ನು ಆಕರ್ಷಿಸುತ್ತವೆ. ಒಪ್ಪಂದದ ಪ್ರಕಾರ, 15,000 ಯುರೋಗಳಿಗಿಂತ ಹೆಚ್ಚು – ಸುಮಾರು 16 ಲಕ್ಷ ರೂ – ಬೆಲೆಯ ಕಾರುಗಳು ಈಗ ಶೇಕಡಾ 40 ರಷ್ಟು ಸುಂಕವನ್ನು ಆಕರ್ಷಿಸುತ್ತವೆ. ಈ ಸುಂಕವನ್ನು ಶೇಕಡಾ 10ಕ್ಕೆ ಇಳಿಸಲಾಗುವುದು, ಮುಂದಿನ ದಿನಗಳಲ್ಲಿ ಈ ಕಾರುಗಳ ಬೆಲೆಗಳು ಲಕ್ಷಗಳಷ್ಟು ಕಡಿಮೆಯಾಗುತ್ತವೆ.




ಮದ್ಯದ ಬೆಲೆ ಇಳಿಕೆ: ಒಪ್ಪಂದದಿಂದಾಗಿ ಫ್ರಾನ್ಸ್, ಇಟಲಿ ಮತ್ತು ಸ್ಪೇನ್ ನಂತಹ ಯುರೋಪಿಯನ್ ಮಾರುಕಟ್ಟೆಗಳಿಂದ ಆಮದು ಮಾಡಿಕೊಳ್ಳುವ ವೈನ್ ಈಗ ಹೆಚ್ಚು ಅಗ್ಗವಾಗಲಿದೆ. ಪ್ರಸ್ತುತ, ಭಾರತ ಆಮದು ಮಾಡಿಕೊಂಡ ವೈನ್‌ಗೆ ಶೇಕಡಾ 150 ರಷ್ಟು ಆಮದು ಸುಂಕವನ್ನು ವಿಧಿಸುತ್ತದೆ. ಹೊಸ ಒಪ್ಪಂದ ಇದನ್ನು ಶೇಕಡಾ 20ಕ್ಕೆ ಇಳಿಸಲು ಪ್ರಸ್ತಾಪಿಸುತ್ತದೆ, ಅಂದರೆ ಬೆಲೆಗಳು ಗಮನಾರ್ಹವಾಗಿ ಕಡಿಮೆಯಾಗುತ್ತವೆ. ಆದಾಗ್ಯೂ, ದೇಶೀಯ ಮಾರುಕಟ್ಟೆಗಳ ಮೇಲಿನ ಪರಿಣಾಮವನ್ನು ನಿಯಂತ್ರಿಸಲು ಇದನ್ನು 5–10 ವರ್ಷಗಳ ಅವಧಿಯಲ್ಲಿ ಕ್ರಮೇಣ ಜಾರಿಗೆ ತರಲಾಗುತ್ತದೆ.




ಆದಾಗ್ಯೂ, 2.5 ಯುರೋಗಳಿಗಿಂತ ಕಡಿಮೆ ಬೆಲೆಯ ವೈನ್‌ಗಳಿಗೆ ಯಾವುದೇ ಸುಂಕ ರಿಯಾಯಿತಿ ಇರುವುದಿಲ್ಲ. ಇದು ಭಾರತೀಯ ಮಾರುಕಟ್ಟೆಯನ್ನು ರಕ್ಷಿಸುವ ಉದ್ದೇಶವಾಗಿದೆ. ಒಪ್ಪಂದದ ಪ್ರಕಾರ, ಭಾರತೀಯ ವೈನ್‌ಗಳು ಸಹ ಸದಸ್ಯ ರಾಷ್ಟ್ರಗಳಲ್ಲಿ ಸುಂಕ ರಿಯಾಯಿತಿಗಳನ್ನು ಪಡೆಯುತ್ತವೆ.


ಅಗ್ಗವಾಗಲಿರುವ ಔಷಧಗಳು: ಯುರೋಪ್ ತನ್ನ ಅತ್ಯಾಧುನಿಕ ಆರೋಗ್ಯ ರಕ್ಷಣಾ ತಂತ್ರಜ್ಞಾನಗಳಿಗೆ ಹೆಸರುವಾಸಿಯಾಗಿದೆ. ಈ ಒಪ್ಪಂದ ಕ್ಯಾನ್ಸರ್ ಮತ್ತು ಇತರ ನಿರ್ಣಾಯಕ ಕಾಯಿಲೆಗಳಿಗೆ ಆಮದು ಮಾಡಿಕೊಂಡ ಔಷಧಿಗಳನ್ನು ಭಾರತದಲ್ಲಿ ಅಗ್ಗವಾಗಿಸುತ್ತದೆ. ಇದು ಯುರೋಪಿನಿಂದ ಭಾರತಕ್ಕೆ ಆಮದು ಮಾಡಿಕೊಳ್ಳುವ ವೈದ್ಯಕೀಯ ಉಪಕರಣಗಳ ಬೆಲೆಗಳನ್ನು ಸಹ ಕಡಿಮೆ ಮಾಡುತ್ತದೆ. ಈ ಒಪ್ಪಂದ ಭಾರತ ತಯಾರಿಸಿದ ಔಷಧಿಗಳಿಗೆ 27 ಯುರೋಪಿಯನ್ ಮಾರುಕಟ್ಟೆಗಳಲ್ಲಿ ಮಾರುಕಟ್ಟೆಯನ್ನು ಒದಗಿಸುತ್ತದೆ.



ಎಲೆಕ್ಟ್ರಾನಿಕ್ ಮತ್ತು ಹೈಟೆಕ್ ಯಂತ್ರೋಪಕರಣ: ಯುರೋಪ್‌ನಿಂದ ಆಮದು ಮಾಡಿಕೊಳ್ಳುವ ವಿಮಾನಗಳು, ಮೊಬೈಲ್ ಫೋನ್‌ಗಳು ಮತ್ತು ಹೈಟೆಕ್ ಎಲೆಕ್ಟ್ರಾನಿಕ್ ವಸ್ತುಗಳ ಬಿಡಿಭಾಗಗಳ ಮೇಲಿನ ಸುಂಕವನ್ನು ವ್ಯಾಪಾರ ಒಪ್ಪಂದವು ಕೊನೆಗೊಳಿಸುತ್ತದೆ. ಇದು ಭಾರತದಲ್ಲಿ ಗ್ಯಾಜೆಟ್‌ಗಳ ಉತ್ಪಾದನಾ ವೆಚ್ಚವನ್ನು ಕಡಿಮೆ ಮಾಡುತ್ತದೆ, ಅಂತಿಮ ಗ್ರಾಹಕರಿಗೆ ಪ್ರಯೋಜನವನ್ನು ನೀಡುತ್ತದೆ. ಇದರರ್ಥ ಮೊಬೈಲ್ ಫೋನ್‌ಗಳು ಅಗ್ಗವಾಗಬಹುದು.



ಉಕ್ಕು ಮತ್ತು ರಾಸಾಯನಿಕ ಉತ್ಪನ್ನಗಳು: ಕಬ್ಬಿಣ, ಉಕ್ಕು ಮತ್ತು ರಾಸಾಯನಿಕ ಉತ್ಪನ್ನಗಳ ಮೇಲೆ ಶೂನ್ಯ ಸುಂಕದ ಪ್ರಸ್ತಾಪವಿದೆ. ಇದು ನಿರ್ಮಾಣ ಮತ್ತು ಕೈಗಾರಿಕಾ ವಲಯಗಳಲ್ಲಿ ಕಚ್ಚಾ ವಸ್ತುಗಳ ಬೆಲೆಗಳನ್ನು ಸಂಭಾವ್ಯವಾಗಿ ಕಡಿಮೆ ಮಾಡುತ್ತದೆ, ಮನೆ ಖರೀದಿದಾರರಿಗೆ ಪ್ರಯೋಜನವನ್ನು ನೀಡುತ್ತದೆ. ಈ ವ್ಯಾಪಾರ ಒಪ್ಪಂದ ಭಾರತೀಯ ರಫ್ತಿಗೆ ದೊಡ್ಡ ಗೆಲುವು ಮತ್ತು ಭಾರತದಲ್ಲಿ ತಯಾರಿಸಿದ ಉಡುಪುಗಳು, ಚರ್ಮ ಮತ್ತು ಆಭರಣಗಳಿಗೆ ಬೃಹತ್ ಯುರೋಪಿಯನ್ ಮಾರುಕಟ್ಟೆಯನ್ನು ತೆರೆಯುತ್ತದೆ.



ಪ್ರಧಾನಿ ಮೋದಿ ಶ್ಲಾಘನೆ

ನವದೆಹಲಿ, ಜ.27– ಭಾರತ ಮತ್ತು ಐರೋಪ್ಯ ಒಕ್ಕೂಟ (EU) ಮುಕ್ತ ವ್ಯಾಪಾರ ಒಪ್ಪಂದಕ್ಕೆ (FTA) ಒಪ್ಪಿಗೆ ನೀಡಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಘೋಷಿಸಿದ್ದಾರೆ. 'ಎಲ್ಲಾ ಒಪ್ಪಂದಗಳ ತಾಯಿ' ಎರಡೂ ಕಡೆಯವರಿಗೆ ಪ್ರಮುಖ ಅವಕಾಶಗಳನ್ನು ತರುತ್ತದೆ ಎಂಬ ಭರವಸೆ ನಮಗಿದೆ ಎಂದರು.

ನಿನ್ನೆ ಯುರೋಪಿಯನ್ ಒಕ್ಕೂಟ ಮತ್ತು ಭಾರತದ ನಡುವೆ ಒಂದು ದೊಡ್ಡ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಜನರು ಇದನ್ನು ಎಲ್ಲಾ ಒಪ್ಪಂದಗಳ ತಾಯಿ ಎಂದು ಕರೆಯುತ್ತಿದ್ದಾರೆ. ಈ ಒಪ್ಪಂದವು ಭಾರತ ಮತ್ತು ಯುರೋಪಿನ ಸಾರ್ವಜನಿಕರಿಗೆ ಪ್ರಮುಖ ಅವಕಾಶಗಳನ್ನು ಒದಗಿಸುತ್ತದೆ.

ಇದು ವಿಶ್ವದ ಎರಡು ಪ್ರಮುಖ ಆರ್ಥಿಕತೆಗಳ ನಡುವಿನ ಪಾಲುದಾರಿಕೆಯ ಪರಿಪೂರ್ಣ ಉದಾಹರಣೆಯಾಗಿದೆ ಎಂದು ಹೊಸದಾಗಿ ಸಹಿ ಹಾಕಲಾದ ಈ ಎಫ್ ಟಿಎ ಕುರಿತು ಮಾಡಿದ ಭಾಷಣದಲ್ಲಿ ಪ್ರಧಾನಿ ಮೋದಿ ಹೇಳಿದರು. ಈ ಒಪ್ಪಂದವು ಭಾರತೀಯ ಉತ್ಪಾದನಾ ವಲಯಕ್ಕೆ ಪ್ರಮುಖ ಉತ್ತೇಜನ ನೀಡಲಿದೆ ಎಂದು ಪ್ರಧಾನಿ ಹೇಳಿದರು.

ಗಣರಾಜ್ಯೋತ್ಸವದ ಸಂದರ್ಭದಲ್ಲಿ ವಿಶೇಷ ಅತಿಥಿಗಳಾಗಿ ಭಾರತಕ್ಕೆ ಬಂದಿರುವ ಯುರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೊ ಕೋಸ್ಟಾ ಮತ್ತು ಯುರೋಪಿಯನ್ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಅವರ ಸಮ್ಮುಖದಲ್ಲಿ ಒಪ್ಪಂದ ಮುಕ್ತಾಯಗೊಳಿಸಲಾಯಿತು.

ನಕ್ಕರೆ ಅದೇ ಸ್ವರ್ಗ

ಒಬ್ಬ ಹುಡುಗ ಗರ್ಲ್ ಫ್ರೆಂಡ್ ಮನೆಯಲ್ಲಿ ಊಟ ಮಾಡುತ್ತಿದ್ದ. ಮನೆಯಲ್ಲಿ ಸಾಕಿದ್ದ ನಾಯಿ ಬಂದು ನಿಂತಿತ್ತು.

ಹುಡುಗ : ನಿಮ್ಮ ನಾಯಿ ಯಾಕೆ ಅಷ್ಟು ಸಿಟ್ಟಿನಿಂದ ನೋಡ್ತಾಯಿದೆ?

ಹುಡುಗಿ : ನೀ ಜಲ್ದಿ ಊಟ ಮಾಡು, ಅದು ಅದರ ಪ್ಲೇಟ್ ಗುರ್ತು ಹಿಡದೈತಿ!

ಮೈಸೂರು ಮಿತ್ರ

ಬುಧವಾರ, ಜನವರಿ 28, 2026

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ.........

ಸಾಧಿಸಿದರೂ ಪರವಾಗಿಲ್ಲ, ಎಷ್ಟೇ ದೊಡ್ಡ ಪದವಿ ಪಡೆದರೂ ಪರವಾಗಿಲ್ಲ. ನೀವು ಮಾತನಾಡುವ ರೀತಿ ಮತ್ತು ಮಾನವೀಯತೆಯನ್ನು ಕಲಿಯದಿದ್ದರೆ ನೀವು ಅನಕ್ಷರಸ್ಥ ವ್ಯಕ್ತಿಗೆ ಸಮಾನ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಒಣ ಮಾತು ಒಣಗಿದ ಹುಲ್ಲು, ಒಳ್ಳೆಯ ಮಾತು ಬೆಳ್ಳಿಗಿನ ಹಾಲು

ನಿಮ್ಮ ಪತ್ರಗಳು

ಚಾಮುಂಡಿಬೆಟ್ಟದ ಬಗ್ಗೆ ಕಳಕಳಿ ಇರುವ ಲೇಖನ

ಮಾನ್ಯರೇ

ವಿಕ್ರಂ ಮುತ್ತಣ್ಣ ಅವರ 'ಬಿಚ್ಚು ನುಡಿ ಅಂಕಣ' ಪ್ರಸಾದವೋ ಇಲ್ಲ ಪಾಷಾಣವೋ ಅತ್ಯಂತ ಸಮಂಜಸವಾಗಿದೆ. ಕೇಂದ್ರ ಸರ್ಕಾರ ತರಲು ಉದ್ದೇಶಿಸಿರುವ ಈ ಯೋಜನೆಯನ್ನು ಪರಿಶೀಲಿಸಿ ಅದನ್ನು ಒಳ್ಳೆಯ ರೀತಿಯಲ್ಲಿ ಸಾಕಾರಗೊಳಿಸಿ ಯೋಜನೆ ಜಾರಿಗೆ ತಂದರೆ ಇದು ಒಂದು ಉತ್ತಮ ಯೋಜನೆ ಆಗಬಹುದು.

ಆದರೆ ಈ ಯೋಜನೆಯ ಅವಶ್ಯಕತೆ ಸದ್ಯಕ್ಕೆ ಚಾಮುಂಡಿಬೆಟ್ಟಕ್ಕೆ ಇದೆಯೇ ಎನ್ನುವುದರ ಬಗ್ಗೆ ಸಂಸದರು ಸ್ಥಳೀಯರ ಸಭೆ ಕರೆದು ಚರ್ಚಿಸಬೇಕಾಗಿದೆ.

ವಿಕ್ರಂ ಮುತ್ತಣ್ಣ ಅವರು ಹೇಳುವಂತೆ ಸಾವಿರಾರು ಸಂಖ್ಯೆಯಲ್ಲಿ ಬೆಟ್ಟಕ್ಕೆ ಭೇಟಿ ನೀಡುತ್ತಿರುವ ಭಕ್ತರಿಗೆ ಈಗ ಬೇಕಾಗಿರುವುದು ಮೂಲಭೂತ ಸೌಕರ್ಯಗಳೇ ಹೊರತು ಆಡಂಬರದ ತರಾವರಿಯ ಕಟ್ಟಡಗಳಲ್ಲ.

ಈ ವಿಚಾರವಾಗಿ ಹೇಳಬೇಕೆಂದರೆ ಮೂಲಸೌಕರ್ಯದ ವಿಚಾರದಲ್ಲಿ ಈಗಾಗಲೇ ಇದೇ ಪತ್ರಿಕೆಯಲ್ಲಿ ನಾನೇ ಎರಡು ಬಾರಿ ಒಂದು ಮೂಲಸೌಕರ್ಯದ ವಿಚಾರವಾಗಿ ಬರೆದಿದ್ದೆ. ಆದರೆ ಚಾಮುಂಡೇಶ್ವರಿ ಅಭಿವೃದ್ಧಿ ಪ್ರಾಧಿಕಾರ ಈ ಬಗ್ಗೆ ಯಾವುದೇ ಗಮನ ಹರಿಸಲಿಲ್ಲ. ಜೊತೆಗೆ ಸ್ಥಳೀಯ ಗ್ರಾಮ ಪಂಚಾಯಿತಿಯು ಸಹ ಈ ಬಗ್ಗೆ ಚಿಂತಿಸಲಿಲ್ಲ. ರಾಜ್ಯ ಸರ್ಕಾರವೂ ಸಹ ನಿರ್ಲಕ್ಷ್ಯ ತೋರಿದೆ.

ಚಾಮುಂಡೇಶ್ವರಿ ದರ್ಶನ ಮಾಡಲು ಹೋಗುವಾಗ ಚಪ್ಪಲಿ ಸ್ಟ್ಯಾಂಡಲ್ಲಿ ಚಪ್ಪಲಿ ಬಿಟ್ಟು ಕೈ ತೊಳೆಯಲು ಅಲ್ಲಿ ನೀರಿನ ವ್ಯವಸ್ಥೆ ಇಲ್ಲ. ಚಾಮುಂಡೇಶ್ವರಿ ದರ್ಶನಕ್ಕೆ ಬರುವ ಭಕ್ತರು ಚಪ್ಪಲಿ ಮುಟ್ಟಿದ ಕೈಯ್ಯಲ್ಲಿ ದೇವರಿಗೆ ಕೈ ಮುಗಿದು ತಮ್ಮ ಬೇಡಿಕೆಗಳನ್ನು ಕೋರಿಕೊಳ್ಳಬೇಕಾಗಿರುವುದು ದುರ್ದೈವದ ಸಂಗತಿ.

ಈ ಬಗ್ಗೆ ಕಳೆದೆರಡು ವರ್ಷದಿಂದ ನಾನು 'ಮಿತ್ರ'ದಲ್ಲಿ ಎರಡು ಬಾರಿ ವ್ಯವಸ್ಥೆಯನ್ನು ಸರಿಪಡಿಸಿ ನೀರಿನ ಸೌಲಭ್ಯ ಒದಗಿಸುವಂತೆ ಕೇಳಿಕೊಂಡಿದ್ದೇನೆ. ಯಾವುದೇ ಪ್ರಯೋಜನ ಆಗಿಲ್ಲ. ಆದರೆ ಇದು ಚಾಮುಂಡಿಬೆಟ್ಟದ ಅಭಿವೃದ್ಧಿ ಪ್ರಾಧಿಕಾರ ಅಥವಾ ಸ್ಥಳೀಯ ಪಂಚಾಯಿತಿಯ ಗಮನಕ್ಕೆ ಬಾರದೆ ಅವರು ಉದಾಸೀನತೆ ತೋರಿ ಇಂದಿಗೂ ಚಾಮುಂಡೇಶ್ವರಿ ನೋಡಲು ಬರುವ ಭಕ್ತರು ಚಪ್ಪಲಿ ಮುಟ್ಟಿದ ಕೈಯಲ್ಲಿ ದೇವರಿಗೆ ನಮಸ್ಕಾರ ಮಾಡಿ ಬರುತ್ತಿರುವುದು ಅತ್ಯಂತ ವಿಷಾದನೀಯ ಸಂಗತಿ.

ಮೂಲಭೂತ ವ್ಯವಸ್ಥೆಗಳಲ್ಲಿ ಒಂದಾದ ಚಪ್ಪಲಿಯನ್ನು ಮುಟ್ಟಿಕೊಂಡಾಗ ಕೈ ತೊಳೆಯಲು ನೀರಿನ ಅವಶ್ಯಕತೆ ಸೌಕರ್ಯಗಳು ಒದಗಿಸಲಾಗದ ಪರಿಸ್ಥಿತಿಯಲ್ಲಿ ಸ್ಥಳೀಯ ಆಡಳಿತ ಇರುವಾಗ ಬೇರೆ ಪ್ರಸಾದ ಯೋಜನೆಯ ಅಥವಾ ಇನ್ನ್ಯಾವುದೋ ಯೋಜನೆ ಮಾಡಿ ಏನು ಪ್ರಯೋಜನ ಈ ಬಗ್ಗೆ ಮುತ್ತಣ್ಣನವರ ಲೇಖನ ಅತ್ಯಂತ ಮೊನಚಾಗಿಯೂ, ಜವಾಬ್ದಾರಿಯುತವಾಗಿಯೂ ಇದೆ. ಹಾಗೆ ಸಂಬಂಧ ಪಟ್ಟವರಿಗೆ ಅದು ಚುಚ್ಚುವ ರೀತಿಯಲ್ಲಿ ಇದೆ. ಈ ಲೇಖನ ಚಾಮುಂಡಿಬೆಟ್ಟದ ಬಗ್ಗೆ 'ಮೈಸೂರು ಮಿತ್ರ'ನಿಗೆ ಇರುವ ಕಳಕಳಿಯನ್ನು ತೋರಿಸುವ ಅತ್ಯಂತ ನೇರ, ದಿಟ್ಟತನದ ಲೇಖನವಾಗಿದೆ.

– ಶಿವಮೊಗ್ಗ ನಾ. ದಿನೇಶ್ ಅಡಿಗ, ಮೈಸೂರು

ಬೇಜವಾಬ್ದಾರಿ ಸಿಸಿ ಕ್ಯಾಮರಾ!?



ಮಾನ್ಯರೆ,

ಕಂಡ ಕಂಡಲ್ಲಿ ಕಸ ಹಾಕುವ ಬೇಜವಾಬ್ದಾರಿ ಜನರ ಹಾವಳಿಗೆ ಅಂತ್ಯ ಹಾಡಲು ಮೈಸೂರು ಮಹಾನಗರ ಪಾಲಿಕೆ ಸ್ವಚ್ಛತೆ ಹಾಗೂ ಪರಿಸರ ಮೇಲ್ವಿಚಾರಕ ಸಿಬ್ಬಂದಿ ಇಂತಹ ಜಾಗದಲ್ಲಿ, ಉದಾಹರಣೆಗೆ ವಿಜಯನಗರ 2ನೇ ಹಂತದ ಸಂಗಮ ಸರ್ಕಲ್ ಬಳಿ ಸೋಲಾರ್ ಆಧಾರಿತ ಸಿಸಿ ಕ್ಯಾಮರಾಗಳ ಅಳವಡಿಸಿದ್ದಾರೆ. ಇಂತಹ ಕ್ಯಾಮರಾಗಳಲ್ಲಿ ಸೆರೆಯಾದ ದೃಶ್ಯ ಆಧರಿಸಿ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ಸಹ ನೀಡಲಾಗಿದೆ. ಆದರೆ ಇಂತಹ ಸಿಸಿ ಕ್ಯಾಮರಾ ಹಾಕಿದ ನಂತರವೂ ಜನ ಕಸ ತಂದು ಸುರಿಯುತ್ತಲೇ ಇದ್ದಾರೆ. ಆದರೆ ಇಂತಹವರ ವಿರುದ್ಧ ಪಾಲಿಕೆ ಏನು ಕ್ರಮ ಕೈಗೊಂಡಿದೆ ಎಂಬುದಂತೂ ನಿಗೂಢ. ಪಾಲಿಕೆ, ಜನರ ತೆರಿಗೆ ಹಣವನ್ನು ಹೇಗೆ ಪೋಲು ಮಾಡುತ್ತಿದೆ ಎಂಬುದಕ್ಕೆ ಇದೊಂದು ಜ್ವಲಂತ ಸಾಕ್ಷಿ.

– ಕೃಷ್ಣಮೂರ್ತಿ, ಎಂ.ಜಿ. ಕೊಪ್ಪಲು, ಮೈಸೂರು.

ನೀರು ಸರಬರಾಜು ಬಂದ್ ಮಾಡಿ ನೋಡೋಣ!



ಮಾನ್ಯರೆ,

ಮೈಸೂರು ವಿಜಯನಗರ ಎರಡನೇ ಹಂತಕ್ಕೆ ಹೊಂದಿಕೊಂಡಿರುವ ಮಹಾಜನ ಬಡಾವಣೆಯಲ್ಲಿನ ಅಂಬರೀಶ್ ರಸ್ತೆಗೆ ಹೊಂದಿ ಕೊಂಡಂತಿರುವ ಕಾರ್ನರ್‌ನಲ್ಲಿರುವ ತಾತ್ಕಾಲಿಕ ದೊಡ್ಡ ಮಳಿಗೆಯೊಂದರಲ್ಲಿ ತಲಸ್ಸೆರಿ ಮೆಸ್ ಇದೆ.

ಇಲ್ಲಿ ದಿನಕ್ಕೆ ಮೂರು ಬಾರಿ ಓವರ್‌ಹೆಡ್ ಟ್ಯಾಂಕ್‌ಗೆ ನೀರು ತುಂಬಿಸಲಾಗುತ್ತದೆ. ಈ ಟ್ಯಾಂಕ್‌ಗಳು ತುಂಬಿದ ಮೇಲೆ ಅದರಿಂದ ಸುರಿಯುವ ನೀರನ್ನು ರಸ್ತೆಗೆ ಹರಿಸಲಾಗುತ್ತಿದೆ. ಈ ನೀರು ಮುಖ್ಯ ರಸ್ತೆಯಲ್ಲೂ ಹರಿಯುತ್ತಿದೆ. ಇದರ ಬಗ್ಗೆ ಅಕ್ಕಪಕ್ಕದ ಮನೆಯವರು ಆಕ್ಷೇಪಿಸಿದರೂ, ಆ ಮೆಸ್‌ನವರು ಡೋಂಟ್ ಕೇರ್ ಪಾಲಿಸಿ ಅನುಸರಿಸುತ್ತಾ ಬಂದಿದ್ದಾರೆ ಎಂದು ಅಕ್ಕಪಕ್ಕದ ನಿವಾಸಿಗಳು ದೂರಿದ್ದಾರೆ. ಬೇಸಿಗೆ ಬರುತ್ತಿದೆ. ಕುಡಿಯುವ ನೀರಿಗೆ ಹಾಹಾಕಾರ ಶುರುವಾಗುವುದರಲ್ಲಿದೆ. ಆದರೆ ಈ ರೀತಿ ನೀರು ಪೋಲು ಸರಿಯೇ? ಕೂಡಲೇ ಇವರ ವಿರುದ್ಧ ಕಠಿಣ ಕ್ರಮ ಅನಿವಾರ್ಯ ಅಲ್ಲವೆ? ಮೈಸೂರು ನಗರ ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ ಅಧಿಕಾರಿಗಳಿಗೆ ಪುರಸೊತ್ತಿದ್ದರೆ ಇದರ ವಿರುದ್ಧ ಕ್ರಮ ಕೈಗೊಳ್ಳಲಿ!.

– ದೇವಣ್ಣ, ಮಹದೇಶ್ವರ ಬಡಾವಣೆ, ಮೈಸೂರು.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಪದ್ಮಭೂಷಣ ಶತಾವಧಾನಿ ಡಾ.ಆರ್.ಗಣೇಶ್


ಕನ್ನಡ ನಾಡಿಗೆ ಈ ಬಾರಿ ಎಂಟು ಪದ್ಮ ಪ್ರಶಸ್ತಿಗಳು ದೊರಕಿರುವುದು ಎಲ್ಲಾ ಕನ್ನಡಿಗರಿಗೆ ಹೆಮ್ಮೆಯ ವಿಷಯ. ಅದರಲ್ಲೂ ಪ್ರತಿಭೆಯ ಕಾರಣದಿಂದ ಸಹೃದಯರ ಹೃದಯಗಳಲ್ಲಿ ಅತ್ಯುನ್ನತ ಸ್ಥಾನದಲ್ಲಿರುವ ಶತಾವಧಾನಿ ಡಾ.ಆರ್. ಗಣೇಶರಿಗೆ ಪದ್ಮಭೂಷಣ ಪ್ರಶಸ್ತಿಯನ್ನು ಕೇಂದ್ರ ಸರ್ಕಾರವು ನೀಡಿರುವುದು ಕನ್ನಡ ಸಾಹಿತ್ಯಕ್ಕೆ, ಅವಧಾನ ಕಲೆಗೆ, ಸಂಸ್ಕೃತಿ ಪ್ರೇಮಕ್ಕೆ, ಜ್ಞಾನ ಪ್ರಸಾರಕ್ಕೆ ಸಂದಿರುವ ದೊಡ್ಡ ಗೌರವವಾಗಿದೆ.

ವಾಸ್ತವ ಸ್ಥಿತಿಯನ್ನೇ ಅವಲಂಬಿಸಿ ಹೇಳಬೇಕೆಂದರೆ, ಕೇವಲ ಕರ್ನಾಟಕದಲ್ಲಲ್ಲ, ಭಾರತದಲ್ಲೇ ಡಾ. ಆರ್.ಗಣೇಶರಿಗೆ ಸಮಾನರಾದ ನಾನಾ ಭಾಷಾಭಿಜ್ಞ ವಿದ್ವಾಂಸರಿಲ್ಲ. ಹದಿನಾರು ಭಾಷೆಗಳಲ್ಲಿ ಜ್ಞಾನವನ್ನು ಪಡೆದವರು, ಹಲವು ಭಾಷೆಗಳಲ್ಲಿ ಅವಧಾನವನ್ನು ಮಾಡಬಲ್ಲವರು ಬೇರೆ ಯಾರಿದ್ದಾರೆ?

ಸಹಸ್ರ ಶ್ರೋತೃಗಳಿದ್ದರೂ ಅವರಲ್ಲಿ ಪ್ರತಿಯೊಬ್ಬರನ್ನೂ ವಿಷಯ ಪ್ರತಿಪಾದನೆಯಿಂದ, ವಾಗ್ ವೈಖರಿಯಿಂದ ಮೆಚ್ಚಿಸಬಲ್ಲ ವಾಗ್ಮಿ ಬೇರೆ ಯಾರಿದ್ದಾರೆಂಬುದು ನನಗೆ ತಿಳಿಯದು. ಪಂಪನಿಂದ ಕುವೆಂಪುವರೆಗೆ, ಅನಕೃಯಿಂದ ಎಸ್.ಎಲ್. ಭೈರಪ್ಪನವರವರೆಗೆ ಕನ್ನಡದ ಯಾವ ಸಾಹಿತಿಯ ಬಗೆಗೂ ಅಧಿಕೃತವಾದ ನಿರೂಪಣೆ ಮಾಡಬಲ್ಲ ಡಾ. ಗಣೇಶ್ ಹಲವು ಅರ್ಥಗಳಲ್ಲಿ ಅದ್ವಿತೀಯರು. ಕುವೆಂಪು ಅವರ ರಾಮಾಯಣ ದರ್ಶನದ ಬಗೆಗೆ ಅವರು ಮಾಡಿರುವ ಭಾಷಣಗಳು ಅವರ ಸಹೃದಯತೆಗೂ ವಿಮರ್ಶನ ವೈಚಕ್ಷಣ್ಯಕ್ಕೂ ಸಾಕ್ಷಿ. ಭೈರಪ್ಪನವರ ಸಮಸ್ತ ಕಾದಂಬರಿಗಳನ್ನೂ ಕರತಲಾಮಲಕ ಮಾಡಿಕೊಂಡಿರುವ ಡಾ.ಗಣೇಶ್ ಆ ವಿಷಯದಲ್ಲಿ ಮಾತನಾಡುವಾಗ ಕೇಳಿ ಬೆರಗಾದವರೇ ಇಲ್ಲ.

ಇನ್ನು ಕವಿತಾಶಕ್ತಿಯ ಬಗೆಗೆ ಹೇಳುವುದಾದರೆ ಅವರು ಆಶುಕವಿ. ಅಷ್ಟಾವಧಾನದಲ್ಲಿ ಅವರು ಕನ್ನಡದಲ್ಲಿ ಮಾತ್ರವಲ್ಲ, ಸಂಸ್ಕೃತದಲ್ಲೂ ಯಾವ ಛಂದಸ್ಸಿನಲ್ಲಿ ಬೇಕಾದರೂ ಪುಸ್ತಕದ ಅಥವಾ ಲೇಖನಿಯ ನೆರವಿಲ್ಲದೆ ಪದ್ಯಗಳನ್ನು ರಚಿಸಬಲ್ಲರು ಎಂಬುದನ್ನು ನಾನು ಕಂಡಿದ್ದೇನೆ. ಇತರ ಭಾಷೆಗಳಲ್ಲಿ ಅವರು ಮಾಡುವ ಅವಧಾನವನ್ನು ಕೇಳುವ ಅವಕಾಶ ನನಗೆ ದೊರಕಿಲ್ಲ. ಯಾವ ಆಲಂಕಾರಿಕನಾಗಲೀ ವೈಯಾಕರಣನಾಗಲೀ ಅವರ ಪದ್ಯಗಳಲ್ಲಿ ದೋಷಗಳನ್ನು ಹುಡುಕಲಾರ.

ಕನ್ನಡದಲ್ಲಿ ಅವಧಾನ ಕಲೆಯ ಉಜ್ಜೀವನವಾದುದು, ಇಂದು ಅನೇಕ ಯುವಕರು ಅವಧಾನಿಗಳಾಗಿ ಕನ್ನಡಾಂಬೆಯ ಕೀರ್ತಿಯನ್ನು ಹರಡುತ್ತಿರುವುದು ಡಾ.ಗಣೇಶ್ ಅವರ ಪ್ರಯತ್ನ–ಪ್ರಭಾವಗಳಿಂದಲೇ ಅಷ್ಟಾವಧಾನದ ಮಿತಿಯನ್ನು ದಾಟಿ ಶತಾವಧಾನವನ್ನು ಮಾಡಿರುವ ಅವರ ಪ್ರತಿಭೆಗೆ ಸಾಟಿಯೇ ಇಲ್ಲ.



ಶತಾವಧಾನಿ ಡಾ.ಆರ್.ಗಣೇಶ್

ಸ್ವಯಂ ಡಾ.ಗಣೇಶ್ ರಚಿಸಿರುವ ಕನ್ನಡ ಸಾಹಿತ್ಯವೂ ವಿಶಾಲ ಮತ್ತು ವೈವಿಧ್ಯಮಯ. ಅಷ್ಟೊಂದು ಪುಸ್ತಕಗಳನ್ನು ಓದುವುದೇ ನಮಗೆ ಅಶಕ್ಯವಾಗಿರುವಾಗ ಅವನ್ನೆಲ್ಲ ಬರೆಯಲು ಅವರು ಸಮಯವನ್ನು ಎಲ್ಲಿಂದ ತರುತ್ತಾರೆ ಎಂಬ ಪ್ರಶ್ನೆ ನಮ್ಮನ್ನು ಕಾಡುತ್ತದೆ. ಏನನ್ನು ಬರೆದರೂ ಸಾಮಾನ್ಯರು ಮಾತ್ರವಲ್ಲ, ವಿದ್ವಾಂಸರೂ ಒಪ್ಪುವಂತೆ ಅವರು ಬರೆಯುತ್ತಾರೆ. ಅಧ್ಯಯನವಿಲ್ಲದೆ, ಆಧಾರವಿಲ್ಲದೆ ಅವರು ಒಂದು ಸಾಲನ್ನೂ ಬರೆದಿಲ್ಲ. ಅವರು ರಚಿಸಿರುವ ಮಣ್ಣಿನ ಕನಸು ಎಂಬ ಕಾದಂಬರಿಗೆ ಸಂಸ್ಕೃತ ಸಾಹಿತ್ಯ ಸಾಗರದ ಎದುರಿಗೆ ಕಂಡವರಂತೆ. ನಮಗೆ ಪರಿಚಯಿಸುತ್ತಾರೆ. ಅವರ ಗ್ರಂಥಗಳನ್ನು ನಾವು ಹಲವು ಬಾರಿ ಓದಿದ್ದರೂ ನಮ್ಮ ಕಣ್ಣಿಗೆ ಗೋಚರಿಸದ ರಹಸ್ಯಾರ್ಥಗಳು ಗಣೇಶರ ಪ್ರತಿಭಾ ಚಕ್ಷುಸ್ಸಿಗೆ ಗೋಚರಿಸುವುದೊಂದು ಸೋಜಿಗ.

ಡಾ.ಗಣೇಶರು ತಾವು ಕಾವ್ಯವನ್ನು ರಚಿಸುವಷ್ಟರಿಂದಲೇ ತೃಪ್ತರಾಗುವುದಿಲ್ಲ. ಪದ್ಯ ರಚನೆಯ ಗುಟ್ಟೇನು. ಛಂದಸ್ಸುಗಳನ್ನು ವಶಂವದವಾಗಿ ಮಾಡಿಕೊಳ್ಳುವುದು. ಹೀಗೆ ಪದ್ಯದಲ್ಲಿ ಕಾವ್ಯಾಂಶವನ್ನು ತರಲು ಏನು ಮಾಡಬೇಕು. ಕಾವ್ಯದಲ್ಲಿ ನೂತನತ್ವವನ್ನು ಹೇಗೆ ತಂದುಕೊಳ್ಳಬೇಕು ಎಂಬುದನ್ನು ಜಿಜ್ಞಾಸುಗಳಿಗೆ ತಿಳಿಸಿಕೊಡುತ್ತಾರೆ. ಛಂದೋಬದ್ಧ ಕವಿತೆಯನ್ನು ರಚಿಸಬಲ್ಲ ಹಲವರು ಕವಿಗಳು ಅವರಿಂದ ತರಬೇತಿ ಪಡೆದಿದ್ದಾರೆ. ಅದಕ್ಕಾಗಿ ತರಗತಿಗಳನ್ನು ಅವರು ನಡೆಸಿದ್ದಾರೆ.

'ವಿದ್ವಾಂಸೋ ವಸುಧಾತಲೇ ಪರಮವಚಃಶ್ಲಾಘಾಸು ವಾಚಯಮಾಃ'

(ವಿದ್ವಾಂಸರು ಬೇರೆಯವರ ಮಾತಿನ ಗುಣವನ್ನಾಡಬೇಕಾದರೆ ಮೌನವನ್ನಾಶ್ರಯಿಸುತ್ತಾರೆ) ಎಂಬ ಮಾತಿದೆ. ಇದಕ್ಕೆ ಅಪವಾದ ಡಾ.ಆರ್.ಗಣೇಶ್. ಪರಗುಣ ಪರಮಾಣುಗಳನ್ನೂ ದುರ್ಬೀನು ಹಾಕಿ ಕಂಡು ಹಿಡಿದು ಸಭೆಯಲ್ಲಿ ಹೇಳುವ ವಿಶಾಲ ಹೃದಯ ಅವರದು. ನಿಜವಾಗಿ ವಿದ್ವಾಂಸರಲ್ಲಿ ವಿದ್ಯೆ ಇದ್ದರಂತೂ ಅದನ್ನು ಮನಃಪೂರ್ವಕವಾಗಿ ಹೊಗಳುತ್ತಾರೆ. ಪ್ರಾತಃಸ್ಮರಣೀಯರಾದ ಪ್ರೊ. ಎಸ್.ಕೆ.ರಾಮಚಂದ್ರ ರಾಯರ ಬಗೆಗೆ ಡಾ.ಗಣೇಶ್ ಬರೆದು ಪ್ರಕಟಿಸಿರುವ ಸರ್ವತಂತ್ರ ಸ್ವತಂತ್ರ ಎಂಬ ಪುಸ್ತಕ ಇದಕ್ಕೆ ಸಾಕ್ಷಿ.

ಸಂಸ್ಕೃತ ಸಾಹಿತ್ಯಕ್ಕೆ ಡಾ.ಗಣೇಶ್ ಕೊಟ್ಟಿರುವ ಕೊಡುಗೆ ಅಪಾರ. ಆಶು ರೀತಿಯಲ್ಲಿ ರಚಿಸಿರುವ ಸಹಸ್ರಾರು ಪದ್ಯಗಳಲ್ಲದೆ ಸ್ವತಂತ್ರ ಕೃತಿಗಳನ್ನೂ ರಚಿಸಿದ್ದಾರೆ. ದೇವುಡು ಅವರ ಮಹಾ ಬ್ರಾಹ್ಮಣ ಎಂಬ ಕಾದಂಬರಿಯನ್ನು ಸಂಸ್ಕೃತಕ್ಕೆ ಅನುವಾದಿಸಿ ಕೇಂದ್ರ ಸಾಹಿತ್ಯ ಅಕಾಡೆಮಿಯ ಬಹುಮಾನಕ್ಕೂ ಭಾಜನರಾಗಿದ್ದಾರೆ. ಹದಿನಾಲ್ಕನೆಯ ಶತಮಾನದಲ್ಲಿದ್ದ ನಾರಾಯಣ ಚಾರ್ಯರ ಅಲಂಕಾರ ಸುಧಾನಿಧಿ ಎಂಬ ಗ್ರಂಥವನ್ನು ನಾಲ್ಕು ಹಸ್ತಪ್ರತಿಗಳನ್ನು ಪರೀಕ್ಷಿಸಿ ಸಂಪಾದಿಸಿ ಪ್ರಕಟಿಸಿದ್ದಾರೆ.

ಕಲಾವಿಭಾಗದಲ್ಲಿ ಡಾ. ಗಣೇಶ್ ಅವರ ನೈಪುಣ್ಯ ಪ್ರಶಂಸನೀಯ. ವಿಖ್ಯಾತ ಸಂಗೀತ ವಿದ್ವಾಂಸರು ಅಥವಾ ವಿದುಷಿಯರು ಹಾಡಿದಾಗ ಆ ಹಾಡುಗಳ ರಾಗಗಳು ಯಾವುವು, ಅವುಗಳ ಸ್ವರವಿನ್ಯಾಸವೇನು, ಯಾವ ರಸಗಳಿಗೆ ಅಥವಾ ಭಾವಗಳಿಗೆ ಅವು ಹೊಂದಿಕೊಳ್ಳುತ್ತವೆ ಎಂಬುದರ ವಿವರಣೆಯನ್ನು ಅವರು ಕೊಡುತ್ತಿದ್ದರೆ ಶ್ರೋತೃಗಳಿಗೆ ರಸದೌತಣ.

ನೃತ್ಯದ ಬಗೆಗೂ ಅವರ ಜ್ಞಾನ ಅಗಾಧ. ವಿಶ್ವವಿಖ್ಯಾತ ಕಲಾವಿದೆ ಡಾ. ಪದ್ಮಾಸುಬ್ರಹ್ಮಣ್ಯಂ ಅವರೊಡನೆ ಚರ್ಚಿಸುವ ಅವರ ವೈದುಷ್ಯ ಅನ್ಯತ್ರ ದುರ್ಲಭ.

ಇನ್ನು ಮನುಷ್ಯರಾಗಿ ಅವರು ಎಲ್ಲರಿಗೂ ಆದರ್ಶ. ಭರ್ತೃಹರಿ ನಿತಿಶತಕದಲ್ಲಿ ಹೇಳುವ ಪದ್ಯ –

ಪ್ರದಾನಂ ಪ್ರಚ್ಛನ್ನಂ ಗೃಹಮುಪಗತೇ ಸಂಭ್ರಮವಿಧಿಃ
ಪ್ರಿಯಂ ಕೃತ್ವಾ ಮೌನಂ ಸದಸಿಕಥನಂ ಚಾಪ್ಯುಪಕೃತೇಃ।
ಅನುತ್ಸೇಕೋ ಲಕ್ಷ್ಮ್ಯಾಮನಭಿಭವಸಾರಾಃ ಪರಕಥಾಃ
ಸತಾಂ ಕೇನೋದ್ದಿಷ್ಟಂ ವಿಷಮಮಸಿಧಾರಾವ್ರತಮಿದಮ್ ॥

ಯಾರಿಗಾದರೂ ದಾನ ಮಾಡಿದರೆ ಗುಟ್ಟಾಗಿ ಮಾಡುವುದು, ಮನೆಗೆ ಅತಿಥಿಗಳು ಬಂದರೆ ಸಂಭ್ರಮಿಸುವುದು, ಉಪಕಾರ ಮಾಡಿ ಅದರ ಬಗೆಗೆ ಹೇಳಿಕೊಳ್ಳದೆ ಮೌನವಹಿಸುವುದು, ಬೇರೆಯವರು ಮಾಡಿದ ಉಪಕಾರವನ್ನು ಸಭೆಯಲ್ಲಿ ಘೋಷಿಸುವುದು, ಐಶ್ವರ್ಯ, ಗೌರವ, ಮನ್ನಣೆ ಸಿಕ್ಕಾಗ ಗರ್ವ ಪಡೆಯದಿರುವುದು, ಬೇರೆಯವರ ಬಗೆಗೆ ಮಾತನಾಡುವಾಗ ಅವರನ್ನು ಹಳಿಯದಿರುವುದು ಸತ್ಪುರುಷರು ಅನುಸರಿಸುವ ಅಸಿಧಾರಾವ್ರತ. ಇದನ್ನು ಅವರಿಗೆ ಉಪದೇಶಿಸಿದ್ದು ಯಾರೋ–ಎಂಬುದು ಈ ಪದ್ಯದ ಭಾವಾರ್ಥ ಈ ಅಸಿಧಾರಾವ್ರತವನ್ನು ಆಚರಿಸುತ್ತಿರುವ ವ್ಯಕ್ತಿ ಡಾ.ಆರ್.ಗಣೇಶ್. ಅವರು ಪದ್ಮಭೂಷಣರು ಮಾತ್ರವಲ್ಲ ರಾಷ್ಟ್ರಭೂಷಣರು ಕೇಂದ್ರ ಸರ್ಕಾರವು ಯೋಗ್ಯರನ್ನು ಗುರುತಿಸಿ ಪ್ರಶಸ್ತಿಯನ್ನು ಕೊಟ್ಟಿರುವುದಕ್ಕೆ ಅದಕ್ಕೂ ಅಭಿನಂದನೆಗಳು. ಡಾ.ಗಣೇಶರ ಸಾಹಿತ್ಯ ಸೇವೆ,ಕಲಾಸೇವೆ, ಜನಸೇವೆ ಇತೋಪ್ಯತಿಶಯವಾಗಿ ಬೆಳೆಯಲಿ ಎಂದು ಹಾರೈಸೋಣ.

ಮಕ್ಕಳಿಗೆ ಗುಣಮಟ್ಟದ ವೈಜ್ಞಾನಿಕ ಶಿಕ್ಷಣ ನೀಡಿ

ಶಿಕ್ಷಕರಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಸಲಹೆ

ಮೈಸೂರು, ಜ.27(ಜಿಎ)– ಇಂದಿನ ಮಕ್ಕಳೇ ಮುಂದಿನ ಪ್ರಜೆಗಳು. ಹಾಗಾಗಿ ಮಕ್ಕಳಿಗೆ ಉತ್ತಮ, ಗುಣಮಟ್ಟದ ಶಿಕ್ಷಣ ನೀಡಿ ಅವರು ಉನ್ನತ ಸ್ಥಾನಕ್ಕೇರುವಂತೆ ಶಿಕ್ಷಕರು ಶ್ರಮಿಸಬೇಕೆಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಕರೆ ನೀಡಿದರು.

ಮೈಸೂರಿನ ಹೂಟಗಳ್ಳಿಯ ಕೆಹೆಚ್‌ಬಿ ಕಾಲೋನಿಯಲ್ಲಿರುವ ಸುದರ್ಶನ್ ವಿದ್ಯಾ ಸಂಸ್ಥೆಯ ವಾರ್ಷಿಕೋತ್ಸವ ಹಾಗೂ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಈ ಸಂಸ್ಥೆಯಲ್ಲಿ ಮಕ್ಕಳಿಗೆ ಉಚಿತ ಶಿಕ್ಷಣ, ಸಮವಸ್ತ್ರ ಹಾಗೂ ಶೈಕ್ಷಣಿಕ ಸಾಮಾಗ್ರಿಗಳನ್ನು ನೀಡಿ ಯಾವುದೇ ಜಾತಿ–ಧರ್ಮ, ಭೇದ, ತಾರತಮ್ಯವಿಲ್ಲದೇ ಎಲ್ಲಾ ವರ್ಗದ ಮಕ್ಕಳನ್ನು ಸಮಾನವಾಗಿ ಕಾಣುವ ಮೂಲಕ ಉನ್ನತ ಶಿಕ್ಷಣ ನೀಡುತ್ತಿರುವುದು ಮೆಚ್ಚುವಂತದ್ದು. ವಿಜಯನಗರದ ಶ್ರೀ ಯೋಗಾನರಸಿಂಹಸ್ವಾಮಿ ದೇವಾಲಯದ ಆಡಳಿತಾಧಿಕಾರಿಗಳೂ ಹಾಗೂ ಸುದರ್ಶನ್ ವಿದ್ಯಾಸಂಸ್ಥೆಯ ಮುಖ್ಯಸ್ಥರೂ ಆಗಿರುವ ಡಾ.ಎನ್.ಶ್ರೀನಿವಾಸನ್ ಅವರ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದರು.



ಮೈಸೂರಿನ ಹೂಟಗಳ್ಳಿಯ ಕೆಹೆಚ್‌ಬಿ ಕಾಲೋನಿಯಲ್ಲಿರುವ ಸುದರ್ಶನ್ ವಿದ್ಯಾ ಸಂಸ್ಥೆಯ ವಾರ್ಷಿಕೋತ್ಸವ, ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಭಾಗವಹಿಸಿದ್ದರು.

ಬಾಬಾ ಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ಅವರ ಆಶಯದಂತೆ, ಸಂವಿಧಾನದ ಒಲವಿನಂತೆ ಶಿಕ್ಷಣದಲ್ಲಿ ವೈಚಾರಿಕತೆ, ವೈಜ್ಞಾನಿಕತೆ ಬಿತ್ತುವ ಮುಖೇನ ಮೂಢನಂಬಿಕೆಯಿಂದ ದೂರ ವಿರುವ ಬಗ್ಗೆ ಅರಿವು ಮೂಡಿಸಬೇಕು. ಶಿಕ್ಷಣ ಮಾತ್ರವೇ ಕತ್ತಲಿನಿಂದ ಬೆಳಕಿನೆಡೆಗೆ ಇರುವ ಮಾರ್ಗ ಎಂದು ತಿಳಿಸಿದರು.

ನಾನು ಇಂದೂ ಭಾರತೀಯ, ಎಂದೆಂದಿಗೂ ಭಾರತೀಯ ಎಂಬ ಸಂದೇಶವನ್ನು ನಮ್ಮ ಭಾರತದ ಸಂವಿಧಾನದಲ್ಲಿ ಅಂಬೇಡ್ಕರ್ ಬರೆದಿದ್ದಾರೆ. ಅಂತೆಯೇ ಶಿಕ್ಷಕರು ಮಕ್ಕಳಿಗೆ ನಾವು ಭಾರತೀಯರು, ನಾವೆಲ್ಲಾ ಒಂದೇ ಎಂಬ ಕುರಿತು ಬೋಧಿಸಿ ಅವರಿಗೆ ಗುಣಾತ್ಮಕ ಶಿಕ್ಷಣ ನೀಡಬೇಕು. ಶಾಲೆಗಳಲ್ಲಿ ಸಂವಿಧಾನ ಪೀಠಿಕೆ ಓದಿಸಬೇಕೆಂಬ ನಿಯಮವನ್ನು ಸರ್ಕಾರ ಈಗಾಗಲೇ ಜಾರಿಗೊಳಿಸಿದೆ. ಈ ಸಂಸ್ಥೆಯಲ್ಲೂ ಅದು ನಿರಂತರವಾಗಿ ನಡೆಯಲಿ. ನಾಗರಿಕತೆ, ಸನ್ನಡತೆಯನ್ನು ಮೈಗೂಡಿಸಿಕೊಂಡು ಶ್ರೀನಿವಾಸನ್ ಅವರು ಇಂತಹ ಸಂಸ್ಥೆಯನ್ನು ನಡೆಸುತ್ತಿದ್ದು, ಅವರ ಈ ಜವಾಬ್ದಾರಿಯುತ, ಉನ್ನತ ಕಾರ್ಯ ಹೀಗೆ ಮುಂದುವರೆಯಲಿ. ಅದಕ್ಕೆ ಅಗತ್ಯವಿರುವ ಎಲ್ಲಾ ಸಹಕಾರವನ್ನು ನೀಡುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಮಕ್ಕಳು ಪ್ರದರ್ಶಿಸಿದ ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಸಂಗೊಳ್ಳಿ ರಾಯಣ್ಣ ನಾಟಕದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸುದರ್ಶನ್ ವಿದ್ಯಾ ಸಂಸ್ಥೆಯ ಮುಖ್ಯಸ್ಥರಾದ ಡಾ.ಎನ್. ಶ್ರೀನಿವಾಸನ್, ಮುಖ್ಯ ಶಿಕ್ಷಕ ಸುರೇಶ್, ಶಿಕ್ಷಣ ಸಂಘದ ನೇಹಾ ಪ್ರಕಾಶ್, ಮುಖ್ಯೋಪಾಧ್ಯಾಯಿನಿ ವಿನೂತ ಸೇರಿದಂತೆ ಶಿಕ್ಷಕರು, ಪೋಷಕರು, ಶಾಲಾ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಗೆ ನೋಂದಣಿ, ನವೀಕರಣಕ್ಕೆ ಮಾ.31 ಕಡೇ ದಿನ

ಮೈಸೂರು,ಜ.27–ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಗೆ ನೋಂದಣಿ ಮತ್ತು ನವೀಕರಣಕ್ಕೆ ಮಾ.31ರವರೆಗೆ ಅವಕಾಶವಿದೆ ಎಂದು ದಿ ಮೈಸೂರು ಮರ್ಚೆಂಟ್ಸ್ ಕೋ–ಆಪರೇಟಿವ್ ಬ್ಯಾಂಕ್ ಪ್ರಕಟಣೆ ತಿಳಿಸಿದೆ. ಹೊಸದಾಗಿ ನೋಂದಾಯಿಸಿಕೊಳ್ಳುವವರಿಗೆ 4 ಸದಸ್ಯರವರೆಗೂ 1000 ರೂ. ಇದು ಹೆಚ್ಚುವರಿಯಾದಲ್ಲಿ ತಲಾ 200 ರೂ.ಗಳಾಗುತ್ತದೆ. ಪ.ಜಾತಿ/ಪ.ಪಂಗಡ ಗುಂಪಿಗೆ ಸೇರಿದ ಸದಸ್ಯರಿಗೆ ನೋಂದಣಿ ಉಚಿತವಾಗಿದ್ದು, ಇದಕ್ಕೆ ಸಂಬಂಧಪಟ್ಟಂತೆ ಪ್ರಮಾಣ ಪತ್ರವನ್ನು ನೋಂದಣಿ ವೇಳೆ ಸಲ್ಲಿಸಬೇಕು. ನೋಂದಾಯಿಸಲು ಬಯಸುವವರು ನೋಂದಣಿಗೊಳಿಸಬೇಕಾದವರ ಆಧಾರ್ ಪ್ರತಿ ಮತ್ತು 2 ಭಾವಚಿತ್ರವನ್ನು ಒದಗಿಸಬೇಕಾಗಿರುತ್ತದೆ. ಮಾಹಿತಿಗಾಗಿ 0821–2522759, 2421077 ಸಂಪರ್ಕಿಸಿ, ಸದಸ್ಯರು ಈ ಯೋಜನೆ ಸದುಪಯೋಗ ಪಡೆದುಕೊಳ್ಳಬೇಕೆಂದು ಬ್ಯಾಂಕಿನ ಪ್ರಕಟಣೆ ಕೋರಿದೆ.

ವಾರದಲ್ಲಿ ಐದು ದಿನವಷ್ಟೇ ಕೆಲಸ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಬ್ಯಾಂಕ್ ನೌಕರರ ಪ್ರತಿಭಟನೆ

ಮೈಸೂರು,ಜ.27(ಎಂಕೆ)– ಬ್ಯಾಂಕಿಂಗ್ ಕ್ಷೇತ್ರದಲ್ಲಿ ವಾರಕ್ಕೆ ಐದು ದಿನಗಳ ಕೆಲಸದ ವ್ಯವಸ್ಥೆ ಜಾರಿಗೆ ತರುವುದು ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ 'ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯೂನಿಯನ್ಸ್(ಯುಎಫ್‌ಬಿಯು)' ವತಿಯಿಂದ ಮೈಸೂರಿನ ಸರಸ್ವತಿಪುರಂನಲ್ಲಿರುವ ಎಸ್‌ಬಿಐ ಪ್ರಾದೇಶಿಕ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಬ್ಯಾಂಕ್ ಅಧಿಕಾರಿಗಳು–ಸಿಬ್ಬಂದಿ ಪ್ರಮುಖ 9 ಸಂಘಟನೆಗಳ ಒಕ್ಕೂಟವಾದ 'ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯೂನಿಯನ್ಸ್', ದೇಶವ್ಯಾಪ್ತಿ ಕರೆ ನೀಡಿರುವ ಮುಷ್ಕರಕ್ಕೆ ಬೆಂಬಲ ಸೂಚಿಸಿ ಜಮಾವಣೆಗೊಂಡ ಸಾವಿರಾರು ಮಂದಿ ಬ್ಯಾಂಕ್ ಉದ್ಯೋಗಿಗಳು, ಬ್ಯಾಂಕಿಂಗ್ ಕ್ಷೇತ್ರದಲ್ಲಿ ವಾರಕ್ಕೆ 5 ದಿನಗಳ ಕೆಲಸದ ವ್ಯವಸ್ಥೆ ಜಾರಿಗೆ ತರಲು ಸರ್ಕಾರ ಅನುಮೋದನೆ ನೀಡಬೇಕು ಮತ್ತು ಪ್ರಸ್ತುತ ಬ್ಯಾಂಕುಗಳಿಗೆ ರಜೆ ಆಗಿರುವ 2ನೇ ಮತ್ತು 4ನೇ ಶನಿವಾರಗಳ ಹೊರತಾಗಿ ಉಳಿದ ಎಲ್ಲಾ ಶನಿವಾರಗಳಲ್ಲಿಯೂ ರಜೆ ಘೋಷಿಸಬೇಕು ಎಂದು ಆಗ್ರಹಿಸಿದರು.



ಮೈಸೂರಿನ ಸರಸ್ವತಿಪುರಂನಲ್ಲಿರುವ ಎಸ್‌ಬಿಐ ಪ್ರಾದೇಶಿಕ ಕಚೇರಿ ಎದುರು 'ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯೂನಿಯನ್ಸ್ ವತಿಯಿಂದ ಮುಷ್ಕರ ನಡೆಸಲಾಯಿತು.

ಬ್ಯಾಂಕಿಂಗ್ ಕ್ಷೇತ್ರದಲ್ಲಿ ವಾರಕ್ಕೆ ಐದು ದಿನ ಕೆಲಸದ ವ್ಯವಸ್ಥೆ ಜಾರಿಗೆ ತರಬೇಕೆಂದು ಬೇಡಿಕೆ ಸಲ್ಲಿಸುತ್ತಲೇ ಇದ್ದೇವೆ. ಆದರೆ, ಈವರೆಗೂ ಜಾರಿಯಾಗಿಲ್ಲ. ಭಾರತೀಯ ಬ್ಯಾಂಕ್‌ಗಳ ಸಂಘಟನೆ(ಐಬಿಎ) ಮತ್ತು 'ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯೂನಿಯನ್ಸ್ (ಯುಎಫ್‌ಬಿಯು) ನಡುವೆ 2015ರಲ್ಲಿ ಸಹಿ ಮಾಡಲಾದ 10ನೇ ದ್ವಿಪಕ್ಷೀಯ ಒಪ್ಪಂದದಂತೆ ಪ್ರತಿ ತಿಂಗಳ 2ನೇ ಮತ್ತು 4ನೇ ಶನಿವಾರಗಳನ್ನು ರಜೆ ಎಂದು ಘೋಷಿಸಲಾಗಿದ್ದು, ಉಳಿದ ಎಲ್ಲಾ ಶನಿವಾರಗಳಲ್ಲೂ ರಜೆ ಘೋಷಿಸುವ ಬೇಡಿಕೆಯನ್ನು ಮುಂದಿನ ದಿನಗಳಲ್ಲಿ ಪರಿಗಣಿಸಲಾಗುವುದು ಎಂದು ಭರವಸೆ ನೀಡಲಾಗಿತ್ತು. ಆದರೆ, ಈಡೇರಿಸಿಲ್ಲ ಎಂದು ಕಿಡಿ ಕಾರಿದರು.

2023ರಲ್ಲಿ ನಡೆದ ಚರ್ಚೆಯ ನಂತರ ಸೋಮವಾರದಿಂದ ಶುಕ್ರವಾರದವರೆಗೆ ಪ್ರತಿದಿನದ ಕೆಲಸದ ಸಮಯವನ್ನು 40 ನಿಮಿಷ ಹೆಚ್ಚಿಸಿ, ಉಳಿದ ಎಲ್ಲಾ ಶನಿವಾರ ರಜೆ ಘೋಷಿಸುವ ಒಪ್ಪಂದವಾಯಿತು. ಆದರೆ, ದುಃಖಕರ ಸಂಗತಿ ಏನೆಂದರೆ ಕಳೆದ ಎರಡು ವರ್ಷಗಳಿಂದ ಸರ್ಕಾರದ ಅನುಮೋದನೆ ಬಾಕಿಯಿದೆ. ಈಗಾಗಲೇ ಆರ್‌ಬಿಐ, ಎಲ್‌ಐಸಿ, ಜಿಐಸಿಗಳಲ್ಲಿ ವಾರಕ್ಕೆ ಐದು ದಿನಗಳ ಕೆಲಸದ ವ್ಯವಸ್ಥೆ ಜಾರಿಗೆ ಬಂದಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಎಲ್ಲಾ ಕಚೇರಿಗಳು ಸೋಮವಾರದಿಂದ ಶುಕ್ರವಾರದವರೆಗೆ ಮಾತ್ರ ಕಾರ್ಯನಿರ್ವಹಿಸುತ್ತವೆ. ಹಾಗಾಗಿ ಬ್ಯಾಂಕುಗಳಲ್ಲೂ ಉಳಿದ ದಿನಗಳ ಕೆಲಸದ ಅವಧಿ ಹೆಚ್ಚಿಸಿ, ಎಲ್ಲಾ ಶನಿವಾರ ರಜೆ ಘೋಷಿಸಿದರೆ ಗ್ರಾಹಕರಿಗೂ ಯಾವುದೇ ತೊಂದರೆಯಾಗುವುದಿಲ್ಲ. ಹೀಗಾಗಿ ಕೂಡಲೇ ಕೇಂದ್ರ ಸರ್ಕಾರ ನಮ್ಮ ಬೇಡಿಕೆ ಈಡೇರಿಸಬೇಕೆಂದು ಒತ್ತಾಯಿಸಿದರು. ಮುಷ್ಕರದಲ್ಲಿ ವಿವಿಧ ಬ್ಯಾಂಕುಗಳ ಸಿಬ್ಬಂದಿ, ಅಧಿಕಾರಿಗಳು, ನೌಕರರು ಭಾಗವಹಿಸಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ

ಸಂಗೊಳ್ಳಿ ರಾಯಣ್ಣ ಸದಾ ಸ್ಮರಣೀಯರು



ಕುರುಬಾರಹಳ್ಳಿ ವೃತ್ತದಲ್ಲಿ ಸಂಗೊಳ್ಳಿರಾಯಣ್ಣರ ಪುಣ್ಯಸ್ಮರಣೆ ಆಚರಿಸಲಾಯಿತು.

ಮೈಸೂರು, ಜ.27–ಬ್ರಿಟಿಷರ ವಿರುದ್ಧ ಹೋರಾಡಿದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅವರ 195ನೇ ವರ್ಷದ ಪುಣ್ಯಸ್ಮರಣೆಯನ್ನು ಕುರುಬಾರಹಳ್ಳಿ ವೃತ್ತದಲ್ಲಿ ಆಚರಿಸಲಾಯಿತು.

ಈ ವೇಳೆ ಪ್ರತಿಮೆಗೆ ಮಾಜಿ ಶಾಸಕರೂ ಆದ ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಜಗತ್ತಿನಲ್ಲಿ ಸೂರ್ಯ–ಚಂದ್ರ ಇರುವವರೆಗೂ ಸಂಗೊಳ್ಳಿ ರಾಯಣ್ಣ ಹೆಸರು ಅಜರಾಮರ ಅವರು ಕಿತ್ತೂರು ಚೆನ್ನಮ್ಮಳ ಬಲಗೈ ಬಂಟನಾಗಿ ಬ್ರಿಟಿಷ್ ಈಸ್ಟ್ ಇಂಡಿಯಾ ಕಂಪನಿಯ ವಿರುದ್ಧ ಹೋರಾಡಿದ ಧೀರ ಸ್ವಾತಂತ್ರ್ಯ ಹೋರಾಟಗಾರ. ಬ್ರಿಟಿಷರ ವಿರುದ್ಧ ಗೆರಿಲ್ಲಾ ಯುದ್ಧ ತಂತ್ರ ಬಳಸಿ ಹೋರಾಡಿ, ಅವರಿಗೆ ಸಿಂಹ ಸ್ವಪ್ನವಾಗಿದ್ದರು. ಬಲವಂತದ ತೆರಿಗೆ ವಸೂಲಿಗೆ ವಿರೋಧ ಮತ್ತು ಸೈನಿಕರ ತರಬೇತಿ ಮೂಲಕ ಜನಪ್ರಿಯರಾಗಿದ್ದರು. 1831ರ ಜನವರಿ 26ರಂದು ನಂದಗಡದಲ್ಲಿ ಬ್ರಿಟಿಷರಿಂದ ಗಲ್ಲಿಗೇರಿಸಲ್ಪಟ್ಟರು. ಕಿತ್ತೂರು ಸಂಸ್ಥಾನದ ಸೇನಾ ಮುಖ್ಯಸ್ಥನಾಗಿ ಬ್ರಿಟಿಷರ ವಿರುದ್ಧದ 1824ರ ಮೊದಲ ಕಾಳಗದಲ್ಲಿ ಪರಾಕ್ರಮ ಮೆರೆದರು.

ಗೆರಿಲ್ಲಾ ಯುದ್ಧ ತಂತ್ರದಲ್ಲಿ ಸಣ್ಣ ಸೈನ್ಯದೊಂದಿಗೆ ಬ್ರಿಟಿಷರ ಗುರಿಯಾಗಿಸಿ ಅನಿರೀಕ್ಷಿತ ದಾಳಿ ನಡೆಸಿ ಬ್ರಿಟಿಷರಿಗೆ ನಡುಕ ಹುಟ್ಟಿಸಿದ್ದ ಅಪ್ರತಿಮ ನಾಡಪ್ರೇಮಿ ದೇಶಪ್ರೇಮಿ ರಾಯಣ್ಣ. ಬ್ರಿಟಿಷರು ಮತ್ತು ಅವರ ಬೆಂಬಲಿತ ಭೂಮಾಲೀಕರು, ರೈತರ ಮೇಲೆ ಹೇರಿದ್ದ ಅತಿಯಾದ ಕರಭಾರ ಮತ್ತು ದಬ್ಬಾಳಿಕೆ ವಿರೋಧಿಸಿ, ಲೂಟಿ ಮಾಡಿದ ಸಂಪತ್ತನ್ನು ಬಡವರಿಗೆ ಹಂಚುತ್ತಿದ್ದರು.

ಬ್ರಿಟಿಷರ ವಿರುದ್ಧ ಹೋರಾಡಲು ಸ್ಥಳೀಯ ರೈತರು ಮತ್ತು ಜನರನ್ನು ಸಂಘಟಿಸಿ ಬಂಡಾಯಕ್ಕೆ ಪ್ರೇರೇಪಿಸಿದರು. ಅವರ ಕ್ರಾಂತಿಕಾರಿ ಹೋರಾಟದ ಕಿಚ್ಚು ಸದಾ ಸ್ಮರಣೀಯ ಹಾಗೂ ನಮಗೆಲ್ಲ ಆದರ್ಶ ಎಂದರು. ಈ ವೇಳೆ ಎಸ್‌ಟಿ ಮೋರ್ಚಾ ಅಧ್ಯಕ್ಷ ಪಡುವಾರಹಳ್ಳಿ ಎಂ.ರಾಮಕೃಷ್ಣ, ಮಾಜಿ ನಗರಪಾಲಿಕೆ ಸದಸ್ಯ ಎಂ.ಚಿಕ್ಕವೆಂಕಟು, ಗುರುವಿನಾಯಕ, ಚಾಮರಾಜ ಕ್ಷೇತ್ರದ ಯುವ ಮೋರ್ಚಾ ಅಧ್ಯಕ್ಷ ಅರ್ಜುನ್‌ಕುಮಾರ್, ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ನಿರ್ದೇಶಕ ಕೆ.ಗಿರೀಶ್, ಜೆಸಿಬಿ ರವಿ, ಸುನಿಲ್, ಯೋಗಿ, ಗಿರೀಶ್ ವೇಣು, ಗೋವಿಂದರಾಜು, ಅರುಣ, ಅನಿಲ್ ಮತ್ತಿತರರಿದ್ದರು.

ನಾನಾ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ನಾಳೆ ಸಾರಿಗೆ ನೌಕರರಿಂದ ಬೆಂಗಳೂರು ಚಲೋ

ಮೈಸೂರು,ಜ.27(ಎಸ್‌ಪಿಎನ್)–ಕೆಎಸ್‌ಆರ್‌ಟಿಸಿ ಸಾರಿಗೆ ನೌಕರರ 38 ತಿಂಗಳ



ಹಿಂಬಾಕಿ ವೇತನ, ವೇತನ ಪರಿಷ್ಕರಣೆ ಸೇರಿದಂತೆ ಇತರೆ ಬೇಡಿಕೆಗಳ ಈಡೇರಿಕೆಗಾಗಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಜ.29ರಂದು ಬೆಳಿಗ್ಗೆ 11 ಗಂಟೆಯಿಂದ 4ರವರೆಗೆ 'ಬೆಂಗಳೂರು ಚಲೋ' ಹಮ್ಮಿಕೊಳ್ಳಲಾಗಿದೆ. ಹಿರಿಯ ಕಾರ್ಮಿಕ ಮುಖಂಡ ಎಚ್.ವಿ.ಅನಂತಸುಬ್ಬರಾವ್ ನೇತೃತ್ವದಲ್ಲಿ ನಡೆದಿದ್ದ ಕಾರ್ಮಿಕ ಮುಖಂಡರ ಸಭೆಯ ತೀರ್ಮಾನದಂತೆ ಜ.29ರಂದು 'ಬೆಂಗಳೂರು ಚಲೋ' ಹಮ್ಮಿಕೊಂಡಿದ್ದು, ಈ ಕಾರ್ಯಕ್ರಮ ಯಶಸ್ವಿಗೊಳಿಸಲು ಎಲ್ಲಾ ಹಂತದ ಫೆಡರೇಷನ್ ಮುಖಂಡರು ಹಾಗೂ ಕಾರ್ಯಕರ್ತರೂ ಸೇರಿದಂತೆ ನೌಕರರು ಭಾಗಿಯಾಗುವಂತೆ ಕೆಎಸ್‌ಆರ್‌ಟಿಸಿ ಸ್ಟಾಫ್ ಅಂಡ್ ವರ್ಕರ್ಸ್ ಫೆಡರೇಷನ್‌ನ ಪ್ರಕಟಣೆಯಲ್ಲಿ ತಿಳಿಸಿದೆ.

ದೆಹಲಿಯ ವಿಶ್ವ ಪುಸ್ತಕ ಮೇಳದಲ್ಲಿ ಮೈಸೂರು ವಿದ್ಯಾರ್ಥಿನಿ ಪುಸ್ತಕ ಪ್ರದರ್ಶನ

ಮೈಸೂರು,ಜ.27–ದಿ ಆರ್ಕಿಡ್ಸ್ ಪಬ್ಲಿಕ್ ಸ್ಕೂಲ್‌ನ 5ನೇ ತರಗತಿ ವಿದ್ಯಾರ್ಥಿನಿ ಪ್ರಾಪ್ತಿ ಬೆಳ್ಳಿಯಪ್ಪ ಅವರು ಲಿಟಲ್ ಪ್ರಾಪ್ತಿಯ ಲಿಟಲ್ ಸ್ಟೋರೀಸ್ ಶೀರ್ಷಿಕೆಯಡಿ ಮೂರು ಆವೃತ್ತಿಗಳ ಪುಸ್ತಕ ಸರಣಿಯನ್ನು ರಚಿಸುವ ಮೂಲಕ ಗಮನಾರ್ಹ ಸಾಧನೆ ಮಾಡಿದ್ದಾರೆ.



ಯುವ ಲೇಖಕಿಯ ಈ ಪುಸ್ತಕಗಳು ಜನವರಿ 17, 2026ರಂದು ನವದೆಹಲಿಯ ಪ್ರಗತಿ ಮೈದಾನದಲ್ಲಿ ನಡೆದ ಪ್ರತಿಷ್ಠಿತ ವಿಶ್ವ ಪುಸ್ತಕ ಮೇಳದಲ್ಲಿ ಪ್ರದರ್ಶಿಸಲ್ಪಟ್ಟವು. ಈ ಸಾಧನೆ ಬಾಲ್ಯದಲ್ಲಿಯೇ ಬೆಳೆಯುತ್ತಿರುವ ಸಾಹಿತ್ಯಿಕ ಪ್ರತಿಭೆ ಮತ್ತು ಸೃಜನಾತ್ಮಕ ಅಭಿವ್ಯಕ್ತಿಯನ್ನು ಪ್ರತಿಬಿಂಬಿಸುತ್ತದೆ. ಪ್ರಾಪ್ತಿಯ ಈ ಸಾಧನೆ ರಾಷ್ಟ್ರಮಟ್ಟದಲ್ಲಿ ಗುರುತಿಸಲ್ಪಟ್ಟ ಯುವ ಪ್ರತಿಭೆಗೆ ಪ್ರೇರಣಾದಾಯಕ ಉದಾಹರಣೆಯಾಗಿ ನಿಂತಿದ್ದು, ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ ಮತ್ತು ಆತ್ಮವಿಶ್ವಾಸವನ್ನು ಬೆಳೆಸುವಲ್ಲಿ ಶಾಲೆಯ ನಿರಂತರ ಬದ್ಧತೆಯನ್ನು ಪ್ರತಿಫಲಿಸುತ್ತದೆ.



ಪ್ರಥಮ ಬಹುಮಾನ

ಬೆಂಗಳೂರಿನಲ್ಲಿ ನಡೆದ ಕರಾಟೆ ಸ್ಪರ್ಧೆಯಲ್ಲಿ ಮೈಸೂರಿನ ಸದ್ವಿದ್ಯಾ ಶಾಲೆಯ 7ನೇ ತರಗತಿ ವಿದ್ಯಾರ್ಥಿ ಮಾದೇಶ. ಆರ್ ಭಾಗವಹಿಸಿ ಕಥಾ ವಿಭಾಗದಲ್ಲಿ ಪ್ರಥಮ ಬಹುಮಾನವನ್ನು ಪಡೆದುಕೊಂಡಿದ್ದಾನೆ.

ರಾಜ್ಯದಲ್ಲಿ ಮತ್ತೊಂದು ದರೋಡೆ ಬೆಂಗಳೂರಿನಲ್ಲಿ ಗನ್ ತೋರಿಸಿ ಚಿನ್ನಾಭರಣ ಲೂಟಿ

ಬೆಂಗಳೂರು: ರಾಜ್ಯದಲ್ಲಿ ಮತ್ತೊಂದು ದರೋಡೆ ಪ್ರಕರಣ ನಡೆದಿದೆ. ಬೆಂಗಳೂರಿನ ದಾಸನಪುರದಲ್ಲಿ ಚಿನ್ನದಂಗಡಿಗೆ ನುಗ್ಗಿದ ಖದೀಮರು ಗನ್ ತೋರಿಸಿ ಚಿನ್ನಾಭರಣ ದೋಚಿ ಪರಾರಿಯಾಗಿದ್ದಾರೆ. ಬೈಕ್ ನಲ್ಲಿ ಬಂದಿದ್ದ ಇಬ್ಬರು ದರೋಡೆಕೋರರು ಬೆಂಗಳೂರು ಗ್ರಾಮಾಂತರ ಜಿಲ್ಲೆ ಮಾದನಾಯಕನಹಳ್ಳಿ ಠಾಣೆ ವ್ಯಾಪ್ತಿಯ ದಾಸನಪುರದಲ್ಲಿ ರಾಮದೇವ್ ಜ್ಯುವೆಲ್ಲರಿ ಶಾಪ್‌ಗೆ ನುಗ್ಗಿ ಚಿನ್ನಾಭರಣ ದೋಚಿದ್ದಾರೆ.



ಜ್ಯುವೆಲ್ಲರಿ ಮಾಲೀಕ ಕನ್ನಯ್ಯಲಾಲ್ ಅಂಗಡಿ ಕ್ಲೋಸ್ ಮಾಡಲು ಮುಂದಾದ ವೇಳೆ ಗನ್ ಹಿಡಿದು ಅಂಗಡಿಗೆ ನುಗ್ಗಿದ್ದರು. ಗನ್ ಹಿಡಿದು ಹೆದರಿಸಿ ಟೇಬಲ್ ಮೇಲಿದ್ದ ಚಿನ್ನವನ್ನು ದೋಚಿದ್ದಾರೆ. ಖದೀಮರು ದರೋಡೆ ಮಾಡುವ ದೃಶ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಮಾದನಾಯಕನಹಳ್ಳಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಪ್ರಾಥಮಿಕ ತನಿಖೆ ಪ್ರಕಾರ, 205 ಗ್ರಾಂ ಚಿನ್ನಾಭರಣ, 1 ಕೆ.ಜಿ ಬೆಳ್ಳಿ ದರೋಡೆ ಮಾಡಿದ್ದಾರೆ ಎನ್ನಲಾಗಿದೆ. ಸಿಸಿಟಿವಿ ಕ್ಯಾಮರಾದಲ್ಲಿ ಸಿಕ್ಕಿರೋ ದೃಶ್ಯಗಳನ್ನ ಆಧಾರವಾಗಿಟ್ಟುಕೊಂಡು ಪೊಲೀಸರು ದರೋಡೆಕೋರರ ಬೆನ್ನಟ್ಟಿದ್ದಾರೆ.

ಇತ್ತೀಚೆಗೆ ಬೆಳಗಾವಿ ಬಳಿ ಟ್ರಕ್‌ನಲ್ಲಿ ಸಾಗಿಸುತ್ತಿದ್ದ 400 ಕೋಟಿ ನಗದು ಹಣ ದೋಚಲಾಗಿತ್ತು. ಇದಾದ ನಂತರ ಕಲಬುರ್ಗಿಯಲ್ಲಿ ಗುಂಡು ಹಾರಿಸಿ ಆಭರಣದ ಅಂಗಡಿ ಲೂಟಿ ಮಾಡಲಾಗಿತ್ತು. ಈಗ ಇದೇ ರೀತಿಯ ಮತ್ತೊಂದು ದರೋಡೆ ನಡೆದಿದೆ. ರಾಜ್ಯದಲ್ಲಿ ಕಳ್ಳ–ಕಾಕರು ಅಟ್ಟಹಾಸ ಮೆರೆಯುತ್ತಿದ್ದು, ಜನ ಭಯಭೀತರಾಗಿದ್ದಾರೆ.

ಮಲ್ಪೆ ಬೀಚ್‌ನಲ್ಲಿ ದೋಣಿ ಮಗುಚಿ ಮೈಸೂರು ಬಿಪಿಓ ಉದ್ಯೋಗಿಗಳು ಸಾವು

ಮೈಸೂರು, ಜ. 27 (ಆರ್‌ಕೆ/ವಿವಿಹೆಚ್)– ಸತತ ರಜೆ ಹಿನ್ನೆಲೆಯಲ್ಲಿ ಪ್ರವಾಸ ಕೈಗೊಂಡಿದ್ದ ಮೈಸೂರಿನ ಮೂವರು ಬಿಪಿಒ ಕಾಲ್ ಸೆಂಟರ್ ಉದ್ಯೋಗಿಗಳು ದೋಣಿ ಮಗುಚಿದ ಪರಿಣಾಮ ಮಲ್ಪೆ ಬಳಿ ಸಮುದ್ರದಲ್ಲಿ ದುರಂತ ಸಾವಿಗೀಡಾಗಿದ್ದಾರೆ. ಮತ್ತೊಬ್ಬರ ಸ್ಥಿತಿ ಗಂಭೀರವಾಗಿದೆ. ಈ ದುರ್ಘಟನೆ ಉಡುಪಿ ಸಮೀಪ ಪೋಡಿ ಬೆಂಗ್ರೆ ಗ್ರಾಮದ ಡೆಲ್ಟಾ ಬೀಚ್‌ನಲ್ಲಿ ಸೋಮವಾರ ಸಂಭವಿಸಿದೆ.



ಶಂಕರಪ್ಪ



ಸಿಂಧು



ದಿಶಾ

ಚಾಮರಾಜನಗರ ಜಿಲ್ಲೆ ಹರವೆ ಗ್ರಾಮದ ಶಂಕರಪ್ಪ (27), ಮೈಸೂರು ಜಿಲ್ಲೆ ತಿ. ನರಸೀಪುರ ತಾಲೂಕು ಮೂಗೂರು ಗ್ರಾಮದ ಸಿಂಧು (23) ಹಾಗೂ ಮೈಸೂರಿನ ಜಲಪುರಿ ನಿವಾಸಿ ದಿಶಾ (23) ದುರಂತ ಸಾವಿಗೀಡಾದ ದುರ್ದೈವಿಗಳು. ಘಟನೆಯಲ್ಲಿ ಧರ್ಮರಾಜು ತೀವ್ರವಾಗಿ ಅಸ್ವಸ್ಥಗೊಂಡಿದ್ದು ಅವರನ್ನು ಉಡುಪಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದೆ. ಚಿಂತಾಜನಕ ಸ್ಥಿತಿಯಲ್ಲಿರುವ ಅವರನ್ನು ಐಸಿಯುನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಪ್ರಕರಣ ದಾಖಲಿಸಿಗೊಂಡಿರುವ ಮಲ್ಪೆ ಪೊಲೀಸರು ತಿಳಿಸಿದ್ದಾರೆ.

ಮೈಸೂರಿನ ಸರಸ್ವತಿಪುರಂ ಮುಖ್ಯ ರಸ್ತೆಯ ಗೋಲ್ ಕ್ರಿಸ್ಟ್ ಇಂಡಿಯಾ ಪ್ರೈವೇಟ್ ಲಿಮಿಟೆಡ್‌ನ 28 ಮಂದಿ ಉದ್ಯೋಗಿಗಳು ಭಾನುವಾರ ಟೆಂಪೊ ಟ್ರಾವೆಲರ್‌ನಲ್ಲಿ ಮಂಗಳೂರು, ಉಡುಪಿ ಸೇರಿದಂತೆ ಕರಾವಳಿ ಪ್ರವಾಸಕ್ಕೆ ತೆರಳಿದ್ದರು. ಸೋಮವಾರ ಮಲ್ಪೆಯ ಡೆಲ್ಟಾ ಬೀಚ್ ಪಾಯಿಂಟ್‌ನಲ್ಲಿ 14 ಮಂದಿ ಬಿಪಿಒ ಉದ್ಯೋಗಿಗಳು ದಿ ವೇವ್ ರೈಡರ್ ದೋಣಿ ಹತ್ತಿ ವಿಹಾರಕ್ಕೆ ತೆರಳಿದ್ದರು. ಎಲ್ಲರಿಗೂ ಸುರಕ್ಷಿತಾ ಲೈಫ್ ಜಾಕೆಟ್ ನೀಡಲಾಗಿದ್ದರೂ, ಆ ಪೈಕಿ ಕೆಲವರು ಅದನ್ನು ಧರಿಸಿರಲ್ಲಿಲ್ಲ ಎನ್ನಲಾಗಿದೆ. ಮಧ್ಯಾಹ್ನದ ವೇಳೆಗೆ ಸೇಂಟ್ ಮೇರೀಸ್ ದ್ವೀಪಕ್ಕೆ ಹೋಗುತ್ತಿದ್ದಾಗ ದೋಣಿಯು ಸ್ವರ್ಣ ನದಿ ಸಮುದ್ರಕ್ಕೆ ಸೇರುವ ಹಂಗರಕಟ್ಟೆ ಶಿಪ್ ಬಿಲ್ಡಿಂಗ್ ಯಾರ್ಡ್ ಬಳಿ ಮಗುಚಿದೆ.

ಪರಿಣಾಮ ಇಬ್ಬರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿದರೆ, ಉಳಿದವರನ್ನು ಸ್ಥಳೀಯರು ರಕ್ಷಿಸಿ ದಡ ಸೇರಿಸಲಾಗಿತ್ತು. ಆದರೆ ದಿಶಾ ಆಸ್ಪತ್ರೆಯಲ್ಲಿ ಅಸುನೀಗಿದ್ದು, ಮತ್ತೊಬ್ಬರಿಗೆ ಚಿಕಿತ್ಸೆ ಮುಂದುವರೆದಿದೆ. ವಿಷಯ ತಿಳಿಯುತ್ತಿದ್ದಂತೆಯೇ ಮಲ್ಪೆ ಠಾಣೆ ಪೊಲೀಸರು ಸ್ಥಳಕ್ಕೆ ಧಾವಿಸಿ ಮಹಜರು ನಡೆಸಿದ್ದಾರೆ. ನಂತರ ಮೃತದೇಹಗಳನ್ನು ಉಡುಪಿ ಜಿಲ್ಲಾ ಆಸ್ಪತ್ರೆ ಶವಾಗಾರಕ್ಕೆ ಸ್ಥಳಾಂತರಿಸಲಾಯಿತು ಎಂದು ಪೊಲೀಸರು ತಿಳಿಸಿದ್ದಾರೆ.



ದುರಂತಕ್ಕೀಡಾದ ಬೋಟ್

ಇಂದು ಬೆಳಿಗ್ಗೆ ಮರಣೋತ್ತರ ಪರೀಕ್ಷೆ ನಡೆಸಿರುವ ಪೊಲೀಸರು ದೇಹಗಳನ್ನು ಮೈಸೂರಿನಿಂದ ತೆರಳಿದ್ದ ವಾರಸುದಾರರಿಗೆ ಮಧ್ಯಾಹ್ನದ ವೇಳೆ ಹಸ್ತಾಂತರಿಸಿದರು. ಇಂದು ರಾತ್ರಿ ವೇಳೆಗೆ ಮೈಸೂರಿಗೆ ದೇಹಗಳನ್ನು ತರಲಾಗುವುದು ಎಂದು ಹೇಳಲಾಗುತ್ತಿದೆ. ಈ ನಡುವೆ ಮೈಸೂರಿನ ಸರಸ್ವತಿಪುರಂ ಠಾಣೆ ಇನ್ಸ್‌ಪೆಕ್ಟರ್ ಪುರುಷೋತ್ತಮ್ ಅವರು ಮಲ್ಪೆ ಠಾಣೆ ಪೊಲೀಸರೊಂದಿಗೆ ಸಂಪರ್ಕದಲ್ಲಿದ್ದಾರೆ.

ಮೈಸೂರು ಅಭಿವೃದ್ಧಿಗೆ ಒಡೆಯರ ಕೊಡುಗೆ ಅಪಾರ

ಪಾರಂಪರಿಕ ತಜ್ಞ ಪ್ರೊ.ಎನ್.ಎಸ್.ರಂಗರಾಜು ಅಭಿಮತ

ಮೈಸೂರು, ಜ.27(ಎಂಕೆ)–ಮೈಸೂರಿನ ಸರ್ವಾಂಗೀಣ ಅಭಿವೃದ್ಧಿಗೆ ಮೈಸೂರು ಒಡೆಯರ ಕೊಡುಗೆ ಮಹತ್ವದ್ದಾಗಿದ್ದು, ಮೈಸೂರು ಮತ್ತು ಶ್ರೀರಂಗಪಟ್ಟಣ ಸೇರಿ 13 ಅರಮನೆಗಳನ್ನು ಗುರ್ತಿಸಲಾಗಿದೆ ಎಂದು ಪಾರಂಪರಿಕ ತಜ್ಞ ಪ್ರೊ.ಎನ್.ಎಸ್.ರಂಗರಾಜು ತಿಳಿಸಿದರು.

ಮೈಸೂರಿನ ಟೌನ್‌ಹಾಲ್‌ನಲ್ಲಿ ಇಂಡಿಯನ್ ನ್ಯಾಷನಲ್ ಟ್ರಸ್ಟ್ ಫಾರ್ ಆರ್ಟ್ ಅಂಡ್ ಕಲ್ಚರಲ್ ಹೆರಿಟೇಜ್ (ಐಎನ್‌ಟಿಎಸಿಹೆಚ್) ಮೈಸೂರು ಚಾಪ್ಟರ್ ವತಿಯಿಂದ ಬೆಂಗಳೂರು ಕ್ರೈಸ್ಟ್ ವಿವಿಯ 145 ವಿದ್ಯಾರ್ಥಿಗಳು ಹಾಗೂ ಉಪ ನ್ಯಾಸಕರೊಂದಿಗೆ ನಡೆದ ಪಾರಂಪರಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, 2004ರಲ್ಲಿ ಮೈಸೂರು ಮತ್ತು ಶ್ರೀರಂಗಪಟ್ಟಣವನ್ನು ಪಾರಂಪರಿಕ ನಗರಗಳೆಂದು ಡಿಕ್ಲೇರ್ ಮಾಡಲಾಯಿತು ಎಂದು ತಿಳಿಸಿದರು.



ಮೈಸೂರಿನ ಟೌನ್‌ಹಾಲ್‌ನಲ್ಲಿ ನಡೆದ ಪಾರಂಪರಿಕ ಕಾರ್ಯಕ್ರಮವನ್ನು ಪಾರಂಪರಿಕ ತಜ್ಞ ಪ್ರೊ.ಎನ್.ಎಸ್.ರಂಗರಾಜು ಉದ್ಘಾಟಿಸಿದರು.

1799ರ ಮೇ 4ರಂದು ಟಿಪ್ಪು ಸುಲ್ತಾನ್ ಮರಣದ ನಂತರ ಆಳ್ವಿಕೆ ನಡೆಸಿದ ಮುಮ್ಮಡಿ ಕೃಷ್ಣರಾಜ ಒಡೆಯರ್, 10ನೇ ಚಾಮರಾಜ ಒಡೆಯರ್, ನಾಲ್ವಡಿ ಕೃಷ್ಣರಾಜ ಒಡೆಯರ್ ಮತ್ತು ಜಯಚಾಮರಾಜ ಒಡೆಯರ್ ಜೊತೆಗೆ ಮಹಾರಾಣಿ ಕೆಂಪನಂಜಮ್ಮಣ್ಣಿ (ವಾಣಿ ವಿಲಾಸ ಸನ್ನಿಧಾನ) ಅವರ ಕೊಡುಗೆ ಮಹತ್ವದ್ದಾಗಿದೆ ಎಂದು ಮಾಹಿತಿ ನೀಡಿದರು.

ಮೈಸೂರಿನ ಅಂಬಾವಿಲಾಸ ಅರಮನೆ, ಮಾನಸಗಂಗೋತ್ರಿಯಲ್ಲಿರುವ ಜಯಲಕ್ಷ್ಮಿ ವಿಲಾಸ ಅರಮನೆ, ಕಾರಂಜಿ ಅರಮನೆ, ಸಿಎಫ್‌ಟಿಆರ್‌ಐ ಅರಮನೆ ನಿರ್ಮಾಣಕ್ಕೆ ಅಡಿಗಲ್ಲು ಹಾಕಿದ್ದ ಮಹಾರಾಣಿ ಕೆಂಪನಂಜಮ್ಮಣ್ಣಿ ಅವರು ಹೆಣ್ಣು ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಮಹಾರಾಣಿ ಕಾಲೇಜು ಮತ್ತು ಚಿತ್ರದುರ್ಗದ ವಾಣಿವಿಲಾಸ ಸಾಗರ ಡ್ಯಾಂ ನಿರ್ಮಿಸಿದ್ದಾರೆ ಎಂದು ಸ್ಮರಿಸಿದರು.

ಹಾಗೆಯೇ 1886ರಲ್ಲಿ 10ನೇ ಚಾಮರಾಜ ಒಡೆಯರ್ ಅವರು ಮೈಸೂರಿನ ರಸ್ತೆಗಳು ಮತ್ತು ವೃತ್ತಗಳನ್ನು ಅಭಿವೃದ್ಧಿ ಮಾಡಿದ್ದರಿಂದಾಗಿ ಮೈಸೂರು ಇಂದಿಗೂ ವಿಶಾಲ ರಸ್ತೆ ಮತ್ತು ವೃತ್ತಗಳನ್ನು ಒಳಗೊಂಡಿದೆ. ಮೈಸೂರಿನ ಸಾಂಸ್ಕೃತಿಕ ಪ್ರತೀಕವಾಗಿ ಪ್ರತೀ ವರ್ಷ ದಸರಾ ಮಹೋತ್ಸವ ನಡೆದುಕೊಂಡು ಬಂದಿದೆ ಎಂದರು. ಮೈಸೂರು ರೇಷ್ಮೆ ಸೀರೆ, ಮೈಸೂರು ಗಂಧದ ಎಣ್ಣೆ, ಮೈಸೂರು ಮಲ್ಲಿಗೆ ಸೇರಿದಂತೆ ಹತ್ತಾರು ಪದಾರ್ಥಗಳು ಮೈಸೂರು ಬ್ರಾಂಡ್‌ಗಳಾಗಿದ್ದು, ವಿಶ್ವ ಖ್ಯಾತಿ ಪಡೆದಿವೆ. ದೇಶದಲ್ಲಿಯೇ ಸಾಂಸ್ಕೃತಿಕ ಮತ್ತು ಪರಂಪರೆಗೆ ಮೈಸೂರು ಹೆಸರುವಾಸಿಯಾಗಿದೆ ಎಂದು ಮಾಹಿತಿ ನೀಡಿದರು.

ಗಣರಾಜ್ಯೋತ್ಸವ



ಮೈಸೂರು ರೇಸ್ ಕ್ಲಬ್ (ಎಂಆರ್‌ಸಿ) ನಲ್ಲಿ ಗಣರಾಜ್ಯೋತ್ಸವ ಆಚರಿಸಲಾಯಿತು. ಕ್ಲಬ್ ಅಧ್ಯಕ್ಷ ಕೆ.ಟಿ.ಬಾಲಕೃಷ್ಣ ಧ್ವಜಾರೋಹಣ ನೆರವೇರಿಸಿದರು. ಈ ವೇಳೆ ಸ್ಟೀವರ್ಡ್ಸ್, ಕಮಿಟಿ ಸದಸ್ಯರು, ಅಧಿಕಾರಿಗಳು ಉಪಸ್ಥಿತರಿದ್ದರು.

ಹಂಚ್ಯಾ ಶಾಲೆಯಲ್ಲಿ ಗಣರಾಜ್ಯೋತ್ಸವ



ಮೈಸೂರು ತಾಲೂಕಿನ ಹಂಚ್ಯಾ ಗ್ರಾಮದಲ್ಲಿ 77ನೇ ಗಣರಾಜ್ಯೋತ್ಸವ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಮೈಸೂರು, ಜ.27(ಜಿಎ)–ದೇಶ ಭಕ್ತಿ ಗೀತೆಗಳ ಗಾಯನ, ನೃತ್ಯ ಹಾಗೂ ವೇಷ ಭೂಷಣಗಳ ಸಂಭ್ರಮದೊಂದಿಗೆ ಮೈಸೂರು ತಾಲೂಕಿನ ಹಂಚ್ಯಾ ಗ್ರಾಮದಲ್ಲಿ 77ನೇ ಗಣರಾಜ್ಯೋತ್ಸವ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಶಾಲಾ ಆವರಣದಲ್ಲಿ ಧ್ವಜಾರೋಹಣ, ಗಾಂಧೀಜಿ, ಅಂಬೇಡ್ಕರ್ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಮಾಡಿದ ಗ್ಯಾರಂಟಿ ಯೋಜನೆಯ ತಾಲೂಕು ಪ್ರಾಧಿಕಾರದ ಸದಸ್ಯ ಹೆಚ್.ಡಿ.ಚೆನ್ನಯ್ಯ ಮಾತನಾಡಿ, ಸಂವಿಧಾನವನ್ನು ಅರ್ಪಿಸಿಕೊಂಡ ಈ ದಿನವನ್ನು ಸಂವಿಧಾನ ದಿನವನ್ನಾಗಿ ಆಚರಿಸಬೇಕಿದೆ. ಸಂವಿಧಾನದ ಮಹತ್ವವನ್ನು ಮಕ್ಕಳೆಲ್ಲರೂ ಅರ್ಥ ಮಾಡಿಕೊಳ್ಳಬೇಕಿದೆ ಎಂದರು.

ಮಹಿಳೆಯರು ಇಂದು ಮುಖ್ಯವಾಹಿನಿಗೆ ಬಂದು ನಮ್ಮೆಲ್ಲರ ಸರಿಸಮಾನಾಗಿದ್ದಾರೆಂದರೆ ಅದಕ್ಕೆ ಡಾ.ಬಿ.ಆರ್.ಅಂಬೇಡ್ಕರ್ ನೀಡಿದ ಸಂವಿಧಾನವೇ ಕಾರಣವಾಗಿದೆ. ಪ್ರತಿಯೊಬ್ಬರಿಂದಲೂ ಸಂವಿಧಾನದ ಆಶಯಗಳ ಸದ್ಬಳಕೆ ಆದಾಗ ಮಾತ್ರವೇ ಗಣರಾಜ್ಯೋತ್ಸವಕ್ಕೆ ನಿಜವಾದ ಅರ್ಥ ಬರಲಿದೆ ಎಂದು ತಿಳಿಸಿದರು.

ನಿವೃತ್ತ ಶಿಕ್ಷಕ ರಾಮಣ್ಣ ಮಾತನಾಡಿ, ಸ್ವಾತಂತ್ರ್ಯ ನಂತರ ಹರಿದು ಹಂಚಿ ಹೋಗಿದ್ದ ನಮ್ಮ ರಾಷ್ಟ್ರದ ಏಕೀಕರಣ ಸಂದರ್ಭ ಇದಾಗಿದೆ. ಇದರ ಹಿಂದೆ ಸಾಕಷ್ಟು ಜನರ ಪರಿಶ್ರಮವಿದ್ದು ಅಂತಹವರನ್ನು ಸ್ಮರಿಸುವ ದಿನ ಇದಾಗಿದೆ. ಗಣರಾಜ್ಯೋತ್ಸವದ ಪೂರ್ಣ ಅರ್ಥ ಪ್ರತಿಯೊಬ್ಬರೂ ಅರಿಯಿರಿ ಎಂದರು.

ಇದೇ ವೇಳೆ ಶಾಲೆಯಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು. ಪ್ರೌಢಶಾಲೆ ಮುಖ್ಯ ಶಿಕ್ಷಕ ಟಿ.ಕುಮಾರ್, ಶಿಕ್ಷಕರಾದ ಆರ್.ಪರಶಿವಮೂರ್ತಿ, ಎಸ್‌ಡಿಎಂಸಿ ಅಧ್ಯಕ್ಷೆ ಎಂ.ಶ್ವೇತ, ಉಪಾಧ್ಯಕ್ಷ ಶಿವಮಾದು, ಸದಸ್ಯರಾದ ಎಂ.ಕೆ.ರೇಖಾ, ಗೀತಾ, ಸುಧಾ, ಗಣೇಶ್, ಸೋಮಶೇಖರ್, ಮಂಜುಳಾ, ನಾಗನಗೌಡ ಪಾಟೀಲ್, ಫಾತಿಮ್, ನಾಗೇಶ್, ಶಿಕ್ಷಕರಾದ ನಾಗರಾಜ, ಎಂ.ಎಸ್.ಸವಿತಾ, ಎಚ್.ಸಿ.ಶೈಲಾ, ಗೋಪಾಲಕೃಷ್ಣ, ಕೆ.ಸಿ.ರತಿ, ಆರ್.ಕುಮಾರಸ್ವಾಮಿ, ಎಚ್.ವಿ.ಯಶವಂತಕುಮಾರ್, ಹಿರಿಯ ಪ್ರಾಥಮಿಕ ಶಾಲೆ ಮುಖ್ಯ ಶಿಕ್ಷಕ ರಾಮುಶೆಟ್ಟಿ, ಶಿಕ್ಷಕರಾದ ಶಿವಲಿಂಗಯ್ಯ, ಗೋಪಿನಾಥ್, ಉಷಾಕಿರಣ್, ನಾಗರತ್ನ, ಮಾನಸ, ಸಂದೀಪ್, ಜಮ್ರುದ್ದೀನ್, ಜಮೀನ, ಶಹೀನ್ ತಾಜ್, ಮೇರಿ ಶೈಲಾ, ಮಧುಶ್ರೀ, ದೀಕ್ಷಿತಾ ಮತ್ತಿತರರು ಉಪಸ್ಥಿತರಿದ್ದರು.

ವಾತ್ಸಲ್ಯ ಸೇವಾಶ್ರಮದಲ್ಲಿ ಗಣರಾಜ್ಯೋತ್ಸವ...



ಮೈಸೂರಿನ ಹಿನಕಲ್‌ನಲ್ಲಿರುವ ಹಿರಿಯ ಜೀವಿಗಳ ಆಶ್ರಯ ತಾಣ ವಾತ್ಸಲ್ಯ ಸೇವಾ ಆಶ್ರಮದಲ್ಲಿ ಗಣರಾಜ್ಯೋತ್ಸವ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಸೇವಾಶ್ರಮದ ಸಂಸ್ಥಾಪಕ ಅಧ್ಯಕ್ಷ ಎ.ಸಿ.ರವಿಕುಮಾರ್ ಧ್ವಜಾರೋಹಣ ನೆರವೇರಿಸಿದರು. ಸಂಸ್ಥೆಯ ಗೌರವ ಕಾರ್ಯದರ್ಶಿ ಶ್ರೀಮತಿ ನಾಗರತ್ನ ಹಾಗೂ ಆಶ್ರಮದ ಸಿಬ್ಬಂದಿಗಳಾದ ಜಯ, ರಾಣಿ, ಪೂಜಾ, ದಿವ್ಯ ಹಾಗೂ ಆಶ್ರಮದ ಹಿರಿಯ ಜೀವಿಗಳು ಉಪಸ್ಥಿತರಿದ್ದರು.

ಒಡನಾಡಿಯಲ್ಲಿ ಗಣರಾಜ್ಯೋತ್ಸವ...




ಮೈಸೂರಿನ ಒಡನಾಡಿ ಸಂಸ್ಥೆ ಆವರಣದಲ್ಲಿ ನಡೆದ ಗಣರಾಜ್ಯೋತ್ಸವದಲ್ಲಿ ಸಂಸ್ಥೆಯ ನಿರ್ದೇಶಕರಾದ ಪರಶು, ಸ್ಟ್ಯಾನ್ಲಿ ಧ್ವಜಾರೋಹಣ ನೆರವೇರಿಸಿದರು. ಈ ವೇಳೆ ಸಂಸ್ಥೆಯ ಮಕ್ಕಳು ದೇಶಭಕ್ತಿಗೀತೆ, ನೃತ್ಯರೂಪಕ ಪ್ರಸ್ತುತಪಡಿಸಿದರು. ಒಡನಾಡಿಯ ಸಹಭಾಗಿಗಳು, ಮಹಿಳೆಯರು, ಮಕ್ಕಳು ಭಾಗವಹಿಸಿದ್ದರು.

ಕಾರ್ಮಿಕ ಸಂಹಿತೆಯಲ್ಲಿ 40 ಕೋಟಿ ಕೃಷಿ ಕಾರ್ಮಿಕರ ಹೊರಗಿಡಲಾಗಿದೆ

ರಾಜ್ಯ ಮಟ್ಟದ ಕಾರ್ಯಾಗಾರದಲ್ಲಿ ವಸಂತಕುಮಾರ್ ಹಿಟ್ಟಣಗಿ ಆಕ್ರೋಶ

ಮೈಸೂರು, ಜ.27(ಬಿಎಲ್‌ಯು)– ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಕಾರ್ಮಿಕ ಸಂಹಿತೆಯಲ್ಲಿ 40 ಕೋಟಿಗೂ ಹೆಚ್ಚಿರುವ ಕೃಷಿ ಕಾರ್ಮಿಕರನ್ನು ಹೊರಗಿಡಲಾಗಿದೆ ಎಂದು ಕಾರ್ಮಿಕ ಇಲಾಖೆಯ ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿ ನಿವೃತ್ತ ಕಾರ್ಯದರ್ಶಿ ವಸಂತಕುಮಾರ್ ಹಿಟ್ಟಣಗಿ ಆಕ್ರೋಶ ವ್ಯಕ್ತಪಡಿಸಿದರು.



ಮೈಸೂರಿನ ನಂಜರಾಜ ಬಹದ್ದೂರು ಛತ್ರದಲ್ಲಿ ಆರಂಭವಾದ ಎರಡು ದಿನಗಳ ರಾಜ್ಯ ಮಟ್ಟದ ಕಾರ್ಯಾಗಾರದಲ್ಲಿ ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯ ನಿವೃತ್ತ ಕಾರ್ಯದರ್ಶಿ ವಸಂತಕುಮಾರ್ ಹಿಟ್ಟಣಗಿ ಮಾತನಾಡಿದರು.

ಮೈಸೂರಿನ ನಂಜರಾಜ ಬಹದ್ದೂರು ಛತ್ರದಲ್ಲಿ ಆರಂಭವಾದ ಸಿಐಟಿಯು ನೇತೃತ್ವದ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ರಾಜ್ಯ ಮಟ್ಟದ ಎರಡು ದಿನಗಳ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಬಹು ಸಂಖ್ಯೆಯ ಅಸಂಘಟಿತ ವಿಭಾಗಗಳನ್ನು ಕೂಡ ಕಾರ್ಮಿಕ ಸಂಹಿತೆಯಿಂದ ಹೊರಗಿಡಲಾಗಿದೆ ಎಂದರು.

ಇದರಿಂದ ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಕಾರ್ಮಿಕ ಸಂಹಿತೆಗಳು ಸಮಸ್ತ ಕಾರ್ಮಿಕ ವರ್ಗವನ್ನು ಪ್ರತಿನಿಧಿಸುತ್ತದೆ ಎಂಬುದು ಸತ್ಯಕ್ಕೆ ದೂರವಾದ ವಿಚಾರ. ಕೇಂದ್ರ ಸರ್ಕಾರ ಜಾರಿಗೊಳಿಸಿರುವ ನಾಲ್ಕು ಕಾರ್ಮಿಕ ಸಂಹಿತೆಗಳು ಶ್ರಮಿಕ ವರ್ಗದ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ ಎಂದು ಆರೋಪಿಸಿದರು.

ಈ ಮೊದಲು ಕಾರ್ಖಾನೆ ಮುಚ್ಚಲು ಸರ್ಕಾರದ ಪೂರ್ವಾನುಮತಿ ಕಡ್ಡಾಯವಾಗಿತ್ತು. ಆದರೆ ಈಗ ಈ ಷರತ್ತನ್ನು ತೆಗೆದು ಹಾಕಲಾಗಿದೆ. ಇದು ಕಾರ್ಖಾನೆ ಮಾಲೀಕರ ನಿರಂಕುಶತನಕ್ಕೆ ಕಾರಣವಾಗುತ್ತದೆ. ಹೀಗಾದರೆ ಕಾರ್ಖಾನೆಯಿಂದ ಹೊರಗೆ ಹಾಕಿದ ಕಾರ್ಮಿಕರಿಗೆ ರಕ್ಷಣೆ ನೀಡುವವರು ಯಾರು? ಎಂದು ಪ್ರಶ್ನಿಸಿದ ವಸಂತಕುಮಾರ್ ಹಿಟ್ಟಣಗಿ, ಈ ವಿಚಾರವಾಗಿ ಕಾರ್ಮಿಕ ಸಂಹಿತೆಯಲ್ಲಿ ಯಾವುದೇ ಸ್ಪಷ್ಟನೆ ಇಲ್ಲ. ಇದು ಆತಂಕಕಾರಿ ಬೆಳವಣಿಗೆ ಎಂದು ಆತಂಕ ವ್ಯಕ್ತಪಡಿಸಿದರು.

ತರುವಾಯ ಮಾತನಾಡಿದ ಸಿಡಬ್ಲ್ಯೂಎಫ್‌ಐ ರಾಜ್ಯಾಧ್ಯಕ್ಷ ಬಾಲಕೃಷ್ಣ ಶೆಟ್ಟಿ, ಲೇಬರ್ ಕೋಡ್ ವಿರುದ್ಧ ಫೆಬ್ರವರಿ 12ರಂದು ಕರೆ ನೀಡಿರುವ ಅಖಿಲ ಭಾರತ ಮುಷ್ಕರದಲ್ಲಿ ಕಟ್ಟಡ ಕಾರ್ಮಿಕರು ಕೂಡ ಭಾಗಿಯಾಗಲಿದ್ದಾರೆ ಎಂದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಮಹಾಂತೇಶ್, ಸಿಪಿಎಂ ಮೈಸೂರು ಜಿಲ್ಲಾ ಕಾರ್ಯದರ್ಶಿ ಜಗದೀಶ್ ಸೂರ್ಯ, ರಾಜ್ಯ ಕಾರ್ಯದರ್ಶಿ ಲಿಂಗರಾಜು, ರಾಜ್ಯ ಖಜಾಂಚಿ ಯಲ್ಲಾಲಿಂಗ, ಮುಖಂಡರಾದ ನವೀನ್ ಕುಮಾರ್, ಬಸವಯ್ಯ, ಸೋಮಶೇಖರ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಮುಂಬರುವ 2028ರ ವಿಧಾನಸಭಾ ಚುನಾವಣೆಯಲ್ಲಿ

ನಾಗಮಂಗಲದಲ್ಲಿ ಚಲುವರಾಯಸ್ವಾಮಿಗೆ ಸೋಲುವ ಭಯ

ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ

ಕೆ.ಆರ್.ಪೇಟೆ, ಜ.27– ಮಂಡ್ಯ ಜಿಲ್ಲೆಯಲ್ಲಿ ಜೆಡಿಎಸ್ ಪಕ್ಷ ಬಲಿಷ್ಠವಾಗಿದ್ದು, ಕಾರ್ಯಕರ್ತರು ಸದೃಢವಾಗಿ ಕಟ್ಟಿ ಬೆಳೆಸಿದ್ದಾರೆ. ಆದರೆ ಸಚಿವ ಎನ್.ಚಲುವರಾಯಸ್ವಾಮಿ ಅವರು ನಮ್ಮ ಪಕ್ಷದಲ್ಲಿ ಶಾಸಕ, ಮಂತ್ರಿ ಸೇರಿದಂತೆ ಎಲ್ಲಾ ಅಧಿಕಾರ ಅನುಭವಿಸಿ ಹೋಗಿದ್ದು, ಇದೀಗ ಜೆಡಿಎಸ್ ಮುಗಿಸುವ ಮಾತನಾಡುತ್ತಿದ್ದಾರೆ. 2028ರ ವಿಧಾನಸಭಾ ಚುನಾವಣೆಯಲ್ಲಿ ನಾಗಮಂಗಲದಲ್ಲಿ ಭಾರೀ ಅಂತರದಿಂದ ಸೋಲುವ ಭಯವಿದೆ. ಅದಕ್ಕಾಗಿ ಬೇರೆ ಕ್ಷೇತ್ರ ಹುಡುಕುತ್ತಿದ್ದಾರೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಲೇವಡಿ ಮಾಡಿದರು.

ತಾಲೂಕಿನ ಮಡುವಿನಕೋಡಿಯಲ್ಲಿ ಶಾಸಕ ಹೆಚ್.ಟಿ.ಮಂಜು ನೇತೃತ್ವದಲ್ಲಿ ನಡೆದ ಜೆಡಿಎಸ್‌ನ 25ನೇ ಬೆಳ್ಳಿಹಬ್ಬ ಮಹೋತ್ಸವ ಹಾಗೂ ವಿವಿಧ ಪಕ್ಷಗಳ ನೂರಾರು ಮುಖಂಡರು ಜೆಡಿಎಸ್ ಪಕ್ಷ ಸೇರ್ಪಡೆ ಕಾರ್ಯಕ್ರಮ ಮತ್ತು ಜೆಡಿಎಸ್ ಪಕ್ಷದ ಬೃಹತ್ ಸಮಾವೇಶ ಉದ್ಘಾಟಿಸಿ, ಕಾರ್ಯಕರ್ತರಿಂದ ಅಭಿನಂದನೆ ಸ್ವೀಕರಿಸಿ ಮಾತನಾಡಿದ ಅವರು, ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಅವರು ಜಿಲ್ಲೆಯಿಂದ ಜೆಡಿಎಸ್ ಅನ್ನು ಹೊಡೆದೋಡಿಸಿ ಎಂದು ಕರೆ ನೀಡಿರುವುದನ್ನು ಗಮನಿಸಿದರೇ ಅವರಿಗೆ ನಮ್ಮ ಪಕ್ಷದ ಮೇಲಿರುವ ಭಯವನ್ನು ತೋರಿಸುತ್ತದೆ. ರಾಜ್ಯ ಕಾಂಗ್ರೆಸ್ ಸರ್ಕಾರದ ದುರಾಡಳಿತದಿಂದ ರಾಜ್ಯದ ಜನತೆ ಬೇಸತ್ತಿದ್ದು, 2028ರ ವಿಧಾನಸಭಾ ಚುನಾವಣೆಯಲ್ಲಿ ಜೆಡಿಎಸ್ ಬಿಜೆಪಿ ನೇತೃತ್ವದ ಮೈತ್ರಿ ಸರ್ಕಾರ ಅಸ್ತಿತ್ವಕ್ಕೆ ಬರುವುದನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ. ಪಂಚ ಗ್ಯಾರಂಟಿಗಳನ್ನು ನಿಗದಿತ ಸಮಯಕ್ಕೆ ನೀಡದೆ ರಾಜ್ಯ ಸರ್ಕಾರ ಹಳಿ ತಪ್ಪಿದೆ. ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಅವರ ನಡುವಿನ ಅಧಿಕಾರದಾಸೆ ಹಗ್ಗ–ಜಗ್ಗಾಟದಿಂದಾಗಿ ರಾಜ್ಯದಲ್ಲಿ ಅಭಿವೃದ್ಧಿ ಕೆಲಸ ಕಾರ್ಯಗಳು ನೆನೆಗುದಿಗೆ ಬಿದ್ದಿವೆ ಎಂದು ಟೀಕಿಸಿದರು.

ಶಾಸಕ ಹೆಚ್.ಟಿ.ಮಂಜು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಇದಕ್ಕೂ ಮುನ್ನಾ ತಾಲೂಕಿನ ಗಡಿಗ್ರಾಮ ಅಶೋಕ ನಗರದಿಂದ ಕೆ.ಆರ್.ಪೇಟೆ ಪಟ್ಟಣ ಮತ್ತು ಹರಿಹರಪುರದ ಮಾರ್ಗವಾಗಿ ಮಡುವಿನಕೋಡಿವರೆಗೂ ಯುವ ಜೆಡಿಎಸ್ ವತಿಯಿಂದ ಬೃಹತ್ ಬುಲೆಟ್ ಬೈಕ್ ರ್‍ಯಾಲಿ ಮೂಲಕ ನಿಖಿಲ್ ಕುಮಾರಸ್ವಾಮಿ ಅವರನ್ನು ಬರಮಾಡಿಕೊಳ್ಳಲಾಯಿತು.



ಕಾರ್ಯಕ್ರಮದಲ್ಲಿ ನಿಖಿಲ್ ಕುಮಾರಸ್ವಾಮಿ, ಶಾಸಕ ಹೆಚ್.ಟಿ.ಮಂಜು ಅವರನ್ನು ಸನ್ಮಾನಿಸಲಾಯಿತು.

ನಿಖಿಲ್ ಕುಮಾರಸ್ವಾಮಿ ಅವರ 38ನೇ ಹುಟ್ಟುಹಬ್ಬ ಅಂಗವಾಗಿ 38 ಕೆಜಿ ತೂಕದ ಕೇಕ್ ಕತ್ತರಿಸುವ ಮೂಲಕ ಹುಟ್ಟುಹಬ್ಬ ಆಚರಿಸಲಾಯಿತು. ಇದೇ ವೇಳೆ ನಿಖಿಲ್ ಕುಮಾರಸ್ವಾಮಿ ಮತ್ತು ಹೆಚ್.ಟಿ.ಮಂಜು ಅವರಿಗೆ ಬೃಹತ್ ಗಾತ್ರದ ಕೊಬ್ಬರಿ ಮತ್ತು ಬೆಲ್ಲದ ಹಾರ ಹಾಕಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಡಿ.ರಮೇಶ್, ರಾಜ್ಯ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಕೃಷ್ಣಾರೆಡ್ಡಿ, ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ, ರಾಜ್ಯ ಜೆಡಿಎಸ್ ವಕ್ತಾರ ಅಶ್ವಿನ್ ಕುಮಾರ್, ರಾಜ್ಯ ಸಹಕಾರ ಮಹಾಮಂಡಲದ ರಾಜ್ಯ ನಿರ್ದೇಶಕ ಪುಟ್ಟಸ್ವಾಮಿಗೌಡ, ಎಸ್.ಎಲ್.ಮೋಹನ್, ಜೆಡಿಎಸ್ ಚಿಕ್ಕಮಗಳೂರು ಮತ್ತು ಬಳ್ಳಾರಿ ಜಿಲ್ಲಾ ಉಸ್ತುವಾರಿ ಕುಮಾರಸ್ವಾಮಿ, ತಾಲೂಕು ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಎ.ಆರ್.ರಘು, ತಾಲೂಕು ಜೆಡಿಎಸ್ ಕಾರ್ಯಾಧ್ಯಕ್ಷ ರಾಮಚಂದ್ರನ್, ತಾಲೂಕು ಯುವ ಜೆಡಿಎಸ್ ಅಧ್ಯಕ್ಷ ಮಹಾದೇವೇಗೌಡ, ರಾಜ್ಯ ಯುವ ಜೆಡಿಎಸ್ ಪ್ರಧಾನ ಕಾರ್ಯದರ್ಶಿ ಕೆ.ಬಿ.ನಾಗೇಶ್, ಎಸ್.ಆರ್.ದಿನೇಶ್, ಸಂದೇಶ್, ತಾಲೂಕು ಜೆಡಿಎಸ್ ಕಾನೂನು ಘಟಕದ ಅಧ್ಯಕ್ಷ ವಿ.ಎಸ್.ಧನಂಜಯಕುಮಾರ್, ಜಿಲ್ಲಾ ದಿಶಾ ಕಮಿಟಿ ಸದಸ್ಯ ನರಸನಾಯಕ್, ಟಿಎಪಿಸಿಎಂಎಸ್ ಅಧ್ಯಕ್ಷ ಬಲದೇವ್, ನಿರ್ದೇಶಕರಾದ ಮೋಹನ್, ಹೆಚ್.ಟಿ.ಲೋಕೇಶ್, ಮಂಜುನಾಥ್, ದಿನೇಶ್, ತಾಲೂಕು ಜೆಡಿಎಸ್ ಮಹಿಳಾ ವಿಭಾಗದ ಅಧ್ಯಕ್ಷೆ ರೇಖಾ, ಪ್ರಧಾನ ಕಾರ್ಯದರ್ಶಿ ರತಿ, ಮುಖಂಡರಾದ ತಾಪಂ ಮಾಜಿ ಅಧ್ಯಕ್ಷ ಮಹಾದೇವೇಗೌಡ, ಜಿಪಂ ಮಾಜಿ ಉಪಾಧ್ಯಕ್ಷೆ ಗಾಯಿತ್ರಿ, ತಾಪಂ ಮಾಜಿ ಸದಸ್ಯ ಸೋಮಶೇಖರ್, ಕೆ.ಟಿ.ಚಂದ್ರೇಗೌಡ, ರಾಮಕೃಷ್ಣೇಗೌಡ, ಅತೀಕ್ ಅಹಮದ್, ಸಂದೇಶ್, ನಾಗೇಶ್, ಲೋಕೇಶ್ ಸೇರಿದಂತೆ ಇತರರಿದ್ದರು.

ಈ ಸಂದರ್ಭದಲ್ಲಿ ಉದ್ಯಮಿ ಮಡುವಿನಕೋಡಿ ಎಂ.ಆರ್.ಮನು ಸೇರಿದಂತೆ ವಿವಿಧ ಪಕ್ಷಗಳ ನೂರಾರು ಮುಖಂಡರು ಜೆಡಿಎಸ್‌ಗೆ ಸೇರ್ಪಡೆಯಾದರು.

ಕೆ.ಆರ್.ಪೇಟೆಗೆ ಹೆಚ್.ಟಿ.ಮಂಜು ನಮ್ಮ ಅಭ್ಯರ್ಥಿ

"ಮಂಡ್ಯ ಜೆಡಿಎಸ್ ಭದ್ರಕೋಟೆ ಎಂಬುದು 2028ರ ಚುನಾವಣೆಯಲ್ಲಿ ಮತ್ತೊಮ್ಮೆ ಸಾಬೀತಾಗಲಿದೆ. ಶಾಸಕ ಹೆಚ್.ಟಿ.ಮಂಜು ಅವರನ್ನೇ ಮತ್ತೊಮ್ಮೆ ಕೆ.ಆರ್.ಪೇಟೆ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿ ಮಾಡಲಾಗುವುದು. ಅವರು ಮತ್ತೊಮ್ಮೆ ಗೆದ್ದು ಜೆಡಿಎಸ್–ಬಿಜೆಪಿ ಮೈತ್ರಿ ಸರ್ಕಾರದಲ್ಲಿ ಸಚಿವರಾಗಲಿ ಎಂದು ನಿಖಿಲ್ ಕುಮಾರಸ್ವಾಮಿ ಆಶಯ ವ್ಯಕ್ತಪಡಿಸಿದರು. ಜೆಡಿಎಸ್ ರೈತರು ಹಾಗೂ ಬಡವರ ಪಕ್ಷವಾಗಿರುವುದರಿಂದ ಜಿಲ್ಲೆ ಜನತೆ ಮನಸ್ಸು ಹಾಗೂ ಮನೆಗಳಲ್ಲಿ ಶಾಶ್ವತವಾಗಿ ನೆಲೆಸಿದೆ. ಸಂಸದ ಕುಮಾರಣ್ಣನವರು ಕೇಂದ್ರದ ಸಚಿವರಾಗಿ ದೇಶವೇ ಮೆಚ್ಚುವಂತಹ ದಕ್ಷ ಆಡಳಿತ ನೀಡುತ್ತಿದ್ದಾರೆ ಎಂದರು.

ಜೂಜಾಟ: 29 ಮಂದಿ ಬಂಧನ, 10 ಲಕ್ಷ ವಶ

ಮಂಡ್ಯ, ಜ.27– ಜೂಜಾಟದ ಹಿನ್ನೆಲೆಯಲ್ಲಿ ನಗರದ ಹೊರವಲಯದ ಅಗ್ರಿ ಕ್ಲಬ್ ಮೇಲೆ ಮಂಡ್ಯ ಗ್ರಾಮಾಂತರ ಠಾಣೆ ಪೊಲೀಸರು ದಾಳಿ ನಡೆಸಿ 10 ಲಕ್ಷ ವಶಪಡಿಸಿಕೊಂಡು 29 ಮಂದಿಯನ್ನು ಬಂಧಿಸಿದ್ದಾರೆ.

ಖಚಿತ ಮಾಹಿತಿ ಮೇರೆಗೆ ಎಸ್ಪಿ ಶೋಭಾರಾಣಿ ಅವರ ನೇತೃತ್ವದಲ್ಲಿ ಸೋಮವಾರ ತಡರಾತ್ರಿ ದಾಳಿ ನಡೆಸಿದ ಪೊಲೀಸರು ಜೂಜಾಟದಲ್ಲಿ ನಿರತರಾಗಿದ್ದ 29 ಮಂದಿಯನ್ನು ವಶಕ್ಕೆ ಪಡೆದು 10 ಲಕ್ಷ ರೂ. ವಶಪಡಿಸಿಕೊಂಡಿದ್ದಾರೆ. ಸಾಮಾನ್ಯವಾಗಿ ಕ್ಲಬ್‌ಗಳಲ್ಲಿ ರಾತ್ರಿ 11ರವರೆಗೆ ಜಾಕ್‌ಪಾಟ್ ಹಾಗೂ ರಮ್ಮಿ ಆಡಲು ಅವಕಾಶ ನೀಡಲಾಗುತ್ತದೆ. ಆದರೆ ಅಗ್ರಿ ಕ್ಲಬ್‌ನಲ್ಲಿ ಅದನ್ನೂ ಹೊರತುಪಡಿಸಿ ಇತರೆ ಜೂಜಿನಲ್ಲಿ ತಡರಾತ್ರಿವರೆಗೆ ಹಲವರು ತೊಡಗಿದ್ದರು ಎನ್ನಲಾಗಿದೆ. ಕ್ಲಬ್‌ನ ಸದಸ್ಯರಲ್ಲದೇ ರಾಮನಗರ, ಚನ್ನಪಟ್ಟಣ ಭಾಗದ ಹಲವರು ಗೆಸ್ಟ್ ಹೆಸರಿನಲ್ಲಿ ಬಂದು ಇಲ್ಲಿ ಜೂಜಿನಲ್ಲಿ ತೊಡಗಿದ್ದರು. ಇದರ ಖಚಿತ ಮಾಹಿತಿ ಪಡೆದ ಪೊಲೀಸರು, ಮಧ್ಯರಾತ್ರಿ ದಾಳಿ ನಡೆಸಿದರು. ಈ ವೇಳೆ ಕೆಲವರು ಕೌಂಪೌಂಡ್ ನೆಗೆದು ಪರಾರಿಯಾದರು ಎಂದು ತಿಳಿದು ಬಂದಿದೆ.

ದಾಳಿ ಸಂದರ್ಭ 10 ಲಕ್ಷಕ್ಕಿಂತಲೂ ಹೆಚ್ಚು ಹಣ ಸಿಕ್ಕಿರುವುದರಿಂದ ಇಲ್ಲಿ ರಮ್ಮಿ, ಜಾಕ್‌ಪಾಟ್ ಅಷ್ಟೇ ಅಲ್ಲದೆ ಜೂಜು ನಡೆಯುತ್ತಿರುವ ಅನುಮಾನ ವ್ಯಕ್ತವಾಗಿದೆ. ಪದೇ ಪದೇ ಅಗ್ರಿ ಕ್ಲಬ್ ಮೇಲೆ ಇಂತಹ ದಾಳಿ ನಡೆಯುತ್ತಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದ್ದು, ಪೊಲೀಸರು ಸೂಕ್ತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ. ಮಂಡ್ಯ ಗ್ರಾಮಾಂತರ ಪೊಲೀಸರು ಈ ಸಂಬಂಧ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಮಂಡ್ಯ ಕೃಷಿ ವಿವಿಗೆ ಯುಜಿಸಿ ಮಾನ್ಯತೆ: ಸಚಿವ ಚಲುವರಾಯಸ್ವಾಮಿ

ಮಂಡ್ಯ, ಜ.27– ಮಂಡ್ಯದಲ್ಲಿ ನೂತನ ಕೃಷಿ ವಿಜ್ಞಾನ ವಿಶ್ವವಿದ್ಯಾಲಯವನ್ನು ನಮ್ಮ ಸರ್ಕಾರ ಸ್ಥಾಪಿಸಿದ್ದು, ವಿ.ಸಿ.ಫಾರಂ, ಮಂಡ್ಯದಲ್ಲಿ ತಕ್ಷಣದ ಮೂಲಸೌಕರ್ಯ ಅಭಿವೃದ್ಧಿಗೆ 23 ಕೋಟಿ ರೂ. ಹಾಗೂ ವಿಶ್ವವಿದ್ಯಾಲಯದ ಆಡಳಿತ ಭವನ ನಿರ್ಮಾಣಕ್ಕೆ 70.70 ಕೋಟಿ ರೂ.ಗಳನ್ನು ರಾಜ್ಯ ಸಚಿವ ಸಂಪುಟವು ಅನುಮೋದಿಸಿ ಬಿಡುಗಡೆ ಮಾಡಿದೆ. ಕೃಷಿ ವಿಜ್ಞಾನಗಳ ವಿವಿ ಆರಂಭಿಸಿದ 6 ತಿಂಗಳೊಳಗೆ ಯುಜಿಸಿ ಮಾನ್ಯತೆ ದೊರೆತಿದ್ದು, ಇದು ಹೊಸ ಕೃಷಿ ವಿವಿ ಅಪರೂಪದ ಸಾಧನೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದರು.



ಸಚಿವ ಎನ್.ಚಲುವರಾಯಸ್ವಾಮಿ ಅವರು ಧ್ವಜವಂದನೆ ಸ್ವೀಕರಿಸಿದರು.

ಜಿಲ್ಲಾಡಳಿತದಿಂದ ನಗರದ ಸರ್ ಎಂ.ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ 77ನೇ ಗಣರಾಜ್ಯೋತ್ಸವದಲ್ಲಿ ಮಾತನಾಡಿದ ಅವರು, ಮಂಡ್ಯ ಕೃಷಿ ವಿಜ್ಞಾನ ವಿಶ್ವವಿದ್ಯಾಲವನ್ನು ಹೈಟೆಕ್ ಕೃಷಿ ಸಂಶೋಧನೆ ಮತ್ತು ನಾವೀನ್ಯತಾ ಕೇಂದ್ರವಾಗಿ ಅಭಿವೃದ್ಧಿಪಡಿಸಲಾಗುತ್ತಿದ್ದು, ಕರ್ನಾಟಕದ ಹವಾಮಾನಕ್ಕೆ ಹೊಂದುವ ರೋಗ ನಿರೋಧಕ ಅಕ್ಕಿ ತಳಿಗಳ ಅಭಿವೃದ್ಧಿಗೆ ಫಿಲಿಪೈನ್ಸ್‌ನ ಅಂತರರಾಷ್ಟ್ರೀಯ ಅಕ್ಕಿ ಸಂಶೋಧನಾ ಸಂಸ್ಥೆ ಜೊತೆ ಸಹಕಾರ ಹೊಂದಲಾಗಿದೆ. ಇದು ಸಣ್ಣ ಮತ್ತು ಮಧ್ಯಮ ಹಿಡುವಳಿ ರೈತರ ಉತ್ಪಾದಕತೆ ಹಾಗೂ ಆದಾಯ ವೃದ್ಧಿಗೆ ವಿಶ್ವವಿದ್ಯಾಲಯ ನೀಡುತ್ತಿರುವ ಒತ್ತನ್ನು ಸ್ಪಷ್ಟಪಡಿಸುತ್ತದೆ ಎಂದು ತಿಳಿಸಿದರು.

ಮುಖ್ಯಮಂತ್ರಿಗಳ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆಯಡಿ ಜಿಲ್ಲೆಯ ಪ್ರತಿ ಕ್ಷೇತ್ರದ ಶಾಸಕರಿಗೆ ತಲಾ 50 ಕೋಟಿಗಳಂತೆ ಒಟ್ಟು 325 ಕೋಟಿ ರೂ.ಗಳನ್ನು ಮಂಜೂರು ಮಾಡಲಾಗಿದೆ. ನಾಗಮಂಗಲ ವ್ಯಾಪ್ತಿಯಲ್ಲಿ ಅತೀ ಹೆಚ್ಚು ಕೃಷಿಕರು ವ್ಯವಸಾಯ ಮಾಡಿಕೊಂಡು ಜೀವನ ಸಾಗಿಸುತ್ತಿದ್ದು, ಕೃಷಿ ಜಮೀನುಗಳಿಗೆ ಸರಾಗವಾಗಿ ನೀರು ಪೂರೈಸುವ ಸಲುವಾಗಿ ಕಾವೇರಿ ಅಚ್ಚುಕಟ್ಟು ಪ್ರದೇಶದಲ್ಲಿ ಬರುವ ಕಾಲುವೆಗಳ ನಿರ್ಮಾಣ, ದುರಸ್ತಿ ಕಾಮಗಾರಿಗಳನ್ನು ಅಭಿವೃದ್ಧಿಪಡಿಸಲು 560 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ. ಬಹುದಿನಗಳಿಂದ ಮಂಡ್ಯ ನಗರದಲ್ಲಿ ನ್ಯಾಯಾಲಯ ಸಂಕೀರ್ಣಕ್ಕೆ ಬೇಡಿಕೆ ಇದ್ದ ಹಿನ್ನೆಲೆಯಲ್ಲಿ ಸರ್ಕಾರಿ ಜಾಗವನ್ನು ಹಾಲಿ ಇರುವ ನ್ಯಾಯಾಲಯ ಸಮುಚ್ಚಯದ ಬಳಿ ಮಂಜೂರು ಮಾಡಿದ್ದು, 25 ಕೋಟಿ ರೂ. ಕಾಮಗಾರಿಗೆ ನೀಲ ನಕ್ಷೆ ತಯಾರಿಸಲಾಗಿದೆ. ಮದ್ದೂರು ತಾಲೂಕಿನ ನ್ಯಾಯಾಂಗ ಸಮುಚ್ಚಯ ನಿರ್ಮಾಣ ಸಂಬಂಧ 28.25 ಕೋಟಿ ರೂ. ವೆಚ್ಚದಲ್ಲಿ ಕಟ್ಟಡ ಕಾಮಗಾರಿಗೆ ನೀಲ ನಕಾಶೆ ತಯಾರಿಸಲಾಗಿದೆ ಎಂದರು.

ಶ್ರೀರಂಗಪಟ್ಟಣ ತಾಲೂಕು ವ್ಯಾಪ್ತಿಯ ಸಿಡಿಎಸ್ ನಾಲೆಯಡಿ ಬರುವ ಪಿಕಪ್ ನಾಲೆಗಳು ಮತ್ತು ತೂಬಿನ ನಾಲೆಗಳ ಅಭಿವೃದ್ಧಿ ಕಾಮಗಾರಿಯನ್ನು 50 ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗಿದೆ. ಮಂಡ್ಯ ತಾಲೂಕು ವ್ಯಾಪ್ತಿಯ ವಿವಿಧ ರಸ್ತೆಗಳ ಅಭಿವೃದ್ಧಿ, ನಾಲೆಗಳ ಅಭಿವೃದ್ಧಿ, ಪಿಕಪ್ ನಾಲೆಗಳ ಅಭಿವೃದ್ಧಿ ಮತ್ತು ರಕ್ಷಣಾತ್ಮಕ ಗೋಡೆಗಳ ನಿರ್ಮಾಣ ಕಾಮಗಾರಿಗಳನ್ನು 92 ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗಿದೆ ಎಂದರು.

ಮಳವಳ್ಳಿ ತಾಲೂಕು ವ್ಯಾಪ್ತಿಯಲ್ಲಿ ವಿಶ್ವೇಶ್ವರಯ್ಯ ನಾಲಾ ವ್ಯಾಪ್ತಿಯ ಹೆಬ್ಬಕವಾಡಿ ಶಾಖಾ ಕಾಲುವೆಗಳ ಹಾಗೂ ಪಿಕಪ್ ನಾಲೆಗಳ ಸಮಗ್ರ ಆಧುನೀಕರಣ ಕಾಮಗಾರಿ 292 ಕೋಟಿ ರೂ.ಗಳ ಅಂದಾಜಿನಲ್ಲಿ ಕೈಗೆತ್ತಿಕೊಳ್ಳಲಾಗಿದೆ. ನಮ್ಮ ಜಿಲ್ಲೆಯಲ್ಲಿ ಕಂದಾಯ ಇಲಾಖೆಯಿಂದ ದರಖಾಸ್ತು ಪೋಡಿ, ಭೂ ಸುರಕ್ಷಾ ಯೋಜನೆ, ಈ ಪೌತಿ ಖಾತೆ, ಲ್ಯಾಂಡ್ ಬೀಟ್ ಮುಂತಾದ ವಿನೂತನ ಯೋಜನೆಗಳಲ್ಲಿ ಗಣನೀಯ ಪ್ರಗತಿ ಸಾಧಿಸಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಸಕರಾದ ರವಿಕುಮಾರ್, ಜಿಲ್ಲಾಧಿಕಾರಿ ಡಾ.ಕುಮಾರ, ಜಿಪಂ ಸಿಇಓ ಕೆ.ಆರ್ ನಂದಿನಿ, ಎಸ್ಪಿ ಶೋಭಾರಾಣಿ, ಅಪರ ಜಿಲ್ಲಾಧಿಕಾರಿ ಬಿ.ಸಿ.ಶಿವಾನಂದಮೂರ್ತಿ, ರಾಜ್ಯ ಸಣ್ಣ ಕೈಗಾರಿಕೆಗಳ ಉಪಾಧ್ಯಕ್ಷೆ ವಿಜಯಲಕ್ಷ್ಮಿ ರಘುನಂದನ್, ಮುಡಾ ಅಧ್ಯಕ್ಷ ಬಿ.ಪಿ.ಪ್ರಕಾಶ್, ಉಪವಿಭಾಗಾಧಿಕಾರಿ ಶಿವಮೂರ್ತಿ, ತಹಸೀಲ್ದಾರ್ ವಿಶ್ವನಾಥ್ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

> ನಮ್ಮ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಕಳೆದ ಎರಡೂವರೆ ವರ್ಷಗಳಲ್ಲಿ ಕಂದಾಯ ಇಲಾಖೆಯ ಕಂದಾಯ ನ್ಯಾಯಾಲಯಗಳಲ್ಲಿ ಬಾಕಿ ಇದ್ದ 21 ಸಾವಿರ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ. ಕಂದಾಯ ಇಲಾಖೆಯಿಂದ ಗಣನೀಯ ಆಡಳಿತಾತ್ಮಕ ಸುಧಾರಣೆಗಳಾಗಿದ್ದು, ಸುಮಾರು 18 ಲಕ್ಷ ಪಹಣಿಗಳಿಗೆ ಆಧಾರ್ ಜೋಡಣೆ ಮಾಡಲಾಗಿದೆ. 116 ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡಿ ಅಧಿಸೂಚನೆ ಹೊರಡಿಸಿದ್ದು, ಈಗಾಗಲೇ 3367 ಫಲಾನುಭವಿಗಳಿಗೆ ಹಕ್ಕು ಪತ್ರಗಳನ್ನು ವಿತರಿಸಲಾಗಿದೆ.
>
> -ಎನ್.ಚಲುವರಾಯಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ.

ಒಂದನೇ ಪುಟದಿಂದ

ಫೆ.2ರ ವೇಳೆಗೆ ತೆರೆ

ಮುಂದೆ ಅನುಸರಿಸಬೇಕಾದ ಮಾರ್ಗಗಳ ಬಗ್ಗೆ ಉಭಯ ನಾಯಕರಿಗೂ ಸ್ಪಷ್ಟ ಸೂಚನೆ ನೀಡಲಿದೆ. ದಾವೋಸ್ ಪ್ರವಾಸ ವೇಳೆ ಜಾಗತಿಕ ಉದ್ಯಮಿಗಳಿಗೆ, ಕರ್ನಾಟಕದಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಮುಖ್ಯಮಂತ್ರಿಯಾಗಿ ಎಲ್ಲ ಸೌಲಭ್ಯ ನೀಡುವುದಾಗಿ ಶಿವಕುಮಾರ್ ಆಶ್ವಾಸನೆ ನೀಡಿದ್ದಾರೆ ಎಂಬ ಮಾತುಗಳು ಕಾಂಗ್ರೆಸ್ ವಲಯದಲ್ಲಿ ಕೇಳಿಬರುತ್ತಿವೆ.

ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಸೇರಿದಂತೆ ಕೆಲವು ರಾಜ್ಯಗಳ ಪ್ರತಿನಿಧಿಗಳ ಉಪಸ್ಥಿತಿಯಲ್ಲೇ ಜಾಗತಿಕ ಉದ್ಯಮಿಗಳಿಗೆ ಶಿವಕುಮಾರ್ ಈ ಭರವಸೆ ನೀಡಿದರು ಎನ್ನಲಾಗಿದೆ.

ಕಳೆದ ನವೆಂಬರ್ 20ಕ್ಕೆ ಸಿದ್ದರಾಮಯ್ಯ ನೇತೃತ್ವದ ಆಡಳಿತ ಎರಡೂವರೆ ವರ್ಷಗಳ ಆಡಳಿತ ಪೂರೈಸಿದ್ದು, ನಂತರ ಅಧಿಕಾರ ಹಂಚಿಕೆ ಗೊಂದಲ ಬಹಿರಂಗವಾಗಿಯೇ ಪರಸ್ಪರ ವಾಗ್ದಾಳಿಗಳಿಗೆ ಕಾರಣವಾಯಿತು. ಸಿದ್ದರಾಮಯ್ಯ ತಮ್ಮ ಅಧಿಕಾರ ಉಳಿಸಿಕೊಳ್ಳಲು ಒಂದೆಡೆ ಭಾರೀ ಕಸರತ್ತು ನಡೆಸಿದರೆ, ಶಿವಕುಮಾರ್ ಅಧಿಕಾರ ಪಡೆಯಲು ಮತ್ತೊಂದೆಡೆ ತೀವ್ರ ಯತ್ನ ಮಾಡುತ್ತಿದ್ದಾರೆ.

ಅಧಿಕಾರ ಹಸ್ತಾಂತರ ವಿಚಾರ ಸಾರ್ವಜನಿಕವಾಗಿ ಚರ್ಚೆಗೆ ಗ್ರಾಸವಾಗಿ ರಾಷ್ಟ್ರವ್ಯಾಪಿ ಕುತೂಹಲಕ್ಕೆ ಕಾರಣವಾಗಿದ್ದರೂ ರಾಹುಲ್ ಗಾಂಧಿ ಮಾತ್ರ ಸ್ಪಷ್ಟ ನಿಲುವು ತಳೆದಿರಲಿಲ್ಲ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪಕ್ಷದ ಅಧಿನಾಯಕಿ ಸೋನಿಯಾ ಗಾಂಧಿ ಸೇರಿದಂತೆ ಪ್ರಮುಖರು ಶಿವಕುಮಾರ್ ಪರ ಇದ್ದರೂ ಗೊಂದಲ ನಿವಾರಿಸಲು ಸಾಧ್ಯವಾಗಿರಲಿಲ್ಲ. ಇದೀಗ ಪ್ರಿಯಾಂಕಾ ಗಾಂಧಿ ಮಧ್ಯಪ್ರವೇಶಿಸಿದ್ದು, ಸದ್ಯದಲ್ಲೇ ಗೊಂದಲಕ್ಕೆ ತೆರೆ ಬೀಳುವ ಸಾಧ್ಯತೆ ಇದೆ.

ಪ್ರಾಯೋಗಿಕವಾಗಿ ವಾಹನ ಸಂಚಾರ

ಸಂಚಾರಕ್ಕೆ ಅಧಿಕೃತವಾಗಿ ಮುಕ್ತಗೊಳಿಸಲಾಗುವುದು. ಚಾಮುಂಡಿಬೆಟ್ಟದ ನಂದಿ ಮಾರ್ಗದ ವ್ಯೂ ಪಾಯಿಂಟ್ ಹಾಗೂ ನಂದಿ ಪ್ರತಿಮೆಯ ನಡುವಿನ ರಸ್ತೆಯಲ್ಲಿ ಭಾರೀ ಮಳೆಯ ಕಾರಣ 2019ರಲ್ಲಿ ಮೂರು ಬಾರಿ ಭೂ ಕುಸಿತವಾಗಿತ್ತು. ತರುವಾಯ 2021ರ ಅಕ್ಟೋಬರ್ 20 ಹಾಗೂ 31ರಂದು ಭೂ ಕುಸಿತದೊಂದಿಗೆ ಬಂಡೆಗಳು ರಸ್ತೆಗೆ ಅಡ್ಡಲಾಗಿ ಬಿದ್ದಿದ್ದವು. ಇದಾದ ನಂತರ ನವೆಂಬರ್ 4ರಂದು ಸಹ ಕುಸಿತವಾಯಿತು.

ಇಂತಹ ಅವಘಡ ಮತ್ತೆ ಸಂಭವಿಸಿದರೆ ಭಾರೀ ಹಾನಿಯಾಗುತ್ತದೆ ಎಂದು ನಿರ್ಧರಿಸಿ, ಲೋಕೋಪಯೋಗಿ ಇಲಾಖೆ ನಂದಿ ಮಾರ್ಗವನ್ನು ಸಂಪೂರ್ಣ ಮುಚ್ಚಿತ್ತು. ವೈಜ್ಞಾನಿಕವಾಗಿ ರೈನ್ ಫೋರ್ಸ್ಡ್ ಅರ್ಥ್ ರಿಟೈನ್ ಸ್ಟಕ್ಚರ್ ಮಾದರಿಯಲ್ಲಿ ರಸ್ತೆ ನಿರ್ಮಿಸಲು 9.75 ಕೋಟಿಗೆ ಒಂದು ಪ್ಯಾಕೇಜ್ ಹಾಗೂ 4.90 ಕೋಟಿಗೆ ಎರಡನೇ ಪ್ಯಾಕೇಜ್ ಟೆಂಡರ್ ನೀಡಲಾಗಿತ್ತು. ಇನ್ನು ಕೆಲವೇ ದಿನದಲ್ಲಿ ಕಾಮಗಾರಿ ಪೂರ್ಣಗೊಳ್ಳಲಿದ್ದು, ನಂದಿ ಮಾರ್ಗದಲ್ಲಿ ವಾಹನ ಸಂಚಾರಕ್ಕೆ ಅವಕಾಶ ದೊರೆಯಲಿದೆ. ಈ ಮೂಲಕ ಪ್ರವಾಸಿಗರಿಗೆ ನಂದಿ ದರ್ಶನ ಪಡೆಯುವ ಭಾಗ್ಯ ದೊರೆಯಲಿದೆ.

ವಿಧಾನಸಭೆಯಲ್ಲಿ ನಾಳೆ ಪ್ರಸ್ತಾಪ



ಕೆಸಿ ನಗರದ ಕೆರೆಗೆ ಕಾಂಪೌಂಡ್ ನಿರ್ಮಿಸಿರುವ ಸ್ಥಳಕ್ಕೆ ಮೈಸೂರು ತಾಲೂಕು ತಹಶೀಲ್ದಾರ್ ಮಹೇಶ್ ಕುಮಾರ್ ಮಂಗಳವಾರ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಈ ಸಂಬಂಧ ಗುರುವಾರ ವಿಧಾನಸಭೆಯಲ್ಲಿ ಗಮನ ಸೆಳೆಯುವ ಸೂಚನೆಯಡಿ ವಿಷಯ ಪ್ರಸ್ತಾಪ ಮಾಡುತ್ತೇನೆ. ಕೆರೆ ಎಂದು ಖಚಿತವಾದ ನಂತರವೂ ಸಂಬಂಧಪಟ್ಟವರ ವಿರುದ್ಧ ಕ್ರಮ ಜರುಗಿಸದಿರುವುದು, ಸರ್ಕಾರಿ ಸ್ವತ್ತನ್ನು ರಕ್ಷಣೆ ಮಾಡುವಲ್ಲಿ ಅಧಿಕಾರಿಗಳ ನಿರ್ಲಕ್ಷ್ಯತೆ, ವಿಳಂಬ ಧೋರಣೆ– ಈ ಎಲ್ಲಾ ವಿಚಾರಗಳ ಬಗ್ಗೆ ಸರ್ಕಾರದ ಗಮನ ಸೆಳೆದು ತಹಶೀಲ್ದಾರ್ ಹಾಗೂ ಜಿಲ್ಲಾಧಿಕಾರಿಗಳ ವಿರುದ್ಧ ಕ್ರಮಕ್ಕೆ ಆಗ್ರಹಿಸುತ್ತೇನೆ. ಸರ್ಕಾರ ಈ ವಿಚಾರದಲ್ಲಿ ಕ್ರಮ ಕೈಗೊಳ್ಳುತ್ತದೆ ಎಂಬ ವಿಶ್ವಾಸವಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಜಿ ರಾಮ್ ಜಿ ಪರ - ವಿರುದ್ಧ ಶಕ್ತಿ ಪ್ರದರ್ಶನ



ಜಿ ರಾಮ್ ಜಿ ರದ್ದುಪಡಿಸಬೇಕೆಂದು ಆಗ್ರಹಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ನಿಯೋಗ ಮಂಗಳವಾರ ಲೋಕಭವನದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಮನವಿ ಸಲ್ಲಿಸಿತು.

ಬಡವರ ಆರ್ಥಿಕಸ್ಥಿತಿಗೆ ಪೆಟ್ಟು ಕೊಟ್ಟಿರುವ ನೂತನ ಕಾಯಿದೆಯನ್ನು ಕೇಂದ್ರ ಸರ್ಕಾರ ಕೂಡಲೇ ಹಿಂಪಡೆಯಬೇಕು ಎಂದು ಒತ್ತಾಯಿಸಿದರು. ಕಾಂಗ್ರೆಸ್ ಸರ್ಕಾರದ ನಿಲುವನ್ನು ಖಂಡಿಸಿದ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು ನೇತೃತ್ವದಲ್ಲಿ ಉಭಯ ಪಕ್ಷಗಳ ನಾಯಕರು ಮಾತನಾಡಿ, ಹಿಂದಿನ ಕಾಯಿದೆ ಭ್ರಷ್ಟಾಚಾರಕ್ಕೆ ದಾರಿ ಮಾಡಿಕೊಟ್ಟಿತ್ತು. ಬಡವರ ಹೆಸರಿನಲ್ಲಿ ಉಳ್ಳವರು ಲೂಟಿ ಮಾಡಲು ಅವಕಾಶ ಮಾಡಿಕೊಟ್ಟಿದ್ದ ಕಾಯಿದೆಗೆ ಕೇಂದ್ರ ಕಡಿವಾಣ ಹಾಕಿದೆ. ಇದನ್ನು ಸಹಿಸದ ಕಾಂಗ್ರೆಸ್ ಆಡಳಿತ ನೂತನ ಕಾಯಿದೆ ವಿರೋಧಿಸಿ ಮಧ್ಯವರ್ತಿಗಳಿಗೆ ಅವಕಾಶ ಮಾಡಿಕೊಡಲು ಹೊರಟಿದೆ, ಇದೇ ಉದ್ದೇಶಕ್ಕಾಗಿ ವಿಶೇಷ ಅಧಿವೇಶನವನ್ನೂ ಕರೆದಿದೆ. ಭ್ರಷ್ಟಾಚಾರಿಗಳಿಗೆ ಮಣೆ ಹಾಕಲು ಸಿದ್ದರಾಮಯ್ಯ ನೇತೃತ್ವದ ಸರ್ಕಾರ ವಿಧಾನಮಂಡಲದ ಒಳಗೆ ಮತ್ತು ಹೊರಗೆ ಅಧಿಕಾರ ದುರ್ಬಳಕೆಗೆ ಮುಂದಾಗಿದೆ ಎಂದು ಆರೋಪಿಸಿದರು.

ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್‌ಗಳಿಗೆ ಗಾಂಧೀಜಿ ಹೆಸರು

ಕಾಂಗ್ರೆಸ್ ಖಂಡಿಸುವುದಲ್ಲದೆ, ವಿಬಿ–ಜಿ–ರಾಮ್–ಜಿ ರದ್ದುಪಡಿಸಿ ನರೇಗಾ ಮರುಸ್ಥಾಪನೆವರೆಗೆ ಹೋರಾಟ ನಡೆಸಲಾಗುವುದು ಎಂದರು. ಮನರೇಗಾ ಬಚಾವ್ ಸಂಗ್ರಾಮ್" ಅಂಗವಾಗಿ ಆಯೋಜಿಸಿದ್ದ ಬೃಹತ್ ಪ್ರತಿಭಟನೆ ಹಾಗೂ ರಾಜಭವನ ಚಲೋ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ಬಿಜೆಪಿಯವರು ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಕಾಯ್ದೆ (ಮನರೇಗಾ) ರದ್ದುಪಡಿಸಿ, ದುರುದ್ದೇಶದಿಂದ ವಿಕಸಿತ ಭಾರತ–ಗ್ಯಾರಂಟಿ ಫಾರ್ ರೋಜ್ಗಾರ್ ಮತ್ತು ಆಜೀವಿಕ ಮಿಶನ್ (ಗ್ರಾಮೀಣ) ಹೆಸರಿನಲ್ಲಿ ಹೊಸ ಕಾಯ್ದೆ ಜಾರಿಗೆ ತಂದಿದ್ದಾರೆ ಎಂದರು.

ಡಾ.ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ ನರೇಗಾ ಕಾಯ್ದೆ, ಆಹಾರ ಹಕ್ಕು, ಕೆಲಸದ ಹಕ್ಕು, ಶಿಕ್ಷಣ ಹಕ್ಕು, ಮಾಹಿತಿ ಹಕ್ಕು, ಅರಣ್ಯ ಕಾಯ್ದೆಗಳನ್ನು ಜಾರಿಗೆ ತಂದಿದ್ದರು. ಕಾಂಗ್ರೆಸ್ ಸರ್ಕಾರ ಮಹಿಳೆಯರು, ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು, ಸಣ್ಣ ರೈತರ ಬಗ್ಗೆ ಚಿಂತನೆ ಮಾಡುತ್ತದೆ.

ಬಿಜೆಪಿ ಜನಪರ ಯೋಜನೆಗಳನ್ನು ನಾಶಮಾಡುತ್ತಿದೆ. ಗ್ರಾಮೀಣ ಪ್ರದೇಶಗಳಲ್ಲಿ ಜನರಿಗೆ ಉದ್ಯೋಗ ಸಿಗದಂತೆ ಮಾಡುತ್ತಿದೆ. ಶೇ.53 ರಷ್ಟು ಮಹಿಳೆಯರು, ಶೇ.28 ರಷ್ಟು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಸುಮಾರು 5 ಲಕ್ಷ ಅಂಗವಿಕಲರು ಕೂಲಿ ಕೆಲಸದಲ್ಲಿ ನಿರತರಾಗಿದ್ದು, ನರೇಗಾ ಯೋಜನೆಯಿಂದ ಎಲ್ಲರಿಗೂ ಉದ್ಯೋಗ ಸಿಗುವಂತಾಗಿತ್ತು. ಕೇಂದ್ರ ಸರ್ಕಾರ, ಆರ್‌ಎಸ್‌ಎಸ್ ಜೊತೆಗೂಡಿ ಬಡ ಜನರು ಸದಾ ಸೇವಕರಾಗಿಯೇ ಇರಬೇಕೆಂದು ಹುನ್ನಾರ ಮಾಡಿದೆ.

ಕಾಂಗ್ರೆಸ್‌ನ ಜನಪರ ಗ್ಯಾರಂಟಿ ಯೋಜನೆಗಳ ಬಗ್ಗೆ 'ವೋಟ್‌ಗಾಗಿ ಮಾಡಿದ ಯೋಜನೆಗಳು' ಎಂಬುದಾಗಿ ಬಿಜೆಪಿ ಟೀಕಿಸುತ್ತಿತ್ತು. ಕೇಂದ್ರದ ಜನವಿರೋಧಿ ನೀತಿಯಿಂದ ಹಲವು ರಾಜ್ಯಗಳು ಕಷ್ಟಕ್ಕೆ ಸಿಲುಕಿವೆ. ನರೇಗಾ ಪುನರ್ ಸ್ಥಾಪನೆ ಹೋರಾಟಕ್ಕೆ ರೈತರು, ಕಾರ್ಮಿಕರು, ಮಹಿಳೆಯರು ಕೈಜೋಡಿಸಲಿದ್ದಾರೆ.

ಬಿಜೆಪಿ ಗಾಂಧಿಯನ್ನು ಮತ್ತೊಮ್ಮೆ ಹತ್ಯೆ ಮಾಡಿದೆ!: ಡಾ.ಬಿ.ಆರ್.ಅಂಬೇಡ್ಕರ್ ಹೇಳಿದಂತೆ ದೇಶದಲ್ಲಿ ಸಮಾನತೆ ಸ್ಥಾಪಿಸಲು ಆರ್ಥಿಕ, ಸಾಮಾಜಿಕ ಸ್ವಾತಂತ್ರ್ಯ ಎಲ್ಲರಿಗೂ ದೊರೆಯಬೇಕು. ಮಹಾತ್ಮಾ ಗಾಂಧಿ ಗ್ರಾಮ ಸ್ವರಾಜ್ಯ ಪ್ರತಿಪಾದಿಸಿದರು.

ಗೋಡ್ಸೆ ಮಹಾತ್ಮಾಗಾಂಧಿಯ ಹತ್ಯೆ ಮಾಡಿದರೆ, ಬಿಜೆಪಿ ನರೇಗಾ ಯೋಜನೆ ರದ್ದುಗೊಳಿಸುವ ಮೂಲಕ ಮಹಾತ್ಮಾ ಗಾಂಧಿಯನ್ನು ಮತ್ತೊಮ್ಮೆ ಹತ್ಯೆ ಮಾಡಿದೆ ಎಂದು ಟೀಕಿಸಿದರು.

ಪ್ರತಿಭಟನೆ ನಂತರ ಲೋಕಭವನಕ್ಕೆ ತೆರಳಿ ರಾಜ್ಯಪಾಲರಿಗೆ ಮನವಿ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಡವರ ಕೆಲಸದ ಸಾಂವಿಧಾನಿಕ ಹಕ್ಕನ್ನು ಕಸಿದುಕೊಳ್ಳುವ ವಿಬಿ ಜಿ ರಾಮ್ ಜಿ ಕಾಯ್ದೆಯು ಗ್ರಾಮೀಣ ಪ್ರದೇಶದ ಬಡ ಕಾರ್ಮಿಕರಿಗೆ ಮಾರಕವಾಗಿದೆ ಎಂದರು. ಕರ್ನಾಟಕವೊಂದರಲ್ಲೇ ಸುಮಾರು 71 ಲಕ್ಷ ಜನ ಕಾರ್ಮಿಕರಿದ್ದು, ವ್ಯವಸಾಯದ 60 ದಿನಗಳು ಕೂಲಿ ಕಾರ್ಮಿಕರು ಕೆಲಸ ಮಾಡುವಂತಿಲ್ಲ. ನೂತನ ಕಾಯ್ದೆಯಡಿ ಕೇಂದ್ರ ಸರ್ಕಾರ ಪೂರ್ಣ ಅನುದಾನ ನೀಡದೇ, ಕೇವಲ ಶೇ.60 ರಷ್ಟನ್ನು ಮಾತ್ರ ನೀಡುತ್ತಿದ್ದು, ಉಳಿದ ಶೇ. 40 ರಷ್ಟನ್ನು ರಾಜ್ಯ ಸರ್ಕಾರ ನೀಡಬೇಕಿದ್ದು, ಜನರಿಗೆ ಮಾರಕ ಕಾಯ್ದೆಯಾಗಿದೆ. ಗ್ರಾಮೀಣ ಕಾರ್ಮಿಕರ ಕೆಲಸ ಕಸಿದುಕೊಂಡಂತಾಗಿದೆ.

ಜನವಿರೋಧಿ ಕಾಯ್ದೆ ತರಲು ಕೇಂದ್ರಕ್ಕೆ ಆರ್‌ಎಸ್‌ಎಸ್ ಪ್ರೇರಣೆಯಾಗಿದೆ. ಬಡ ಜನರು ಆರ್ಥಿಕವಾಗಿ ಸ್ವಾವಲಂಬನೆ ಆಗಬಾರದು ಎಂಬುದು ಬಿಜೆಪಿ, ಆರ್‌ಎಸ್‌ಎಸ್‌ನ ದುರುದ್ದೇಶವಾಗಿದೆ. ಗ್ರಾಮ, ತಾಲ್ಲೂಕು, ಜಿಲ್ಲಾ ಹಂತಗಳಲ್ಲೂ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದರು.

ಮುಂದಿನ ಶೈಕ್ಷಣಿಕ ವರ್ಷಕ್ಕೆ 10 ಸಾವಿರಕ್ಕೂ ಹೆಚ್ಚು ಶಿಕ್ಷಕರ ನೇಮಕ

ಶಿವಮೊಗ್ಗ, ಜ.27– ಮುಂದಿನ ಶೈಕ್ಷಣಿಕ ವರ್ಷಕ್ಕೆ ಮುನ್ನ ರಾಜ್ಯ ಸರ್ಕಾರವು ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ 10,800 ಶಿಕ್ಷಕರ ನೇಮಕಾತಿ ಮಾಡುವ ಚಿಂತನೆ ನಡೆಸಿದೆ ಎಂದು ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ.




ಅವರು ಶಿವಮೊಗ್ಗದಲ್ಲಿ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ಶಾಲೆಗಳಲ್ಲಿ ಶಿಕ್ಷಕರ ಕೊರತೆಯನ್ನು ನೀಗಿಸುವ ಉದ್ದೇಶದಿಂದ ಸರ್ಕಾರವು ಈಗಾಗಲೇ 14,499 ಪೂರ್ಣಾವಧಿ ಶಿಕ್ಷಕರನ್ನು ನೇಮಕ ಮಾಡಿದ್ದು, ಮೊದಲ ಬಾರಿಗೆ 51,000 ಅತಿಥಿ ಶಿಕ್ಷಕರನ್ನು ಸಹ ನೇಮಕ ಮಾಡಿದೆ ಎಂದು ಹೇಳಿದರು.

ಶಿವಮೊಗ್ಗ ಜಿಲ್ಲೆಯ ಉಸ್ತುವಾರಿ ಸಚಿವರೂ ಆಗಿರುವ ಮಧು ಬಂಗಾರಪ್ಪ, ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಕಂಪ್ಯೂಟರ್ ಆಧಾರಿತ ಶಿಕ್ಷಣವನ್ನು ಬಲಪಡಿಸುವ ಉದ್ದೇಶದಿಂದ 5,000 ಶಾಲೆಗಳಲ್ಲಿ ಕಂಪ್ಯೂಟರ್ ಪ್ರಯೋಗಾಲಯಗಳು ಹಾಗೂ ಸ್ಮಾರ್ಟ್ ಕ್ಲಾಸ್‌ಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಹೇಳಿದರು. ಈ ಯೋಜನೆಗಳಿಗೆ ಸರ್ಕಾರವು 160 ಕೋಟಿ ರೂ. ಅನುದಾನವನ್ನು ಮೀಸಲಿಟ್ಟಿದೆ ಎಂದು ಅವರು ಮಾಹಿತಿ ನೀಡಿದರು.

'ಒನ್ ಡಿಸ್ಟ್ರಿಕ್ಟ್, ಒನ್ ಡೆಸ್ಟಿನೇಷನ್': ಇದೇ ವೇಳೆ, ಶಿವಮೊಗ್ಗ ಜಿಲ್ಲೆಯ ಸೊರಬ ತಾಲೂಕಿನ ಗೂಡವಿ ಪಕ್ಷಿಧಾಮವನ್ನು 'ಒನ್ ಡಿಸ್ಟ್ರಿಕ್ಟ್, ಒನ್ ಡೆಸ್ಟಿನೇಷನ್' ಯೋಜನೆಯಡಿ ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಸಚಿವರು ಹೇಳಿದರು. ಶ್ರೀ ಚಂದ್ರಗುಟ್ಟಿ ರೇಣುಕಾಂಬಾದೇವಿ ಅಭಿವೃದ್ಧಿ ಪ್ರಾಧಿಕಾರ ರಚನೆಗೆ ಸರ್ಕಾರ ಅನುಮೋದನೆ ನೀಡಿದ್ದು, ಯಾತ್ರಾಕೇಂದ್ರದ ಸಮಗ್ರಅಭಿವೃದ್ಧಿಗೆ ಕಾರ್ಯಯೋಜನೆ ರೂಪಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

'ತಟ್ಟೆ ಇಡ್ಲಿ ರಾದ್ಧಾಂತ' ಪತ್ತೇದಾರಿ ಹಾಸ್ಯ ನಾಟಕ

ಮೈಸೂರು, ಜ. 27– ರಂಗವಲ್ಲಿ ಸಂಸ್ಥೆಯು ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಬೆಂಗಳೂರು ಇವರ ಸಹಯೋಗದೊಂದಿಗೆ ಜ. 28 ಮತ್ತು 29 ರಂದು ಸಂಜೆ 7ಕ್ಕೆ ಕಲಾಮಂದಿರದ ಆವರಣದಲ್ಲಿರುವ ಕಿರುರಂಗಮಂದಿರದಲ್ಲಿ 'ತಟ್ಟೆ ಇಡ್ಲಿ ರಾದ್ಧಾಂತ' ಪತ್ತೇದಾರಿ ಹಾಸ್ಯ ನಾಟಕ ಪ್ರದರ್ಶಿಸಲಿದೆ. ರಂಗಾಯಣದ ಹಿರಿಯ ಕಲಾವಿದ ಮಾಯಸಂದ್ರ ಕೃಷ್ಣಪ್ರಸಾದ್ ರಚಿಸಿ, ನಿರ್ದೇಶಿಸಿರುವ ಈ ನಾಟಕಕ್ಕೆ ಮಧು ನೀನಾಸಂ ಬೆಳಕಿನ ವಿನ್ಯಾಸ, ಹೆಚ್.ಕೆ. ದ್ವಾರಕಾನಾಥ್ ರಂಗವಿನ್ಯಾಸ, ಉದಿತ್ ಹರಿತಸ್ ಹಿನ್ನೆಲೆ ಸಂಗೀತವಿದೆ. ಹೆಚ್ಚಿನ ವಿವರಗಳಿಗೆ 9964656482 ಸಂಪರ್ಕಿಸಬಹುದು.



ಕಾಂಗ್ರೆಸ್ ಸರ್ಕಾರದ ಲೂಟಿಗೆ ಕಡಿವಾಣ ಹಾಕಲು ಜಿ ರಾಮ್ ಜಿ ಕಾಯ್ದೆ ಜಾರಿ

ರಾಜ್ಯ ಬಿಜೆಪಿ ವಕ್ತಾರ ಎಂ.ಜಿ.ಮಹೇಶ್ ಸ್ಪಷ್ಟನೆ

ಮೈಸೂರು, ಜ.27(ಬಿಎಲ್‌ಯು)– ಮನರೇಗಾ ಮೂಲಕ ಕಾಂಗ್ರೆಸ್ ಸರ್ಕಾರದ ಲೂಟಿ ತಪ್ಪಿಸಲು ಕೇಂದ್ರ ಸರ್ಕಾರ ಜಿ ರಾಮ್ ಜಿ ಕಾಯ್ದೆ ಪರಿಚಯಿಸಿದೆ ಎಂದು ರಾಜ್ಯ ಬಿಜೆಪಿ ವಕ್ತಾರ ಎಂ.ಜಿ.ಮಹೇಶ್, ಕೈ ನಾಯಕರಿಗೆ ತಿರುಗೇಟು ನೀಡಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಇನ್ನು ಮುಂದೆ ಲೂಟಿ ಮಾಡಲು ತಮಗೆ ಅವಕಾಶ ದೊರೆಯದು ಎಂಬ ಹಿನ್ನೆಲೆಯಲ್ಲಿ ಕಾಂಗ್ರೆಸ್ ಸರ್ಕಾರ ಈ ಕಾಯ್ದೆ ವಿರೋಧಿಸುತ್ತಿದೆ ಎಂದು ಹೇಳಿದ್ದಾರೆ.

ಸಿಎಜಿ ಸೇರಿದಂತೆ ಇತರೆ ತನಿಖಾ ಸಂಸ್ಥೆಗಳ ವರದಿ ಪ್ರಕಾರ ಕಾಂಗ್ರೆಸ್ ಸರ್ಕಾರ ಮನರೇಗಾ ಕಾಯ್ದೆಯಿಂದ 500 ಕೋಟಿಗೂ ಹೆಚ್ಚು ಹಣ ಭ್ರಷ್ಟಾಚಾರ ನಡೆಸಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಲೆಲ್ಲಾ ಇಂತಹ ಲೂಟಿ ಸಾಮಾನ್ಯವಾಗಿರುತ್ತದೆ ಎಂದು ಆಪಾದಿಸಿದ್ದಾರೆ. ಭಾರತ ಜಗತ್ತಿನ ಆರ್ಥಿಕತೆಯಲ್ಲಿ 4ನೇ ದೊಡ್ಡ ಶಕ್ತಿಯಾಗುವ ಕಾಲಘಟ್ಟದಲ್ಲಿ ಕೇಂದ್ರ ಸರ್ಕಾರ ಸುಮಾರು ಒಂದು ಲಕ್ಷ ಕೋಟಿ ವಿನಿಯೋಗಿಸಿ ಅಭಿವೃದ್ಧಿ ಜೊತೆಗೆ ಉದ್ಯೋಗ ನೀಡುತ್ತಿದೆ ಎಂದು ತಿಳಿಸಿದ್ದಾರೆ.

ನರೇಂದ್ರ ಮೋದಿ ಅವರ ಸರ್ಕಾರದ ಸುಧಾರಣಾ ಕ್ರಮದಿಂದ ತಮ್ಮ ಸಂಪಾದನೆ ಕಡಿಮೆಯಾಗಿದೆ ಎಂದು ಕಾಂಗ್ರೆಸ್‌ನವರು ಈ ಕಾಯ್ದೆ ವಿರೋಧಿಸುತ್ತಿದ್ದಾರೆ ಎಂದು ಮಹೇಶ್ ಟೀಕಿಸಿದ್ದಾರೆ.

ಮೈಸೂರು ಮಿತ್ರ

ಮೈಸೂರಿನ ಹಲವೆಡೆ ಗಣರಾಜ್ಯೋತ್ಸವ...



ಮೈಸೂರು ಬಿಜೆಪಿ ಕಚೇರಿಯಲ್ಲಿ ಗಣರಾಜ್ಯೋತ್ಸವ ಆಚರಿಸಲಾಯಿತು. ಈ ವೇಳೆ ಸಂಸದ ಯದುವೀರ್ ಒಡೆಯರ್, ಮಾಜಿ ಶಾಸಕರೂ ಆದ ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಬಿಜೆಪಿ ರಾಜ್ಯ ಉಪಾಧ್ಯಕ್ಷರಾದ ರಾಜೇಂದ್ರ, ಮೈ.ವಿ. ರವಿಶಂಕರ್, ರಾಜ್ಯ ಸಂಚಾಲಕ ಫಣೀಶ್, ನಗರ ಪ್ರಧಾನ ಕಾರ್ಯದರ್ಶಿ ಸೋಮಸುಂದರ್, ಬಿ.ಎಂ.ರಘು, ರುದ್ರಮೂರ್ತಿ, ಮಾಧ್ಯಮ ವಕ್ತಾರರಾದ ಮೋಹನ್‌ಕುಮಾರ್, ನಂದಕುಮಾರ್, ಮುಖಂಡರಾದ ಶಿವರಾಜ್, ಕಾರ್ತಿಕ್, ಮರಿಯಪ್ಪ, ಹೇಮಂತ್, ರಾಜೇಂದ್ರ, ರಾಕೇಶ್, ಸಂಪತ್, ಕೃಷ್ಣಮೂರ್ತಿ, ರಾವತ್ ಉಪಸ್ಥಿತರಿದ್ದರು.



ಮೈಸೂರಿನ ಅಶೋಕಪುರಂನ ಭಾರತೀಯ ಬೌದ್ಧ ಮಹಾಸಭಾದ ಕರ್ನಾಟಕ ರಾಜ್ಯ (ದಕ್ಷಿಣ) ಪುರುಷ ಮತ್ತು ಮಹಿಳಾ ವಿಭಾಗದ ವತಿಯಿಂದ ಅಶೋಕಪುರಂನ ಅಂಬೇಡ್ಕರ್ ಉದ್ಯಾನವನದಲ್ಲಿ ಗಣರಾಜ್ಯೋತ್ಸವವನ್ನು ಸಂವಿಧಾನ ಪೀಠಿಕೆ ಓದುವ ಮೂಲಕ ಆಚರಿಸಲಾಯಿತು. ಈ ವೇಳೆ ಪಲ್ಲವಿ ಬೇಗಂ (ಅಧ್ಯಕ್ಷೆ), ಎಂ.ಸಿ.ಕವಿತಾ, ಪುಟ್ಟಮಣಿ, ಮಾಜಿ ಕಾರ್ಪೋರೇಟರ್ ಶಾರದಾ, ಭಾಗ್ಯಶ್ರೀ, ಸುಮತಿ, ಕಮಲ, ಜಯಮ್ಮ, ಚಂದ್ರಶೇಖರಯ್ಯ, ಸಿದ್ದಸ್ವಾಮಿ, ಮಹೇಶ್ ಪುಟ್ಟಣ್ಣ ಉಪಸ್ಥಿತರಿದ್ದರು.



77ನೇ ಗಣರಾಜ್ಯೋತ್ಸವದ ಅಂಗವಾಗಿ ಕೆ.ಆರ್.ಬ್ಯಾಂಕಿನ ಅಧ್ಯಕ್ಷ ಡಿ.ಬಸವರಾಜು (ಬಸಪ್ಪ) ಧ್ವಜಾರೋಹಣ ನೆರವೇರಿಸಿದರು. ಈ ವೇಳೆ ಉಪಾಧ್ಯಕ್ಷೆ ಸರ್ವಮಂಗಳ ನಿರ್ದೇಶಕರಾದ ಹೆಚ್.ವಾಸು, ನಂ.ಸಿದ್ದಪ್ಪ, ಪಂಚಾಕ್ಷರಿ, ಪಾರ್ಥಸಾರಥಿ, ಭಾಸ್ಕರ್, ಪ್ರತಿಧ್ವನಿ ಪ್ರಸಾದ್, ನಾಗ ಜ್ಯೋತಿ ಪ್ರಸಾದ್, ಅರುಣ ಸಿದ್ದಪ್ಪ, ತಾಯೂರು ಗಣೇಶ ಮೂರ್ತಿ, ಶಿವಪ್ರಕಾಶ್, ಪ್ರಭಾರ ವ್ಯವಸ್ಥಾಪಕ ಅನಂತವೀರಪ್ಪ ಇದ್ದರು.



ಮೈಸೂರು ತಾಲೂಕು ಹುಯಿಲಾಳು ಗ್ರಾಮದ ಶ್ರೀ ಮನೆ ಮಂಚಮ್ಮ ದೇವಸ್ಥಾನ ಸೇವಾ ಟ್ರಸ್ಟ್ ವತಿಯಿಂದ 77ನೇ ಗಣರಾಜ್ಯೋತ್ಸವ ಪ್ರಯುಕ್ತ ಟ್ರಸ್ಟ್ ಅಧ್ಯಕ್ಷ ಹುಯಿಲಾಳು ರಾಮಸ್ವಾಮಿ ಅಂಗನವಾಡಿ ಕೇಂದ್ರದ ಮಕ್ಕಳಿಗೆ ಸಿಹಿ ವಿತರಿಸಿ, ಕಾರ್ಯಕರ್ತೆಯರಿಗೆ ಅಂಬೇಡ್ಕರ್ ಭಾವಚಿತ್ರಗಳನ್ನು ನೀಡಿದರು. ಈ ವೇಳೆ ಹುಯಿಲಾಳು ಮಂಜುನಾಥ್, ಪ್ರಸಾದ್, ರೋಹಿಣಿ, ಚಂಗಪ್ಪ, ಪ್ರಭ, ರಾಮಮ್ಮ, ಜಯಮ್ಮ, ಲಕ್ಷ್ಮಮ್ಮ, ಹಾಗೂ ಮಕ್ಕಳು ಉಪಸ್ಥಿತರಿದ್ದರು



ಮೈಸೂರು ನಗರ (ಜಿಲ್ಲಾ) ಕನ್ನಡಪರ ಸಂಘಟನೆಯ ನಾಗರಿಕ ಹಿತರಕ್ಷಣಾ ವೇದಿಕೆಯ 37ನೇ ವಾರ್ಷಿಕೋತ್ಸವ ಹಾಗೂ 77ನೇ ಗಣರಾಜ್ಯೋತ್ಸವದ ಅಂಗವಾಗಿ ಕೋರ್ಟ್ ಮುಂಭಾಗ ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು. ಈ ವೇಳೆ ವೇದಿಕೆ ಅಧ್ಯಕ್ಷ ಮಿಲ್ಕ್ ಮಂಜು, ಡಾ.ರಾಜ್ ಸಂಘದ ಅಧ್ಯಕ್ಷ ಎಂ.ರಾಮೇಗೌಡ, ಪಾಲಿಕೆ ಮಾಜಿ ಸದಸ್ಯ ಪಿ.ದೇವರಾಜ್, ಕಾವಲುಪಡೆ ರಾಜ್ಯಾಧ್ಯಕ್ಷ ಕುಮಾರ್‌ಗೌಡ, ಸಂತೋಷ್‌ಗೌಡ, ಮಧುಗೌಡ, ರಂಗಪ್ಪಗೌಡ ಮತ್ತಿತರರು ಉಪಸ್ಥಿತರಿದ್ದರು.



ಮೈಸೂರಿನ ಗಂಗೋತ್ರಿ ಪಬ್ಲಿಕ್ ಶಾಲೆಯಲ್ಲಿ ಗಣರಾಜ್ಯೋತ್ಸವ ಆಚರಿಸಲಾಯಿತು. ಈ ವೇಳೆ ಮೈಸೂರು ಕ್ಲಸ್ಟರ್‌ನ ಡಾ.ವಿಜಯ್‌ಕುಮಾರ್, ಪ್ರಕಾಶ್, ಶಾಲಾ ಅಧ್ಯಕ್ಷ ಟಿ.ರಂಗಪ್ಪ, ನಿರ್ದೇಶಕ ದುಷ್ಯಂತ್, ಕಾಂತಿನಾಯಕ್, ಪ್ರಾಂಶುಪಾಲ ಸುನಿಲ್ ಕುಮಾರ್, ಮುಖ್ಯೋಪಾಧ್ಯಾಯ ಮೊಹಮ್ಮದ್ ಫಾರೂಕ್, ಶಿಕ್ಷಕ ವೃಂದ, ವಿದ್ಯಾರ್ಥಿಗಳು ಹಾಗೂ ಪೋಷಕರು ಉಪಸ್ಥಿತರಿದ್ದರು.



ಮೈಸೂರು ತಾಲೂಕಿನ ಮೆಲ್ಲಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 77ನೇ ಗಣರಾಜ್ಯೋತ್ಸವ ಆಚರಿಸಲಾಯಿತು. ಎಸ್.ಡಿ.ಎಂ.ಸಿ. ಅಧ್ಯಕ್ಷ ಮಂಚಪ್ಪ, ಉಪಾಧ್ಯಕ್ಷೆ ಶಶಿಕಲಾ, ಮುಖ್ಯ ಶಿಕ್ಷಕಿ ಪಿ.ಎನ್. ವೀಣಾ, ಸಾಹಿತಿ ಮತ್ತು ಶಿಕ್ಷಕ ಟಿ.ಸತೀಶ್ ಜವರೇಗೌಡ ಮತ್ತಿತರರು ಉಪಸ್ಥಿತರಿದ್ದರು.

ಸ್ವಾತಂತ್ರ್ಯ ಹೋರಾಟಗಾರರ ಆದರ್ಶ ಪಾಲಿಸಿ

ಮೈಸೂರು, ಜ.27(ಜಿಎ)–ನಾವೆಲ್ಲರೂ ಭಾರತೀಯರು, ಸಮಾನತೆಯುಳ್ಳವರು ಎನ್ನುವ ಆಶಯ ಇಟ್ಟುಕೊಂಡು ಸಮಾಜಕ್ಕಾಗಿ ಶ್ರಮಿಸಬೇಕು ಎಂದು ಶಾಸಕ ಜಿ.ಟಿ.ದೇವೇಗೌಡರು ಸಲಹೆ ನೀಡಿದರು.

ಚಾಮುಂಡೇಶ್ವರಿ ಕ್ಷೇತ್ರದ ಐಶ್ವರ್ಯ ರಾಯಲ್ ಬಡಾವಣೆಯಲ್ಲಿ ಆಯೋಜಿಸಿದ್ದ 77ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ದೇಶದ ಏಕತೆ, ಅಖಂಡತೆ,ಸಮಗ್ರತೆ ಐಕ್ಯತೆ,ಬದ್ಧತೆ,ಆರ್ಥಿಕತೆ ಈ ಎಲ್ಲಾ ದೃಷ್ಟಿಯಿಂದಲೂ ಒಟ್ಟಾಗಿ ಸೇರಿಸಿ ಭಾರತ ಒಂದೇ ಎನ್ನುವ ಸಂದೇಶ ನೀಡಿದ್ದಾರೆ. ತ್ಯಾಗ, ಬಲಿದಾನಗಳಿಂದ ಸ್ವಾತಂತ್ರ್ಯ ತಂದುಕೊಟ್ಟಿದ್ದಾರೆ. ಹೀಗೆ ಹೋರಾಟ ಮಾಡಿದ ಮಹನೀಯರನ್ನು ಸ್ಮರಿಸಿಕೊಳ್ಳಬೇಕು. ಅವರು ಹಾಕಿಕೊಟ್ಟ ಹಾದಿಯಲ್ಲಿ ಸಾಗಬೇಕು ಎಂದರು.

ಅಸಮಾನತೆ ತೊಲಗಿಸಿ ಸಮಾನತೆ ತರಬೇಕು. ಜಾತೀಯತೆ ಬಿಟ್ಟು ನಾವೆಲ್ಲರೂ ಸಮಾನರು ಎನ್ನುವುದನ್ನು ಹೇಳಬೇಕು. ಇಂದಿನ ಯುವಪೀಳಿಗೆ ದೇಶದ ಸಂಪತ್ತು. ಮುಂದಿನ ದಿನಗಳಲ್ಲಿ ನಾಯಕತ್ವ ಕೊಡುವವರಾಗಿದ್ದಾರೆ. ಬುದ್ಧ,ಬಸವ,ಡಾ.ಬಿ.ಆರ್. ಅಂಬೇಡ್ಕರ್, ಮಹಾತ್ಮ ಗಾಂಧೀಜಿ ಅವರ ಆದರ್ಶವನ್ನು ನಾವು ಪಾಲಿಸಬೇಕು ಎಂದು ತಿಳಿಸಿದರು.

ಪ್ರಪಂಚಕ್ಕೆ ಭಾರತ ಮಾದರಿಯಾಗಿದೆ. ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿದ ಅನೇಕರು ದೇಶಕ್ಕೆ ಭದ್ರವಾದ ಬುನಾದಿಯನ್ನು ಹಾಕಿಕೊಟ್ಟಿದ್ದಾರೆ. ಯುವ ಸಮಾಜಕ್ಕೆ ಆದರ್ಶಗಳನ್ನು ಪ್ರಾಮಾಣಿಕವಾಗಿ ತಿಳಿಸಬೇಕು. ನಮ್ಮ ಕರ್ತವ್ಯವನ್ನು ಅರಿತು ದೇಶ ಸೇವೆ ಮಾಡಬೇಕು. ಡಾ.ಬಿ.ಆರ್.ಅಂಬೇಡ್ಕರ್ ಪ್ರಪಂಚವೇ ಮೆಚ್ಚುವಂತಹ ಸಂವಿಧಾನ ಕೊಟ್ಟಿದ್ದಾರೆ. ಡಾ.ಬಿ.ಆರ್.ಅಂಬೇಡ್ಕರ್ ಅವರು ಕಂಡಿರುವ ಕನಸು ನನಸಾಗಬೇಕು ಎಂದರು.



ಚಾಮುಂಡೇಶ್ವರಿ ಕ್ಷೇತ್ರದ ಐಶ್ವರ್ಯ ರಾಯಲ್ ಬಡಾವಣೆಯಲ್ಲಿ ಆಯೋಜಿಸಿದ್ದ 77ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ಶಾಸಕ ಜಿ.ಟಿ.ದೇವೇಗೌಡ ಧ್ವಜಾರೋಹಣ ನೆರವೇರಿಸಿದರು.

77ನೇ ಗಣರಾಜ್ಯೋತ್ಸವದಲ್ಲಿ ಶಾಸಕ ಜಿ.ಟಿ.ದೇವೇಗೌಡ ಕಿವಿಮಾತು

> “ ಐಶ್ವರ್ಯ ರಾಯಲ್ ಬಡಾವಣೆ ಸೇರಿದಂತೆ ಸುತ್ತಮುತ್ತಲಿನ ಬಡಾವಣೆಗಳಿಗೆ ಶೀಘ್ರದಲ್ಲಿ ಸಮರ್ಪಕ ಕುಡಿಯುವ ನೀರನ್ನು ಒದಗಿಸಲಾಗುವುದು. ಪೈಪ್ ಲೈನ್ ಕಾಮಗಾರಿಗೆ ಟೆಂಡರ್ ಆಗಿದ್ದು, ಫೆಬ್ರವರಿ ತಿಂಗಳಲ್ಲಿ ಎಲ್ಲರಿಗೂ ಕಬಿನಿ ನೀರನ್ನು ಪೂರೈಸಲಾಗುವುದು.
>
> –ಜಿ.ಟಿ.ದೇವೇಗೌಡ, ಶಾಸಕ

ಪ್ರತಿ ಜನವರಿ 26ರಂದು ಗಣರಾಜ್ಯೋತ್ಸವ ಆಚರಿಸುತ್ತೇವೆ. ಸಂವಿಧಾನ ನಮಗೆ ಎಲ್ಲವನ್ನೂ ನೀಡಿದೆ. ಪ್ರತಿಯೊಬ್ಬರ ಹಕ್ಕನ್ನು ಕಾಪಾಡುತ್ತಿದೆ. ಇಂದು ದೇಶ ನಡೆಯುತ್ತಿರುವುದು ಸಂವಿಧಾನದ ತಳಹದಿಯಲ್ಲಿ. ಹಾಗಾಗಿ, ನಾವೆಲ್ಲರೂ ಸಂವಿಧಾನಕ್ಕೆ ಗೌರವ ನೀಡಿ, ಯುವ ಪೀಳಿಗೆಗೆ ಮಾರ್ಗದರ್ಶನ ನೀಡಬೇಕು ಎಂದು ಶಾಸಕ ಜಿ.ಟಿ.ದೇವೇಗೌಡರು ತಿಳಿಸಿದರು.

ಬಡಾವಣೆಯ ಎಲ್ಲರೂ ಒಟ್ಟಾಗಿ ಸೇರಿ ಗಣರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಿರುವುದು ಸಂತಸದ ವಿಚಾರ. ಸ್ಥಳೀಯವಾಗಿ ಒಟ್ಟಾಗಿ ರಾಷ್ಟ್ರೀಯ ಹಬ್ಬಗಳನ್ನು ಆಚರಣೆ ಮಾಡುವುದರಿಂದ ಒಗ್ಗಟ್ಟು ಕಾಯ್ದುಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖಂಡರಾದ, ಜಯಕುಮಾರ್, ಕೆ.ಚಂದ್ರಶೇಖರ್, ಆನಂದ್, ಮುಖ್ಯಾಧಿಕಾರಿಗಳಾದ ಸುಜಯ್, ಎಂ.ಎಂ.ಗ್ರೀನ್ಸ್ ಅಸೋಸಿಯೇಷನ್ ಕಾರ್ಯದರ್ಶಿ ಮೋಹನ್‌ಕುಮಾರ್, ಬಡಾವಣೆಯ ಮುಖಂಡರು, ಪದಾಧಿಕಾರಿಗಳು, ಸಾರ್ವಜನಿಕರು ಪಾಲ್ಗೊಂಡಿದ್ದರು.



ಮೈಸೂರಿನ ಕುವೆಂಪುನಗರದ ಶ್ರೀ ಕಾಗಿನೆಲೆ ಮಹಾಸಂಸ್ಥಾನ ಗುರುಪೀಠ ಶಿಕ್ಷಣ ಸಂಸ್ಥೆಯಲ್ಲಿ ನಡೆದ ಗಣರಾಜ್ಯೋತ್ಸವದಲ್ಲಿ ಮಾಜಿ ಶಾಸಕ ಎಂ.ಕೆ. ಸೋಮಶೇಖರ್ ಧ್ವಜಾರೋಹಣ ನೆರವೇರಿಸಿದರು. ಸಂಸ್ಥೆಯ ಕಾರ್ಯದರ್ಶಿ ಎಂ.ಪುಟ್ಟಬಸವೇಗೌಡ, ಬಿ.ಇಡಿ ಕಾಲೇಜಿನ ಪ್ರಾಂಶುಪಾಲೆ ವಿಶಾಲಾಕ್ಷಿ, ದೈಹಿಕ ಶಿಕ್ಷಣ ನಿರ್ದೇಶಕ ಸಣ್ಣರಾಮೇಗೌಡ, ಪಪೂ ಕಾಲೇಜಿನ ಪ್ರಾಂಶುಪಾಲೆ ಡಾ.ದಿವ್ಯಶ್ರೀ, ಸಹ ಪ್ರಾಧ್ಯಾಪಕರಾದ ಡಾ.ಪ್ರೇಮ್‌ಕುಮಾರ್, ಡಾ.ಶರತ್‌ಕುಮಾರ್, ಡಾ.ಸೆಲ್ವಕುಮಾರ್, ಚಂದ್ರಶೇಖರ್, ಬಸವರಾಜೇಗೌಡ, ಕೃಪಾನಿಧಿ, ನಾಗೇಶ್, ಕೃಷ್ಣಸ್ವಾಮಿ, ಸಿ.ಕೃಷ್ಣಮೂರ್ತಿ, ಮೋಹನ್‌ಕುಮಾರ್, ಮಹದೇವು ಇದ್ದರು.



ಮೈಸೂರಿನ ನಾಗರಿಕ ವೇದಿಕೆಯ ಪೂರ್ಣಪ್ರಜ್ಞಾ ವಿದ್ಯಾ ಕೇಂದ್ರ ಶಾಲೆಯಲ್ಲಿ 77ನೇ ಗಣರಾಜ್ಯೋತ್ಸವ ಆಚರಿಸಲಾಯಿತು. ವೇದಿಕೆ ಅಧ್ಯಕ್ಷ ರಂಗಯ್ಯ ಧ್ವಜಾರೋಹಣ ನೆರವೇರಿಸಿದರು. ಉಪಾಧ್ಯಕ್ಷ ಅರವಿಂದ್, ಕಾರ್ಯದರ್ಶಿ ಶ್ರೀಕಾಂತ್, ಜಂಟಿ ಕಾರ್ಯದರ್ಶಿ ರಮೇಶ್, ಖಜಾಂಚಿ ತ್ಯಾಗರಾಜು, ಶಾಲಾ ಸಮಿತಿ ಅಧ್ಯಕ್ಷ ಜೆ.ಲೋಕೇಶ್, ಸದಸ್ಯರಾದ ಕೃಷ್ಣ, ರೇವಣ್ಣ ರಾಜು, ಶಿವಣ್ಣ, ಶೈಲೇಂದ್ರ, ರಮೇಶ್, ಮುಖ್ಯೋಪಾಧ್ಯಾಯಿನಿ ಶ್ಯಾಮಲಾದೇವಿ, ಶಿಕ್ಷಕರು ಉಪಸ್ಥಿತರಿದ್ದರು. ಇದೇ ವೇಳೆ ಮಕ್ಕಳಿಂದ ಕಿರು ಭಾಷಣ ಏರ್ಪಡಿಸಲಾಗಿತ್ತು. ಮಕ್ಕಳು, ಪೋಷಕರಿಗೆ ಸಿಹಿ ವಿತರಿಸಲಾಯಿತು.



ಮೈಸೂರಿನ ಶಾರದಾದೇವಿ ನಗರದ ತಪೋವನ್ ಸೊಲೇಸ್ ಅಪಾರ್ಟ್‌ಮೆಂಟ್‌ನಲ್ಲಿ ನಡೆದ 77ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ 90 ವರ್ಷದ ನಿವೃತ್ತ ಪ್ರೊಫೆಸರ್ ಲೀಲಾ ಮುಲ್ಲಟ್ಟಿ ಅವರು ಧ್ವಜಾರೋಹಣ ನೆರವೇರಿಸಿದರು. ಈ ವೇಳೆ ಸಂವಿಧಾನದ ಪ್ರತಿಯನ್ನು ಧ್ವಜ ಸ್ತಂಭದ ಬಳಿ ಇರಿಸಿ, ಗೌರವಿಸಲಾಯಿತು.

ವಿದ್ಯಾವರ್ಧಕ ಶಿಕ್ಷಣ ಸಂಸ್ಥೆಯಲ್ಲಿ ಗಣರಾಜ್ಯೋತ್ಸವ

ಮೈಸೂರು,ಜ.27–ಮಕ್ಕಳು ಸರಿಯಾದ ನಿರ್ಣಯ ತೆಗೆದುಕೊಂಡಾಗ ಮಾತ್ರ ವಿಕಸಿತ ಭಾರತ ನಿರ್ಮಾಣ ಸಾಧ್ಯ ಎಂದು ಮೈಸೂರು ವಿಶ್ವವಿದ್ಯಾನಿಲಯದ ಮಾಜಿ ಸಿಂಡಿಕೇಟ್ ಸದಸ್ಯ ಹಾಗೂ ವಕೀಲ ಗೋಕುಲ್ ಗೋವರ್ಧನ್ ಅಭಿಪ್ರಾಯಪಟ್ಟರು.

ನಗರದ ಶೇಷಾದ್ರಿ ಅಯ್ಯರ್ ರಸ್ತೆಯಲ್ಲಿರುವ ವಿದ್ಯಾವರ್ಧಕ ಶಿಕ್ಷಣ ಸಂಸ್ಥೆಗಳ ಸಮುಚ್ಚಯದಲ್ಲಿ ಆಯೋಜಿಸಲಾಗಿದ್ದ 77ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡುತ್ತಿದ್ದ ಅವರು ವಿಶ್ವದ 4ನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿರುವ ವಿಕಸಿತ ಭಾರತ ನಮ್ಮದು. ತ್ಯಾಗ, ಬಲಿದಾನ ಮತ್ತು ಶ್ರಮದಿಂದ ವ್ಯಕ್ತಿಗಳು ಯಶಸ್ಸನ್ನು ಗಳಿಸಲು ಸಾಧ್ಯ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಗೌರವ ಕೋಶಾಧ್ಯಕ್ಷ ಶ್ರೀಶೈಲ ರಾಮಣ್ಣನವರ್ ಮಾತನಾಡಿ, ವಂದೇ ಮಾತರಂ ಎಂಬ ಸ್ಫೂರ್ತಿದಾಯಕ ಗೀತೆಯು ರಚನೆಯಾಗಿ 150 ವರ್ಷಗಳು ಸಂದಿವೆ. ಸಂವಿಧಾನದ ಶಕ್ತಿ, ಪ್ರಜಾಪ್ರಭುತ್ವದ ಧ್ಯೇಯ, ಸ್ವಾತಂತ್ರ್ಯ ಹೋರಾಟಗಾರರು ಸಲ್ಲಿಸಿದ ತ್ಯಾಗ ಬಲಿದಾನಗಳ ಪರವಾಗಿ ದೇಶವು ಜಗತ್ತಿನಲ್ಲೇ ಬಹುದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿ ಹೊರಹೊಮ್ಮಿದೆ ಎಂದರು. ವಿದ್ಯಾವರ್ಧಕ ಸಂಘದ ಆಡಳಿತ ಮಂಡಳಿ ಸದಸ್ಯ ಶಿವಲಿಂಗಯ್ಯ, ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ಎಸ್.ಮರೀಗೌಡ, ಕಾನೂನು ಕಾಲೇಜಿನ ಪ್ರಾಂಶುಪಾಲ ಡಾ.ದೀಪು.ಪಿ, ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಮಹದೇವಸ್ವಾಮಿ.ಪಿ, ಪ್ರೌಢಶಾಲಾ ವಿಭಾಗದ ಉಪಪ್ರಾಂಶುಪಾಲ ಕೆ.ಎಂ.ಸುರೇಶ್, ಅಧ್ಯಾಪಕರು, ಅಧ್ಯಾಪಕೇತರರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.





ಮೈಸೂರಿನ ಸರ್.ಎಂ. ವಿಶ್ವೇಶ್ವರಯ್ಯ ನಲ್ಲಿ ಮತ್ತು ಒಳಚರಂಡಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಸಂಘದ ಕಚೇರಿಯಲ್ಲಿ ಗಣರಾಜ್ಯೋತ್ಸವ ಆಚರಿಸಲಾಯಿತು. ಅಧ್ಯಕ್ಷ ಜಯನಗರ ಮಹೇಶ್, ಖಜಾಂಚಿ ರವಿಕುಮಾರ್, ನಿರ್ದೇಶಕರಾದ ಚಂದ್ರೇಗೌಡ ಬೋಗಾದಿ, ಕುಮಾರ್, ರುದ್ರಸ್ವಾಮಿ, ಕೊಪ್ಪಲ್ ಕುಮಾರ್, ದಿನೇಶ್ (ಹಾಲಪ್ಪ) ಇನ್ನಿತರರು ಉಪಸ್ಥಿತರಿದ್ದರು.

ಸಂಗೀತ ವಿಶ್ವವಿದ್ಯಾನಿಲಯದಲ್ಲಿ ಮಹನೀಯರಿಗೆ ಪುಷ್ಪಾರ್ಚನೆ

ಮೈಸೂರು, ಜ.27(ಎಂಕೆ)– ಮೈಸೂರಿನ ಸರ್ದಾರ್ ವಲ್ಲಭಬಾಯಿ ಪಟೇಲ್ ನಗರದಲ್ಲಿರುವ ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ನೂತನ ಕ್ಯಾಂಪಸ್‌ನಲ್ಲಿ 77ನೇ ಗಣರಾಜ್ಯೋತ್ಸವ ಆಚರಿಸಲಾಯಿತು.

ಮಹಾತ್ಮ ಗಾಂಧೀಜಿ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಮಾಡಿ, ಧ್ವಜಾರೋಹಣ ನೆರವೇರಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದ ಕುಲಪತಿ ಪ್ರೊ.ನಾಗೇಶ್ ವಿ.ಬೆಟ್ಟಕೋಟೆ ಮಾತನಾಡಿ, ಭಾರತ ಸಂವಿಧಾನ ವಿಶ್ವದ ಅತೀ ದೊಡ್ಡ ಲಿಖಿತ ಸಂವಿಧಾನವಾಗಿದ್ದು, ವಿಶ್ವಕ್ಕೆ ಮಾದರಿಯಾಗಿದೆ. ದೇಶದ ಸಾಧನೆಗಳ ಸ್ಮರಣೆಯೊಂದಿಗೆ ವಿಜ್ಞಾನ–ತಂತ್ರಜ್ಞಾನ, ಕೃಷಿ ಮತ್ತು ಕೈಗಾರಿಕಾ ಕ್ಷೇತ್ರದ ಮುನ್ನೋಟವನ್ನು ತಿಳಿಯುವ ದಿನ ಇದಾಗಿದೆ ಎಂದರು.

ಸಂಗೀತ ವಿವಿಯ ಹೊಸ ಕ್ಯಾಂಪಸ್‌ನಲ್ಲಿ ಮೊದಲ ಬಾರಿಗೆ ಗಣರಾಜ್ಯೋತ್ಸವ ಆಚರಣೆ ಮಾಡುತ್ತಿರುವುದು ಸಂತಸದ ವಿಚಾರವಾಗಿದ್ದು, ವಿವಿಯು ದೇಶದ ಎರಡನೇ ಮತ್ತು ರಾಜ್ಯದ ಪ್ರಥಮ ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಹಾಗೆಯೇ ಔಟ್‌ಲುಕ್ ಮರವಣಿಗೆಯಲ್ಲಿ 7ನೇ ಸ್ಥಾನ ಪಡೆದುಕೊಂಡಿದೆ ಎಂದು ತಿಳಿಸಿದರು. ಕುಲಸಚಿವ(ಮೌಲ್ಯಮಾಪನ) ಪ್ರೊ.ಎಂ.ಜಿ. ಮಂಜುನಾಥ, ಹಣಕಾಸು ಅಧಿಕಾರಿ ಸಿ.ಪಿ.ಸೌಮ್ಯಶ್ರೀ ಉಪಸ್ಥಿತರಿದ್ದರು.



ಮೈಸೂರಿನ ಸರ್ದಾರ್ ವಲ್ಲಭಭಾಯಿ ಪಟೇಲ್ ನಗರದಲ್ಲಿರುವ ಸಂಗೀತ ವಿವಿ ನೂತನ ಕ್ಯಾಂಪಸ್‌ನಲ್ಲಿ 77ನೇ ಗಣರಾಜ್ಯೋತ್ಸವ ಆಚರಿಸಲಾಯಿತು. ಕುಲಪತಿ ಪ್ರೊ.ನಾಗೇಶ್ ವಿ.ಬೆಟ್ಟಕೋಟೆ ಧ್ವಜಾರೋಹಣ ನೆರವೇರಿಸಿದರು.



ಅನಂತಗೀತ ವಿದ್ಯಾಲಯದಲ್ಲಿ ಗಣರಾಜ್ಯೋತ್ಸವ ಅಂಗವಾಗಿ ಮುಖ್ಯ ಶಿಕ್ಷಕ ಲೋಕೇಶ ಧ್ವಜಾರೋಹಣ ನೆರವೇರಿಸಿದರು. ಶಿಕ್ಷಕರಾದ ಉಷಾ, ಕಾವೇರಮ್ಮ, ಜಮುನಾ, ವಿನುತಾ, ಶಿಲ್ಪ, ಮೇಲ್ವಿಚಾರಕ ಮಾದೇಶ್, ವಿದ್ಯಾರ್ಥಿಗಳು ಹಾಜರಿದ್ದರು.

ಮೈಸೂರು ಕಾಂಗ್ರೆಸ್ ಕಚೇರಿಯಲ್ಲಿ ಗಣರಾಜ್ಯೋತ್ಸವ ಆಚರಣೆ

ಮೈಸೂರು, ಜ.27(ಜಿಎ)–ಮೈಸೂರು ನಗರ ಹಾಗೂ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಜಂಟಿಯಾಗಿ ಕಾಂಗ್ರೆಸ್ ಭವನದ ಮುಂಭಾಗ 77ನೇ ಗಣರಾಜ್ಯೋತ್ಸವ ಆಚರಿಸಲಾಯಿತು.

ಧ್ವಜಾರೋಹಣ ನೆರವೇರಿಸಿ ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್ ಮಾತನಾಡಿ, ಭಾರತದ ಸಮಗ್ರತೆ, ಬಲಿಷ್ಠತೆಗಾಗಿ ಸ್ವಾತಂತ್ರ್ಯ ಪೂರ್ವದಲ್ಲಿ ಭಾರತ ರಾಷ್ಟ್ರೀಯ ಕಾಂಗ್ರೆಸ್ಸಿನ ಲಕ್ಷಾಂತರ ಸ್ವಾತಂತ್ರ್ಯ ಸೇನಾನಿಗಳ ಬಲಿದಾನವಾಗಿದೆ. ಇದನ್ನು ಜಗತ್ತು ಮರೆಯಲು ಹಾಗೂ ಇತಿಹಾಸವನ್ನ ತಿರುಚಲು ಯಾರಿಂದಲೂ ಸಾಧ್ಯವಿಲ್ಲ. ಭಾರತದ ಇಂದಿನ ಸುಭದ್ರ ಸರ್ಕಾರ ಮತ್ತು ಸಮಗ್ರತೆಗೆ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅಧ್ಯಕ್ಷತೆಯಲ್ಲಿ ಜಾರಿಯಾದ ಭಾರತದ ಸಂವಿಧಾನದ ಮೂಲ ಬೇರುಗಳೇ ಕಾರಣ ಎಂದರು.



ಮೈಸೂರು ನಗರ ಹಾಗೂ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಕಾಂಗ್ರೆಸ್ ಭವನದ ಮುಂಭಾಗ ಗಣರಾಜ್ಯೋತ್ಸವ ಆಚರಿಸಲಾಯಿತು.

ಅಂದು ಭಾರತದ ರಾಷ್ಟ್ರೀಯ ಕಾಂಗ್ರೆಸ್ ಬ್ರಿಟಿಷ್ ಸಾಮ್ರಾಜ್ಯದ ವಿರುದ್ಧ ಸ್ವಾತಂತ್ರ್ಯ ಚಳುವಳಿಯ ಮೂಲಕ ದೇಶ ವ್ಯಾಪಿ ರಕ್ತ ಕ್ರಾಂತಿಯನ್ನೇ ಮಾಡಿತ್ತು ಈಗ ಭಾರತದ ಪ್ರತಿಯೊಬ್ಬ ಕಾಂಗ್ರೆಸ್ ಕಾರ್ಯಕರ್ತ ಹಾಗೂ ಪದಾಧಿಕಾರಿ ಸ್ವತಂತ್ರ ಭಾರತದಲ್ಲಿ ಸಂವಿಧಾನದ ಉಳಿವಿಗಾಗಿ ಎರಡನೇ ಮಹಾಕ್ರಾಂತಿಯನ್ನು ಆರಂಭಿಸಬೇಕಾದ ಅನಿವಾರ್ಯತೆ ದೇಶದಲ್ಲಿ ಸೃಷ್ಟಿಯಾಗಿದೆ ಎಂದು ತಿಳಿಸಿದರು.

ಒಬ್ಬ ರಾಜಕಾರಣಿಗೆ ಶಾಸಕನಾಗುವುದು, ಮಂತ್ರಿ ಆಗೋದು ಬಹುದೊಡ್ಡ ಸಾಧನೆ ಅಲ್ಲ. ಅಂತಹ ಜವಾಬ್ದಾರಿ ಸ್ಥಾನಗಳನ್ನ ಸಾಮಾಜಿಕ ಬದ್ಧತೆ ಮತ್ತು ದೇಶದ ಹಿತಾಸಕ್ತಿಗೋಸ್ಕರ ತನ್ನನ್ನು ತಾನು ಸಮರ್ಪಿಸಿಕೊಳ್ಳುವುದು ಕೂಡ ದೇಶಭಕ್ತಿಯ ಮೊದಲ ಹಂತ. ಸಾರ್ವಜನಿಕ ಜೀವನದಲ್ಲಿ ಕೆಲಸ ನಿರ್ವಹಿಸುವ ಪ್ರತಿ ಕ್ಷೇತ್ರದಲ್ಲಿ ದೇಶದ ಹಿತಾಸಕ್ತಿಗೆ ಬದಲಾಗಿ ಜಾತಿ, ಧರ್ಮ ಹಾಗೂ ಸ್ವಾರ್ಥದ ಬದುಕು ಹೆಗ್ಗಿಲ್ಲದೆ ಮುಂದುವರಿದರೆ ಭಾರತ ಮತ್ತೊಮ್ಮೆ ಅಪಾಯಸ್ಥಾನದಲ್ಲಿ ನಿಲ್ಲಬೇಕಾಗುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಮಹಿಳಾ ಪದಾಧಿಕಾರಿಗಳು ಸಂವಿಧಾನ ಪೀಠಿಕೆ ಓದಿದರು. ಶಾಸಕ ಕೆ.ಹರೀಶ್‌ಗೌಡ, ಹಿರಿಯ ಪದಾಧಿಕಾರಿಗಳಾದ ಚಿಕ್ಕಣ್ಣ, ಭಾಸ್ಕರ್ ಗೌಡ, ಎಂ.ಶಿವಣ್ಣ, ರಮೇಶ್, ನಾಗರಾಜ್ ಎಡತಲೆ ಮಂಜುನಾಥ್, ಶಿವಪ್ರಸಾದ್, ಮೋದಾಮಣಿ, ಎಂ.ಕೆ.ಅಶೋಕ್, ಶಾಮ ಯೋಗೀಶ್, ನಾಗೇಶ್, ವೆಂಕಟಸುಬ್ಬಯ್ಯ, ಸುನಂದ್‌ಕುಮಾರ್, ಡೈರಿ ವೆಂಕಟೇಶ್, ಡಾ.ಸುಜಾತ, ಗಿರೀಶ್, ಸುರೇಶ್ ಪಾಳ್ಯ, ಮೋಸಿನ್ ಖಾನ್ ಹಾಗೂ ಸೇವಾದಳದ ವಿವಿಧ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

ಸಂವಿಧಾನಕ್ಕೆ ಬದ್ಧರಾಗಿ ಬದುಕುವುದು ಇಂದಿನ ತುರ್ತು ಅಗತ್ಯ



ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಬೋಸರಾಜು ಧ್ವಜವಂದನೆ ಸ್ವೀಕರಿಸಿದರು.

ಮಡಿಕೇರಿ, ಜ.27– ಸಮಾನತೆ, ಸ್ವಾತಂತ್ರ್ಯ ಮತ್ತು ಭ್ರಾತೃತ್ವಕ್ಕೆ ನಿಜವಾದ ಅರ್ಥ ಸಿಗಬೇಕಾದರೆ, ನಾವೆಲ್ಲರೂ ಸಂವಿಧಾನಕ್ಕೆ ಬದ್ಧರಾಗಿ ಬದುಕುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್. ಬೋಸರಾಜು ತಿಳಿಸಿದ್ದಾರೆ.

ನಗರದ ನಗರದ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ 77ನೇ ಗಣರಾಜ್ಯೋತ್ಸವದಲ್ಲಿ ಧ್ವಜಾರೋಹಣ ನೆರವೇರಿಸಿ, ಪೊಲೀಸ್ ಇಲಾಖೆಯಿಂದ ಧ್ವಜ ವಂದನೆ ಸ್ವೀಕರಿಸಿ ಮಾತನಾಡಿದ ಅವರು, ವ್ಯಕ್ತಿಗಿಂತ ಸಮಾಜ ಮುಖ್ಯ, ಸಮಾಜಕ್ಕಿಂತ ದೇಶ ಮುಖ್ಯ' ಎಂಬ ಧ್ಯೇಯದೊಂದಿಗೆ, ಸಂವಿಧಾನದ ಆಶಯಗಳನ್ನು ಎತ್ತಿ ಹಿಡಿಯುತ್ತಾ ನಾವೆಲ್ಲರೂ ಮುನ್ನಡೆಯೋಣ ಎಂದು ಹೇಳಿದರು.

ಕಾರ್ಯಕ್ರಮಕ್ಕೂ ಮುನ್ನ ಪೊಲೀಸ್ ಇಲಾಖೆ, ಗೃಹ ರಕ್ಷಕ ದಳ, ವಿವಿಧ ಶಾಲಾ ಕಾಲೇಜುಗಳ ಎನ್‌ಸಿಸಿ, ಕೊಡಿಗೆ ಸೈನಿಕ ಶಾಲೆ, ಸ್ಕೌಟ್ಸ್ ಅಂಡ್ ಗೈಡ್ಸ್ ತಂಡದಿಂದ ಆಕರ್ಷಕ ಪಥಸಂಚಲನ ನಡೆಯಿತು. ವಿವಿಧ ಶಾಲಾ ಕಾಲೇಜು ವಿದ್ಯಾರ್ಥಿಗಳು ಪ್ರದರ್ಶಿಸಿದ ಸಾಂಸ್ಕೃತಿಕ ಕಾರ್ಯಕ್ರಮ ನೆರೆದಿದ್ದವರ ಮನ ಸೆಳೆಯಿತು. ಇದೇ ಸಂದರ್ಭ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರನ್ನು ಗೌರವಿಸಲಾಯಿತು. ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲಾಯಿತು.

ಶಾಸಕ ಡಾ.ಮಂತರ್ ಗೌಡ, ಕ್ರೀಡಾ ಪ್ರಾಧಿಕಾರ ಉಪಾಧ್ಯಕ್ಷ ಸಿ.ಎಸ್.ಅರುಣ್ ಮಾಚಯ್ಯ, ನಗರಸಭೆ ಅಧ್ಯಕ್ಷೆ ಪಿ.ಕಲಾವತಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮೆಹರೋಜ್ ಖಾನ್, ಜಿಲ್ಲಾ ಅಧ್ಯಕ್ಷ ಧರ್ಮಜ ಉತ್ತಪ್ಪ, ಜಿಲ್ಲಾಧಿಕಾರಿ ಎಸ್.ಜೆ.ಸೋಮಶೇಖರ್, ಜಿ.ಪಂ. ಸಿಇಒ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಎನ್. ಬಿಂದುಮಣಿ , ಲೋಕಾಯುಕ್ತ ಎಸ್.ಪಿ. ದಿನೇಶ್ ಕುಮಾರ್, ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯ, ಉಪ ಅರಣ್ಯ ಸಂರಕ್ಷಣಾಧಿಕಾರಿ ಅಭಿಷೇಕ್, ಉಪ ವಿಭಾಗಾಧಿಕಾರಿ ನಿತಿನ್ ಚಕ್ಕಿ, ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

ಇಂದು ನಗರಸಭೆ ಆಯವ್ಯಯ ಪೂರ್ವಭಾವಿ ಸಭೆ

ಮಡಿಕೇರಿ, ಜ.27– ನಗರಸಭೆ ಆಯವ್ಯಯ ತಯಾರಿಸುವ ಸಲುವಾಗಿ ಈ ಸಾಲಿನ ಆದಾಯ ವ್ಯಯದ ಬಗ್ಗೆ ಸೂಕ್ತ ಸಲಹೆ ಸೂಚನೆಗಳನ್ನು ಪಡೆಯಲು ನಗರಸಭಾ ಅಧ್ಯಕ್ಷೆ ಪಿ.ಕಲಾವತಿ ಅಧ್ಯಕ್ಷತೆಯಲ್ಲಿ ಹಾಗೂ ಚುನಾಯಿತ ಆಡಳಿತ ಸದಸ್ಯರ ಉಪಸ್ಥಿತಿಯಲ್ಲಿ ಜ., 28 ರ ಮಧ್ಯಾಹ್ನ 3.30 ಗಂಟೆಗೆ ನಗರದ ಕಾವೇರಿ ಕಲಾಕ್ಷೇತ್ರದಲ್ಲಿ ಪೂರ್ವಭಾವಿ ಸಭೆ ನಡೆಯಲಿದೆ.

ಈ ಸಭೆಗೆ ಹಿರಿಯ ನಾಗರಿಕರು, ನೋಂದಾಯಿತ ಸಂಘ ಸಂಸ್ಥೆಗಳು, ಎನ್‌ಜಿಒಗಳು ಮತ್ತು ಚುನಾಯಿತ ಸ್ಥಳೀಯ ಸಂಸ್ಥೆಯ ಮಾಜಿ ಜನಪ್ರತಿನಿಧಿಗಳು ಹಾಗೂ ಆಸಕ್ತಿಯುಳ್ಳ ಸಾರ್ವಜನಿಕರು ಹಾಜರಾಗಿ ತಮ್ಮ ಸೂಕ್ತ ಸಲಹೆ ಸೂಚನೆ ನೀಡುವಂತೆ ನಗರಸಭೆ ಪೌರಾಯುಕ್ತ ಎಚ್.ಆರ್.ರಮೇಶ್ ನೀಡಿರುವ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಲವ್ ಜಿಹಾದ್, ಮತಾಂತರ ಖಂಡಿಸಿ ಬೃಹತ್ ಪ್ರತಿಭಟನೆ



ಪ್ರತಿಭಟನಾ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದ ಹಿಂದೂ ಪರ ಸಂಘಟನೆಗಳ ಕಾರ್ಯಕರ್ತರು

ಸಿದ್ದಾಪುರ, ಜ.27– ಲವ್ ಜಿಹಾದ್ ಮತ್ತು ಮತಾಂತರ ಪ್ರಕರಣವನ್ನು ಖಂಡಿಸಿ ಹಿಂದೂ ಸುರಕ್ಷಾ ಸಮಿತಿ ವತಿಯಿಂದ ಸಿದ್ದಾಪುರದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು. ಶ್ರೀ ಅಯ್ಯಪ್ಪ ದೇವಸ್ಥಾನದ ಬಳಿಯಿಂದ ಬಸ್ ನಿಲ್ದಾಣದವರೆಗೆ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿ ಮತಾಂಧ ಶಕ್ತಿಗಳು ನಡೆಸುತ್ತಿರುವ ಲವ್ ಜಿಹಾದ್ ಮತ್ತು ಲ್ಯಾಂಡ್ ಜಿಹಾದ್ ವಿರುದ್ಧ ಘೋಷಣೆ ಮೊಳಗಿಸಿದರು. ಇಂತಹ ವಿಚಾರಗಳ ಕುರಿತು ಸರಕಾರ ಮತ್ತು ಪೊಲೀಸ್ ಇಲಾಖೆ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ವಿವಿಧ ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ಆಗ್ರಹಿಸಿದರು.

ಬಸ್ ನಿಲ್ದಾಣದಲ್ಲಿ ನಡೆದ ಪ್ರತಿಭಟನಾ ಸಭೆಯಲ್ಲಿ ಮಾತನಾಡಿದ ಹಿಂದೂ ಸುರಕ್ಷಾ ಸಮಿತಿ ಸಂಯೋಜಕ ಕುಕ್ಕೇರ ಅಜಿತ್, ಲವ್ ಜಿಹಾದ್ ಹಾಗೂ ಲ್ಯಾಂಡ್ ಜಿಹಾದ್ ವಿರುದ್ಧ ಹಿಂದೂಗಳು ಜಾಗೃತರಾಗಬೇಕು. ಪ್ರೀತಿ ಪ್ರೇಮದ ನಾಟಕವಾಡಿ ಹಿಂದೂ ಯುವತಿಯರನ್ನು ಲವ್ ಜಿಹಾದ್ ಮಾಡಲಾಗುತ್ತಿದೆ ಎಂದು ಆರೋಪಿಸಿದ ಅವರು, ಜಿಲ್ಲೆಯಲ್ಲಿ ಲ್ಯಾಂಡ್ ಜಿಹಾದ್ ನಡೆಯುತ್ತಿದೆ. ಈ ಬಗ್ಗೆ ಹಿಂದೂ ಸಮುದಾಯ ಜಾಗೃತಿ ವಹಿಸಬೇಕೆಂದರು.

ಖ್ಯಾತ ವಾಗ್ಮಿ ಹಾಗೂ ಹಿಂದೂ ಪರ ಸಂಘಟನೆ ಮುಖಂಡ ಪುತ್ತೂರಿನ ಗುಣರಾಜ್ ಭಟ್ ಮಾತನಾಡಿ, ಲವ್ ಜಿಹಾದ್ ಪ್ರಕರಣ ಕೇವಲ ಜಿಲ್ಲೆಗೆ ಮಾತ್ರ ಸೀಮಿತವಾಗಿಲ್ಲ. ಇಡೀ ದೇಶಾದ್ಯಂತ ಹಿಂದೂ ಹುಡುಗಿಯರನ್ನು ಗುರಿ ಮಾಡಲಾಗುತ್ತಿದೆ. ಇಂತಹ ಪ್ರಕರಣಗಳ ಬಗ್ಗೆ ಪೊಲೀಸ್ ಇಲಾಖೆ ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು. ತಪ್ಪಿದಲ್ಲಿ ಉಗ್ರ ಹೋರಾಟ ಮಾಡುವುದು ಅನಿವಾರ್ಯವಾಗುತ್ತದೆ ಎಂದು ಎಚ್ಚರಿಸಿದರು.

ಮಾಜಿ ಸಚಿವ ಎಂ.ಪಿ.ಅಪ್ಪಚ್ಚು ರಂಜನ್, ಮಾಜಿ ಸಭಾಪತಿ ಕೆಜಿ.ಬೋಪಯ್ಯ, ಮುಖಂಡರಾದ ಉತ್ತಪ್ಪ, ರಮೇಶ್, ಅನಿತಾ ಪೂವಯ್ಯ, ಚಂದ್ರು, ಮತ್ತಿತರರು ಪ್ರತಿಭಟನಾ ಸಭೆಯಲ್ಲಿ ಪಾಲ್ಗೊಂಡಿದ್ದರು.

ಹಿಂದೂಗಳು ಒಗ್ಗಟ್ಟಿನಿಂದ ಕಾರ್ಯ ನಿರ್ವಹಿಸಿದಾಗ ಮಾತ್ರ ಜಗತ್ತಿನ ಉಳಿವು



ಮೆರವಣಿಗೆಯಲ್ಲಿ ಕೊಡಗಿನ ವೇಷಭೂಷಣದೊಂದಿಗೆ ಪಾಲ್ಗೊಂಡಿದ್ದ ಬಾಂಧವರು

ವಿರಾಜಪೇಟೆ, ಜ.27–ಜಗತ್ತು ಉಳಿಯಬೇಕಾದರೆ ಸಮಾಜದಲ್ಲಿ ಹಿಂದುಗಳು ಒಗ್ಗಟ್ಟಿನಿಂದ ನಾವೆಲ್ಲಾ ಒಂದು ಎಂಬಂತೆ ಕಾರ್ಯ ನಿರ್ವಹಿಸಿದಾಗ ಮಾತ್ರ ಸಾಧ್ಯ ಎಂದು ಆರ್‌ಎಸ್‌ಎಸ್‌ನ ದಕ್ಷಿಣ ಕರ್ನಾಟಕ ಪ್ರಾಂತ ಸಹ ಕಾರ್ಯನಿರ್ವಾಹಕ ಪಿ.ಎಸ್.ಪ್ರಕಾಶ್ ಹೇಳಿದ್ದಾರೆ.

ಸಮೀಪದ ಅಮ್ಮತ್ತಿ ಕೊಡವ ಸಮಾಜದ ಆವರಣದಲ್ಲಿ ಹಿಂದೂ ಸಂಗಮ ಆಯೋಜನಾ ಸಮಿತಿ ಆಯೋಜಿಸಿದ್ದ ಅಮ್ಮತ್ತಿ ಕಾರ್ಮಾಡು ಕಾವಾಡಿ ಹಿಂದೂ ಸಂಗಮ ಸಮಾವೇಶ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹಿಂದೂಗಳು ಒಗ್ಗಟ್ಟಾಗಿ ತಮ್ಮ ಮಕ್ಕಳಿಗೆ ಸಂಸ್ಕೃತಿ ಸಂಸ್ಕಾರ ಪದ್ಧತಿ ಪರಂಪರೆಯನ್ನು ಕಲಿಸುವಂತಾಗಬೇಕು ಎಂದರು.

ಅಮ್ಮತ್ತಿ ಕೊಡವ ಸಮಾಜದ ಅಧ್ಯಕ್ಷ ಐನಂಡ ಪ್ರಕಾಶ್ ಮಾತನಾಡಿ, ಮೊದಲು ನಾವುಗಳು ಹಿಂದೂಗಳಾಗಿ ಹೀಗೆಯೇ ಮುಂದುವರಿದರೆ ದೇಶವನ್ನು ಬಲಿಷ್ಠಗೊಳಿಸಬಹುದು. ದೇಶದ ರಕ್ಷಣೆಗೆ ಒಗ್ಗಟ್ಟಿನಿಂದ ಕೆಲಸ ಮಾಡಬೇಕಾಗಿದೆ. ಕೂಲಿಗಾಗಿ ಬಂದವರನ್ನು ಕೇಳಿದರೆ ಅಸ್ಸಾಂನವರು ಎನ್ನುತ್ತಾರೆ ಇಲ್ಲಿಗೆ ಬಂದು ಪಡಿತರ ಮತ್ತು ಮತದಾರರ ಚೀಟಿ ಪಡೆದುಕೊಳ್ಳುತ್ತಾರೆ ಅದೇ ರೀತಿ ಬಾಂಗ್ಲಾ ದೇಶಿಗರು ಬಂದಿರಬಹುದು ಇಂತಹವರ ಬಗ್ಗೆ ಎಚ್ಚರದಿಂದ ಇದ್ದು, ಅವರ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಬೇಕು ಎಂದರು.

ಅಮ್ಮತ್ತಿ ಶ್ರೀ ಚೌಡೇಶ್ವರಿ ದೇವಸ್ಥಾನ ಸಮಿತಿ ಅಧ್ಯಕ್ಷ ಹೆಚ್.ಕೆ.ಶ್ರೀನಿವಾಸ್ ಮಾತನಾಡಿದರು. ವೇದಿಕೆಯಲ್ಲಿ ಕಾವಾಡಿ ಶ್ರೀಭಗವತಿ ದೇವಸ್ಥಾನದ ಅಧ್ಯಕ್ಷ ಮುಕ್ಕಾಟಿರ ನಾಚಪ್ಪ, ಶ್ರೀ ಅಯ್ಯಪ್ಪ ದೇವಸ್ಥಾನದ ಅಧ್ಯಕ್ಷ ಕುಟ್ಟಂಡ ಸಂಜು, ಶ್ರೀ ಮುತ್ತಪ್ಪ ದೇವಸ್ಥಾನ ಸಮಿತಿ ಅಧ್ಯಕ್ಷ ಸಿ.ಕೆ.ರವಿ, ಸುವಿನ್ ಗಣಪತಿ, ಪ್ರಿನ್ಸ್ ಗಣಪತಿ ಹಾಗೂ ಇತರರು ಉಪಸ್ಥಿತರಿದ್ದರು.

ವ್ಯಾಘ್ರನ ರಕ್ತದಾಹಕ್ಕೆ ಜಾನುವಾರುಗಳ ಬಲಿ: ಜೀವಭಯದಲ್ಲಿ ಕಾರ್ಮಿಕರು

ಫಲ ನೀಡದ ಅರಣ್ಯ ಇಲಾಖೆಯ ಕಾರ್ಯಾಚರಣೆ



ಎತ್ತು ವ್ಯಾಘ್ರನ ಅಟ್ಟಹಾಸದಿಂದ ಗಂಭೀರವಾಗಿ ಗಾಯಗೊಂಡು ಸಾವು ಬದುಕಿನ ನಡುವೆ ಹೋರಾಟ ನಡೆಸುತ್ತಿದೆ.

ಮಡಿಕೇರಿ, ಜ.27–ದಕ್ಷಿಣ ಕೊಡಗಿನ ಪೊನ್ನಂಪೇಟೆ ತಾಲೂಕಿನ ಕಿರುಗೂರು, ನಲ್ಲೂರು, ಕೋಟೂರು, ಬೆಸಗೂರು ಹಾಗೂ ಇನ್ನಿತರ ಗ್ರಾಮಗಳಲ್ಲಿ ವ್ಯಾಘ್ರನ ರಕ್ತ ದಾಹಕ್ಕೆ ಜಾನುವಾರುಗಳು ಜೀವ ಕಳೆದು ಕೊಳ್ಳುತ್ತಿವೆ. ಮತ್ತೊಂದೆಡೆ ಹುಲಿ ಹಾವಳಿ ಯಿಂದಾಗಿ ಕಾಫಿ ಕುಯಿಲು ಸಂದರ್ಭ ತೋಟಗಳಲ್ಲಿ ಕೆಲಸ ನಿರ್ವಹಿಸಲು ಜೀವ ಭಯದಿಂದ ಕಾರ್ಮಿಕರು ಹಿಂದೇಟು ಹಾಕುವಂತಾಗಿದೆ.

ಒಂದೇ ತಿಂಗಳಲ್ಲಿ ಪೊನ್ನಂಪೇಟೆ ತಾಲೂಕಿನಲ್ಲಿ 2 ಜಾನುವಾರುಗಳು ಹುಲಿ ದಾಳಿಗೆ ಬಲಿಯಾಗಿದ್ದರೆ, ಎತ್ತು ಗಂಭೀರವಾಗಿ ಗಾಯಗೊಂಡು ಜೀವನ್ಮರಣ ಸ್ಥಿತಿಯಲ್ಲಿ ನರಳುತ್ತಿದೆ. ಜ.12 ರಂದು ಪೊನ್ನಪ್ಪಸಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೆಸಗೂರು ಗ್ರಾಮದ ಕೊಕ್ಕಲೆಮಾಡ ದಾದಾ ಸೋಮಯ್ಯ ಎಂಬುವರಿಗೆ ಸೇರಿದ ಗಬ್ಬದ ಹಸುವಿನ ಮೇಲೆ ಹುಲಿ ದಾಳಿ ಮಾಡಿ ಕೊಂದು ಹಾಕಿದ್ದರೆ, ಜ.17ರಂದು ಮತ್ತೊಂದು ಹಸು ಹುಲಿ ರಕ್ತದಾಹಕ್ಕೆ ಜೀವ ತೆತ್ತಿದೆ. ಜ.22ರಂದು ಕೋಟೂರು ಗ್ರಾಮದ ಪೋರಂಗಡ ಪೃಥ್ವಿ ಎಂಬುವರಿಗೆ ಸೇರಿದ ಎತ್ತು ವ್ಯಾಘ್ರನ ಅಟ್ಟಹಾಸದಿಂದ ಗಂಭೀರವಾಗಿ ಗಾಯಗೊಂಡು ಸಾವು ಬದುಕಿನ ನಡುವೆ ಹೋರಾಟ ನಡೆಸುತ್ತಿದೆ.

ಜಾನುವಾರುಗಳನ್ನು ಬಲಿ ಪಡೆಯುತ್ತಿರುವ ಹುಲಿಯನ್ನು ಸೆರೆ ಹಿಡಿಯುವಂತೆ ಶಾಸಕ ಎ.ಎಸ್.ಪೊನ್ನಣ್ಣ ಈಗಾಗಲೆ ಅರಣ್ಯ ಇಲಾಖಾಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದ್ದಾರೆ. ಜಾನುವಾರು ಹಂತಕ ವ್ಯಾಘ್ರನ ಚಲನವಲನ ಪತ್ತೆಹಚ್ಚಲು ಪೊನ್ನಂಪೇಟೆ ಅರಣ್ಯ ಇಲಾಖೆ ಸಿಬ್ಬಂದಿಗಳು, ಜಾನುವಾರುಗಳನ್ನು ಬಲಿ ಪಡೆದ ಸ್ಥಳಗಳಲ್ಲಿ ಬೋನ್ ಅಳವಡಿಸಿ, ಹುಲಿಯ ಚಲನವಲನ ಪತ್ತೆಹಚ್ಚಲು ಸಿ.ಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಆದರೂ ಹುಲಿ ಪತ್ತೆಯಾಗದಿರುವುದು ಗ್ರಾಮಸ್ಥರಲ್ಲಿ ಭಯದ ವಾತಾವರಣ ಸೃಷ್ಟಿಸಿದೆ.

ಅರಣ್ಯ ಇಲಾಖೆಯ ಕೂಂಬಿಂಗ್ ಕಾರ್ಯಾಚರಣೆಯಲ್ಲಿ ಅಲ್ಲಲ್ಲಿ ಹುಲಿಯ ಹೆಜ್ಜೆ ಗುರುತು ಕಂಡು ಬರುತ್ತಿದೆಯಾದರೂ ಹುಲಿ ಮಾತ್ರ ಸೆರೆಯಾಗದೆ ಅರಣ್ಯ ಇಲಾಖೆಗೆ ಚಳ್ಳೆಹಣ್ಣು ತಿನ್ನಿಸುತ್ತಿದೆ. ಈ ಹಿನ್ನೆಲೆಯಲ್ಲಿ ಡಿ.ಸಿ.ಎಫ್ ಜಗನ್ನಾಥ್ ಹಾಗೂ ಎ.ಸಿ.ಎಫ್ ಗೋಪಾಲ್ ಮಾರ್ಗದರ್ಶನದಂತೆ ಆರ್‌ಎಫ್‌ಓ ಗಂಗಾಧರ್ ನಿರ್ದೇಶನದಂತೆ ಅರಣ್ಯ ಇಲಾಖೆಯಿಂದ ಅಲ್ಲಲ್ಲಿ ಸಿ.ಸಿ ಕ್ಯಾಮರಾ, ಬೋನ್ ಅಳವಡಿಸಿರುವುದರ ಜತೆಗೆ ಹುಲಿಯ ಚಲನವಲನ ಪತ್ತೆಹಚ್ಚಲು ಸತತವಾಗಿ ಥರ್ಮಲ್ ಡ್ರೋಣ್ ಕ್ಯಾಮರಾವನ್ನು ಚೆಕ್ಕೇರ ಡಾ. ತಮ್ಮಯ್ಯ ಹಾರಿಸುವ ಮೂಲಕ ಹುಲಿಯ ಚಲನವಲನ ಪತ್ತೆಗೆ ಪ್ರಯತ್ನ ನಡೆಸುತ್ತಿದ್ದಾರೆ. ಜಾನುವಾರುಗಳ ಮಾಲೀಕರು ಹಾಗೂ ತೋಟ ದಲ್ಲಿ ಕೆಲಸ ನಿರ್ವಹಿಸುವಾಗ ಕಾರ್ಮಿಕರು ಎಚ್ಚರ ವಹಿಸುವಂತೆ ಹಾಗೂ ಹುಲಿಯ ಚಲನವಲನ ಅಥವಾ ಹೆಜ್ಜೆ ಗುರುತು ಕಂಡು ಬಂದಲ್ಲಿ ಅರಣ್ಯ ಅಧಿಕಾರಿಗಳಿಗೆ ಮಾಹಿತಿ ನೀಡುವಂತೆ ಮನವಿ ಮಾಡಿದ್ದಾರೆ.

ಕುಶಾಲನಗರದಲ್ಲಿ ಗಣರಾಜ್ಯೋತ್ಸವ ಆಚರಣೆ



ಕುಶಾಲನಗರ ತಹಸೀಲ್ದಾರ್ ಕಿರಣ್.ಜಿ.ಗೌರಯ್ಯ ಮಾತನಾಡಿದರು

ಕುಶಾಲನಗರ, ಜ.27– ಇಲ್ಲಿನ ಸರ್ಕಾರಿ ಮಾದರಿ ಪ್ರಾಥಮಿಕ ಶಾಲಾ ಮೈದಾನದಲ್ಲಿ ಗಣರಾಜ್ಯೋತ್ಸವವನ್ನು ಅದ್ದೂರಿಯಾಗಿ ಆಚರಿಸಲಾಯಿತು.

ತಹಸೀಲ್ದಾರ್ ಕಿರಣ್ ಜಿ. ಗೌರಯ್ಯ ಧ್ವಜಾರೋಹಣ ನೆರವೇರಿಸಿ, ಭವ್ಯ ಭಾರತದ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು. ಸ್ವಚ್ಛ ಪರಿಸರದೊಂದಿಗೆ ಮುಂದಿನ ಪೀಳಿಗೆಗೆ ಸಮೃದ್ಧ ನಾಡನ್ನು ಹಸ್ತಾಂತರಿಸುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ ಎಂದರು. ರಾಷ್ಟ್ರೀಯ ಹಬ್ಬಗಳು ಕೇವಲ ಭಾಷಣಕ್ಕೆ ಸೀಮಿತವಾಗಬಾರದು. ಸಂವಿಧಾನದಲ್ಲಿ ಉಲ್ಲೇಖಿಸಿದಂತೆ ಪ್ರತಿಯೊಬ್ಬರೂ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಬೇಕು ಎಂದರು. ಕೂಡಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಹಂಡ್ರಂಗಿ ನಾಗರಾಜು ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ವಿ.ಪಿ. ಶಶಿಧರ್ ಮಾತನಾಡಿದರು.

ಮಾಜಿ ಸೈನಿಕರಾದ ಹಾನರಿ ಕ್ಯಾಪ್ಟನ್ ಪಿಈ ಮುತ್ತಣ್ಣ, ನಾಟಿ ವೈದ್ಯೆ ಅಯಿನಮಂಡ ಲೀಲಾವತಿ ಗಣಪತಿ, ಪೌರಕಾರ್ಮಿಕ ಗೌರಮ್ಮ ಮತ್ತು ರಾಷ್ಟ್ರೀಯ ಕ್ರೀಡಾಪಟು ಬ್ರಿಜೇಶ್, ಮುಕುಂದ್ ಅವರುಗಳನ್ನು ಸನ್ಮಾನಿಸಲಾಯಿತು. ವೇದಿಕೆಯಲ್ಲಿ ಡಿವೈಎಸ್ಪಿ ಚಂದ್ರಶೇಖರ್, ಪುರಸಭೆ ಮುಖ್ಯಾಧಿಕಾರಿ ಟಿ.ಎಸ್.ಗಿರೀಶ್, ವೃತ್ತ ನಿರೀಕ್ಷಕ ಪ್ರದೀಪ್, ಜಿಪಂ ಮಾಜಿ ಅಧ್ಯಕ್ಷೆ ಕೆ.ಪಿ ಚಂದ್ರಕಲಾ, ಪುರಸಭೆ ಆರೋಗ್ಯ ಅಧಿಕಾರಿ ಉದಯ್ ಕುಮಾರ್ ಮತ್ತಿತರರು ಪಾಲ್ಗೊಂಡಿದ್ದರು. ಕಾರ್ಯಕ್ರಮಕ್ಕೆ ಮುನ್ನ ಪೊಲೀಸ್, ಎನ್‌ಸಿಸಿ ತಂಡಗಳು, ಶಾಲಾ ಕಾಲೇಜು ಮಕ್ಕಳಿಂದ ಆಕರ್ಷಕ ಪಥಸಂಚಲನ ನಡೆಯಿತು. ಪೆರೇಡ್ ಕಮಾಂಡರ್ ಆಗಿ ಎಎಸ್ಐ ಎಸ್.ಎಸ್ ಶ್ರೀನಿವಾಸ್ ಕಾರ್ಯನಿರ್ವಹಿಸಿದರು. ಪಥಸಂಚಲದಲ್ಲಿ ಪಾಲ್ಗೊಂಡ ತಂಡಗಳಿಗೆ ಪ್ರಸಂಶನಾ ಪತ್ರ ವಿತರಿಸಲಾಯಿತು. ಶಿಕ್ಷಕರು ವಿದ್ಯಾರ್ಥಿಗಳು ನಾಡಗೀತೆ ರೈತ ಗೀತೆ ಹಾಡಿದರು. ಮಹೇಶ್ ಅಮೀನ್ ವಂದೇ ಮಾತರಂ ಗೀತೆ ಹಾಡಿದರು.

ಜಿಲ್ಲಾದ್ಯಂತ ಬ್ಯಾಂಕ್ ನೌಕರರ ಮುಷ್ಕರ: ಗ್ರಾಹಕರ ಪರದಾಟ



ಗ್ರಾಮೀಣ ಭಾಗದ ಜನರು ಬ್ಯಾಂಕ್‌ಗಳಿಗೆ ಆಗಮಿಸಿ ನಿರಾಶರಾಗಿ ನಿಂತಿರುವುದು.

ಚಾಮರಾಜನಗರ, ಜ.27–ವಾರದಲ್ಲಿ 5 ದಿನಗಳ ಕೆಲಸದ ವ್ಯವಸ್ಥೆಯನ್ನು ಜಾರಿಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಜಿಲ್ಲಾದ್ಯಂತ ಮಂಗಳವಾರ ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳ ನೌಕರರು ಮುಷ್ಕರ ನಡೆಸಿದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಗ್ರಾಹಕರು ಪರದಾಡಿದರು.

ಜಿಲ್ಲೆಯ ಚಾಮರಾಜನಗರ, ಕೊಳ್ಳೇಗಾಲ, ಯಳಂದೂರು, ಗುಂಡ್ಲುಪೇಟೆ, ಹನೂರು ಪಟ್ಟಣ ಸೇರಿದಂತೆ ತಾಲೂಕು ವ್ಯಾಪ್ತಿಯಲ್ಲಿರುವ ಭಾರತೀಯ ಸ್ಟೇಟ್ ಬ್ಯಾಂಕ್, ಪಂಜಾಬ್ ನ್ಯಾಷನಲ್ ಬ್ಯಾಂಕ್, ಬ್ಯಾಂಕ್ ಆಫ್ ಬರೋಡಾ, ಕೆನರಾ ಬ್ಯಾಂಕ್ ಸೇರಿದಂತೆ ಸರ್ಕಾರಿ ಸ್ವಾಮ್ಯದ ಎಲ್ಲಾ ಬ್ಯಾಂಕ್‌ಗಳ ನೌಕರರು ಹಾಗೂ ಸಿಬ್ಬಂದಿ ಕರ್ತವ್ಯಕ್ಕೆ ಗೈರಾಗಿದ್ದರಿಂದ ಬ್ಯಾಂಕ್‌ಗಳು ಬಂದ್ ಆಗಿದ್ದವು.

ಗ್ರಾಹಕರ ಪರದಾಟ: ಜ.24 ರಂದು ನಾಲ್ಕನೇ ಶನಿವಾರ, ಜ.25 ಭಾನುವಾರ ರಜೆ ದಿನ, ಜ.26 ಗಣರಾಜ್ಯೋತ್ಸವದಿಂದ ನಿರಂತರ ಮೂರು ದಿನಗಳ ರಜೆಯ ಬಳಿಕ ಮಂಗಳವಾರ ಬ್ಯಾಂಕ್‌ಗೆ ಬಂದ ಗ್ರಾಹಕರಿಗೆ ಮುಷ್ಕರದ ವಿಚಾರ ತಿಳಿದು ಪರದಾಡುವಂತಾಯಿತು.

ಬ್ಯಾಂಕ್ ನೌಕರರ ಮುಷ್ಕರದ ಅರಿವು ಇಲ್ಲದೆ ಗ್ರಾಮೀಣ ಭಾಗದ ಜನರು ಬ್ಯಾಂಕ್‌ಗಳಿಗೆ ಆಗಮಿಸಿ ವಾಪಸ್ಸು ತೆರಳಿದ ಪ್ರಸಂಗ ನಡೆಯಿತು. ಠೇವಣಿ, ಹಣ ಹಿಂಪಡೆಯುವಿಕೆಯಾಗದೇ ಜನರು ಪರದಾಡಿದರು. ಬೆಳಗ್ಗೆ ಬ್ಯಾಂಕ್‌ಗಳಿಗೆ ಆಗಮಿಸಿದ ಜನರು ಬ್ಯಾಂಕ್ ಬಂದ್ ಆಗಿರುವುದನ್ನು ಗಮನಿಸಿ ಸೆಕ್ಯೂರಿಟಿ ಬಳಿ ಮಾಹಿತಿ ಪಡೆದು ಬೇಸರದಿಂದ ತೆರಳುತ್ತಿದ್ದ ದೃಶ್ಯ ಕಂಡುಬಂದಿತು.

ಸೇವೆಗಳು ಸ್ಥಗಿತ: ಪರಿಣಾಮ ಠೇವಣಿ, ಹಣ ಹಿಂಪಡೆಯುವಿಕೆ, ಚೆಕ್ ಕ್ಲಿಯರೆನ್ಸ್‌ನಂತಹ ಸೇವೆಗಳಿಗೆ ಸಮಸ್ಯೆ ಉಂಟಾಯಿತು. ಆದರೆ, ಎಟಿಎಂ ಲಭ್ಯ ಇದ್ದ ಕಾರಣ ಜನರು ಹಣ ಪಡೆಯಲು ಎಟಿಎಂ ಮೊರೆ ಹೋದರು.


ತೆರೆದಿದ್ದ ಖಾಸಗಿ ಬ್ಯಾಂಕ್‌ಗಳು: ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳನ್ನು ಹೊರತುಪಡಿಸಿದರೆ ಖಾಸಗಿ ವಲಯದ ಬ್ಯಾಂಕ್‌ಗಳಾದ ಎಚ್‌ಡಿಎಫ್‌ಸಿ ಬ್ಯಾಂಕ್, ಐಸಿಐಸಿಐ ಬ್ಯಾಂಕ್, ಎಕ್ಸಿಸ್ ಬ್ಯಾಂಕ್, ಕರ್ನಾಟಕ ಬ್ಯಾಂಕ್ ಸೇರಿದಂತೆ ಖಾಸಗಿ ವಲಯದ ಬ್ಯಾಂಕ್‌ಗಳು ತೆರೆದಿದ್ದು ಈ ಬ್ಯಾಂಕ್‌ಗಳಲ್ಲಿ ಗ್ರಾಹಕರಿಗೆ ಎಂದಿನಂತೆ ಸೇವೆ ಲಭ್ಯವಿತ್ತು.

ಗುಂಡ್ಲುಪೇಟೆ ವರದಿ :ವಾರದಲ್ಲಿ ಐದು ದಿನ ಕೆಲಸದ ವ್ಯವಸ್ಥೆಯನ್ನು ಕೂಡಲೇ ಜಾರಿಗೊಳಿಸುವಂತೆ ಒತ್ತಾಯಿಸಿ ಬ್ಯಾಂಕ್ ನೌಕರರು ನಡೆಸುತ್ತಿರುವ ರಾಷ್ಟ್ರ ವ್ಯಾಪಿ ಮುಷ್ಕರಕ್ಕೆ ತಾಲೂಕಿನ ಬ್ಯಾಂಕ್ ನೌಕರರು ಬೆಂಬಲ ಸೂಚಿಸಿದರು.

ಭಾರತೀಯ ಸ್ಟೇಟ್ ಬ್ಯಾಂಕ್, ಬ್ಯಾಂಕ್ ಆಫ್ ಬರೋಡಾ, ಕೆನರಾ ಬ್ಯಾಂಕ್ ಸೇರಿದಂತೆ ಸರ್ಕಾರಿ ಸ್ವಾಮ್ಯದ ಎಲ್ಲಾ ಬ್ಯಾಂಕ್‌ಗಳು ಮುಷ್ಕರಕ್ಕೆ ಬೆಂಬಲ ಸೂಚಿಸಿದ ಹಿನ್ನೆಲೆ ಶಾಖೆಗಳಲ್ಲಿ ಠೇವಣಿ, ಹಣ ಹಿಂಪಡೆಯುವಿಕೆ, ಚೆಕ್ ಕ್ಲಿಯರೆನ್ಸ್ ಸೇರಿದಂತೆ ಇನ್ನಿತರ ಸೇವೆಗಳ ಮೇಲೆ ವ್ಯತ್ಯಯ ಉಂಟಾಗಿದೆ.

ಎಟಿಎಂಗಳಲ್ಲಿ ಸರತಿ ಸಾಲು: ಎರಡು ದಿನಗಳಿಂದ ಸರ್ಕಾರಿ ರಜೆ ಇದ್ದು, ಇಂದು ಬ್ಯಾಂಕ್ ಮುಷ್ಕರ ಹಿನ್ನೆಲೆ ಗ್ರಾಹಕರು ಎಟಿಎಂಗಳಲ್ಲಿ ಹಣ ಪಡೆಯಲು ಸರತಿ ಸಾಲಿನಲ್ಲಿ ನಿಂತಿದ್ದ ದೃಶ್ಯ ಕಂಡು ಬಂದಿತು.

ನಂಜೇದೇವನಪುರದಲ್ಲಿ ಮತ್ತೊಂದು ಹುಲಿ ಮರಿ ಸೆರೆ



ಚಾಮರಾಜನಗರ, ಜ.27–ತಾಲೂಕಿನ ನಂಜೇದೇವನಪುರ ಗ್ರಾಮದಲ್ಲಿ ಮಂಗಳವಾರ ಮುಂಜಾನೆ ಮತ್ತೊಂದು ಹೆಣ್ಣು ಹುಲಿ ಮರಿಯನ್ನು ಅರಣ್ಯ ಇಲಾಖೆ ಅಧಿಕಾರಿಗಳು ಸೆರೆ ಹಿಡಿದಿದ್ದಾರೆ.

ನಂಜೇದೇವನಪುರ–ಉಡಿಗಾಲ ಸೇರಿದಂತೆ ಸುತ್ತಮುತ್ತಲ ಗ್ರಾಮಗಳ ಭೀತಿಯುಂಟು ಮಾಡಿದ್ದ ಐದು ಹುಲಿಗಳ ಸೆರೆ ಕಾರ್ಯಾಚರಣೆಯನ್ನು ಬಿಆರ್‌ಟಿ ಅರಣ್ಯ ಇಲಾಖೆ ಸಿಬ್ಬಂದಿ ಹಾಗೂ ಅಧಿಕಾರಿಗಳು ಯಶಸ್ವಿಯಾಗಿ ನಡೆಸುತ್ತಿದ್ದು, 20 ದಿನಗಳ ಅವಧಿಯಲ್ಲಿ ತಾಯಿ ಹುಲಿ ಹಾಗೂ ಮೂರು ಮರಿ ಹುಲಿಯನ್ನು ಸೆರೆ ಹಿಡಿದಿದ್ದು, ಇನ್ನೊಂದು ಹುಲಿ ಮರಿಯನ್ನು ಹಿಡಿಯುವುದು ಮಾತ್ರ ಬಾಕಿ ಇದೆ.

10 ತಿಂಗಳ ಮರಿ ಹುಲಿ: ಗ್ರಾಮದ ಹೊರವಲಯದ ಜಮೀನಿನಲ್ಲಿ 10 ತಿಂಗಳ ಹೆಣ್ಣು ಮರಿ ಹುಲಿಯೊಂದು ಓಡಾಡುತ್ತಿರುವುದು ಥರ್ಮಲ್ ಡ್ರೋನ್ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಕೂಡಲೇ ಕಾರ್ಯಪ್ರವೃತ್ತರಾದ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ದುಬಾರೆ ಆನೆ ಶಿಬಿರದ ನಾಲ್ಕು ಸಾಕಾನೆಗಳೊಂದಿಗೆ ಕಾರ್ಯಾಚರಣೆ ನಡೆಸಿ ಹುಲಿಯನ್ನು ಸೆರೆ ಹಿಡಿದಿದ್ದಾರೆ. ಪ್ರಸ್ತುತ ಹುಲಿಯನ್ನು ಸುರಕ್ಷಿತವಾಗಿ ಇಡಲಾಗಿದೆ ಮತ್ತು ಅದರ ಆರೋಗ್ಯ ಸ್ಥಿತಿ ಬಗ್ಗೆ ನಿಗಾ ವಹಿಸಲಾಗುತ್ತಿದೆ ಎಂದು ಅರಣ್ಯಾಧಿಕಾರಿಗಳು ತಿಳಿಸಿದ್ದಾರೆ.

ಮುಂದುವರಿದ ಕಾರ್ಯಾಚರಣೆ: ತಾಲೂಕಿನ ಹರವೆ ಹೋಬಳಿಯ ನಂಜೇದೇವನಪುರ ಗ್ರಾಮ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕಳೆದ ತಿಂಗಳು ಸಿಸಿ ಕ್ಯಾಮೆರಾದಲ್ಲಿ ತಾಯಿ ಹುಲಿ ಸೇರಿ ಐದು ಹುಲಿಗಳು ಪತ್ತೆಯಾಗಿದ್ದವು. ಇವುಗಳನ್ನು ಸೆರೆಹಿಡಿಯಲು ಕಾರ್ಯಾಚರಣೆ ನಡೆಸಲಾಗಿತ್ತು. ಅದರಂತೆ, ಜ.9ರಂದು ತಾಯಿ ಹುಲಿಯನ್ನು ಕಾರ್ಯಾ ಚರಣೆ ಮೂಲಕ ಸೆರೆಹಿಡಿಯಲಾಗಿತ್ತು. ಬಳಿಕ ಜ.15ರಂದು ಹೆಣ್ಣು ಹುಲಿ ಮರಿ ಹಾಗೂ ಜ.18ರಂದು ಗಂಡು ಹುಲಿ ಮರಿ, ಮಂಗಳವಾರ ಮತ್ತೊಂದು ಹೆಣ್ಣು ಹುಲಿ ಮರಿಯನ್ನು ಸೆರಹಿಡಿಯಲಾಗಿದ್ದು, ಇನ್ನು ಉಳಿದ ಒಂದು ಹುಲಿಮರಿ ಸೆರೆಗೆ ಕಾರ್ಯಾಚರಣೆ ಮುಂದುವರೆಸಲಾಗಿದೆ.

ಪತ್ನಿ ಕೊಂದ ಪತಿಗೆ ಜೀವಾವಧಿ ಶಿಕ್ಷೆ



ಕೊಳ್ಳೇಗಾಲ, ಜ.27–ಮದ್ಯಪಾನ ಮಾಡಲು ಹಣ ನೀಡಲಿಲ್ಲವೆಂಬ ಕಾರಣಕ್ಕೆ ಕೈಹಿಡಿದ ಪತ್ನಿಯನ್ನೇ ಕೊಲೆ ಮಾಡಿದ್ದ ಆರೋಪಿಗೆ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶ ಟಿ.ಸಿ. ಶ್ರೀಕಾಂತ್ ಜೀವಾವಧಿ ಶಿಕ್ಷೆ ವಿಧಿಸಿದ್ದಾರೆ.

ಹನೂರು ತಾಲೂಕಿನ ಬಿದರಹಳ್ಳಿ ಗ್ರಾಮದ ಅಮೃತರಾಜ್‌ಗೆ ಜೀವಾವಧಿ ಶಿಕ್ಷೆ ಮತ್ತು 10 ಸಾವಿರ ದಂಡವನ್ನು ವಿಧಿಸಿ ನ್ಯಾಯಾಧೀಶರು ತೀರ್ಪು ನೀಡಿದ್ದಾರೆ.

2024ರ ಡಿ.23ರಂದು ಅಮೃತ್‌ರಾಜ್ ತನ್ನ ಹೆಂಡತಿ ಶೋಭಳನ್ನು ಮದ್ಯಪಾನ ಮಾಡಲು ಹಣ ಕೇಳಿದಾಗ ಆಕೆ ಹಣ ಇಲ್ಲ ಎಂದು ಹೇಳಿದ್ದನೆನ್ನಲಾಗಿದೆ. ಕೊಪಗೊಂಡ ಆರೋಪಿ ಶೋಭಳಿಗೆ ದೊಣ್ಣೆಯಿಂದ ಹೊಡೆದು ಹಲ್ಲೆ ಮಾಡಿದ್ದನು. ಇದರಿಂದ ಭಯಗೊಂಡ ಆಕೆ ಶಿವು ಎಂಬವರ ಜಮೀನಿನ ಕಡೆ ಓಡುತ್ತಿದ್ದಾಗ ಆಕೆಯನ್ನು ಹಿಂಬಾಲಿಸಿದ ಅಮೃತರಾಜ್ ಅವಳನ್ನು ಮತ್ತೆ ಹಿಡಿದು ದೊಣ್ಣೆಯಿಂದ ಹಲ್ಲೆ ಮಾಡಿದ್ದಲ್ಲದೆ, ಕತ್ತನ್ನು ಹಿಸುಕಿ ಮನಬಂದಂತೆ ಹೊಡೆದು ಸ್ಥಳದಲ್ಲಿಯೇ ಕೊಲೆ ಮಾಡಿದ್ದಾನೆ. ಈ ಸಂಬಂಧ ರಾಮಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಅಂದಿನ ಇನ್ಸ್‌ಪೆಕ್ಟರ್ ಶೇಷಾದ್ರಿಯವರು ತನಿಖೆ ನಡೆಸಿ ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದರು. ವಾದ ವಿವಾದವನ್ನು ಆಲಿಸಿದ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರು ಆರೋಪಿಗೆ ಜೀವಾವಧಿ ಶಿಕ್ಷೆ ಮತ್ತು 10 ಸಾವಿರ ದಂಡ ವಿಧಿಸಿ ಆದೇಶ ನೀಡಿದರು. ಸರ್ಕಾರದ ಪರ ಪ್ರಾಸಿಕ್ಯೂಟರ್ ಸಿ.ಬಿ. ಗಿರೀಶ್ ಅವರು ವಕಾಲತ್ತು ವಹಿಸಿ ವಾದ ಮಂಡಿಸಿದ್ದರು.

ಬಸ್ ಡಿಕ್ಕಿ ; ಬೈಕ್ ಸವಾರನ ಸಾವು

ಚಾಮರಾಜನಗರ, ಜ.27–ಕೆಎಸ್‌ಆರ್‌ಟಿಸಿ ಬಸ್ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಸವಾರ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ತಾಲೂಕಿನ ಮಲೆಯೂರು ಗ್ರಾಮದಲ್ಲಿ ನಡೆದಿದೆ.

ಮಲೆಯೂರು ಗ್ರಾಮದ ಶಿವಸ್ವಾಮಿ (30) ಮೃತಪಟ್ಟ ಸವಾರ. ಮಲೆಯೂರು ಗ್ರಾಮಕ್ಕೆ ಸಮೀಪದ ತಿರುವಿನಲ್ಲಿ ಸಾರಿಗೆ ಬಸ್ ಹಾಗೂ ಬೈಕ್ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿ ಬೈಕ್ ಸವಾರ ಶಿವಸ್ವಾಮಿ ತಲೆಗೆ ತೀವ್ರ ಗಾಯವಾಗಿ ಅಧಿಕ ರಕ್ತಸ್ರಾವವಾದ ಹಿನ್ನಲೆ ಆತ ಸ್ಥಳದಲ್ಲಿಯೇ ಮೃತಪಟ್ಟಿದ್ದು ಹಿಂಬದಿ ಸವಾರ ನಾಗರಾಜು(52) ಎಂಬುವರಿಗೆ ತೀವ್ರ ಗಾಯಗಳಾಗಿದ್ದು ಚಾಮರಾಜನಗರದ ಸಿಮ್ಸ್ ಆಸ್ಪತ್ರೆಗೆ ಕರೆದೊಯ್ಯಲಾಗಿದೆ.

ವಿಷಯ ತಿಳಿದು ಸ್ಥಳಕ್ಕೆ ಗ್ರಾಮಾಂತರ ಠಾಣೆಯ ಪೊಲೀಸರು ತೆರಳಿ ಸಾರಿಗೆ ಬಸ್ ಹಾಗೂ ಬೈಕ್ ಅನ್ನು ವಶಪಡಿಸಿಕೊಂಡು, ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಆಸ್ಪತ್ರೆಯ ಶವಾಗಾರಕ್ಕೆ ರವಾನಿಸಲಾಗಿದೆ. ಈ ಸಂಬಂಧ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವಿದ್ಯುತ್ ಪೂರೈಕೆಗೆ ಒತ್ತಾಯಿಸಿ ರೈತರ ಪ್ರತಿಭಟನೆ



ಸಮರ್ಪಕ ವಿದ್ಯುತ್ ಪೂರೈಕೆಗೆ ಆಗ್ರಹಿಸಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಂಘ ಪ್ರತಿಭಟನೆ ನಡೆಸಿದವು.

ಚಾಮರಾಜನಗರ, ಜ.27–ಸಮರ್ಪಕವಾಗಿ ವಿದ್ಯುತ್ ಪೂರೈಕೆ ಮಾಡುವಂತೆ ಆಗ್ರಹಿಸಿ ತಾಲೂಕಿನ ಪಣ್ಯದಹುಂಡಿ ಗ್ರಾಮದ ಬಳಿ ಸಾಮೂಹಿಕ ನಾಯಕತ್ವದ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಂಘ ಪ್ರತಿಭಟನೆ ನಡೆಸಿದವು.

ಗ್ರಾಮದ ರಾಷ್ಟ್ರೀಯ ಹೆದ್ದಾರಿ ಬಳಿ ಜಮಾಯಿಸಿದ ರೈತ ಪ್ರತಿಭಟನಾಕಾರರು ಕೆಲಕಾಲ ರಸ್ತೆ ತಡೆ ನಡೆಸಿ, ಸೆಸ್ಕ್ ಇಲಾಖೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ತಾಲೂಕಿನ ಪಣ್ಯದಹುಂಡಿ, ಹೆಗ್ಗೋಠಾರ, ಮುತ್ತಿಗೆ ಗ್ರಾಮಗಳು ಸೇರಿದಂತೆ ಈ ಭಾಗದ ಹಲವು ಗ್ರಾಮಗಳ ರೈತರ ಜಮೀನಿನ ಕೃಷಿ ಪಂಪ್ ಸೆಟ್‌ಗಳಿಗೆ ಸೆಸ್ಕ್ ಇಲಾಖೆಯಿಂದ ಸಮರ್ಪಕವಾಗಿ ವಿದ್ಯುತ್ ಪೂರೈಕೆ ಮಾಡುತ್ತಿಲ್ಲ ಇದರಿಂದಾಗಿ ರೈತರು ತಾವು ಶ್ರಮವಹಿಸಿ ಬೆಳೆದ ಬೆಳೆಗಳಿಗೆ ಸಕಾಲದಲ್ಲಿ ನೀರು ಬಿಡಲು ಆಗುತ್ತಿಲ್ಲ ಸೆಸ್ಕ್ ಇಲಾಖೆ ನಿರ್ಲಕ್ಷ್ಯದಿಂದ ಕೃಷಿ ಚಟುವಟಿಕೆಗೆ ತೊಡಕಾಗುತ್ತಿದೆ ಎಂದು ಆರೋಪಿಸಿದರು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಸೆಸ್ಕ್ ಎಂಡಿ ಸೋಮಶೇಖರ್, ಇಇ ಪ್ರದೀಪ್ ರೈತರ ಅಹವಾಲು ಆಲಿಸಿ ಫೆ.12ರಿಂದ ಎಲ್ಲಾ ಗ್ರಾಮಗಳ ಜಮೀನುಗಳ ಕೃಷಿ ಪಂಪ್ ಸೆಟ್‌ಗಳಿಗೆ ಸಮರ್ಪಕವಾಗಿ ವಿದ್ಯುತ್ ಪೂರೈಕೆ ಮಾಡಲಾಗುವುದು ಎಂದು ಭರವಸೆ ನೀಡಿದರು. ಬಳಿಕ ರೈತರು ಪ್ರತಿಭಟನೆಯನ್ನು ಅಂತ್ಯಗೊಳಿಸಿದರು. ಪ್ರತಿಭಟನೆಯಲ್ಲಿ ರೈತ ಸಂಘದ ಅಧ್ಯಕ್ಷ ಹೊನ್ನೂರು ಪ್ರಕಾಶ್, ಮುಖಂಡರಾದ ನಟರಾಜು, ಪಾಪಣ್ಣ, ಮಂಜು, ಪ್ರಕಾಶ್, ನಿಜಗುಣ, ರಾಜು, ಚೇತನ್, ಶಶಿ, ಮಲ್ಲೇಶ್ ಇತರರು ಭಾಗವಹಿಸಿದ್ದರು.

ಮರಳು ಕಲಾಕೃತಿಯಲ್ಲಿ ಸಾಲುಮರದ ತಿಮ್ಮಕ್ಕ



ಗಣರಾಜ್ಯೋತ್ಸವದ ಅಂಗವಾಗಿ ಚಾಮರಾಜನಗರ ಜಿಲ್ಲಾಡಳಿತ ಭವನದ ಆವರಣದಲ್ಲಿ ಆಯೋಜಿತಗೊಂಡಿದ್ದ 3 ದಿನಗಳ ಫಲಪುಷ್ಪ ಪ್ರದರ್ಶನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ಚಾಲನೆ ನೀಡಿದರು. ಸಾಲುಮರದ ತಿಮ್ಮಕ್ಕ ಮರಳು ಕಲಾಕೃತಿ, ಇಂಡಿಯಾ ಗೇಟ್, ಆನೆ, ಸಿರಿಧಾನ್ಯ ಕಲಾಕೃತಿ, ಫೋಟೊ ಪಾಯಿಂಟ್, ಪ್ರದರ್ಶನಗಳನ್ನು ವೀಕ್ಷಿಸಿ ಸಚಿವರು ಮೆಚ್ಚುಗೆ ವ್ಯಕ್ತಪಡಿಸಿದರು.

ಸಾವಿರಾರು ಭಕ್ತರ ಸಮ್ಮುಖದಲ್ಲಿ ನಡೆದ ಓಂಕಾರ ಸಿದ್ದೇಶ್ವರಸ್ವಾಮಿ ಜಾತ್ರಾ ಮಹೋತ್ಸವ



ಹೂಣಕನಪುರ ಗ್ರಾಮದ ಶ್ರೀ ಓಂಕಾರ ಸಿದ್ದೇಶ್ವರಸ್ವಾಮಿ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ನಡೆಯಿತು.

ಬೇಗೂರು, ಜ.27– ಸಮೀಪದ ಹೂಣಕನಪುರ ಗ್ರಾಮದ ಶ್ರೀ ಓಂಕಾರ ಸಿದ್ದೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನಡೆಯಿತು

ಹೊಸಪುರ ಗ್ರಾಮದ ಗ್ರಾಮಸ್ಥರು ತೇರನ್ನು ಸಿದ್ಧಪಡಿಸಿ ಯಡವನಹಳ್ಳಿ ಗ್ರಾಮದ ದೇವಾಲಯದ ಬಳಿ ತಂದು ನಿಲ್ಲಿಸಿದರು. ನಂತರ ಓಂಕಾರ ಸಿದ್ದೇಶ್ವರ ಸ್ವಾಮಿಯ ಉತ್ಸವ ಮಧ್ಯಾಹ್ನದವರೆಗೆ ಯಡವನಹಳ್ಳಿ ಗ್ರಾಮದಲ್ಲಿ ನಡೆಸಲಾಯಿತು ಗ್ರಾಮಸ್ಥರು ಸಿದ್ದಪಡಿಸಿದ ತೇರು ಅರೆಪುರ ಗ್ರಾಮದ ವಾನರ ಒಟ್ಟಾಗಿ ಮೂರು ನಾಲ್ಕು ಕಿಲೋಮೀಟರ್ ದೂರದಲ್ಲಿರುವ ಓಂಕಾರ ಸಿದ್ದೇಶ್ವರ ಸ್ವಾಮಿ ದೇವಾಲಯದ ಆವರಣಕ್ಕೆ ತೇರನ್ನು ಎಳೆದು ತರಲಾಯಿತು ಹಾಗೂ ಓಂಕಾರ ಸಿದ್ದೇಶ್ವರ ಸ್ವಾಮಿಯ ಉತ್ಸವ ಮೂರ್ತಿಯನ್ನು ದೇವಾಲಯದ ಬಳಿ ಇರುವ ಬಿಲ್ವಪತ್ರೆ ಮರದ ಆವರಣದಲ್ಲಿ ಇರಿಸಿ ಪೂಜೆ ಸಲ್ಲಿಸಲಾಯಿತು

ದೇವಾಲಯದ ಆವರಣದಲ್ಲಿ ನಂಜನಗೂಡು ತಾಲೂಕಿನ ಹೊಸಪುರ ಗ್ರಾಮಸ್ಥರು ತೇರನ್ನು ಸಿದ್ಧಪಡಿಸಿದ್ದು ಉತ್ಸವ ಮೂರ್ತಿ ಮುಂದೆ ಸಾಗಿದರೆ ಹೊರೆಯಾಲ, ಯಡವನಹಳ್ಳಿ, ಹೊಸಪುರ ಗ್ರಾಮಗಳ ಮೂರು ತೇರುಗಳು ಹಾಗೂ ಅರೆಪುರ, ಕೂಗಲೂರು ಗ್ರಾಮಗಳ ವಾನರ ಒಂದರ ಹಿಂದೆ ಒಂದರಂತೆ ಓಂಕಾರ ಸಿದ್ದೇಶ್ವರ ಸ್ವಾಮಿಯ ದೇವಾಲಯವನ್ನು ಪ್ರದಕ್ಷಿಣೆ ಹಾಕಿದವು ಮತ್ತು ಆವರಣದಲ್ಲಿ ಸೇರಿದ್ದ ಭಕ್ತ ಸಮೂಹ ದೇವಾಲಯದ ಸುತ್ತ ಪ್ರದಕ್ಷಿಣೆ ಹಾಕಿದ ರಥಗಳನ್ನು ಕಂಡು ಜಯ ಘೋಷದೊಂದಿಗೆ ಓಂಕಾರ ಸಿದ್ದೇಶ್ವರ ಸ್ವಾಮಿಗೆ ಹಣ್ಣು ಜೀವನ ಎಸೆದು ಭಕ್ತಿ ಭಾವದಿಂದ ಹರಕೆ ತೀರಿಸುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು

ಜಾತ್ರೆಯಲ್ಲಿ ಶಾಸಕ ಎಚ್.ಎಂ ಗಣೇಶ್ ಪ್ರಸಾದ್, ಜಿಲ್ಲಾ, ತಾಲೂಕು ಹಾಗೂ ಗ್ರಾಮ ಪಂಚಾಯಿತಿ ಜನಪ್ರತಿನಿಧಿಗಳು ರಾಜಕೀಯ ಮುಖಂಡರು ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ದೇವರ ಕೃಪೆಗೆ ಪಾತ್ರರಾದರು

ಆಧುನಿಕ ತಂತ್ರಜ್ಞಾನದೊಂದಿಗೆ ಸೆಸ್ಕ್ ಅಭಿವೃದ್ಧಿಗೆ ಎಲ್ಲರೂ ಸಹಕರಿಸಿ

ಸಿಬ್ಬಂದಿಗೆ ವ್ಯವಸ್ಥಾಪಕ ನಿರ್ದೇಶಕ ಕೆ.ಎಂ. ಮುನಿಗೋಪಾಲರಾಜು ಮನವಿ

ಮೈಸೂರು,ಜ.27(ಎಂಟಿವೈ)– ಸೆಸ್ಕ್ ಸಿಬ್ಬಂದಿಯ ಆರೋಗ್ಯ ಸೇವೆಗೆ ಆದ್ಯತೆ ನೀಡುವುದರೊಂದಿಗೆ ಆಧುನಿಕ ತಂತ್ರಜ್ಞಾನ ಬಳಸಿ ಸಂಸ್ಥೆಯ ಪ್ರಗತಿಗೆ ಶ್ರಮಿಸಲಾಗುತ್ತಿದೆ. ಇದಕ್ಕೆ ಎಲ್ಲರೂ ಸಹಕರಿಸಬೇಕಿದೆ ಎಂದು ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕ ಕೆ.ಎಂ.ಮುನಿಗೋಪಾಲ್ ರಾಜು ಮನವಿ ಮಾಡಿದ್ದಾರೆ.

ಮೈಸೂರಿನ ವಿಜಯನಗರದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಪ್ರಧಾನ ಕಚೇರಿಯಲ್ಲಿ ನಡೆದ 77ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ರಾಷ್ಟ್ರಪಿತ ಮಹಾತ್ಮ ಗಾಂಧೀಜಿ, ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್, ಸರ್ದಾರ್ ವಲ್ಲಭಭಾಯ್ ಪಟೇಲ್ ಸೇರಿದಂತೆ ಹಿರಿಯ ಸ್ವಾತಂತ್ರ್ಯ ಹೋರಾಟಗಾರರ ಆದರ್ಶಗಳನ್ನು ನಾವೆಲ್ಲ ಪಾಲಿಸಬೇಕಿದೆ. ದೇಶ ಹಾಗೂ ರಾಜ್ಯವನ್ನು ಪ್ರಗತಿಯತ್ತ ಮುನ್ನಡೆಸಲು ನಾವೆಲ್ಲರೂ ಪಣತೊಡಬೇಕು. ಇಂದು ಕರ್ನಾಟಕ ಅಭಿವೃದ್ಧಿ ಪಥದಲ್ಲಿ ಸಾಗುತ್ತಿದ್ದು, ದೇಶದ ಪ್ರಮುಖ ರಾಜ್ಯಗಳಲ್ಲಿ ಕರ್ನಾಟಕವೂ ಒಂದಾಗಿದೆ. ಅಲ್ಲದೆ, ಭಾರತ ವಿಶ್ವದ ನಾಲ್ಕನೇ ಬಲಿಷ್ಠ ರಾಷ್ಟ್ರವಾಗಿ ಗುರುತಿಸಿಕೊಂಡಿದೆ ಎಂದರು.



ಕರ್ತವ್ಯ ನಿರ್ವಹಣೆ ವೇಳೆ ವಿದ್ಯುತ್ ಅವಘಡದಲ್ಲಿ ಮೃತಪಟ್ಟ ಹನೂರು ಉಪ ವಿಭಾಗ ವ್ಯಾಪ್ತಿಯ ಸೆಸ್ಕ್ ಸಿಬ್ಬಂದಿ ಟಿ.ರಾಹುಲ್ ಅವರ ಕುಟುಂಬ ಸದಸ್ಯರಿಗೆ ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕ ಕೆ.ಎಂ.ಮುನಿಗೋಪಾಲ್ ರಾಜು ಪರಿಹಾರದ ಚೆಕ್ ವಿತರಿಸಿದರು.

ರಾಜ್ಯದಲ್ಲಿ ಇಂಧನ ಇಲಾಖೆ ಸಾಕಷ್ಟು ಅಭಿವೃದ್ಧಿ ಕಂಡಿದ್ದು, ಐದು ಸಾವಿರ ಮೆ.ವ್ಯಾ ವಿದ್ಯುತ್ ಉತ್ಪಾದಿಸಿ, ಗ್ರಿಡ್‌ಗೆ ಸೇರಿಸಲು ಕ್ರಮಕೈಗೊಳ್ಳಲಾಗಿದೆ. ಸೆಸ್ಕ್ ವ್ಯಾಪ್ತಿಯಲ್ಲಿ ಟ್ರಾನ್ಸ್‌ಮಿಷನ್ ವಿಭಾಗದಲ್ಲಿ ಗಮನಾರ್ಹ ಸಾಧನೆಯಾಗಿದೆ. ಕುಸುಮ್–ಸಿ ಯೋಜನೆ ಅಡಿಯಲ್ಲಿ ಚಾವಿಸಾನಿನಿ ವ್ಯಾಪ್ತಿಯಲ್ಲಿ 900 ಮೆಗಾ ವ್ಯಾಟ್ ವಿದ್ಯುತ್ ಉತ್ಪಾದನೆಗೆ ಕ್ರಮ ವಹಿಸಲಾಗಿದೆ. ಬೇಸಿಗೆಯಲ್ಲಿ ವಿದ್ಯುತ್ ಪೂರೈಕೆಗೆ ಒತ್ತಡ ಎದುರಾಗಲಿದ್ದು, ಈ ನಿಟ್ಟಿನಲ್ಲಿ 900 ಮೆ.ವ್ಯಾ ವಿದ್ಯುತ್ ಉತ್ಪಾದನೆಯಾದರೆ ಮಾರ್ಚ್ ವೇಳೆಗೆ 600 ಮೆ.ವ್ಯಾ. ಸೆಸ್ಕ್ ವ್ಯಾಪ್ತಿಗೆ ಸೇರಲಿದೆ. ಕುಸುಮ್–ಬಿ ಯೋಜನೆಯಲ್ಲಿ 6000 ರೈತರು ಲಾಭ ಪಡೆದಿದ್ದು, 60 ಮೆ.ವ್ಯಾ ವಿದ್ಯುತ್ ಗ್ರಿಡ್‌ನಿಂದ ರೈತರಿಗೆ ಲಭ್ಯವಾಗಲಿದೆ. ಹೀಗಾಗಿ ಈ ಯೋಜನೆ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲು ಎಲ್ಲರೂ ಸಹಕರಿಸಬೇಕು ಎಂದರು.

ಎಂಡಿಎ(ಮುಡಾ) ಸೆಸ್ಕ್‌ಗೆ 22 ನಿವೇಶನ ನೀಡಿದೆ. ಇವುಗಳಲ್ಲಿ ಕಚೇರಿ ಹಾಗೂ ಸ್ಟೋರ್‌ಗಳನ್ನು ನಿರ್ಮಿಸಲಾಗುವುದು, ಸ್ಟೇಷನ್ ನಿರ್ಮಾಣಕ್ಕೆ 10 ನಿವೇಶನ ಪಡೆಯಲಾಗಿದೆ. ಹೊಸದಾಗಿ 11 ಕೆವಿ ಮಾರ್ಗ ನಿರ್ಮಾಣಕ್ಕೆ 100–120 ಹೊಸ ಕೇಂದ್ರಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ಇದರಿಂದ ವಿದ್ಯುತ್ ಸೋರಿಕೆ, ವಿದ್ಯುತ್ ಅಡಚಣೆ ಹಾಗೂ ನಷ್ಟ ಕಡಿಮೆ ಆಗಲಿದೆ. ಕೊಡಗು ಜಿಲ್ಲೆಯ ವಿದ್ಯುತ್ ಸಮಸ್ಯೆ ಬಗೆಹರಿಸಲು ಹಾಗೂ ವಿದ್ಯುತ್ ಪೂರೈಕೆ ವ್ಯವಸ್ಥೆ ಬಲಪಡಿಸುವ ನಿಟ್ಟಿನಲ್ಲಿ 200 ಕೋಟಿ ರೂ. ವೆಚ್ಚದಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಮೈಸೂರು ನಗರದಲ್ಲಿ ವಿದ್ಯುತ್ ಯುಜಿ ಕೇಬಲ್ ಅಳವಡಿಕೆ, ಹಾಡಿಗಳಲ್ಲಿ ವಿದ್ಯುದ್ದೀಕರಣಕ್ಕೆ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸೆಸ್ಕ್ ತಾಂತ್ರಿಕ ನಿರ್ದೇಶಕ ಡಿ.ಜೆ. ದಿವಾಕರ್, ಮುಖ್ಯ ಪ್ರಧಾನ ವ್ಯವಸ್ಥಾಪಕರು(ತಾಂತ್ರಿಕ) ಶರಣಮ್ಮ ಎಸ್. ಜಂಗಿನ, ಮುಖ್ಯ ಆರ್ಥಿಕ ಅಧಿಕಾರಿ ಜಿ. ರೇಣುಕಾ, ಪ್ರಧಾನ ವ್ಯವಸ್ಥಾಪಕಿ(ಆ ಮತ್ತು ಮಾ.ಸಂ) ಡಾ.ಬಿ.ಆರ್. ರೂಪಾ, ಸೆಸ್ಕ್ ಜಾಗೃತ ದಳದ ಎಸ್ಪಿ ಸವಿತಾ ಹೂಗಾರ್, ಕೆನರಾ ಬ್ಯಾಂಕ್ ವಲಯ ವ್ಯವಸ್ಥಾಪಕ ಉಮೇಶ್ ಸೇರಿದಂತೆ ಇತರರಿದ್ದರು.

1.06 ಕೋಟಿ ರೂ. ಪರಿಹಾರದ ಚೆಕ್ ವಿತರಣೆ

ಕರ್ತವ್ಯ ನಿರ್ವಹಣೆ ವೇಳೆ ವಿದ್ಯುತ್ ಅವಘಡದಲ್ಲಿ ಇತ್ತೀಚೆಗೆ ಮೃತಪಟ್ಟ ಚಾಮರಾಜನಗರ ಜಿಲ್ಲೆಯ ಹನೂರು ಉಪ ವಿಭಾಗ ವ್ಯಾಪ್ತಿಯ ಸೆಸ್ಕ್ ಸಿಬ್ಬಂದಿ ಟಿ.ರಾಹುಲ್ ಅವರ ಕುಟುಂಬ ಸದಸ್ಯರಿಗೆ 1.06 ಕೋಟಿ ರೂ.ಗಳ ಪರಿಹಾರದ ಚೆಕ್‌ಅನ್ನು ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕರು ವಿತರಿಸಿದರು.

ಮೂಗನಹುಂಡಿ ಏತ ನೀರಾವರಿ ಯೋಜನೆ ಪ್ರಸಕ್ತ ಬಜೆಟ್‌ನಲ್ಲಿ ಪ್ರಸ್ತಾಪ

ಜಿ.ಟಿ.ದೇವೇಗೌಡ ಬೇಡಿಕೆಗೆ ಸಣ್ಣ ನೀರಾವರಿ ಸಚಿವ ಬೋಸ್‌ರಾಜ್ ಭರವಸೆ



ಜಿ.ಟಿ.ದೇವೇಗೌಡ



ಬೋಸ್‌ರಾಜ್

ಮೈಸೂರು, ಜ.27– ಮೈಸೂರಿನ ಮೂಗನಹುಂಡಿ ಏತ ನೀರಾವರಿ ಯೋಜನೆಯನ್ನು ತ್ವರಿತವಾಗಿ ಅನುಷ್ಠಾನಗೊಳಿಸುವಂತೆ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು, ಸರ್ಕಾರವನ್ನು ಒತ್ತಾಯಿಸಿದ್ದಾರೆ. ವಿಧಾನಸಭೆ ಅಧಿವೇಶನದಲ್ಲಿ ಮಂಗಳವಾರ ಮಾತನಾಡಿದ ಅವರು, ಮೈಸೂರು ಹಾಗೂ ಹುಣಸೂರು ತಾಲೂಕುಗಳ ಹಲವು ಗ್ರಾಮಗಳ ಕೆರೆ-ಕಟ್ಟೆಗಳಿಗೆ ನೀರು ತುಂಬಿಸುವ ಮೂಲಕ ಈ ಭಾಗದ ಅಂತರ್ಜಲ ವೃದ್ಧಿಸುವ ಮಹತ್ವಾಕಾಂಕ್ಷೆಯ ಈ ಯೋಜನೆಯಿಂದ ಸಾಧ್ಯವಿದೆ ಎಂದರು.

ಕೆಆರ್‌ಎಸ್ ಅಣೆಕಟ್ಟೆಗಾಗಿ ನನ್ನ ಕ್ಷೇತ್ರ ವ್ಯಾಪ್ತಿಯ ಹಲವು ಹಳ್ಳಿಗಳು ಮುಳುಗಡೆಯಾಗಿವೆ. ಅಣೆಕಟ್ಟೆ ಹಿನ್ನೀರು ಪ್ರಮಾಣ ಹೆಚ್ಚಾಗಿದ್ದರೂ ಕೆರೆಗಳಲ್ಲಿ ನೀರಿಲ್ಲದೆ ಅಂತರ್ಜಲ ಕುಸಿದಿದೆ. ಸಾವಿರ ಅಡಿ ಬೋರ್‌ವೆಲ್ ತೆಗೆಸಿದರೂ ನೀರು ಸಿಗುತ್ತಿಲ್ಲ. ಜಾನುವಾರುಗಳಿಗೆ ಕುಡಿಯುವುದಕ್ಕೂ ನೀರಿಲ್ಲದ ದುಸ್ಥಿತಿ ನಿರ್ಮಾಣವಾಗಿದೆ ಎಂದು ಪರಿಸ್ಥಿತಿಯ ಗಂಭೀರತೆ ವಿವರಿಸಿದರು.

ಮೈಸೂರು ತಾಲೂಕಿನ ಮೂಗನಹುಂಡಿ, ಕಮರಹಳ್ಳಿ, ಅನಗಳ್ಳಿ, ದೊಡ್ಡಮಾರಗೌಡನಹಳ್ಳಿ, ಮಾದಹಳ್ಳಿ, ನಗ್ಗಳ್ಳಿ, ಶೆಟ್ಟಿನಾಯಕನಹಳ್ಳಿ, ಮೈದನಹಳ್ಳಿ, ಕೆ.ಜಿ.ಮಲ್ಲಹಳ್ಳಿ ಹಾಗೂ ಕುಮಾರಬೀಡು ಗ್ರಾಮದ 13 ಕೆರೆ ಹಾಗೂ ಹುಣಸೂರು ತಾಲೂಕು, ಬಿಳಿಕೆರೆ ಹೋಬಳಿಯ ಮನುಗನಹಳ್ಳಿ, ಮೂಗನಹಳ್ಳಿ ಕಟ್ಟೆ, ಅಂಕನಹಳ್ಳಿ, ಹಂದನಹಳ್ಳಿ, ದೊಡ್ಡ ಬೀಚನಹಳ್ಳಿ ದಲ್ಲಾಳ್ ಕೊಪ್ಪಲು ಗ್ರಾಮಗಳ 7 ಕೆರೆ ಸೇರಿ ಒಟ್ಟು 20 ಕೆರೆಗಳಿಗೆ ಕೆಆರ್‌ಎಸ್‌ನಿಂದ ನೀರು ತುಂಬಿಸುವ 75 ಕೋಟಿ ಅಂದಾಜು ಮೊತ್ತದ ಈ ಯೋಜನೆಗೆ ಸಂಬಂಧ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.

ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಸಂಪೂರ್ಣ ಮಾಹಿತಿ ಗೊತ್ತಿದೆ. ನಾನು ಎರಡು ಬಾರಿ ಅವರನ್ನು ಖುದ್ದು ಭೇಟಿ ಮಾಡಿ, ಮನವಿ ಮಾಡಿದ್ದೇನೆ. ಸಣ್ಣ ನೀರಾವರಿ ಸಚಿವರಾದ ಬೋಸರಾಜ್ ಅವರೊಂದಿಗೂ ಎರಡು ಬಾರಿ ಚರ್ಚಿಸಿದ್ದೇನೆ. ಚಾಮರಾಜನಗರದ ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆದ ವಿಶೇಷ ಸಚಿವ ಸಂಪುಟ ಸಭೆಯಲ್ಲೇ ಅನುಮೋದನೆ ನೀಡುವ ಭರವಸೆ ನೀಡಿದ್ದರು. ಮುಂದಿನ ಸಚಿವ ಸಂಪುಟ ಸಭೆಯಲ್ಲಾದರೂ ಈ ವಿಷಯ ಮಂಡಿಸಿ, ಅನುಮೋದನೆ ನೀಡುವ ಮೂಲಕ ಈ ಯೋಜನೆ ಸಾಕಾರಕ್ಕೆ ಸಹಕರಿಸಬೇಕು ಎಂದು ಕೋರಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಬೋಸರಾಜ್, ಈ ಬಾರಿ ಆಯವ್ಯಯದಲ್ಲಿ ಪ್ರಸ್ತಾಪಿಸಿ, ಆದಷ್ಟು ಬೇಗ ಮೂಗನಹುಂಡಿ ಏತ ನೀರಾವರಿ ಯೋಜನೆ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಸಿಗ್ಮಾ ಆಸ್ಪತ್ರೆಯಲ್ಲಿ ಗಣರಾಜ್ಯೋತ್ಸವ

ಮೈಸೂರು, ಜ.27– ನಗರದ ಸಿಗ್ಮಾ ಆಸ್ಪತ್ರೆಯಲ್ಲಿ ಸೋಮವಾರ 77ನೇ ಗಣರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಈ ವೇಳೆ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಸಿಗ್ಮಾ ಕಿಡ್ನಿ ಕಸಿ ಕಾನೂನು ಸಲಹೆಗಾರರು, ನೆಫ್ರೊಲಾಜಿಸ್ಟ್ ಮತ್ತು ಟ್ರಾನ್ಸ್ ಪ್ಲಾಂಟ್ ಫಿಜಿಷಿಯನ್ ಡಾ. ಅನಿಕೇತ್ ಪ್ರಭಾಕರ್, ಭಾರತ ಸಂವಿಧಾನ ಜಗತ್ತಿನಲ್ಲಿಯೇ ಅತೀ ದೊಡ್ಡ ಲಿಖಿತ ಸಂವಿಧಾನವಾಗಿದೆ. ಸಂವಿಧಾನದ ಆಶಯಗಳನ್ನು ಪಾಲಿಸುವ ಮೂಲಕ ಶಾಂತಿ, ಸೌಹಾರ್ದತೆಯಿಂದ ಬಾಳ್ವೆ ನಡೆಸಬೇಕು. ಪ್ರತಿಯೊಬ್ಬರಿಗೂ ಸಮಾನತೆ, ಅಭಿವ್ಯಕ್ತಿ ಸ್ವಾತಂತ್ರ್ಯ ನೀಡುವ ಮೂಲಕ ಸಮ ಸಮಾಜನದಲ್ಲಿ ಶಾಂತಿಯಿಂದ ಜೀವಿಸಲು ಸಂವಿಧಾನ ಅನುವುಮಾಡಿಕೊಟ್ಟಿದೆ ಎಂದು ಹೇಳಿದರು.

ವಕೀಲ ಜಯಪ್ರಕಾಶ್ ಮಾತನಾಡಿ, 77ನೇ ಗಣರಾಜ್ಯೋತ್ಸವ ಸಂವಿಧಾನ ರಚನೆಗೆ ಶ್ರಮಿಸಿದ ಪ್ರತಿಯೊಬ್ಬರನ್ನು ಸ್ಮರಿಸುವ ದಿನವಾಗಿದೆ. ಅದರಲ್ಲೂ ಸಂವಿಧಾನರ ರಚನಾ ಸಮಿತಿಯ ಅಧ್ಯಕ್ಷರಾಗಿದ್ದ ಡಾ. ಭೀಮರಾವ್ ಅಂಬೇಡ್ಕರ್ ಅವರ ಕೊಡುಗೆಯನ್ನು ನೆನೆಯಬೇಕು ಎಂದರು.

ಬ್ರಿಟಿಷ್ ಆಳ್ವಿಕೆಯಿಂದ ಪೂರ್ಣವಾಗಿ ಮುಕ್ತಿಹೊಂದಿ ಭಾರತದ ಸ್ವಾತಂತ್ರ್ಯದ ನಿರ್ಣಯವನ್ನು ಅಂಗೀಕರಿಸಿ ಈ ಐತಿಹಾಸಿಕ ದಿನವನ್ನು ಗಣರಾಜ್ಯ ದಿನವಾಗಿ ಆಚರಿಸಲಾಗುತ್ತದೆ ಎಂದು ತಿಳಿಸಿದರು.

ಸಿಗ್ಮಾ ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲ ಮಂಜುನಾಥ್, ಮಕ್ಕಳ ತಜ್ಞರಾದ ಡಾ.ಕನ್ಯಾ ಎಂಎಸ್., ವೈದ್ಯರಾದ ಡಾ.ಸೌಮಿಥ್, ಡಾ. ಕಂಚಿಲ್, ಮಾನವ ಸಂಪನ್ಮೂಲ ವ್ಯಕ್ತಿ ನಿರೀಕ್ಷಾ ಅರಸ್, ನರ್ಸಿಂಗ್ ಸೂಪರಿಂಟೆಂಡೆಂಟ್ ದಮಯಂತಿ, ಆಸ್ಪತ್ರೆಯ ವೈದ್ಯರು ಹಾಗೂ ನರ್ಸಿಂಗ್ ಸಿಬ್ಬಂದಿ ಉಪಸ್ಥಿತರಿದ್ದರು.



ಸಿಗ್ಮಾ ಆಸ್ಪತ್ರೆಯಲ್ಲಿ 77ನೇ ಗಣರಾಜ್ಯೋತ್ಸವ ದಿನಾಚರಣೆ ಆಚರಿಸಲಾಯಿತು.

ಮಹಿಳಾ ಅಧಿಕಾರಿಗೆ ಬೆದರಿಕೆ ಹಾಕಿದ್ದ ರಾಜೀವ್‌ಗೌಡಗೆ ಜೈಲೇ ಗತಿ

ಕಾಂಗ್ರೆಸ್ ಮುಖಂಡನ ಅಟ್ಟಹಾಸಕ್ಕೆ ಕೋರ್ಟ್ ಬ್ರೇಕ್!



ಚಿಕ್ಕಬಳ್ಳಾಪುರ, ಜ.27– ಶಿಡ್ಲಘಟ್ಟ ನಗರಸಭೆ ಪೌರಾಯುಕ್ತೆ ಅಮೃತಾ ಗೌಡ ಅವರನ್ನು ಅವಾಚ್ಯ ಪದಗಳಿಂದ ನಿಂದಿಸಿ, ಬೆದರಿಕೆ ಹಾಕಿದ ಆರೋಪ ಎದುರಿಸುತ್ತಿರುವ ಕಾಂಗ್ರೆಸ್ ಮುಖಂಡ ರಾಜೀವ್ ಗೌಡ ಜೈಲು ಪಾಲಾಗಿದ್ದಾರೆ. ಸುಮಾರು 12 ದಿನಗಳ ಕಾಲ ತಲೆಮರೆಸಿಕೊಂಡಿದ್ದ ಆರೋಪಿಯನ್ನು ಇಂದು ಪೊಲೀಸರು ಬಂಧಿಸಿ, ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು, ಕೋರ್ಟ್ ಆತನ ಜಾಮೀನು ಅರ್ಜಿಯನ್ನು ವಜಾಗೊಳಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. ಇದೇ ವೇಳೆ, ಆರೋಪಿಗೆ ಆಶ್ರಯ ನೀಡಿದ ಆರೋಪದಡಿ ಬಂಧಿತನಾಗಿದ್ದ ಎರಡನೇ ಆರೋಪಿ ಮೈಕೆಲ್‌ಗೆ ನ್ಯಾಯಾಲಯ ಜಾಮೀನು ಮಂಜೂರು ಮಾಡಿದೆ.

ಕೋರ್ಟ್ ಆವರಣದಲ್ಲಿ ಬಿಗಿ ಬಂದೋಬಸ್ತ್: ರಾಜೀವ್‌ಗೌಡನನ್ನು ಇಂದು ಮಧ್ಯಾಹ್ನ 3 ಗಂಟೆಗೆ ಶಿಡ್ಲಘಟ್ಟದ ಹೆಚ್ಚುವರಿ ಅಪರ ನ್ಯಾಯಾಧೀಶೆ ಸುಕನ್ಯಾ ಅವರ ಮುಂದೆ ಹಾಜರುಪಡಿಸಲಾಯಿತು. ಈ ವೇಳೆ ಕೋರ್ಟ್ ಆವರಣದಲ್ಲಿ ನೂರಾರು ಬೆಂಬಲಿಗರು ಜಮಾಯಿಸಿದ್ದರಿಂದ ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು. ಪರಿಸ್ಥಿತಿ ಕೈಮೀರದಂತೆ ಪೊಲೀಸರು ಬ್ಯಾರಿಕೇಡ್‌ಗಳನ್ನು ಅಳವಡಿಸಿ, ಕೆಎಸ್‌ಆರ್‌ಪಿ ತುಕಡಿಗಳನ್ನು ನಿಯೋಜಿಸಿದ್ದರು. ಬೆಂಬಲಿಗರು ಜಾಮೀನಿಗಾಗಿ ಪ್ರಾರ್ಥನೆ ಸಲ್ಲಿಸುತ್ತಿದ್ದಾಗ, ರಾಜೀವ್ ಗೌಡ ಕೈಬೀಸುತ್ತಲೇ ಕೋರ್ಟ್ ಒಳಗೆ ಪ್ರವೇಶಿಸಿದ್ದು ಕಂಡುಬಂದಿತು.

ಸರಕಾರಿ ವಕೀಲರ ಪ್ರಬಲ ವಾದ: ಇನ್ನು ವಿಚಾರಣೆ ವೇಳೆ ಸರಕಾರಿ ಪರ ವಕೀಲರು ರಾಜೀವ್ ಗೌಡನ ವಿರುದ್ಧ ಪ್ರಬಲ ಆಕ್ಷೇಪಣೆ ಸಲ್ಲಿಸಿದರು. ಆರೋಪಿ ಮಹಿಳಾ ಅಧಿಕಾರಿಯ ವಿರುದ್ಧ ಅತ್ಯಂತ ಕೆಟ್ಟದಾಗಿ ಮಾತನಾಡಿದ್ದಾರೆ. ಆ ಶಬ್ದಗಳನ್ನು ಬಹಿರಂಗವಾಗಿ ಹೇಳಲು ಸಾಧ್ಯವಿಲ್ಲ. ಕಳೆದ 12 ದಿನಗಳಿಂದ ತಲೆಮರೆಸಿಕೊಂಡಿದ್ದ ಆರೋಪಿಯ ಮೊಬೈಲ್ ಇನ್ನೂ ವಶಪಡಿಸಿಕೊಳ್ಳಬೇಕಿದೆ. ಯಾವೆಲ್ಲಾ ಸ್ಥಳಗಳಲ್ಲಿ ಆಶ್ರಯ ಪಡೆದಿದ್ದರು ಎಂಬ ಬಗ್ಗೆ ಮಹಜರು ನಡೆಸಬೇಕಿರುವುದರಿಂದ ಪೊಲೀಸ್ ಕಸ್ಟಡಿಗೆ ನೀಡಬೇಕು ಎಂದು ವಾದ ಮಂಡಿಸಿದರು. ಅಲ್ಲದೆ, ಬಿಎನ್‌ಎಸ್ 132 (BNS 132) ಸೆಕ್ಷನ್ ಅಡಿ ಪ್ರಕರಣದ ಗಾಂಭೀರ್ಯವನ್ನು ನ್ಯಾಯಾಧೀಶರ ಗಮನಕ್ಕೆ ತಂದರು.

ಆರೋಪಿ ಪರ ವಕೀಲರ ಪ್ರತಿವಾದ: ರಾಜೀವ್‌ಗೌಡ ಪರ ಹಿರಿಯ ವಕೀಲ ವಿವೇಕ್ ಸುಬ್ಬಾರೆಡ್ಡಿ ವಾದ ಮಂಡಿಸಿ, ಇದು ರಾಜಕೀಯ ಪ್ರೇರಿತ ದೂರು. ಘಟನೆ ನಡೆದ ಎರಡು ದಿನಗಳ ಬಳಿಕ ದೂರು ನೀಡಲಾಗಿದೆ. ಈಗಾಗಲೇ ಆರೋಪಿಯು ಮಾಧ್ಯಮಗಳ ಮೂಲಕ ಕ್ಷಮೆಯನ್ನೂ ಕೇಳಿದ್ದಾರೆ. ಕೇವಲ ಜೈಲಿಗೆ ಹಾಕಬೇಕೆಂಬ ಉದ್ದೇಶದಿಂದ ಸೆಕ್ಷನ್ ಹಾಕಲಾಗಿದೆ ಎಂದು ಮಧ್ಯಂತರ ಜಾಮೀನಿಗಾಗಿ ಮನವಿ ಮಾಡಿದರು. ಆದರೆ, ನ್ಯಾಯಾಲಯ ಈ ವಾದವನ್ನು ಪುರಸ್ಕರಿಸದೆ ರಾಜೀವ್ ಗೌಡನನ್ನು ಜೈಲಿಗಟ್ಟಿದೆ.

ಮತ್ತೊಬ್ಬ ಆರೋಪಿ ಮೈಕೆಲ್ ಪರ ವಾದಿಸಿದ ವಕೀಲರು, ಮೈಕೆಲ್ ಕೇವಲ ಚಹಾ ಕುಡಿಯಲು ಜೊತೆಗಿದ್ದರೇ ವಿನಃ ಯಾವುದೇ ಸಂಚಿನಲ್ಲಿ ಭಾಗಿಯಾಗಿಲ್ಲ ಎಂದು ಮನವಿ ಮಾಡಿದ್ದರಿಂದ ಆತನಿಗೆ ಜಾಮೀನು ದೊರೆತಿದೆ.

ಗಾರ್ಡನ್ ಟೆನ್ನಿಸ್ ಕ್ಲಬ್ ನವೀಕೃತ ಕಟ್ಟಡ ಉದ್ಘಾಟನೆ



ಮೈಸೂರಿನ ನಜರ್‌ಬಾದ್‌ನಲ್ಲಿರುವ ಗಾರ್ಡನ್ ಟೆನ್ನಿಸ್ ಕ್ಲಬ್ ಆವರಣದಲ್ಲಿ ಗಣರಾಜ್ಯೋತ್ಸವ ಆಚರಣೆ ವೇಳೆ ಕ್ಲಬ್‌ನ ನವೀಕೃತ ಕಟ್ಟಡವನ್ನು ಶಾಸಕ ಕೆ.ಹರೀಶ್‌ಗೌಡ ಉದ್ಘಾಟಿಸಿದರು. ಈ ವೇಳೆ ಮುಡಾ ಮಾಜಿ ಅಧ್ಯಕ್ಷ ಡಿ.ಧ್ರುವಕುಮಾರ್, ಕ್ಲಬ್ ಅಧ್ಯಕ್ಷ ಎನ್.ಧ್ರುವರಾಜ್, ಗೌರವ ಕಾರ್ಯದರ್ಶಿ ಎಂ.ಎನ್.ನಂದೀಶ್ ಮತ್ತಿತರರು ಉಪಸ್ಥಿತರಿದ್ದರು.


ಸೈಬರ್ ವಂಚಕರಿಂದ ಡಿಜಿಟಲ್ ಅರೆಸ್ಟ್ ಮಂಕುಬೂದಿ: ವಯಸ್ಸಾದ ದಂಪತಿಯಿಂದ ಕೋಟಿಗೂ ಅಧಿಕ ಲೂಟಿ!

ಮೈಸೂರು,ಜ.27(ಪಿಎಂ)– ಸೈಬರ್ ವಂಚಕರು ವಾಟ್ಸಪ್ ಕರೆ ಮೂಲಕ ಹೂಡಿದ ಡಿಜಿಟಲ್ ಅರೆಸ್ಟ್ ಕುತಂತ್ರಕ್ಕೆ ಬಲಿಯಾಗಿ ವಿವೇಕಾನಂದನಗರದ ಹಿರಿಯ ನಾಗರಿಕ ದಂಪತಿ 1 ಕೋಟಿ 50 ಸಾವಿರ ರೂ. ಕಳೆದುಕೊಂಡಿರುವ ಸಂಬಂಧ ನಗರದ ಸೆನ್ ಅಪರಾಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಜ.2ರಂದು ವಾಟ್ಸಪ್‌ನಲ್ಲಿ ಕರೆ ಮಾಡಿ, ಟ್ರಾಯ್‌ನಿಂದ ಕರೆ ಮಾಡುತ್ತಿರುವುದಾಗಿ ತಿಳಿಸಿದ ಸೈಬರ್ ವಂಚಕರು, ನಿಮ್ಮ ಆಧಾರ್ ದುರುಪಯೋಗವಾಗಿದೆ ಎಂದು ಬೆದರಿಸಿದ್ದಾರೆ. ಅಲ್ಲದೆ, ಕರೆಯನ್ನು ಮುಂಬೈ ಸೈಬರ್ ಬ್ರಾಂಚ್‌ಗೆ ವರ್ಗಾಯಿಸುತ್ತಿದ್ದೇವೆ ಎಂದು ಹೇಳಿದ್ದಾರೆ. ಬಳಿಕ ವಾಟ್ಸಪ್‌ನಲ್ಲಿ ವಿಡಿಯೋ ಕರೆ ಮಾಡಿ ನಿಮ್ಮ ಹೆಸರಿನ ಬ್ಯಾಂಕ್ ಖಾತೆಗಳ ಪರಿಶೀಲನೆ ಮಾಡಬೇಕೆಂದು ತಿಳಿಸಿದ ವಂಚಕರು, ನಿಮ್ಮನ್ನು ಡಿಜಿಟಲ್ ಅರೆಸ್ಟ್ ಮಾಡಿದ್ದು, ನಿಮ್ಮ ಎಲ್ಲಾ ಬ್ಯಾಂಕ್ ಖಾತೆಗಳನ್ನು ಪರಿಶೀಲಿಸಬೇಕು. ಹಾಗಾಗಿ ನಿಮ್ಮ ಬ್ಯಾಂಕ್ ಖಾತೆಯಲ್ಲಿರುವ ಎಲ್ಲಾ ಹಣವನ್ನು ನಮಗೆ ವರ್ಗಾಯಿಸಬೇಕೆಂದು ಸೂಚನೆ ನೀಡಿದ್ದಾರೆ.

ಇದನ್ನು ನಂಬಿ ಹಿರಿಯ ನಾಗರಿಕರು, ತಮ್ಮ ಬ್ಯಾಂಕ್ ಖಾತೆ ಯಿಂದ 40,00,000 ರೂ. ಮತ್ತು ಅವರ ಪತ್ನಿ ಖಾತೆಯಿಂದ 60,50,000 ರೂ. ಹಣವನ್ನು ವಂಚಕರು ಸೂಚಿಸಿದ ಬ್ಯಾಂಕ್ ಖಾತೆಗೆ ಕಳುಹಿಸಿದ್ದಾರೆ. ವಂಚಕರು ಹೇಳಿದಂತೆ ಮೂರು ದಿನವಾದರೂ ವಾಪಸ್ಸು ತಮ್ಮ ಖಾತೆಗೆ ಹಣ ಬಾರದಿದ್ದಾಗ ವಂಚನೆಗೆ ಒಳಗಾಗಿ ರುವುದು ಮನವರಿಕೆಯಾಗಿದೆ. ಈ ಸಂಬಂಧ ವಂಚನೆಗೆ ಒಳಗಾದ ಹಿರಿಯ ನಾಗರಿಕರು ನೀಡಿದ ದೂರಿನನ್ವಯ ಎಫ್‌ಐಆರ್ ದಾಖಲಾಗಿದೆ.

ರಾಯಣ್ಣ ಹುತಾತ್ಮ ದಿನಾಚರಣೆ



ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಬಳಗದ ವತಿಯಿಂದ ರಾಯಣ್ಣ ಹುತಾತ್ಮ ದಿನಾಚರಣೆಯನ್ನು ಆಚರಿಸಲಾಯಿತು ಹಾಗೂ ಅನ್ನ ಸಂತರ್ಪಣೆಯನ್ನು ಏರ್ಪಡಿಸಿದ್ದರು. ಇದೇ ಸಂದರ್ಭದಲ್ಲಿ ಹಿನಕಲ್ ಮಾಜಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾದ ಎಸ್ ಹೊನ್ನಪ್ಪನವರು, ಶ್ರೀಧರ್ ಮಾಯಪ್ಪ, ಉದಯ್ ಕುಮಾರ್, ಹರೀಶ್, ಸಂದೀಪ, ಸಂಜಯ್ ಹಾಗೂ ಹಿನಕಲ್ ಮುಖಂಡರು ಉಪಸ್ಥಿತರಿದ್ದರು.

ಭವಿಷ್ಯದಲ್ಲಿ ಎದುರಾಗಬಹುದಾದ ಗರ್ಭಕಂಠದ ಕ್ಯಾನ್ಸರ್ ತಡೆಗೆ

ಮೈಸೂರು ಜಿಲ್ಲೆಯಲ್ಲಿ 8 ಸಾವಿರ ಬಾಲಕಿಯರಿಗೆ ಹೆಚ್‌ಪಿವಿ ಲಸಿಕೆ

- ಲಸಿಕಾಕರಣಕ್ಕೆ ಆರೋಗ್ಯ ಇಲಾಖೆಯಿಂದ ಸಿದ್ಧತೆ
- 14ರಿಂದ 15 ವರ್ಷದ ಹೆಣ್ಣು ಮಕ್ಕಳಿಗೆ ಉಚಿತ ಚುಚ್ಚುಮದ್ದು



ಮೈಸೂರು,ಜ.27(ಪಿಎಂ)– ರಾಷ್ಟ್ರೀಯ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಡಿ ಗರ್ಭಕಂಠದ ಕ್ಯಾನ್ಸರ್ ತಡೆಗೆ ಹೆಚ್‌ಪಿವಿ (ಹ್ಯೂಮನ್ ಪ್ಯಾಪಿಲೋಮ ವೈರಸ್) ಲಸಿಕೆ ನೀಡಲು ಆರೋಗ್ಯ ಇಲಾಖೆ ಮೈಸೂರು ಜಿಲ್ಲೆಯಲ್ಲಿ ಸಿದ್ಧತೆ ನಡೆಸಿದ್ದು, ಜಿಲ್ಲೆಯಲ್ಲಿ 8 ಸಾವಿರಕ್ಕೂ ಅಧಿಕ ಬಾಲಕಿಯರಿಗೆ ಈ ಲಸಿಕೆ ನೀಡಲು ಪ್ರಕ್ರಿಯೆ ಆರಂಭಿಸಿದೆ.

14 ವರ್ಷ ತುಂಬಿದ ಮತ್ತು 15 ವರ್ಷದೊಳಗಿನ ಹೆಣ್ಣು ಮಕ್ಕಳಿಗೆ ಒಂದು ಡೋಸ್ ಲಸಿಕೆ ನೀಡಲು ಆರೋಗ್ಯ ಇಲಾಖೆ ವೈದ್ಯಾಧಿಕಾರಿಗಳಿಗೆ ತರಬೇತಿ ಸೇರಿದಂತೆ ವಿವಿಧ ತಯಾರಿ ನಡೆಸಿದೆ. ಭವಿಷ್ಯದಲ್ಲಿ ಎದುರಾಗಬಹುದಾದ ಗರ್ಭಕಂಠದ ಕ್ಯಾನ್ಸರ್ ತಡೆಗೆ ಹದಿಹರೆಯದಲ್ಲೇ ಹೆಚ್‌ಪಿವಿ ಲಸಿಕೆ ಪಡೆಯುವುದು ಉತ್ತಮ ಮಾರ್ಗ. ಸರ್ವಿಕಲ್ ಕ್ಯಾನ್ಸರ್ (ಗರ್ಭಕಂಠದ ಕ್ಯಾನ್ಸರ್) ಗರ್ಭಾಶಯದ ಕೆಳಗಿನ ಭಾಗವಾದ ಗರ್ಭಕಂಠದ ಅಂಗಾಂಶಗಳಲ್ಲಿ ರೂಪುಗೊಳ್ಳುತ್ತದೆ. ಗರ್ಭಕಂಠದ ಒಳಪದರದಲ್ಲಿ ಅಸಹಜ ಜೀವಕೋಶದ ಬೆಳವಣಿಗೆಯಿಂದಾಗಿ ಈ ಕ್ಯಾನ್ಸರ್ ಉಂಟಾಗುತ್ತದೆ.

'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಆರ್‌ಸಿಹೆಚ್ ಅಧಿಕಾರಿ ಡಾ. ಮಹಮ್ಮದ್ ಸಿರಾಜ್ ಅಹಮದ್, ಲಸಿಕೆ ನೀಡುವ ಸಂಬಂಧ ಅಗತ್ಯ ಸಿದ್ಧತೆ ಮಾಡಿಕೊಳ್ಳುತ್ತಿದ್ದು, ತರಬೇತಿ ಸಹ ನೀಡಲಾಗುತ್ತಿದೆ. ಬಹುಶಃ ಮುಂದಿನ ತಿಂಗಳಿಂದ ಈ ಲಸಿಕೆ ನೀಡುವ ಪ್ರಕ್ರಿಯೆ ಪ್ರಾರಂಭವಾಗಬಹುದು. ಗರ್ಭಕಂಠದ ಕ್ಯಾನ್ಸರ್ ತಡೆಗೆ ಈ ಲಸಿಕೆ ಖಾಸಗಿ ವೈದ್ಯಕೀಯ ಕ್ಷೇತ್ರದಲ್ಲಿ ಸುಮಾರು 20 ವರ್ಷಗಳಿಂದಲೂ ಇದೆ. ಇದೇ ಮೊದಲ ಬಾರಿಗೆ ಸರ್ಕಾರದಿಂದ ಉಚಿತವಾಗಿ ಈ ಲಸಿಕೆ ನೀಡಲಾಗುತ್ತಿದೆ ಎಂದು ತಿಳಿಸಿದರು.

14 ವರ್ಷ ಮೇಲ್ಪಟ್ಟ ಹಾಗೂ 15 ವರ್ಷದೊಳಗಿನ ಹೆಣ್ಣು ಮಕ್ಕಳಿಗೆ ಲಸಿಕೆ ನೀಡುತ್ತಿದ್ದು, ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳಲ್ಲಿ ಈ ವಯಸ್ಸಿನ ಹೆಣ್ಣು ಮಕ್ಕಳಿಗೆ ಲಸಿಕೆ ನೀಡಲಾಗುವುದು. ಇದಕ್ಕೆ ಎಪಿಎಲ್, ಬಿಪಿಎಲ್ ಎಂಬ ಮಾನದಂಡ ಇರುವುದಿಲ್ಲ. ಜಿಲ್ಲಾಸ್ಪತ್ರೆ, ತಾಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಲಸಿಕೆ ನೀಡಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದರು.

ಸರ್ವೇ ಮೂಲಕ ಅರ್ಹ ಮಕ್ಕಳನ್ನು ಗುರುತಿಸಿದ್ದು, ಅಷ್ಟು ಮಕ್ಕಳಿಗೆ ಲಸಿಕೆ ನೀಡಿದ ನಂತರವೂ ಪ್ರತಿ ಗುರುವಾರದ ಲಸಿಕಾಕರಣದ ಕಾರ್ಯಕ್ರಮದಲ್ಲಿ ಈ ಲಸಿಕೆ ಅನ್ನೂ ಸೇರಿಸುವ ಸಾಧ್ಯತೆ ಇದೆ. ಇಲಾಖೆಯಿಂದ ಲಸಿಕೆ ನೀಡಲು ಈಗ ಯೋಜಿಸಿರುವ ವಯಸ್ಸಿನ ಮಕ್ಕಳಿಗೆ ಒಂದು ಡೋಸ್ ಲಸಿಕೆ ಸಾಕಾಗುತ್ತದೆ. ಅವರಿಗೆ ಜೀವನಪೂರ್ತಿ ಇದೊಂದೇ ಡೋಸ್ ಲಸಿಕೆ ರಕ್ಷಣೆ ನೀಡಲಿದೆ. ವೈದ್ಯಕೀಯ ಕ್ಷೇತ್ರದ ಖಾಸಗಿ ವಲಯ ಗಳಲ್ಲಿ 15 ವರ್ಷ ಮೇಲ್ಪಟ್ಟವರಿಗೂ ಲಸಿಕೆ ನೀಡಲಾಗುತ್ತದೆ. ಆದರೆ ಈ ವಯಸ್ಸಿಗೆ ಎರಡು ಡೋಸ್ ಅಗತ್ಯವಾಗುತ್ತದೆ. ಸರ್ಕಾರಿ ಯೋಜನೆಯಲ್ಲಿ ಒಂದೇ ಡೋಸ್ ನೀಡುವ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಎಡಗೈ ತೋಳಿಗೆ ಈ ಲಸಿಕೆ ನೀಡಲಾಗುತ್ತದೆ. ಇದು ಸುರಕ್ಷಿತ ವಾಗಿದ್ದು, ಯಾವುದೇ ಗಂಭೀರ ಪ್ರಮಾಣದ ಅಡ್ಡ ಪರಿಣಾಮ ಉಂಟುಮಾಡುವುದಿಲ್ಲ ಎಂಬುದು ಪ್ರಾಯೋಗಿಕವಾಗಿ ಸಾಬೀತಾಗಿದೆ ಎಂದು ವಿವರಿಸಿದರು.

ರಾಜ್ಯ ಸರ್ಕಾರದಿಂದ ಈ ಲಸಿಕಾಕರಣದ ಬಗ್ಗೆ ವಿಶೇಷ ಆಸಕ್ತಿ...

ಹೆಚ್‌ಪಿವಿ ಲಸಿಕೆ ನೀಡುವ ಸಂಬಂಧ ಪೂರ್ವ ಸಿದ್ಧತೆ ನಡೆಯುತ್ತಿದೆ. ಗರ್ಭಕಂಠ ಕ್ಯಾನ್ಸರ್ ತಡೆಗೆ ಈ ಲಸಿಕೆ ನೀಡುವ ಬಗ್ಗೆ ಸಾರ್ವಜನಿಕರಲ್ಲಿ ಆಶಾ ಕಾರ್ಯಕರ್ತೆಯರ ಮೂಲಕ ಅರಿವು ಮೂಡಿಸಲಾಗುತ್ತಿದೆ. ಜೊತೆಗೆ ಈಗಾಗಲೇ ವೈದ್ಯಾಧಿಕಾರಿಗಳಿಗೆ ತರಬೇತಿ ನೀಡಲಾಗಿದೆ. ನಮಗೆ ಲಸಿಕೆ ಪೂರೈಕೆಯಾದ ಕೂಡಲೇ ಲಸಿಕೆ ನೀಡುವ ಪ್ರಕ್ರಿಯೆ ಆರಂಭಿಸಲಿದ್ದೇವೆ. ರಾಷ್ಟ್ರೀಯ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಡಿ ಈ ಲಸಿಕೆ ನೀಡುತ್ತಿದ್ದು, ವಿಶೇಷವಾಗಿ ನಮ್ಮ ರಾಜ್ಯದಲ್ಲಿ ಇದನ್ನು ಪರಿಚಯಿಸಲಾಗುತ್ತಿದೆ. ರಾಜ್ಯ ಸರ್ಕಾರ ಈ ಲಸಿಕಾಕರಣದ ಬಗ್ಗೆ ವಿಶೇಷ ಆಸಕ್ತಿ ಹೊಂದಿದೆ.

-ಡಾ.ಪಿ.ಸಿ.ಕುಮಾರಸ್ವಾಮಿ, ಜಿಲ್ಲಾ ಆರೋಗ್ಯಾಧಿಕಾರಿ, ಮೈಸೂರು.

ಸಂಸ್ಕೃತಿಯಲ್ಲಿ ವ್ಯಾಪಾರವಿಲ್ಲ; ಮನಸ್ಸನ್ನ ಕಟ್ಟುವ ಕೆಲಸವಷ್ಟೆ ಇದೆ

- ಹಿರಿಯ ರಂಗಕರ್ಮಿ, ಚಿತ್ರ ನಿರ್ದೇಶಕ ನಾಗಾಭರಣ ಅಭಿಮತ
- ಉತ್ತರಾಯಣ ಕಲಾ, ಸಾಂಸ್ಕೃತಿಕ ಹಬ್ಬಕ್ಕೆ ತೆರೆ

ಮೈಸೂರು, ಜ.27(ವಿವಿಹೆಚ್)– ಯಾವ ದೇಶ ತನ್ನ ಸಾಂಸ್ಕೃತಿಕ ಸಂಪತ್ತನ್ನು ಕಾಪಾಡಿಕೊಂಡು ಬರುತ್ತದೆಯೋ ಆ ದೇಶ ಸಮೃದ್ಧವಾಗಿ ಬೆಳೆಯುವ ಮೂಲಕ ವಿಶ್ವ ಗುರುವಾಗಿ ಗುರುತಿಸಲ್ಪಡುತ್ತದೆ ಎಂದು ಅಂತಾರಾಷ್ಟ್ರೀಯ ಖ್ಯಾತಿಯ ನಿರ್ದೇಶಕ, ರಂಗಕರ್ಮಿ ಡಾ. ಟಿ.ಎಸ್. ನಾಗಾಭರಣ ಅಭಿಪ್ರಾಯಪಟ್ಟರು.

ಮೈಸೂರಿನ ವಿಜಯನಗರದ ಮೊದಲ ಹಂತದ ಜಗನ್ನಾಥ ಸೆಂಟರ್ ಫಾರ್ ಆರ್ಟ್ ಅಂಡ್ ಕಲ್ಚರ್‌ನಲ್ಲಿ (ಜೆಸಿಎಸಿ) ಮಂಗಳವಾರ ನಡೆದ 'ಉತ್ತರಾಯಣ' ಕಲಾ ಮತ್ತು ಸಾಂಸ್ಕೃತಿಕ ಹಬ್ಬದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದರು.

ಆಧುನಿಕತೆ ಹೆಚ್ಚಾದಂತೆ ಎಲ್ಲವೂ ವ್ಯಾಪಾರವಾಗಿ ಹೋಗಿವೆ. ವ್ಯಾಪಾರವನ್ನೇ ಸೇವೆ ಎಂದು ಪರಿಗಣಿಸಲಾಗುತ್ತಿದೆ. ಯಾವುದೇ ಕ್ಷೇತ್ರವನ್ನು ನೋಡಿದರೂ ವ್ಯಾಪಾರಿಕರಣದ ಛಾಯೆ ಇದ್ದೇ ಇರುತ್ತದೆ. ಆದರೆ ಸಂಸ್ಕೃತಿ ವಿಚಾರಕ್ಕೆ ಬಂದಾಗ ಮನಸ್ಸುಗಳನ್ನು ಕಟ್ಟುವ ಕೆಲಸವನ್ನು ಮಾಡುತ್ತೇವೆ. ಅದಕ್ಕೆ ಯಾವುದೇ ರೀತಿಯ ವ್ಯಾಪಾರದ ಹಂಗಿರುವುದಿಲ್ಲ ಎಂದು ತಿಳಿಸಿದರು.

ನಗರ ಬೆಳೆದಂತೆ ಬಡಾವಣೆಗಳ ಸಂಖ್ಯೆ ಗಣನೀಯವಾಗಿ ಏರಿಕೆ ಕಂಡಿತು. ಇದರ ಹಿನ್ನೆಲೆಯಲ್ಲಿ ಬಡಾವಣೆಗೊಂದು ರಂಗಭೂಮಿ ಕಾರ್ಯಕ್ರಮ ರೂಪಿಸಿದೆವು. ಯಾರೂ ಸಂಸ್ಕೃತಿಗೆ ಒಗ್ಗಿಕೊಳ್ಳುವ ವೇದಿಕೆಗಳನ್ನು ಕೊಡಲಾಗಲಿಲ್ಲ. ಜಾಗ ಬೆಳೆದಂತೆ ಮನಸ್ಸುಗಳು ಕಿರಿದಾಗುತ್ತಾ ಬಂದಿತು. ಆ ಮನಸುಗಳನ್ನು ವಿಕಸಿತಗೊಳಿಸುವ ಕೆಲಸವನ್ನು ಕಲೆ ಮತ್ತು ಕಲಾವಿದನಿಂದ ಮಾತ್ರ ಮಾಡಲು ಸಾಧ್ಯ. ಸಮಾಜವನ್ನು ಕಟ್ಟುವ, ಸಮಾಜವನ್ನು ಮುನ್ನಡೆಸುವ ಹಳೆಯದರ ನೆನಪಿನ ಜೊತೆಯಲ್ಲಿ ಹೊಸದನ್ನು ಸೃಷ್ಟಿ ಮಾಡುವ ಕೆಲವನ್ನು ಸಾಂಸ್ಕೃತಿಕ ಮನಸ್ಸುಗಳು ಮಾಡುತ್ತವೆ ಎಂದರು.



'ಉತ್ತರಾಯಣ' ಕಲಾ ಮತ್ತು ಸಾಂಸ್ಕೃತಿಕ ಹಬ್ಬದ ಸಮಾರೋಪ ಸಮಾರಂಭದಲ್ಲಿ (ಎಡದಿಂದ) ವಾಗ್ಮಿ ಪ್ರೊ.ಎಂ.ಕೃಷ್ಣೇಗೌಡ, ಗಾನಕಲಾಭೂಷಣ ಆರ್.ಕೆ.ಪದ್ಮನಾಭ, ರಂಗಕರ್ಮಿ ಡಾ. ಟಿ.ಎಸ್.ನಾಗಾಭರಣ, ಜೆಸಿಎಸಿ ಅಧ್ಯಕ್ಷ ಜಗನ್ನಾಥ ಶಣೈ ಉಪಸ್ಥಿತರಿದ್ದಾರೆ.

ಕಲೆ ಎಂಬುದು ಮನುಷ್ಯನಲ್ಲಿ ಜೀವಂತಿಕೆಯನ್ನು ಉಳಿಸಿ, ಬೆಳೆಸುವ ಅಂಶ. ಆದ್ದರಿಂದ ಕಲಾಪೋಷಣೆ ಈಗಿನ ಕಾಲದಲ್ಲಿ ಬಹಳ ಪ್ರಮುಖವಾಗಿ ಗಮನ ಕೊಡಬೇಕಾದ ಅಂಶ. ಈ ನಿಟ್ಟಿನಲ್ಲಿ ಜಗನ್ನಾಥ ಸೆಂಟರ್ ಫಾರ್ ಆರ್ಟ್ ಅಂಡ್ ಕಲ್ಚರ್‌ನಲ್ಲಿ (ಜೆಸಿಎಸಿ) ಐದು ದಿನಗಳ ಕಾಲ ನಡೆದ ಉತ್ತರಾಯಣ ಕಲಾ ಮತ್ತು ಸಾಂಸ್ಕೃತಿಕ ಹಬ್ಬ ಸಂಪೂರ್ಣವಾಗಿ ಯಶಸ್ವಿಯಾಗಿದೆ ಎಂದು ರಂಗಕರ್ಮಿ ಟಿ.ಎಸ್.ನಾಗಾಭರಣ ಅಭಿಪ್ರಾಯಪಟ್ಟರು.

ಅದ್ಭುತ ಚಿಂತನೆ: ಗಾನಕಲಾಭೂಷಣ ಆರ್.ಕೆ.ಪದ್ಮನಾಭ ಮಾತನಾಡಿ, ನಮ್ಮ ಭಾರತೀಯ ಸಂಸ್ಕೃತಿಯನ್ನು ಪ್ರಚಾರ ಮಾಡುವ, ಹೊಸ ರೂಪ ಕೊಡುವ ಅದ್ಭುತ ಚಿಂತನೆ ಜೆಸಿಎಸಿಯಲ್ಲಿ ನಡೆಯುತ್ತಿದೆ. ಈ ರೀತಿಯ ಸಾಂಸ್ಕೃತಿಕ ಚಟುವಟಿಕೆಗಳು ನಿರಂತರವಾಗಿ ನಡೆಯಬೇಕು ಎಂದರು.


ಮನುಷ್ಯರಾಗಿರಲು ರಾಜಕೀಯ ಮಾತು ಬೇಡ: ಬಳಿಕ ವಾಗ್ಮಿ ಪ್ರೊ.ಎಂ.ಕೃಷ್ಣೇಗೌಡ ಮಾತನಾಡಿ, ನಮ್ಮಲ್ಲಿರುವ ಕ್ಷುದ್ರತೆಯನ್ನು ತೊಡೆದುಹಾಕುವ ಶಕ್ತಿ ಇರುವುದು ಕಲೆಗೆ ಮಾತ್ರ. ಹಣವೊಂದನ್ನು ಮಾಪನವಾಗಿ ಬಳಸಿಕೊಂಡು ಎಲ್ಲವನ್ನು ಅಳೆಯುತ್ತೇವೆ. ಈ ಮನಸ್ಥಿತಿಯನ್ನು ಮೀರಬೇಕು. ಅದಕ್ಕಾಗಿ ಸಾಂಸ್ಕೃತಿಕತೆಯೆಡೆಗೆ ವಾಲಬೇಕು ಎಂದರು.

ನಾವೆಲ್ಲರೂ ಮನುಷ್ಯರಾಗಿ ಉಳಿಯಬೇಕಾದರೆ ರಾಜಕೀಯವನ್ನು ಮಾತನಾಡಬಾರದು. ಅದನ್ನೊರತುಪಡಿಸಿ ಮಾತನಾಡಬೇಕಾದ ಬೇಕಾದಷ್ಟು ವಿಷಯವಿದೆ. ಅತ್ತ ಗಮನ ಹರಿಸಿ. ಹಾಗೆಯೇ ಹಣದ ಸಂಬಂಧ ಇತರರೊಂದಿಗೆ ಮಾತನಾಡುವುದು ಕೂಡ ಕ್ಷುದ್ರ ಮನಸ್ಥಿಯನ್ನು ಮತ್ತಷ್ಟು ಉಲ್ಬಣಗೊಳಿಸುತ್ತವೆ ಎಂದು ಸಲಹೆ ನೀಡಿದರು.

ಇನ್ನು ಕಲೆಯನ್ನು ಬೆಳೆಸುವ ನಿಟ್ಟಿನಲ್ಲಿ ಜೆಸಿಎಸಿ ಕೇಂದ್ರ ಆರಂಭವಾಗಿರುವುದು ಸಂತಸದ ಸಂಗತಿ. ಮುಂದೆ ಈ ಜಾಗ ಅಸಂಖ್ಯಾತ ನೆನಪುಗಳ ಆಗರವಾಗಬೇಕು. ನಮ್ಮ ವಾಣಿಜ್ಯಮಯ ಜೀವನದಲ್ಲಿ ಕಲೆ ಹಾಸುಹೊಕ್ಕಾಗಬೇಕು, ಮೈಸೂರು ಈ ಕೇಂದ್ರದ ಮೂಲಕ ತನ್ನನ್ನು ತಾನು ಗುರುತಿಸಿಕೊಳ್ಳಬೇಕು ಎಂದು ಆಶಿಸಿದರು.

ಜೆಸಿಎಸಿ ಅಧ್ಯಕ್ಷ ಜಗನ್ನಾಥ ಶೆಣೈ, ಕುಸುಮಾ ಶೆಣೈ, ರವಿಕುಮಾರ್, ಅಮೃತಾ, ಡಾ.ಕೃಪಾ ಫಡ್ಕೆ, ವಿ.ಮಾನಸ ನಯನ, ಸಾಯಿ ಶಿವ್, ಡಾ.ರಮಾ ವಿ.ಬೆಣ್ಣೂರ್ ಉಪಸ್ಥಿತರಿದ್ದರು.

ಶ್ರೀಕಂಠ ನಿಧನ



ಮೈಸೂರು, ಜ.27– ಮೈಸೂರಿನ ಒಂಟಿಕೊಪ್ಪಲು ನಿವಾಸಿ ಹಾಗೂ ಮೈಸೂರು ಮಹಾನಗರ ಪಾಲಿಕೆಯ ಮಾಜಿ ಸದಸ್ಯ ವಸಂತ ಶ್ರೀಕಂಠ ಅವರ ಪತಿ ವಿ. ಶ್ರೀಕಂಠ (77) ಸೋಮವಾರ ಸಂಜೆ ತಮ್ಮ ನಿವಾಸದಲ್ಲಿ ನಿಧನ ಹೊಂದಿದರು. ಮೃತರು ಪತ್ನಿ, ವಸಂತ ಶ್ರೀಕಂಠ, ಪುತ್ರ, ಪುತ್ರಿ, ಸೊಸೆ, ಮೊಮ್ಮಗ ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಇಂದು (ಮಂಗಳವಾರ) ಮಧ್ಯಾಹ್ನ ಗೋಕುಲಂ ರುದ್ರಭೂಮಿಯಲ್ಲಿ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಮಿತ್ರ

ಜನರ ಆರ್ಥಿಕ ಮಟ್ಟ ಸುಧಾರಣೆಗೆ ಹಲವು ಯೋಜನೆ ಜಾರಿ

ಗಣರಾಜ್ಯೋತ್ಸವದಲ್ಲಿ ಶಾಸಕ ಅನಿಲ್ ಚಿಕ್ಕಮಾದು



ಶಾಸಕ ಅನಿಲ್ ಚಿಕ್ಕಮಾದು ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದವರನ್ನು ಅಭಿನಂದಿಸಿದರು.

ಹೆಚ್.ಡಿ.ಕೋಟೆ, ಜ.27– ಜನರ ಆರ್ಥಿಕ ಮಟ್ಟ ಸುಧಾರಣೆಗೆ ಸರ್ಕಾರ ಹಲವು ಯೋಜನೆ ಜಾರಿಗೊಳಿಸಿದೆ ಎಂದು ಶಾಸಕ ಅನಿಲ್ ಚಿಕ್ಕಮಾದು ತಿಳಿಸಿದರು.

ಪಟ್ಟಣದ ಜೂನಿಯರ್ ಕಾಲೇಜು ಮೈದಾನದಲ್ಲಿ ತಾಲೂಕು ಆಡಳಿತದಿಂದ ನಡೆದ 77ನೇ ಗಣರಾಜ್ಯೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆ ಸೇರಿದಂತೆ 20 ಅಂಶಗಳ ಕಾರ್ಯಕ್ರಮಗಳನ್ನು ಜಾರಿಗೊಳಿಸುವ ಮೂಲಕ ಜನರ ಶ್ರೇಯೋಭಿವೃದ್ಧಿಗಾಗಿ ಸರ್ಕಾರ ಕೆಲಸ ಮಾಡಿದೆ ಎಂದರು.

ಹಲವು ಮಹನೀಯರ ತ್ಯಾಗ, ಬಲಿದಾನದಿಂದ ದೇಶಕ್ಕೆ ಸ್ವಾತಂತ್ರ್ಯ ದೊರೆಯಿತು. ಬಳಿಕ ಅಂಬೇಡ್ಕರ್ ಅವರು ಸಂವಿಧಾನ ರಚಿಸುವ ಮೂಲಕ ಜನರಿಗೆ ಮೂಲಭೂತ ಹಕ್ಕುಗಳು ಮತ್ತು ಕರ್ತವ್ಯಗಳ ಬಗ್ಗೆ ತಿಳಿಸಿದ್ದಾರೆ ಎಂದರು.

ಮುಖ್ಯ ಭಾಷಣಕಾರ ಸಾಹಿತಿ ಮತ್ತು ಸಂಸ್ಕೃತಿ ಚಿಂತಕ ಕಿರಣ್ ಸಿಡ್ಲೇಹಳ್ಳಿ ಮಾತನಾಡಿ, ವಿವಿಧ ಸಂಸ್ಕೃತಿ ಹಾಗೂ ಬಹುತ್ವದಿಂದ ಕೂಡಿದ ದೇಶಕ್ಕೆ ಅಂಬೇಡ್ಕರ್ ಅವರು ಉತ್ತಮ ಸಂವಿಧಾನ ರಚಿಸಿದರು. ಆ ಮೂಲಕ ಅಸಂಖ್ಯಾತ ಜನರು ನೋವಿಗೆ ಉತ್ತರ ಕಂಡುಕೊಂಡರು. ಹೀಗಾಗಿ ಅಂಬೇಡ್ಕರ್ ಅವರನ್ನು ಅರ್ಥ ಮಾಡಿಕೊಂಡರೆ ಮಾತ್ರ ಸಂವಿಧಾನ ಅರ್ಥ ಮಾಡಿಕೊಳ್ಳಲು ಸಾಧ್ಯ ಎಂದರು.

ಕಾರ್ಯಕ್ರಮಕ್ಕೂ ಮುನ್ನಾ ತಹಸೀಲ್ದಾರ್ ಕಚೇರಿ ಆವರಣದಲ್ಲಿ ತಹಸೀಲ್ದಾರ್ ಶ್ರೀನಿವಾಸ್ ಧ್ವಜಾರೋಹಣ ನೆರವೇರಿಸಿದರು. ಬಳಿಕ ಡಾ.ಬಿ.ಆರ್.ಅಂಬೇಡ್ಕರ್ ಭವನದ ಆವರಣದಲ್ಲಿ ಅಂಬೇಡ್ಕರ್ ಪ್ರತ್ಥಳಿಗೆ ಮಾಲಾರ್ಪಣೆ ಮಾಡಿ ಬೆಳ್ಳಿ ರಥದಲ್ಲಿ ಅಂಬೇಡ್ಕರ್ ಮತ್ತು ಗಾಂಧೀಜಿ ಅವರ ಭಾವಚಿತ್ರ ಪ್ರತಿಷ್ಠಾಪಿಸಿ ಜೂನಿಯರ್ ಕಾಲೇಜು ಮೈದಾನದವರೆಗೆ ಮೆರವಣಿಗೆ ಮಾಡಲಾಯಿತು.

ಇದೇ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರು ಹಾಗೂ ಎಸ್ಎಸ್ಎಲ್ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಾದ ಯಶವಂತ ಕುಮಾರ್, ಪುಷ್ಪ, ವಿದ್ಯಾಶ್ರೀ ಅವರಿಗೆ ತಲಾ 50 ಸಾವಿರ ರೂ.ಗಳ ಚೆಕ್ ವಿತರಿಸಿ ಸನ್ಮಾನಿಸಲಾಯಿತು.

ವಿವಿಧ ಶಾಲಾ ಮಕ್ಕಳು ದೇಶಭಕ್ತಿ ಹಾಗೂ ಸಂವಿಧಾನ ಗೀತೆಗೆ ನೃತ್ಯ ಪ್ರದರ್ಶಿಸಿದರು. ಅಲ್ಲದೇ ಪಟ್ಟಣದ ವಿಶ್ವಭಾರತಿ ಶಾಲೆ ಮಕ್ಕಳು ಪ್ರದರ್ಶಿಸಿದ ಸಾಹಸ ಕಲೆ ಮಲ್ಲಗಂಬ ಎಲ್ಲರ ಗಮನ ಸೆಳೆಯಿತು.

ಇಓ ಧರಣೇಶ್, ಬಿಇಓ ಎನ್.ರಾಜು, ಟಿಹೆಚ್ಓ ಡಾ.ಟಿ.ರವಿಕುಮಾರ್, ಪುರಸಭಾ ಮುಖ್ಯಾಧಿಕಾರಿ ಸುರೇಶ್, ಇನ್ಸ್‌ಪೆಕ್ಟರ್ ಗಂಗಾಧರ್, ಎಸ್ಐಗಳಾದ ಚಿಕ್ಕನಾಯಕ, ಸುರೇಶ್ ನಾಯಕ, ಅಧಿಕಾರಿಗಳಾದ ಪ್ರಸಾದ್, ಚಂದು ಕುಮಾರ್, ಶಶಿಕಲಾ, ನೇತ್ರಾವತಿ, ರಮೇಶ್, ಮಹೇಶ್, ಮುಖಂಡರಾದ ಹೆಚ್.ಸಿ.ನರಸಿಂಹ ಮೂರ್ತಿ, ಬಾಲಯ್ಯ, ಜವರಯ್ಯ, ಪರಶಿವಮೂರ್ತಿ, ಅಜರುದ್ದೀನ್, ಅಶೋಕ್, ಅನುಷಾ, ಸೌಮ್ಯ, ಶೈಲಾ ಸುಧಾಮಣಿ, ಪ್ರೇಮ್ ಕುಮಾರ್, ಸಣ್ಣಕುಮಾರ್ ಇದ್ದರು.

ಸಂವಿಧಾನದಡಿ ಸ್ವಾತಂತ್ರ್ಯ, ಸ್ವಾಭಿಮಾನದ ಬದುಕು



ಸಾಧಕರು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಶಾಸಕ ಡಿ.ರವಿಶಂಕರ್ ಸನ್ಮಾನಿಸಿದರು.

ಕೆ.ಆರ್.ನಗರ, ಜ.27– ತ್ರಿವರ್ಣ ಧ್ವಜ ಬಾನಲ್ಲಿ ಹಾರಾಡಿದರೇ ನಮ್ಮ ಎದೆಯಲ್ಲಿ ಏನೋ ಒಂದು ಮಿಂಚು ಓಡಿದ ಹಾಗೆ ಆಗುತ್ತದೆ. ಈ ಮಣ್ಣಿನ ಮಕ್ಕಳಾದ ನಾವು ಅಂಬೇಡ್ಕರ್ ಅವರ ಸಂವಿಧಾನದಡಿ ಸ್ವಾತಂತ್ರ್ಯ, ಸ್ವಾಭಿಮಾನದಿಂದ ಬದುಕುತ್ತಿದ್ದೇವೆ ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.

ಪಟ್ಟಣದ ಪುರಸಭೆ ಬಯಲು ರಂಗಮಂದಿರದಲ್ಲಿ ನಡೆದ 77ನೇ ಗಣರಾಜ್ಯೋತ್ಸವದಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಕೆಲವು ವರ್ಷಗಳಾಗಿವೆ. ನಾವು ಅಧಿಕಾರಕ್ಕೆ ಬರುವ ಮುನ್ನಾ ನಿಮ್ಮ ಮುಂದೆ ಬಂದು ಐದು ವಚನಗಳನ್ನು ನೀಡಿದ್ದೇವು. ಬಸವಣ್ಣನವರು ಹೇಳಿದ ಹಾಗೆ ನುಡಿದಂತೆ ನಡೆಯುವ ಸರ್ಕಾರ ನಮ್ಮದು. ಹೀಗಾಗಿ ಎದೆ ಮುಟ್ಟಿಕೊಂಡು ಹೇಳಿ ಈ ಗ್ಯಾರಂಟಿಗಳು ನಿಮ್ಮ ಬದುಕನ್ನು ಬದಲಾಯಿಸಿಲ್ಲವೇ ಎಂದು ನೆರೆದಿದ್ದ ಜನರಿಗೆ ಕೇಳಿದರು.

ಗೃಹಲಕ್ಷ್ಮಿ ಯೋಜನೆಯಡಿ ಮನೆಯೊಡತಿ ಕೈಗೆ ಪ್ರತಿ ತಿಂಗಳು ಹಣ ಸಿಗುತ್ತಿದೆ. ಅದು ಕೇವಲ ಹಣವಲ್ಲ. ಇದು ಹೆಣ್ಣುಮಕ್ಕಳ ಸ್ವಾಭಿಮಾನದ ಸಂಕೇತ. ಆ ತಾಯಿ ತನ್ನ ಮಗುವಿನ ಓದಿಗೋ ಅಥವಾ ಮನೆ ಖರ್ಚಿಗೋ ಯಾರ ಮುಂದೆಯೂ ಕೈ ಚಾಚಬಾರದೆಂಬುದು ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು.

ಹಸಿವು ಮುಕ್ತ ಕರ್ನಾಟಕ ನಮ್ಮ ಕನಸಾಗಿತ್ತು. ಪ್ರಸ್ತುತ ಯಾರ ಮನೆಯಲ್ಲೂ ಅಕ್ಕಿ ಇಲ್ಲ ಎಂದು ಒಲೆ ಆರಿಸುವ ಪರಿಸ್ಥಿತಿ ಇಲ್ಲ. ಬಡವರ ಹೊಟ್ಟೆ ತಣ್ಣಗೆ ಇದ್ರೆ ನಾಡು ಸುಭೀಕ್ಷವಾಗಿರುತ್ತದೆ ಎಂದು ಮನಗಂಡ ಸಿಎಂ ಸಿದ್ದರಾಮಯ್ಯ ಅನ್ನಭಾಗ್ಯ ಯೋಜನೆ ಜಾರಿಗೆ ತಂದರು ಎಂದರು.

ಇದಕ್ಕೂ ಮುನ್ನಾ ತಹಸೀಲ್ದಾರ್ ಜಿ.ಸುರೇಂದ್ರ ಮೂರ್ತಿ, ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ಪಟ್ಟಣದ ವಿವಿಧ ಶಾಲೆ ಮಕ್ಕಳು ಪಥಸಂಚಲನದ ಮೂಲಕ ತ್ರಿವರ್ಣ ಧ್ವಜಕ್ಕೆ ಗೌರವ ವಂದನೆ ಸಲ್ಲಿಸಿದರು. ಬಳಿಕ ದೇಶ ಗೀತೆ ಸೇರಿದಂತೆ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಐವರು ಸಾಧಕರು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು. ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಮಹೇಶ್, ನಿರ್ದೇಶಕ ಕೆ.ಎನ್.ಪ್ರಸನ್ನ, ಕಸಾಪ ಅಧ್ಯಕ್ಷ ಶಂಕರ್, ತಾಪಂ ಇಓ ವಿ.ಪಿ.ಕುಲದೀಪ್, ಸಿಡಿಪಿಓ ಅಣ್ಣಯ್ಯ, ಬಿಇಓ ಆರ್.ಕೃಷ್ಣಪ್ಪ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಶಂಕರಮೂರ್ತಿ, ದಲಿತ ಮುಖಂಡ ರಾಮಯ್ಯ, ರೈತ ಪರ್ವ ಸಂಘದ ಗೌರವಾಧ್ಯಕ್ಷ ಜೆ.ಎಂ.ಕುಮಾರ್, ತಾಲೂಕು ದೈಹಿಕ ಪರಿವೀಕ್ಷಕ ಎಂ.ಪಿ.ಕುಮಾರಸ್ವಾಮಿ ಇತರರಿದ್ದರು.

ಸರಗೂರಲ್ಲಿ ತಾಲೂಕು ಆಡಳಿತದಿಂದ ಗಣರಾಜ್ಯೋತ್ಸವ



ಸರಗೂರು ತಾಲೂಕು ಆಡಳಿತದಿಂದ ಗಣರಾಜೋತ್ಸವ ನಡೆಯಿತು.

ಸರಗೂರು, ಜ.27– ಪಟ್ಟಣದ ಜಯಚಾಮರಾಜೇಂದ್ರ ಕ್ರೀಡಾಂಗಣದಲ್ಲಿ ತಾಲೂಕು ಆಡಳಿತದಿಂದ 77ನೇ ಗಣರಾಜ್ಯೋತ್ಸವವನ್ನು ಆಚರಿಸಲಾಯಿತು.

ಶಾಸಕ ಅನಿಲ್ ಚಿಕ್ಕಮಾದು, ಅಂಬೇಡ್ಕರ್ ಅವರನ್ನು ಎಲ್ಲರೂ ಅರ್ಥ ಮಾಡಿಕೊಳ್ಳಬೇಕು. ವಿಭಜನೆಯಾದ ದೇಶವನ್ನು ಒಗ್ಗೂಡಿಸಲು ವಿಶ್ವದಲ್ಲೇ ಬಹುದೊಡ್ಡ ಸಂವಿಧಾನ ರಚಿಸಿದ್ದಾರೆ. ಸರ್ವರ ಏಳಿಗೆಗಾಗಿ ಭಾರತ ಶ್ರಮಿಸುತ್ತಿದೆ. ಇಂತಹ ಕಾರ್ಯಕ್ರಮಗಳಿಗೆ ಎಲ್ಲರ ಸಹಕಾರ ಹಾಗೂ ಭಾಗವಹಿಸುವಿಕೆ ಅಗತ್ಯ ಎಂದರು.

ಮುಖ್ಯ ಅತಿಥಿ ರಘೋತ್ತಮ್ ಮಾತನಾಡಿ, ದೂರದೃಷ್ಟಿ ಚಿಂತನೆಗಳ ಸಂವಿಧಾನದ ಮೂಲಕ ಬಹುಕೋಟಿ ಭಾರತೀಯರ ಬದುಕು ಹಸನಾಗಲು ಕಾರಣ ಡಾ.ಬಿ.ಆರ್.ಅಂಬೇಡ್ಕರ್. ಎಲ್ಲಾ ವರ್ಗದ ಬಡವರ, ಎಲ್ಲಾ ಸ್ತರದ ಶೋಷಿತರ ಅಭಿವೃದ್ಧಿಗೆ ದಿಕ್ಸೂಚಿಯಾದವರು ಎಂದು ತಿಳಿಸಿದರು.

ತಹಸೀಲ್ದಾರ್ ಮೋಹನ್ ಕುಮಾರಿ ಮಾತನಾಡಿ, ಭವ್ಯ ಭಾರತದ ಪ್ರಜೆಗಳು ಸಂವಿಧಾನದ ಆಶಯಗಳನ್ನು ಅರ್ಥೈಸಿಕೊಳ್ಳಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಮಯ ಪ್ರಜ್ಞೆ ವ್ಯಯ ಮಾಡದೆ ದೇಶದ ಅಭಿವೃದ್ಧಿಗಾಗಿ ಚಿಂತಿಸಬೇಕು ಎಂದರು.

ಇದೇ ವೇಳೆ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು. ಅಲ್ಲದೇ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಚೈತ್ರಾ, ಉಪಾಧ್ಯಕ್ಷ ಶಿವಕುಮಾರ್, ಸದಸ್ಯರಾದ ಶ್ರೀನಿವಾಸ್, ಸಣ್ಣತಾಯಮ್ಮ, ಚಂದ್ರಕಲಾ, ಚಲುವಕೃಷ್ಣ, ಆದಿ ಕರ್ನಾಟಕ ಮಹಾಸಭಾ ಮಾಜಿ ಅಧ್ಯಕ್ಷ ಶಿವಣ್ಣ, ಪಪಂ ಮುಖ್ಯಾಧಿಕಾರಿ ಸಂತೋಷ್ ಕುಮಾರ್, ಗ್ರೇಡ್–2 ತಹಸೀಲ್ದಾರ್ ಪರಶಿವಮೂರ್ತಿ, ಕ್ಷೇತ್ರ ಸಂಪನ್ಮೂಲ ಅಧಿಕಾರಿ ಕೃಷ್ಣಯ್ಯ, ರಮೇಶ್, ಉಪ ತಹಸೀಲ್ದಾರ್ ಸುನೀಲ್, ಎಪಿಎಂಸಿ ಕಾರ್ಯದರ್ಶಿ ಹೆಚ್.ಎಸ್.ಕೃಷ್ಣಮೂರ್ತಿ, ತಾಲೂಕು ಪಂಚಾಯಿತಿ ಇಓ ಪ್ರೇಮ್ ಕುಮಾರ್, ಎಸ್ಐ ಕಿರಣ್.ಆರ್, ಚಲುವರಾಜು, ಕಸಾಪ ಅಧ್ಯಕ್ಷ ಕೆಂಡಗಣ್ಣಸ್ವಾಮಿ, ಚಿಕ್ಕಣ್ಣ, ಚಿನ್ನಣ್ಣ, ಮಂಜು, ರಾಜನಾಯಕ, ಪರಶಿವ ಮೂರ್ತಿ, ಭಾಗ್ಯಲಕ್ಷ್ಮಿ, ಶಿವಣ್ಣ, ಭೋಗಪ್ಪ, ಅಂಬೇಡ್ಕರ್ ಟ್ರಸ್ಟ್ ಅಧ್ಯಕ್ಷ ಸಣ್ಣಸ್ವಾಮಿ, ಬೆಟ್ಟಸ್ವಾಮಿ, ಸುಭಾನ್, ಲಯನ್ಸ್ ವಿದ್ಯಾ ಸಂಸ್ಥೆ ಮುಖ್ಯಶಿಕ್ಷಕ ಬಿ.ಡಿ.ದಾಸಾಚಾರಿ ಇದ್ದರು.

ಸಂವಿಧಾನದಡಿ ಮೌಲ್ಯಯುತ ಜೀವನ ನಡೆಸೋಣ

ಉಪವಿಭಾಗಾಧಿಕಾರಿ ಕೆ.ವಿ.ಕಾವ್ಯರಾಣಿ ಕರೆ



ಶಾಸಕ ಜಿ.ಡಿ.ಹರೀಶ್‌ಗೌಡ ಪೊಲೀಸರಿಂದ ಧ್ವಜವಂದನೆ ಸ್ವೀಕರಿಸಿದರು.

ಹುಣಸೂರು, ಜ.27– ಡಾ.ಬಿ.ಆರ್.ಅಂಬೇಡ್ಕರ್ ನೀಡಿರುವ ಸಂವಿಧಾನದಡಿ ಮೌಲ್ಯಯುತ ಜೀವನ ನಡೆಸುವ ಮೂಲಕ ದೇಶದ ಅಭಿವೃದ್ಧಿಗೆ ಕೊಡುಗೆ ನೀಡೋಣ ಎಂದು ಉಪವಿಭಾಗಾಧಿಕಾರಿ ಕೆ.ವಿ.ಕಾವ್ಯರಾಣಿ ಕರೆ ನೀಡಿದರು.

ತಾಲೂಕು ಆಡಳಿತ ಮತ್ತು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯಿಂದ ನಗರದ ಮುನೇಶ್ವರ ಕಾವಲ್ ಮೈದಾನದಲ್ಲಿ ನಡೆದ 77ನೇ ಗಣರಾಜ್ಯೋತ್ಸವದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಅಂಬೇಡ್ಕರ್ ನೀಡಿದ ಸಂವಿಧಾನವನ್ನು ನಮಗೆ ನಾವು ಸಮರ್ಪಿಸಿಕೊಂಡಿದ್ದೇವೆ. ಸಂವಿಧಾನದ ಮೌಲ್ಯಗಳು, ಆದರ್ಶಗಳು ನಮ್ಮ ಜೀವನದಲ್ಲಿ ಪ್ರತಿಬಿಂಬಿಸಬೇಕು. ಅಭಿವೃದ್ಧಿ ಸರ್ಕಾರ ಮತ್ತು ಅಧಿಕಾರಿಗಳಿಂದ ಮಾತ್ರ ಸಾಧ್ಯವಾಗದು. ದೇಶದ ನಾಗರಿಕರೂ ಇದಕ್ಕೆ ಕೈ ಜೋಡಿಸಬೇಕು. ಸಂವಿಧಾನದ ಆಶಯದಂತೆ ಎಲ್ಲರೂ ಒಂದಾಗಿ ದುಡಿದಲ್ಲಿ ಮಾತ್ರ ಅಭಿವೃದ್ಧಿಪಥದತ್ತ ಸಾಗಲು ಸಾಧ್ಯ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ಜಿ.ಡಿ.ಹರೀಶ್‌ಗೌಡ, ಅಂಬೇಡ್ಕರ್ ಅವರು ಅತ್ಯಂತ ಶ್ರೇಷ್ಠ ಸಂವಿಧಾನವನ್ನು ನಮಗೆ ನೀಡಿದ್ದಾರೆ. ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ಎನ್ನುವ ಹೆಗ್ಗಳಿಕೆಯೊಂದಿಗೆ ವಿಶ್ವದ ಅತಿದೊಡ್ಡ ಆರ್ಥಿಕ ಶಕ್ತಿಶಾಲಿ ದೇಶಗಳ ಸಾಲಿನಲ್ಲಿ ಭಾರತ ಮುನ್ನಡೆಯುತ್ತಿರುವುದು ನಮಗೆಲ್ಲರಿಗೂ ಹೆಮ್ಮೆಯ ಸಂಗತಿ. ಈ ಎಲ್ಲಾ ಸಾಧನೆಗೆ ಅಂಬೇಡ್ಕರ್ ಅವರ ಸಂವಿಧಾನವೇ ಕಾರಣ. ಜಾತಿ, ಮತ, ಪಂಥಗಳನ್ನು ಮೀರಿ ಎಲ್ಲರೂ ಶಾಂತಿ ಸೌಹಾರ್ದತೆಯಿಂದ ಬದುಕೋಣ. ತಾಲೂಕಿನಲ್ಲಿ ಎಲ್ಲರ ಸಹಕಾರದೊಂದಿಗೆ ಅಭಿವೃದ್ಧಿ ಕಾರ್ಯಗಳನ್ನು ನಡೆಸಬೇಕಿದ್ದು ಎಲ್ಲರ ಸಹಕಾರ ಇರಲಿ ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಡಿವೈಎಸ್‌ಪಿ ರವಿ, ತಹಸೀಲ್ದಾರ್ ಜೆ.ಮಂಜುನಾಥ್, ನಗರಸಭೆ ಪೌರಾಯುಕ್ತೆ ಕೆ.ಮಾನಸ, ಬಿಇಓ ಎಸ್.ಪಿ.ಮಹದೇವ್, ಟಿಎಪಿಸಿಎಂಎಸ್ ಅಧ್ಯಕ್ಷ ಪ್ರೇಮಕುಮಾರ್, ಮುಖಂಡರಾದ ರಾಘು, ಪುಟ್ಟರಾಜು, ವಿ.ಎನ್.ದಾಸ್, ಮಹದೇವಮ್ಮ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದರು.

ಆಕರ್ಷಕ ಪಥ ಸಂಚಲನ ಇದೇ ಮೊದಲ ಬಾರಿಗೆ ಗಣರಾಜ್ಯೋತ್ಸವದಲ್ಲಿ ಆಕರ್ಷಕ ಪಥ ಸಂಚಲನ ನಡೆಯಿತು. ಇದೇ ವೇಳೆ ಶಾಸಕ ಜಿ.ಡಿ.ಹರೀಶ್‌ಗೌಡ ಹಾಗೂ ಉಪವಿಭಾಗಾಧಿಕಾರಿ ಕೆ.ವಿ.ಕಾವ್ಯ ರಾಣಿ ಪಥ ಸಂಚಲನ ಗೌರವ ಸ್ವೀಕರಿಸಿದರು.

ಕೃಷಿ ಇಲಾಖೆ ಆತ್ಮ ಯೋಜನೆಯಡಿ ಐವರು ಪ್ರಗತಿಪರ ರೈತರನ್ನು ಸನ್ಮಾನಿಸಲಾಯಿತು. ಮೀನುಗಾರಿಕೆ ಇಲಾಖೆಯಿಂದ 28 ರೈತರಿಗೆ ಮೀನಿನ ಬಲೆ ಕಿಟ್ ವಿತರಿಸಲಾಯಿತು. ಎಸ್ಎಸ್ಎಲ್‌ಸಿಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಮೂವರು ವಿದ್ಯಾರ್ಥಿನಿಯರಿಗೆ ಸರ್ಕಾರದಿಂದ ತಲಾ 50 ಸಾವಿರ ರೂ.ಗಳ ಚೆಕ್ ಅನ್ನು ಶಾಸಕ ಜಿ.ಡಿ.ಹರೀಶ್‌ಗೌಡ ವಿತರಿಸಿದರು.

ವಿಶೇಷ ಮಕ್ಕಳ ಶಾಲೆಯಲ್ಲಿ ಗಣರಾಜ್ಯೋತ್ಸವ



ಮೈಸೂರಿನ ಶ್ರೀರಾಂಪುರ ಬಳಿಯ ನವಚೇತನ ಬಸವೇಶ್ವರ ಟ್ರಸ್ಟ್ ವಿಶೇಷ ಮಕ್ಕಳ ಶಾಲೆಯಲ್ಲಿ 77ನೇ ಗಣರಾಜ್ಯೋತ್ಸವದ ಧ್ವಜಾರೋಹಣವನ್ನು ಸಮಾಜ ಸೇವಕ ಎಸ್.ಶ್ರೀಕಾಂತ್ ನೆರವೇರಿಸಿದರು.

ಲೋಕೋಪಯೋಗಿ ಇಲಾಖೆಯಿಂದ ಗಣರಾಜ್ಯೋತ್ಸವ



ತಿ.ನರಸೀಪುರದ ಲೋಕೋಪಯೋಗಿ ಇಲಾಖೆಯಲ್ಲಿ ಸಂವಿಧಾನ ಪೀಠಿಕೆ ಓದುವ ಮೂಲಕ ಗಣರಾಜ್ಯೋತ್ಸವ ಆಚರಿಸಿ, ಪುಸ್ತಕ ವಿತರಿಸಲಾಯಿತು. ಎಇಇ ಸತೀಶ್ ಚಂದ್ರನ್ ಸಂವಿಧಾನ ಪೀಠಿಕೆ ಬೋಧಿಸಿದರು. ಈ ವೇಳೆ ಇಲಾಖೆ ಸಿಬ್ಬಂದಿ ಹಾಜರಿದ್ದರು.

ಕುಕ್ಕೂರು ಸರ್ಕಾರಿ ಶಾಲೆಗೆ ಪ್ರಿಂಟರ್ ಕೊಡುಗೆ



ತಿ.ನರಸೀಪುರ ತಾಲೂಕಿನ ಕುಕ್ಕೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ದಿ.ಕೆ.ಜಿ.ಗೂಳಯ್ಯ, ಜಯಲಕ್ಷ್ಮಮ್ಮ ಅವರ ಸ್ಮರಣಾರ್ಥ 25 ಸಾವಿರ ರೂ. ಮೌಲ್ಯದ ಪ್ರಿಂಟರ್ ಕೊಡುಗೆ ನೀಡಲಾಯಿತು. ಈ ವೇಳೆ ಪಿಡಿಓ ಮಾದೇವ ನಾಯಕ, ಮುಖ್ಯ ಶಿಕ್ಷಕ ಸಿದ್ದರಾಜು, ಗ್ರಾಪಂ ಮಾಜಿ ಅಧ್ಯಕ್ಷ ಶಂಭು, ಸಿಬ್ಬಂದಿ, ಗ್ರಾಮಸ್ಥರು ಹಾಜರಿದ್ದರು.

ಸೋಸಲೆ ಗ್ರಾಪಂನಲ್ಲಿ ಸಂಭ್ರಮದ ಗಣರಾಜ್ಯೋತ್ಸವ



ತಿ.ನರಸೀಪುರ ತಾಲೂಕಿನ ಸೋಸಲೆ ಗ್ರಾಪಂನಲ್ಲಿ ಗಣರಾಜ್ಯೋತ್ಸವ ಆಚರಿಸಲಾಯಿತು.

ತಿ.ನರಸೀಪುರ, ಜ.27– ಗಣರಾಜ್ಯೋತ್ಸವ ಪ್ರತಿಯೊಬ್ಬ ಭಾರತೀಯರಿಗೂ ಮಹತ್ವದ ಹಬ್ಬ. ಹರಿದು ಹಂಚಿ ಹೋಗಿದ್ದ ದೇಶವನ್ನು ಒಗ್ಗೂಡಿಸಿದ ದಿನ. ಪ್ರಜಾತಂತ್ರದಲ್ಲಿ ಇದೊಂದು ಮಹತ್ವದ ಮೈಲುಗಲ್ಲು ಎಂದು ಸೋಸಲೆ ಗ್ರಾಪಂ ಅಧ್ಯಕ್ಷ ಭಾಗ್ಯ ಶಿವಕುಮಾರ್ ತಿಳಿಸಿದರು.

ತಾಲೂಕಿನ ಸೋಸಲೆ ಗ್ರಾಪಂ ಆವರಣದಲ್ಲಿ ನಡೆದ 77ನೇ ಗಣರಾಜ್ಯೋತ್ಸವದಲ್ಲಿ ಮಾತನಾಡಿದ ಅವರು, ಡಾ.ಬಿ. ಆರ್.ಅಂಬೇಡ್ಕರ್ ಅವರ ಆಲೋಚನೆಗಳು ಮತ್ತು ಸದಾಶಯಗಳಿಂದ ಜನರು ಶಾಂತಿ, ಸಹಬಾಳ್ವೆಯಿಂದ ಜೀವನ ನಡೆಸುತ್ತಿದ್ದಾರೆ ಎಂದರು.

ಸ್ವಾತಂತ್ರ್ಯ ಮತ್ತು ಸಮಾನವಾಗಿ ಬದುಕುವ ಹಕ್ಕನ್ನು ನಮ್ಮ ಸಂವಿಧಾನ ನೀಡಿದೆ. ದೇಶದ ಪ್ರತಿಯೊಬ್ಬರೂ ಸಂವಿಧಾನವನ್ನು ಗೌರವಿಸಬೇಕು. ಅದರ ಆಶಯದಂತೆ ಬದುಕು ಸಾಗಿಸಬೇಕು. ಆಗ ಮಾತ್ರ ನಮ್ಮ ಹಿರಿಯರ ತ್ಯಾಗ ಮತ್ತು ಬಲಿದಾನ ಸಾರ್ಥಕತೆ ಪಡೆದುಕೊಳ್ಳುತ್ತದೆ ಎಂದರು.

ಡಾ.ಬಿ.ಆರ್.ಅಂಬೇಡ್ಕರ್ ನೀಡಿರುವ ಸಂವಿಧಾನದಿಂದ ಶಿಕ್ಷಣ, ವಿಜ್ಞಾನ, ತಂತ್ರಜ್ಞಾನ, ಆರ್ಥಿಕ ಕ್ಷೇತ್ರ ಬಲಿಷ್ಠವಾಗಿ ಬೆಳೆಯಲು ಸಹಕಾರಿಯಾಗಿದೆ. ಈ ನೆಲದ ಕಾನೂನು ವ್ಯವಸ್ಥೆ ಬಗ್ಗೆ ಅರಿವು ಮೂಡಿಸುವಂತಹ ಕೆಲಸ ಆಗಬೇಕಿದೆ. ಉತ್ತಮ ಮೌಲ್ಯಗಳನ್ನು ಮಕ್ಕಳಲ್ಲಿ ಬಿತ್ತುವ ಜೊತೆಗೆ ನಮ್ಮ ಹಕ್ಕು ಮತ್ತು ಕರ್ತವ್ಯದ ಕಡೆಗೆ ಹೆಚ್ಚು ಗಮನ ಹರಿಸಬೇಕಿದೆ ಎಂದರು.

ಈ ವೇಳೆ ಮುಖಂಡ ಶಿವಕುಮಾರ್, ಮಾಜಿ ಅಧ್ಯಕ್ಷ ಮಹೇಶ್, ಪುಟ್ಟಸ್ವಾಮಿ, ಮಹೇಶ್ ಕುಮಾರ್, ಸದಸ್ಯರಾದ ಸುಂದರ್, ನಾಗೇಂದ್ರ, ಮಲ್ಲೇಶ್, ರಾಜಮ್ಮ ಹೇಮಾ, ಎಸ್‌ಡಿಎ ನಾಗರತ್ನ, ಗ್ರಂಥಾಲಯ ವೀಕ್ಷಕ ವಿಜಯಲಕ್ಷ್ಮಿ, ಪುಟ್ಟಮ್ಮ, ಸುನೀಲ್, ಚಂದ್ರಶೇಖರ, ರಾಜಣ್ಣ ಹಾಜರಿದ್ದರು.

ಕೆ.ಆರ್.ನಗರದಲ್ಲಿ ದಿ.ಎಸ್.ನಂಜಪ್ಪನವರ ಪುಣ್ಯಸ್ಮರಣೆ



ಮಾಜಿ ಸಚಿವ ದಿ.ಎಸ್.ನಂಜಪ್ಪ ಅವರ ಪುಣ್ಯಸ್ಮರಣೆ ಕಾರ್ಯಕ್ರಮ ನಡೆಯಿತು.

ಕೆ.ಆರ್.ನಗರ, ಜ.27– ತಾಲೂಕಿನ ಹಿರಿಯ ಸಹಕಾರಿ, ಮಾಜಿ ಸಚಿವ ದಿ.ಎಸ್.ನಂಜಪ್ಪನವರ 12ನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮ ಪಟ್ಟಣದ ಶ್ರೀರಾಮ ಬಡಾವಣೆಯ ಹೆಚ್.ಡಿ.ದೇವೇಗೌಡ ಸಮುದಾಯ ಭವನದಲ್ಲಿ ಅರ್ಥಪೂರ್ಣವಾಗಿ ಜರುಗಿತು.

ಕಾರ್ಯಕ್ರಮಕ್ಕೂ ಮುನ್ನಾ ಪಟ್ಟಣದ ನವನಗರ ಅರ್ಬನ್ ಕೋ ಆಪರೇಟಿವ್ ಬ್ಯಾಂಕ್ ಆಡಳಿತ ಕೇಂದ್ರ ಕಚೇರಿ ಆವರಣದಲ್ಲಿರುವ ದಿ.ಎಸ್.ನಂಜಪ್ಪನವರ ಪುತ್ಥಳಿಗೆ ಮಾಲಾರ್ಪಣೆ ಮಾಡಿದ ನಂತರ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಮತ್ತು ಸಾರ್ವಜನಿಕ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಿಸಲಾಯಿತು.

ಹೆಚ್.ಡಿ.ದೇವೇಗೌಡ ಸಮುದಾಯ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಗೀತಗಾಯನ ಕಾರ್ಯಕ್ರಮ, ಉಚಿತ ಆರೋಗ್ಯ ಹಾಗೂ ನೇತ್ರ ತಪಾಸಣಾ ಶಿಬಿರ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಶಾಸಕ ಡಿ.ರವಿಶಂಕರ್, ಎಂಎಲ್‌ಸಿ ಹೆಚ್.ವಿಶ್ವನಾಥ್, ಮಾಜಿ ಸಚಿವ ಸಾ.ರಾ.ಮಹೇಶ್, ಮುಡಾ ಮಾಜಿ ಅಧ್ಯಕ್ಷ ಹೆಚ್.ಎನ್.ವಿಜಯ್, ಎಸ್.ನಂಜಪ್ಪನವರ ಧರ್ಮಪತ್ನಿ ಲಲಿತಮ್ಮ, ಪುತ್ರರಾದ ತಂಬಾಕು ಮಂಡಳಿ ನಿವೃತ್ತ ಅಧಿಕಾರಿ ಕೆ.ಎನ್.ದಿನೇಶ್, ನವನಗರ ಅರ್ಬನ್ ಕೋ ಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಕೆ.ಎನ್.ಬಸಂತ್, ಮೊಮ್ಮಗ ಡಿ.ಅನುಶ್ರುತ್, ತಾಲೂಕು ಕಸಾಪ ಅಧ್ಯಕ್ಷ ಶಂಕರ್, ಜೆಡಿಎಸ್ ವಕ್ತಾರ ಕೆ.ಎಲ್.ರಮೇಶ್, ನವನಗರ ಅರ್ಬನ್ ಕೋ ಆಪರೇಟಿವ್ ಬ್ಯಾಂಕ್ ಉಪಾಧ್ಯಕ್ಷೆ ಸರೋಜ, ನಿರ್ದೇಶಕರಾದ ಕೇಶವ್, ವೈ.ಎಸ್.ಕುಮಾರ್, ಚಂದ್ರಕುಮಾರ್, ವ್ಯವಸ್ಥಾಪಕ ನಿರ್ದೇಶಕ ಸಿ.ಸುರೇಶ್, ಮಾಜಿ ನಿರ್ದೇಶಕ ವೇಣುಗೋಪಾಲ್, ನಗರ ಯೋಜನಾ ಪ್ರಾಧಿಕಾರದ ನಿರ್ದೇಶಕ ಪ್ರಸನ್ನಕುಮಾರ್, ಮುಖಂಡ ನಂಜುಂಡೇಗೌಡ ಸೇರಿದಂತೆ ಇನ್ನಿತರರಿದ್ದರು.

ಮೂಗೂರು ಕೆಪಿಎಸ್‌ನಲ್ಲಿ 77ನೇ ಗಣರಾಜ್ಯೋತ್ಸವ



ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಗಣರಾಜ್ಯೋತ್ಸವ ನಡೆಯಿತು.

ಮೂಗೂರು, ಜ.27– ಇಲ್ಲಿನ ಕರ್ನಾಟಕ ಪಬ್ಲಿಕ್ ಶಾಲೆಯ ಕಾಲೇಜಿನ ಆವರಣದಲ್ಲಿ 77ನೇ ಗಣರಾಜ್ಯೋತ್ಸವ ಪ್ರಯುಕ್ತ ಕಾಲೇಜಿನ ಸಿಬಿಸಿ ಅಧ್ಯಕ್ಷ ಜಯಂತ್ ಹಾಗೂ ಕೆಪಿಎಸ್ ಪ್ರೌಢಶಾಲೆ ಅಧ್ಯಕ್ಷ ಎಂ.ರಂಗಸ್ವಾಮಿ ಧ್ವಜಾರೋಹಣ ನೆರವೇರಿಸಿದರು.

ಕರ್ನಾಟಕ ಪಬ್ಲಿಕ್ ಶಾಲೆ ಕಾಲೇಜು ವಿಭಾಗದ ಉಪನ್ಯಾಸಕ ನಾಗಸ್ವಾಮಿ ಮಾತನಾಡಿ, ಅಂಬೇಡ್ಕರ್ ಅವರು ತಮ್ಮ ಪಾಂಡಿತ್ಯ ಹಾಗೂ ಆಳದ ಅಧ್ಯಾಯನದಿಂದ ಕತ್ತಲಲ್ಲಿ ಮುಳುಗಿದ್ದ ನಮ್ಮ ದೇಶಕ್ಕೆ ಸಂವಿಧಾನದ ಬೆಳಕು ನೀಡಿದರು. ಅವರು ಸಂವಿಧಾನದ ಮೂಲಕ ಅಜರಾಮರವಾಗಿದ್ದಾರೆ. ವಿದ್ಯಾರ್ಥಿಗಳು ಅಂಬೇಡ್ಕರ್ ಅವರ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಕೆಪಿಎಸ್ ಪ್ರೌಢಶಾಲೆ ಉಪ ಪ್ರಾಂಶುಪಾಲ ಸಿ.ಪುಟ್ಟಸ್ವಾಮಿ ಮಾತನಾಡಿ, ನಮ್ಮ ದೇಶ ಉತ್ತಮ ಸಂವಿಧಾನ ಹೊಂದಿರುವುದರಿಂದ ಸದೃಢ ದೇಶವಾಗಿ ರೂಪುಗೊಂಡಿದೆ. ರಾಷ್ಟ್ರದ ಎಲ್ಲಾ ಸಮಸ್ತ ಪ್ರಜೆಗಳಿಗೂ ಆರ್ಥಿಕ, ಸಾಮಾಜಿಕ ಹಾಗೂ ರಾಜಕೀಯ ನ್ಯಾಯ ದೊರಕಿಸಿಕೊಡುವ ಮೂಲಕ ಭಾರತ ಸಂಪನ್ನತೆ ಹೊಂದಿದೆ. ಭವ್ಯ ಭಾರತ ನಿರ್ಮಾಣದ ಕನಸು ಹೊಂದಿರುವ ವಿದ್ಯಾರ್ಥಿಗಳು ಮುಂದೆ ಉತ್ತಮ ಪ್ರಜೆಗಳಾಗಿ ರೂಪುಗೊಂಡು ದೇಶಕ್ಕೆ ಉತ್ತಮ ಕೊಡುಗೆ ನೀಡಲು ಮುಂದಾಗಬೇಕು ಎಂದರು.

ಕಾಲೇಜು ಪ್ರಾಂಶುಪಾಲ ರಾಚಯ್ಯ, ಶಾಲಾಭಿವೃದ್ಧಿ ಸಮಿತಿ ಸದಸ್ಯ ಪರಶಿವಮೂರ್ತಿ, ನಾಗರಾಜು, ಹಿರಿಯ ಉಪನ್ಯಾಸಕರಾದ ಪುಟ್ಟರಸ, ರಾಜೇಶ್, ನಾಗರಾಜ್, ಧನಸೆಲ್ವಿ, ಶೃತಿ, ಅಶ್ವಿನಿ, ಕೇಶವ್, ಶಾಂತಮ್ಮ, ಮಹದೇವ್, ರಮೇಶ್, ಆನಂದ್, ರಂಗಯ್ಯ, ಚಂದ್ರಪ್ರಭ, ನಿರ್ಮಲ, ಅಧ್ಯಾಪಕರು, ಉಪನ್ಯಾಸಕ ವೃಂದ, ಸಿಬ್ಬಂದಿ ವರ್ಗ ಹಾಜರಿದ್ದರು.

ಬಲಿಷ್ಠ ಭಾರತ ನಿರ್ಮಾಣಕ್ಕಾಗಿ ಎಲ್ಲರೂ ಶ್ರಮಿಸೋಣ

ಗಣರಾಜ್ಯೋತ್ಸವದಲ್ಲಿ ಪುರಸಭೆ ಮುಖ್ಯಾಧಿಕಾರಿ ಶ್ರೀನಿವಾಸ್ ಕರೆ



ಪುರಸಭೆ ಕಚೇರಿಯಲ್ಲಿ 77ನೇ ಗಣರಾಜ್ಯೋತ್ಸವ ನಡೆಯಿತು.

ತಿ.ನರಸೀಪುರ, ಜ.27– ಭಾರತದ ಸಂವಿಧಾನ ಮೌಲ್ಯಗಳನ್ನು ಎತ್ತಿ ಹಿಡಿಯುವ ಮೂಲಕ ಬಲಿಷ್ಠ ಭಾರತ ನಿರ್ಮಾಣಕ್ಕಾಗಿ ಎಲ್ಲರೂ ಶ್ರಮಿಸೋಣ ಎಂದು ಪುರಸಭೆ ಮುಖ್ಯಾಧಿಕಾರಿ ಸಿ.ಶ್ರೀನಿವಾಸ್ ಕರೆ ನೀಡಿದರು.

ಪಟ್ಟಣದ ಪುರಸಭೆ ಕಚೇರಿ ಆವರಣದಲ್ಲಿ ನಡೆದ 77ನೇ ಗಣರಾಜ್ಯೋತ್ಸವದ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ತ್ಯಾಗ, ಬಲಿದಾನದ ಮೂಲಕ ಸ್ವಾತಂತ್ರ್ಯ ಪಡೆದ ಭಾರತ ದೇಶವನ್ನು ಮುನ್ನಡೆಸಲು ಸಂವಿಧಾನದ ಅಗತ್ಯವಿತ್ತು. ಈ ಹಿನ್ನೆಲೆಯಲ್ಲಿ ಸಂವಿಧಾನ ಕರಡು ಸಮಿತಿಯಲ್ಲಿದ್ದ ಡಾ.ಬಿ.ಆರ್.ಅಂಬೇಡ್ಕರ್ ಸೇರಿದಂತೆ ಎಲ್ಲರೂ, ವಿವಿಧ ದೇಶಗಳ ಸಂವಿಧಾನವನ್ನು ಅಧ್ಯಯನ ಮಾಡಿ ಈ ದೇಶಕ್ಕೆ ಬೃಹತ್ ಲಿಖಿತ ಸಂವಿಧಾನ ನೀಡಿದ್ದಾರೆ ಎಂದರು.

ಸ್ವಾತಂತ್ರ್ಯ ಪೂರ್ವದಲ್ಲೇ ಸಂವಿಧಾನ ರಚನೆ ಹೆಜ್ಜೆ ಗುರುತುಗಳಿದ್ದವು. ವಿವಿಧ ಭಾಷೆ, ಧರ್ಮ, ಜಾತಿ ಮತ್ತು ನಾಗರಿಕ ಪರಂಪರೆಯ ಸಂಸ್ಕೃತಿ ಹೊಂದಿರುವ ದೇಶಕ್ಕೆ ಡಾ.ಬಿ.ಆರ್.ಅಂಬೇಡ್ಕರ್ ಉತ್ತಮ ಸಂವಿಧಾನ ನೀಡಿದ್ದಾರೆ. ಅವರ ಆಶಯಗಳಿಗೆ ಧಕ್ಕೆ ಬಾರದಂತೆ ಎಲ್ಲರೂ ನಡೆದುಕೊಳ್ಳಬೇಕು ಎಂದರು.

ವ್ಯವಸ್ಥೆಯನ್ನು ಮತ್ತಷ್ಟು ಬಲಿಷ್ಠಗೊಳಿಸಬೇಕಿದೆ. ಜೊತೆಗೆ ಜಾಗತಿಕ ಮಟ್ಟದಲ್ಲಿ ಇಂದು ಭಾರತ 3ನೇ ಬಲಿಷ್ಠ ರಾಷ್ಟ್ರವಾಗಿ ಬೆಳೆಯುತ್ತಿದೆ. ಕಾನೂನುಗಳನ್ನು ಗೌರವಿಸುವ ಜೊತೆಗೆ ನಮ್ಮ ಜವಾಬ್ದಾರಿ ಅರಿತು ನಡೆಯಬೇಕೆಂದು ಹೇಳಿದರು.

ಗಣರಾಜ್ಯೋತ್ಸವ ಕೇವಲ ಭಾಷಣ ಮತ್ತು ಸಾಂಸ್ಕೃತಿಕ ಕಾರ್ಯಕ್ರಮವಲ್ಲ. ಬದಲಿಗೆ ಈ ದೇಶಕ್ಕೆ ನಮ್ಮ ಹಿರಿಯರು ನೀಡಿರುವ ಕೊಡುಗೆಗಳನ್ನು ಸ್ಮರಣೆ ಮಾಡುವ ದಿನವಾಗಿದೆ. ಭವಿಷ್ಯದ ಭಾರತ ಹೇಗಿರಬೇಕೆಂಬ ಚಿಂತನೆ ಮಾಡಬೇಕಿದೆ ಎಂದರು.

ಈ ವೇಳೆ ಕಚೇರಿ ವ್ಯವಸ್ಥಾಪಕ ಮಹೇಂದ್ರ, ಸಮುದಾಯ ಸಂಘಟನಾಧಿಕಾರಿ ನಳಿನಿ, ಕಂದಾಯ ಅಧಿಕಾರಿ ತ್ರಿವೇಣಿ, ಕಿರಿಯ ಇಂಜಿನಿಯರ್ ಸಿದ್ದಪ್ಪ, ಹಿರಿಯ ಆರೋಗ್ಯ ನಿರೀಕ್ಷಕಿ ಚಂಪಾಶ್ರೀ, ಪ್ರಥಮ ದರ್ಜೆ ಸಹಾಯಕಿ ಜಯಲಕ್ಷ್ಮಮ್ಮ, ಪ್ರಿಯಾಂಕ, ದ್ವಿತೀಯ ದರ್ಜೆ ಸಹಾಯಕರಾದ ಆಶಾ, ಗೋಪಾಲ್, ಸೀನಿಯರ್ ವಾಲ್ಮ್ಯಾನ್ ರಾಮು, ಅಟೆಂಡರ್ ಲಿಂಗರಾಜು ಹಾಗೂ ಪೌರ ಕಾರ್ಮಿಕರಿದ್ದರು.

ಸರ್ಕಾರ ಜನರಿಗೆ ಸಂವಿಧಾನದ ಮೌಲ್ಯಗಳನ್ನು ತಲುಪಿಸುತ್ತಿದೆ

ಶಾಸಕ ದರ್ಶನ್ ಧ್ರುವನಾರಾಯಣ್



ಶಾಸಕ ದರ್ಶನ್ ಧ್ರುವನಾರಾಯಣ ಮಾತನಾಡಿದರು.

ನಂಜನಗೂಡು, ಜ.27– ರಾಜ್ಯ ಸರ್ಕಾರ ಸಂವಿಧಾನ ಜಾಥ ನಡೆಸಿ, ಸಂವಿಧಾನ ಪೀಠಿಕೆ ಓದಿಸುವ ಜೊತೆಗೆ, ಸಂವಿಧಾನದ ಮೌಲ್ಯಗಳನ್ನು ಜನಮನಕ್ಕೆ ತಲುಪಿಸುವ ಮೂಲಕ ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ಪ್ರಜಾಪ್ರಭುತ್ವದ ಬೇರು ಬಲವಾಗಿ ಸ್ಥಾಪಿಸುವ ಕೆಲಸ ಮಾಡುತ್ತಿದೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ್ ತಿಳಿಸಿದರು.

ನಗರದ ತಾಲೂಕು ಕ್ರೀಡಾಂಗಣದಲ್ಲಿ ಧ್ವಜವಂದನೆ ಸ್ವೀಕರಿಸಿ ಅವರು ಮಾತನಾಡಿದರು.

ಮುಖ್ಯ ಭಾಷಣಕಾರ ಪ್ರೊ.ಮಾರುತಿ ಮಾತನಾಡಿ, ಡಾ.ಅಂಬೇಡ್ಕರ್ ಅವರು ಸಂವಿಧಾನ ರಚಿಸದಿದ್ದರೆ ಇಂದು ದೇಶದ ಸ್ಥಿತಿ ಏನಾಗುತ್ತಿತ್ತು ಎಂದು ಊಹಿಸಲು ಸಾಧ್ಯವಾಗುತ್ತಿರಲಿಲ್ಲ. ಹೀಗಾಗಿ ಸಂವಿಧಾನವನ್ನು ಓದಿ ಅದರ ಆಶಯಗಳನ್ನು ಉಳಿಸಿ ಬೆಳೆಸುವ ಜವಾಬ್ದಾರಿ ನಮ್ಮ ಮೇಲಿದೆ ಎಂದರು.

ಧ್ವಜಾರೋಹಣ ಬಳಿಕ ಪೊಲೀಸ್ ಇಲಾಖೆ ಸೇರಿದಂತೆ ನಗರದ ವಿವಿಧ ಶಾಲಾ ಮಕ್ಕಳು ಆಕರ್ಷಣೀಯ ಪಥ ಸಂಚಲನ ನಡೆಸಿ ಗಣ್ಯರಿಗೆ ಗೌರವ ವಂದನೆ ಸಲ್ಲಿಸಿದರು. ಇದೇ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಗಣ್ಯರನ್ನು ಸನ್ಮಾನಿಸಲಾಯಿತು. ಎಸ್ಎಸ್ಎಲ್‌ಸಿಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ತಲಾ 50 ಸಾವಿರ ರೂ. ಸಹಾಯಧನದೊಂದಿಗೆ ಸನ್ಮಾನಿಸಲಾಯಿತು.

ಈ ವೇಳೆ ಮಾಜಿ ಶಾಸಕ ಕೇಶವಮೂರ್ತಿ, ತಹಸೀಲ್ದಾರ್ ಸ್ಮಿತಾ, ತಾಪಂ ಇಓ ಜೆರಾಲ್ಡ್ ರಾಜೇಶ್, ಡಿವೈಎಸ್‌ಪಿ ರಘು, ಬಿಇಓ ಮಹೇಶ್, ನಗರಸಭೆ ಆಯುಕ್ತ ಬಸವರಾಜ್, ಸಿಪಿಐ ರವೀಂದ್ರ, ಮುಖಂಡರಾದ ಚಂದನ್‌ಗೌಡ, ರವಿಪ್ರಕಾಶ್, ಜಯರಾಮ್, ಶಿವಪ್ಪ ದೇವರು, ಗಾಯತ್ರಿ, ಸೌಭಾಗ್ಯ, ಲತಾ ಮುದ್ದುಮೋಹನ್, ಅಬ್ದುಲ್ ಖಾದರ್ ಮುಖಂಡರು ಸೇರಿದಂತೆ ಇತರರಿದ್ದರು.

ಸಮ ಸಮಾಜದ ಕನಸು ನನಸು ಮಾಡಲು ಶ್ರಮಿಸಿದ ಡಾ. ಅಂಬೇಡ್ಕರ್

ಸಂಸ್ಕೃತಿ ಚಿಂತಕ ಶಂಕರ ದೇವನೂರು ಅಭಿಮತ



ಡಾ. ಬಿ.ಆರ್. ಅಂಬೇಡ್ಕರ್ ಅವರ ಬದುಕು, ಬರಹ ಹಾಗೂ ವಿಚಾರಧಾರೆಗಳ ಕುರಿತ ಕಾರ್ಯಾಗಾರಕ್ಕೆ ಅರಮನೆ ಶ್ರೀ ಜಪದಕಟ್ಟೆ ಮಠದ ಡಾ. ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಚಾಲನೆ ನೀಡಿದರು.

ಮೈಸೂರು, ಜ.27(ಎಂಟಿವೈ)– ಡಾ.ಬಿ.ಆರ್.ಅಂಬೇಡ್ಕರ್ ಅವರು ಎದುರಾದ ಕಷ್ಟವನ್ನೆಲ್ಲ ಸಹಿಸಿಕೊಂಡು ಸಮಸಮಾಜ ನಿರ್ಮಾಣಕ್ಕೆ ಶ್ರಮಿಸಿದ ತಪಸ್ವಿ ಎನಿಸಿದ್ದಾರೆ ಎಂದು ಸಂಸ್ಕೃತಿ ಚಿಂತಕ ಶಂಕರ ದೇವನೂರು ಅಭಿಪ್ರಾಯಪಟ್ಟಿದ್ದಾರೆ.

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಡಾ. ಬಿ.ಆರ್.ಅಂಬೇಡ್ಕರ್ ಅಧ್ಯಯನ ಮತ್ತು ಸಂಶೋಧನಾ ಕೇಂದ್ರ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ತರಬೇತಿ, ಸಂಶೋಧನೆ ಹಾಗೂ ವಿಸ್ತರಣಾ ಕೇಂದ್ರವು ಅರಮನೆ ಜಪದಕಟ್ಟೆ ಮಠದ ಶ್ರೀ ಶಂಕರ ವಿಲಾಸ ಸಂಸ್ಕೃತ ಕಾಲೇಜಿನಲ್ಲಿ ಆಯೋಜಿಸಿದ್ದ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಬದುಕು, ಬರಹ ಹಾಗೂ ವಿಚಾರಧಾರೆಗಳ ಕುರಿತ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಕಷ್ಟದ ಕುಲುಮೆಯಲ್ಲಿ ಅರಳಿದ ಕಮಲ ಹಾಗೂ ಜ್ಞಾನಕ್ಕೆ ದಾಸರಂತೆ ಅಂಬೇಡ್ಕರ್ ಇದ್ದರು. ಎದೆಯ ಬೆಂಕಿಗೆ ಸುರಿದ ತುಪ್ಪವನ್ನೇ ಉರಿಸಿ ಜ್ಞಾನದ ಜ್ವಾಲೆಯಿಂದ ಆವಿರ್ಭವಿಸಿದ ಸಂತನಂತೆ ಜಗತ್ತಿಗೇ ಬೆಳಕಾಗಬಲ್ಲ ಭಾರತೀಯ ಸಂವಿಧಾನವನ್ನು ನೀಡುವ ಮೂಲಕ ಸರ್ವರ ಹಿತ ಬಯಸಿದ ಮಹಾನ್ ಸಂತ ಎಂದು ಬಣ್ಣಿಸಿದರು.

ಜಗತ್ತಿನಲ್ಲಿ ಮೊದಲು ಋಷಿ ಸಂಸ್ಕೃತಿ, ನಂತರ ಕೃಷಿ ಸಂಸ್ಕೃತಿ ಬೆಳೆಯಿತು. ಆದರೆ ಆಧುನಿಕ ಜಗತ್ತಿನಲ್ಲಿ ಋಷಿ ಸಂಸ್ಕೃತಿ ಬೆಳೆದು ಎಲ್ಲವೂ ಹುಸಿಯಾಗುವತ್ತ ಸಾಗಿದೆ. ಮನುಷ್ಯನಿಗೆ ಪದವಿ, ಜಾತಿ, ಕುಲ, ಅಧಿಕಾರ, ಕಾರು, ಬಂಗಲೆ ತೋರಣವಿದ್ದಂತೆ. ತೋರಣ ಕಟ್ಟುವ ಭರದಲ್ಲಿ ಬದುಕಿನ ಹೂರಣವನ್ನ ಮರೆಯಬಾರದು. ಹೂರಣವೆಂದರೆ ಮಾನವೀಯತೆ ಮೈಗೂಡಿಸಿಕೊಳ್ಳುವುದು ಪ್ರತಿಯೊಬ್ಬರ ನೈತಿಕ ಜವಾಬ್ದಾರಿ. ಇದನ್ನೇ ಅಂಬೇಡ್ಕರ್ ತಮ್ಮ ಜೀವನ ದುದ್ದಕ್ಕೂ ತೋರಿಸಿದ್ದಾರೆ. ಅಂಬೇಡ್ಕರ್ ಅವರು ದಲಿತರಿಗೆ ಸೀಮಿತವಾಗಿ ಚಿಂತನೆ ಮಾಡಿದವರಲ್ಲ. ದಲಿತರನ್ನು ಕೇಂದ್ರವಾಗಿರಿಸಿಕೊಂಡು ದೇಶದ ಸಮಗ್ರ ಅಭಿವೃದ್ಧಿಗೆ ಬದ್ಧವಾದ ಜನರನ್ನುಳ್ಳ ಸಮಾಜ ನಿರ್ಮಿಸುವುದು ಅವರ ಧ್ಯೇಯವಾಗಿತ್ತು. ಭಾರತವು ಸಾವಿರಾರು ವರ್ಷ ಇತಿಹಾಸವುಳ್ಳ ಬಹುಸಂಸ್ಕೃತಿಯ ನಾಡು ಎಂಬುದು ಅವರಿಗೆ ತಿಳಿದಿತ್ತು ಎಂದು ವಿವರಿಸಿದರು.

ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಬಿ.ರಂಗೇಗೌಡ ಮಾತನಾಡಿ, ಅಂಬೇಡ್ಕರ್ ಅವರ ಬದುಕಿನ ಕಾಲಘಟ್ಟದಲ್ಲಿ ಮಹಾರಾಷ್ಟ್ರದಲ್ಲಿ ತೀವ್ರತರವಾದ ಅಸ್ಪೃಶ್ಯತೆ ಆಚರಣೆಯಲ್ಲಿತ್ತು. ಕೆರೆ ನೀರು ಕುಡಿಯಲು, ವಿದ್ಯಾಭ್ಯಾಸ ಪಡೆಯಲು ತಳ ಸಮುದಾಯದ ಜನರಿಗೆ ನಿರ್ಬಂಧವಿತ್ತು. ಎಲ್ಲವನ್ನೂ ಸಾವಧಾನದಿಂದಲೇ ಎದುರಿಸಿದ ಅವರು, ವಿದೇಶಕ್ಕೆ ತೆರಳಿ ಉನ್ನತ ಶಿಕ್ಷಣ ಪಡೆದರು. ಈ ವೇಳೆ ಪಾಶ್ಚಾತ್ಯ ಸಮಾಜಗಳ ಜೀವನ ವಿಧಾನ, ಮುಕ್ತ ವ್ಯವಸ್ಥೆ ಭಾರತದ ಜನರಿಗೂ ಲಭ್ಯವಾಗಬೇಕು. ಆ ಮೂಲಕ ಭಾರತೀಯ ಸಮಾಜ ಪರಿವರ್ತನಶೀಲವಾಗಬೇಕು ಎಂದು ಶ್ರಮಿಸಿದರು ಎಂದರು.

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಪ್ರಸಾರಾಂಗ ಉಪನಿರ್ದೇಶಕ ಡಾ.ಬಿ.ಗೋವಿಂದ ಮಾತನಾಡಿದರು. ಕಾರ್ಯಕ್ರಮದ ಸಾನ್ನಿಧ್ಯವನ್ನು ಅರಮನೆ ಶ್ರೀ ಜಪದಕಟ್ಟೆ ಮಠದ ಡಾ. ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ವಹಿಸಿದ್ದರು. ಮಾಸ್ಕೇರಿ ಅವ್ವನ ಜಾನಪದ ಕಾವ್ಯ ಪ್ರಶಸ್ತಿ ವಿಜೇತರಾದ ಅನಸೂಯ ದೇವನೂರು ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕಾಲೇಜಿನಲ್ಲಿ ಸಂಸ್ಕೃತ ವ್ಯಾಸಂಗ ಮಾಡುತ್ತಿರುವ ವಿದೇಶಿ ವಿದ್ಯಾರ್ಥಿನಿ ಪೋಲಾಂಡಿನ ರಾಧಿಕಾ ಹರಿಚರಣ್, ಪ್ರಾರ್ಥಿಸಿದರು. ವಿದ್ಯಾರ್ಥಿನಿ ವಸಂತ ಕುಮಾರಿ ಅವರು ಅಂಬೇಡ್ಕರ್ ಶತಕಂ ಗ್ರಂಥದಿಂದ ಆಯ್ದ ಗೀತೆಗಳನ್ನು ಪ್ರಸ್ತುತಪಡಿಸಿದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಬಾರ್ಡರ್–2 (ಹಿ)	3 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಲ್ಯಾಂಡ್‌ಲಾರ್ಡ್ (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಬಾರ್ಡರ್–2 (ಹಿ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
45 ಫೇಸ್ ದಿ ಇಯರ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಲ್ಯಾಂಡ್ ಲಾರ್ಡ್ (ಕ)	4 ಪ್ರದರ್ಶನಗಳು
ರಾಜಕಮಲ್	
ಜಾಕಿ (ತ) + ಹಾಟ್‌ಸ್ಪಾಟ್ (ತ)	2+2 ಪ್ರದರ್ಶನಗಳು
ಸಂಗಂ	
ಕಲ್ಟ್ (ಕ)	4 ಪ್ರದರ್ಶನಗಳು
ಲಿಡೋ	
ಡೆವಿಲ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
---	---

ಕಲಾಮಂದಿರ ನವೀಕರಣಕ್ಕೆ ಬಜೆಟ್‌ನಲ್ಲಿ ಅನುದಾನಕ್ಕೆ ಆಗ್ರಹ

ಪಿಟೀಲು ಚೌಡಯ್ಯ, ರಾಜೇಂದ್ರ ಶ್ರೀಗಳ ಪ್ರತಿಮೆ ಅನಾವರಣಕ್ಕೆ ಅನಿಕೇತನ ಸೇವಾ ಟ್ರಸ್ಟ್ ಮನವಿ



ಕಲಾಮಂದಿರ



ಕೆ.ವಿ.ಮಲ್ಲೇಶ್

ಮೈಸೂರು, ಜ.27– ಮೈಸೂರಿನಲ್ಲಿರುವ ಕರ್ನಾಟಕ ಕಲಾಮಂದಿರ ನವೀಕರಣ, ಸಮೀಪದ ಪಿಟೀಲು ಚೌಡಯ್ಯ ವೃತ್ತ ಅಭಿವೃದ್ಧಿಗೆ ಈ ಬಾರಿ ಬಜೆಟ್‌ನಲ್ಲಿ ಅನುದಾನ ಮೀಸಲಿಡಬೇಕು ಎಂದು ಅನಿಕೇತನ ಸೇವಾ ಟ್ರಸ್ಟ್‌ನ ಅಧ್ಯಕ್ಷರಾದ ನಗರ ಪಾಲಿಕೆ ಮಾಜಿ ಸದಸ್ಯ ಕೆ.ವಿ. ಮಲ್ಲೇಶ್ ಮನವಿ ಮಾಡಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರು ನಗರಕ್ಕೆ ಸಾಕಷ್ಟು ಕೊಡುಗೆ ನೀಡಿದ್ದಾರೆ. ಪ್ರತಿ ಬಜೆಟ್‌ನಲ್ಲೂ ನೂರಾರು ಕೋಟಿ ಅನುದಾನ ನೀಡುವ ಮೂಲಕ ನಗರ ಮತ್ತು ಜಿಲ್ಲೆಯ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸಿದ್ದಾರೆ. ಹಾಗೆಯೇ ಆರ್.ಗುಂಡೂರಾವ್ ಅವರು ಮುಖ್ಯಮಂತ್ರಿಯಾಗಿದ್ದಾಗ ನಿರ್ಮಾಣವಾದ ಕರ್ನಾಟಕ ಕಲಾಮಂದಿರ ಅಭಿವೃದ್ಧಿಗೆ ಆದ್ಯತೆ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಕಲಾಮಂದಿರದ ಕುರ್ಚಿಗಳು, ವಿದ್ಯುತ್ ದೀಪಗಳು, ಸೌಂಡ್ ಸಿಸ್ಟಮ್ ಮತ್ತು ಬಾಲ್ಕಾನಿ ಹಾಳಾಗಿವೆ. ಮಳೆಗಾಲದಲ್ಲಿ ವಸ್ತಿ ಹಿಡಿದು ಗೋಡೆಗಳೂ ಶಿಥಿಲಗೊಳ್ಳುತ್ತಿವೆ. ಆದ್ದರಿಂದ ದುರಸ್ತಿ ಹಾಗೂ ನವೀಕರಣಕ್ಕೆ ತುರ್ತು ಕ್ರಮ ಕೈಗೊಳ್ಳಬೇಕಿದೆ. ಕಲಾಮಂದಿರದ ಬಳಿ ಜಂಕ್ಷನ್‌ನಲ್ಲಿ ವಾದ್ಯ ಸಂಗೀತ ಮಾಂತ್ರಿಕ ಪಿಟೀಲು ಚೌಡಯ್ಯನವರ ಪ್ರತಿಮೆ ನಿರ್ಮಾಣದೊಂದಿಗೆ ವೃತ್ತ ಅಭಿವೃದ್ಧಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಜೆಟ್‌ನಲ್ಲಿ ಅಗತ್ಯ ಅನುದಾನ ಮೀಸಲಿಡಬೇಕು ಎಂದು ಕೋರಿದ್ದಾರೆ.

ಜೆಎಸ್‌ಎಸ್ ಮಹಾವಿದ್ಯಾಪೀಠದ ಬಳಿ ತ್ರಿವಿಧ ದಾಸೋಹಿ, ರಾಜಗುರು ತಿಲಕ ಡಾ. ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ಪ್ರತಿಮೆ ಅನಾವರಣ ಕಾರ್ಯ ನನೆಗುದಿಗೆ ಬಿದ್ದಿದೆ. ಈ ವೃತ್ತವನ್ನು ಈ ಹಿಂದೆಯೇ ಡಾ.ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ವೃತ್ತ ಎಂದು ಪಾಲಿಕೆ ನಾಮಕರಣ ಮಾಡಿದೆ. ಮುಖ್ಯಮಂತ್ರಿಗಳು, ಜಿಲ್ಲಾ ಉಸ್ತುವಾರಿ ಸಚಿವರು ಈ ಬಗ್ಗೆ ಆಸಕ್ತಿ ವಹಿಸಿ ಪ್ರತಿಮೆ ಅನಾವರಣಕ್ಕೆ ಅನುವು ಮಾಡಿಕೊಡುವ ಮೂಲಕ ಶ್ರೀಗಳನ್ನು ಗೌರವಿಸುವಂತೆ ಸಾರ್ವಜನಿಕರ ಪರವಾಗಿ ಕಳಕಳಿಯಿಂದ ಮನವಿ ಮಾಡುತ್ತೇನೆ ಎಂದು ಕೆ.ವಿ.ಮಲ್ಲೇಶ್ ತಿಳಿಸಿದ್ದಾರೆ.

ಭೀಮ ಜ್ಯೋತಿ ಸೌಹಾರ್ದ ಸಹಕಾರ ಸಂಘಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ

ಮೈಸೂರು, ಜ.27– ಮೈಸೂರಿನ ರಾಮಾನುಜ ರಸ್ತೆಯಲ್ಲಿರುವ ಭೀಮ ಜ್ಯೋತಿ ಸೌಹಾರ್ದ ಸಹಕಾರ ಸಂಘಕ್ಕೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ. ಚುನಾವಣಾಧಿಕಾರಿ ಜಿ.ಎಸ್.ಶಾಂತ ನೇತೃತ್ವದಲ್ಲಿ ಸಂಘದ ಆಡಳಿತ ಮಂಡಳಿ ಚುನಾವಣೆ ನಡೆದಿದ್ದು, 5 ವರ್ಷದ ಅವಧಿಗೆ ಅಧ್ಯಕ್ಷರಾಗಿ ಲಕ್ಷ್ಮಣ್ .ಆರ್, ಉಪಾಧ್ಯಕ್ಷರಾಗಿ ಬಸವರಾಜು.ಎಸ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ನಿರ್ದೇಶಕರಾಗಿ ತಿಪ್ಪಯ್ಯ, ಆನಂದಪ್ಪ.ಎನ್, ಹನುಮಂತ, ಜಯರಾಂ.ಎಸ್, ನಾಗೇಂದ್ರ, ಭರತ್.ಎಸ್, ಯೇಸುದಾಸ್, ಲೋಹಿತ್.ಆರ್, ಮಣಿ.ಎನ್, ಅನಿತಾ ಆಯ್ಕೆಯಾಗಿದ್ದಾರೆ ಎಂದು ಸಂಘದ ಮುಖ್ಯ ಕಾರ್ಯ ನಿರ್ವಾಹಕಿ ಕೆ.ಆರ್.ವಿನುತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಭೋದ್‌ಗಯಾ ಬುದ್ಧವಿಹಾರದಲ್ಲಿ ಬೌದ್ಧದಮ್ಮ, ಪ್ರಜಾಪ್ರಭುತ್ವಕ್ಕೆ ದ್ರೋಹ

ಜೇತವನ ಬುದ್ಧವಿಹಾರದ ಮನೋರಖ್ಖಿತ ಭಂತೇಜಿ ವಿಷಾದ



ಮೈಸೂರು ವಿವಿ ಮಾನಸ ಗಂಗೋತ್ರಿಯ ಇಎಂಎಂಆರ್‌ಸಿ ಸಭಾಂಗಣದಲ್ಲಿ 'ಭೋದ್‌ಗಯಾ ಬುದ್ಧವಿಹಾರ: ಬಿಕ್ಕಟ್ಟು ಮತ್ತು ಪರಿಹಾರ' ಕುರಿತ ಸಂವಾದ ಕಾರ್ಯಕ್ರಮ ನಡೆಯಿತು.

ಮೈಸೂರು, ಜ.27(ಎಂಕೆ)– ಬುದ್ಧನ ಜ್ಞಾನೋದಯದ ಸ್ಥಳವಾದ ಭೋದ್‌ಗಯಾ ಬುದ್ಧವಿಹಾರದಲ್ಲಿ ನಡೆಯುತ್ತಿರುವ ಅನ್ಯಾಯ ಬೌದ್ಧ ಧಮ್ಮ ಮತ್ತು ಪ್ರಜಾಪ್ರಭುತ್ವಕ್ಕೆ ಎಸಗುತ್ತಿರುವ ದ್ರೋಹವಾಗಿದೆ ಎಂದು ಕೊಳ್ಳೇಗಾಲ ಜೇತವನ ಬುದ್ಧವಿಹಾರದ ಮನೋರಖ್ಖಿತ ಭಂತೇಜಿ ವಿಷಾದಿಸಿದರು.

ಮೈಸೂರು ವಿಶ್ವವಿದ್ಯಾನಿಲಯ ಮಾನಸ ಗಂಗೋತ್ರಿಯಲ್ಲಿರುವ ಇಎಂಎಂಆರ್‌ಸಿ ಸಭಾಂಗಣದಲ್ಲಿ ಬುದ್ಧ ಬಳಗದ ವತಿಯಿಂದ ಆಯೋಜಿಸಿದ್ದ 'ಭೋದ್‌ಗಯಾ ಬುದ್ಧವಿಹಾರ: ಬಿಕ್ಕಟ್ಟು ಮತ್ತು ಪರಿಹಾರ' ಕುರಿತ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭೋದ್‌ಗಯಾ ಬುದ್ಧವಿಹಾರದಲ್ಲಿ ಬೌದ್ಧ ಅನುಯಾಯಿಗಳಿಗೆ ಸಂಪೂರ್ಣ ಆಡಳಿತ ಜವಾಬ್ದಾರಿ ನೀಡುವ ಮೂಲಕ ಸ್ಥಳದ ಪಾವಿತ್ರ್ಯತೆಯನ್ನು ರಕ್ಷಿಸಬೇಕಿದೆ ಎಂದರು.

ಬೌದ್ಧ ಚಿಂತಕ ಬಿ.ಗೋಪಾಲ್ ಮಾತನಾಡಿ, ಭೋದ್‌ಗಯಾ ಕೇವಲ ಐತಿಹಾಸಿಕ ಸ್ಥಳವಲ್ಲ. ಭಗವಾನ್ ಬುದ್ಧರಿಗೆ ಜ್ಞಾನೋದಯವಾದ ಸ್ಥಳ. ಪ್ರಪಂಚದಾದ್ಯಂತ ಇರುವ ಬೌದ್ಧರು, ಭೋದ್‌ಗಯಾ ಬುದ್ಧವಿಹಾರವನ್ನು ಆಧ್ಯಾತ್ಮಿಕ ಕೇಂದ್ರವೆಂದು ಭಾವಿಸಿ, ಪೂಜಿಸುತ್ತಿದ್ದಾರೆ. ಆದ್ದರಿಂದ ಭೋದ್‌ಗಯಾ ನಿರ್ವಹಣೆಯ ಸಂಪೂರ್ಣ ಜವಾಬ್ದಾರಿಯನ್ನು ಬೌದ್ಧರಿಗೆ ನೀಡುವುದು ನ್ಯಾಯ ಸಮ್ಮತವಾಗಿದೆ ಎಂದರು.

ಮಾಜಿ ಮೇಯರ್ ಪುರುಷೋತ್ತಮ್ ಮಾತನಾಡಿ, ಬುದ್ಧರ ಅಹಿಂಸಾ ಮಾರ್ಗದಲ್ಲೇ ಭೋದ್‌ಗಯಾವನ್ನು ಮರಳಿ ಪಡೆಯುವ ಹೋರಾಟ ಮಾಡಬೇಕಿದೆ. ಬೌದ್ಧರ ನೆಲೆಯನ್ನು ಬೌದ್ಧರಿಗೆ ಒಪ್ಪಿಸುವುದು ನ್ಯಾಯಯುತವಾಗಿದ್ದು, ಪಡೆಯುವವರೆಗೂ ನಿರಂತರವಾಗಿ ಹೋರಾಟ ಮಾಡುತ್ತಿರಲೇಬೇಕು ಎಂದು ಹೇಳಿದರು.

ಮೈಸೂರು ವಿವಿ ಡೀನ್ ಪ್ರೊ.ಗುರುಸಿದ್ದಯ್ಯ ಸಂವಾದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ದಸಂಸ ಮುಖಂಡ ಅಹಿಂದ ಜವರಪ್ಪ, ಮಹೇಶ್ ಪಿ. ಮರಳ್ಳಿ, ಶಿವು ಬಂಡಳ್ಳಿ, ಬಿ.ಎಂ. ಲಿಂಗರಾಜು ಡಾ.ರಾಚಪ್ಪಾಜಿ, ಡಾ. ಕುಮಾರ್, ಅಪುರಾ, ಮಹೇಶ್ ಇರಸವಾಡಿ, ಡಾ.ನಿರಂಜನ್ ಕುಮಾರ್, ಡಾ.ಸುರೇಶ್, ಡಾ.ಗೋಪಾಲ್, ಡಾ. ಶ್ರೀನಿವಾಸ ಡಿ. ಮಣಗಳ್ಳಿ ಮತ್ತಿತರರಿದ್ದರು.

ಜ.31ರಂದು ಸ್ವಚ್ಛ ಮೈಸೂರು ರಸ ಪ್ರಶ್ನೆ

ಮೈಸೂರು,ಜ.27– ಸ್ವಚ್ಛ ಸರ್ವೇಕ್ಷಣಾ 2025–26ರ ಅಂಗವಾಗಿ ಮೈಸೂರು ನಗರ ಪಾಲಿಕೆ ವತಿಯಿಂದ ವಿದ್ಯಾರ್ಥಿಗಳಲ್ಲಿ ಸ್ವಚ್ಛತೆ, ಪರಿಸರ ಜಾಗೃತಿ ಹಾಗೂ ನಾಗರಿಕ ಜವಾಬ್ದಾರಿತನವನ್ನು ಉತ್ತೇಜಿಸುವ ಉದ್ದೇಶದಿಂದ 7 ರಿಂದ 9ನೇ ತರಗತಿ ಮತ್ತು ಪದವಿ ಕಾಲೇಜು ವಿದ್ಯಾರ್ಥಿಗಳಿಗೆ ಜ.31 ರಂದು ಬೆಳಗ್ಗೆ 10.30 ಗಂಟೆಗೆ ಸ್ವಚ್ಛ ಮೈಸೂರು ರಸ ಪ್ರಶ್ನೆ ಕಾರ್ಯಕ್ರಮವನ್ನು ಕಲಾಮಂದಿರದಲ್ಲಿ ಆಯೋಜಿಸಲಾಗಿದೆ.

ಈ ಕಾರ್ಯಕ್ರಮವನ್ನು ಮೈಸೂರು ನಗರ ಪಾಲಿಕೆ– ಶಾಲಾ ಶಿಕ್ಷಣ ಇಲಾಖೆ, ಕಾಲೇಜು ಶಿಕ್ಷಣ ಇಲಾಖೆ, ಮೈಸೂರು ವಿಶ್ವವಿದ್ಯಾನಿಲಯ ಹಾಗೂ ಎಕ್ಸೆಲ್ ಪಬ್ಲಿಕ್ ಶಾಲೆ ಇವರ ಸಹಯೋಗದೊಂದಿಗೆ ನಡೆಸಲಾಗುತ್ತಿದೆ. ರಸ ಪ್ರಶ್ನೆ ಸ್ಪರ್ಧೆಯಲ್ಲಿ ಶಾಲೆ–ಕಾಲೇಜಿನಿಂದ ವಿದ್ಯಾರ್ಥಿಗಳ 2 ಸದಸ್ಯರ ಒಂದು ತಂಡವನ್ನು ಆಯ್ಕೆ ಮಾಡಿ ಕಾರ್ಯಕ್ರಮದಲ್ಲಿ ಭಾಗವಹಿಸಬಹುದಾಗಿದೆ.

ಸ್ವಚ್ಛ ಭಾರತ ಮಿಷನ್, ಘನತ್ಯಾಜ್ಯ ನಿರ್ವಹಣೆ, ಪರಿಸರ ಸಂರಕ್ಷಣೆ, ಬಳಕೆಯ ನೀರಿನ ನಿರ್ವಹಣೆ ಹಾಗೂ ವಿವಿಧ ಸ್ವಚ್ಛತಾ ಉಪಕ್ರಮಗಳು ರಸಪ್ರಶ್ನೆಯ ವಿಷಯಗಳಾಗಿದ್ದು, ಪ್ರಥಮ, ದ್ವಿತೀಯ, ತೃತೀಯ ಬಹುಮಾನಗಳನ್ನು ನೀಡಲಾಗುತ್ತದೆ. ಭಾಗವಹಿಸಿದ ಎಲ್ಲ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರವನ್ನು ನೀಡಲಾಗುತ್ತದೆ.

ಪ್ರತಿ ಶಾಲಾ–ಕಾಲೇಜಿನಿಂದ ಕೇವಲ ಒಂದು ತಂಡಕ್ಕೆ ಮಾತ್ರ ಭಾಗವಹಿಸಲು ಅವಕಾಶ ಇರುತ್ತದೆ. ಪ್ರತಿ ತಂಡದಲ್ಲಿ ಕಡ್ಡಾಯವಾಗಿ 2 ಸದಸ್ಯರು ಮಾತ್ರ ಇರಬೇಕು. ಕ್ಯೂ ಆರ್ ಕೋಡ್ ಅಥವಾ ಲಿಂಕ್ https://forms.gle/z1LWwjJSnbxpcP ಅರ್ಜಿ ಬಳಸಿ ಆನ್‌ಲೈನ್ ಮೂಲಕ ಜ.25 ರೊಳಗೆ ನೋಂದಾಯಿಸಿಕೊಳ್ಳತಕ್ಕದ್ದು.

ಹೆಚ್ಚಿನ ಮಾಹಿತಿಗಾಗಿ ಮೈಸೂರು ನಗರ ಪಾಲಿಕೆಯ ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ) ದೂ: 9036716494/7760954056/9741593580 ಹಾಗೂ aeeenvmcc@gmail.com ಇ–ಮೇಲ್ ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಮೈಸೂರು ನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಂವಿಧಾನವೇ ಪ್ರಜೆಗಳ ಶಕ್ತಿ, ಭವಿಷ್ಯದ ದಿಕ್ಕು

ಭಾರತೀಯ ವಾಯುಸೇನೆಯ ಏರ್ ಕಮೋಡೋರ್ ಟಿ.ಎಂ ಶ್ರೀನಾಥ್



ಮೈಸೂರು, ಜ. 27– ಮೈಸೂರಿನ ಶಾರದಾ ವಿಲಾಸ ಶಿಕ್ಷಣ ಸಂಸ್ಥೆಯ ಆವರಣದಲ್ಲಿ 77ನೇ ಗಣರಾಜ್ಯೋತ್ಸವ ಸಮಾರಂಭವನ್ನು ಅತ್ಯಂತ ಸಂಭ್ರಮ ಸಡಗರದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಭಾರತೀಯ ವಾಯು ಸೇನೆಯ ಏರ್ ಕಮೋಡೋರ್ ಎಂ.ಶ್ರೀನಾಥ್ ಮಾತನಾಡಿ, ಸಂವಿಧಾನವೇ ಪ್ರಜೆಗಳ ಶಕ್ತಿ, ಭವಿಷ್ಯದ ದಿಕ್ಕು, ದೇಶದ ಆತ್ಮ. ಆದ್ದರಿಂದ ದೇಶವನ್ನು ರಕ್ಷಿಸುವ ಕಾರ್ಯದಲ್ಲಿ ನಾವೆಲ್ಲರೂ ಭಾಗಿಯಾಗಬೇಕು, ಭಯವನ್ನು ಮೀರಿದ ಹೋರಾಟವೇ ರಾಷ್ಟ್ರಪ್ರೇಮ. ತಾಯಿ ಭಾರತಾಂಬೆಯ ಸೇವೆಯನ್ನು 24 ಗಂಟೆಯೂ ಕರ್ತವ್ಯ ಪ್ರೇಮವನ್ನು ಜವಬ್ದಾರಿಯುತವಾಗಿ ನಿರ್ವಹಿಸುತ್ತಿರುವ ಸೈನಿಕರ ಸೇವೆ ಅವಿಸ್ಮರಣೀಯ. ಇಂದಿನ ಯುವಕರು ದೇಶ ಪ್ರೇಮವನ್ನು ಸದಾ ಬೆಳೆಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷರಾದ ಡಾ||ಬಿ.ಎಂ.ಸುಬ್ರಾಯ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಡಾ||ಬಿ.ಆರ್.ಅಂಬೇಡ್ಕರ್ ಅವರ ಸಂವಿಧಾನವೇ ನಮಗೆಲ್ಲ ಶಕ್ತಿ, ಮಾರ್ಗದರ್ಶನ. ಅದನ್ನು ಅನುಸರಿಸುತ್ತಾ ನಾವೆಲ್ಲರೂ ಬದುಕುತ್ತಿದ್ದೇವೆ ಎಂದು ತಿಳಿಸಿದರು.

ವೇದಿಕೆಯಲ್ಲಿ ಸಂಸ್ಥೆಯ ಗೌರವ ಕಾರ್ಯದರ್ಶಿ ಆರ್.ದಿನೇಶ್, ಆಡಳಿತ ಮಂಡಳಿಯ ಹಿರಿಯ ಸದಸ್ಯರಾದ ಆರ್.ನರಸಿಂಹ, ಎಸ್.ಎಲ್.ರಾಮಚಂದ್ರ, ಮೋಹನ್‌ಮೂರ್ತಿ, ಡಾ||ಟಿ.ಕೆ.ಉಮೇಶ್, ಶ್ರೀಮತಿ ಅನುರಾಧ ನಂದಕುಮಾರ್, ನಾಗೇಶ್ ಹನಸೋಗೆ, ಪ್ರಸಾದ್, ಶರತ್ ಭಾರಧ್ವಾಜ್ ರವರು ಉಪಸ್ಥಿತರಿದ್ದರು. ಕಳೆದ 30 ವರ್ಷಗಳಿಗೂ ಮಿಗಿಲಾಗಿ ಸಂಸ್ಥೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ಸಿಬ್ಬಂದಿ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ವಿದ್ಯಾರ್ಥಿಗಳನ್ನು ಹಾಗೂ ಅಧ್ಯಾಪಕರನ್ನು ಅಭಿನಂದಿಸಿ, ಗೌರವಿಸಲಾಯಿತು.

ಅದಮ್ಯ ಪ್ರತಿಭಾ ಚೇತನ ಪ್ರಶಸ್ತಿ



ಮೈಸೂರಿನ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸಭಾಂಗಣದಲ್ಲಿ ಅದಮ್ಯ ರಂಗ ಶಾಲೆ ವತಿಯಿಂದ ನಡೆದ ಕಾರ್ಯಕ್ರಮದಲ್ಲಿ ಬಹುಮುಖ ಪ್ರತಿಭೆ ನಾದಶ್ರೀ ಆರ್ ಭಟ್ ಅವರಿಗೆ ಅದಮ್ಯ ಪ್ರತಿಭಾ ಚೇತನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ವೇದಿಕೆಯಲ್ಲಿ ಕಸಾಪ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಸಂಘಟಕರಾದ ಸತೀಶ್ ಜವರೇಗೌಡ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ವಿವಿಯಲ್ಲಿ ಗಣರಾಜ್ಯೋತ್ಸವ

ಉನ್ನತ ಶಿಕ್ಷಣ ಸಂಸ್ಥೆಗಳು ಯುವಜನತೆಯಲ್ಲಿ ಕೌಶಲ್ಯ ತುಂಬಬೇಕು

ಕುಲಪತಿ ಪ್ರೊ. ಲೋಕನಾಥ್ ಸಲಹೆ



ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ಆವರಣದಲ್ಲಿ ನಡೆದ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಧ್ವಜಾರೋಹಣ ನೆರವೇರಿಸಿದರು.

ಮೈಸೂರು, ಜ.27(ಎಂಟಿವೈ)– ಉನ್ನತ ಶಿಕ್ಷಣ ಸಂಸ್ಥೆಗಳು ಯುವ ಜನತೆಯಲ್ಲಿ ನಾವೀನ್ಯತೆ, ಉದ್ಯಮಶೀಲತೆ ಮತ್ತು ಕೌಶಲಾಭಿವೃದ್ಧಿಯನ್ನು ಬೆಳೆಸಬೇಕು ಎಂದು ಮೈಸೂರು ವಿಶ್ವವಿದ್ಯಾಲಯ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಸಲಹೆ ನೀಡಿದ್ದಾರೆ.

ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ಆವರಣದಲ್ಲಿ 77ನೇ ಗಣರಾಜ್ಯೋತ್ಸವ ಕಾರ್ಯಕ್ರಮದ ಅಂಗವಾಗಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಮೈಸೂರು ವಿಶ್ವವಿದ್ಯಾಲಯವು ರಾಷ್ಟ್ರ ನಿರ್ಮಾಣದಲ್ಲಿ ಹಿಂದಿನಿಂದಲೂ ಬಹುದೊಡ್ಡ ಪರಂಪರೆಯನ್ನು ಹೊಂದಿದೆ. ಶಿಕ್ಷಣ ಮತ್ತು ಸಾಂವಿಧಾನಿಕ ಬದ್ಧತೆಯ ಮೂಲಕ ನಾವೆಲ್ಲಾ ಒಟ್ಟಾಗಿ ದೇಶ ಕಟ್ಟಲು ಪಣತೊಡಬೇಕು. ಗಣರಾಜ್ಯೋತ್ಸವವು ನಾಗರಿಕರಿಗೆ ಅವರ ಹಕ್ಕು ಹಾಗೂ ಕರ್ತವ್ಯಗಳನ್ನು ನೆನಪಿಸುತ್ತದೆ. ಭಾರತೀಯ ಸಂವಿಧಾನವು ಈ ದೇಶದ ವೈವಿಧ್ಯತೆಗೆ ಏಕೀಕೃತ ಚೌಕಟ್ಟನ್ನು ಒದಗಿಸುತ್ತದೆ. ಮಾತ್ರವಲ್ಲ, ಪ್ರತಿಯೊಬ್ಬ ಭಾರತೀಯನಿಗೂ ಘನತೆ ಮತ್ತು ಸಮಾನ ಅವಕಾಶವನ್ನು ಪ್ರತಿಪಾದಿಸುತ್ತದೆ ಎಂದು ಹೇಳಿದರು.

ಡಾ.ಬಿ.ಆರ್.ಅಂಬೇಡ್ಕರ್‌ರವರು ಸಾಮಾಜಿಕ ನ್ಯಾಯ ಮತ್ತು ದಮನಿತರ ಸಬಲೀಕರಣವನ್ನು ಬಲವಾಗಿ ಪ್ರತಿಪಾದಿಸಿದರು. ಜತೆಗೆ ಶಿಕ್ಷಣವನ್ನು, ವಿಮೋಚನೆ ಮತ್ತು ಪ್ರಗತಿಗೆ ಪ್ರಬಲ ಸಾಧನವೆಂದು ಪರಿಗಣಿಸಿದ್ದರು. ಪ್ರಜಾಪ್ರಭುತ್ವವು, ಸಾಮಾಜಿಕ ಮತ್ತು ಆರ್ಥಿಕ ಸಮಾನತೆಯಲ್ಲಿ ಬೇರೂರಿರಬೇಕು ಎಂದಿದ್ದರು. ಬಾಬಾ ಸಾಹೇಬರ ಆಲೋಚನೆಗಳು, ನೀತಿ–ನಿರೂಪಣೆಯೂ ಸದಾ ರಾಷ್ಟ್ರ ನಿರ್ಮಾಣಕ್ಕೆ ಮಾರ್ಗದರ್ಶನ ನೀಡುತ್ತಲೇ ಇರುತ್ತವೆ. ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತೆಯಲ್ಲಿ ಭಾರತವು ತ್ವರಿತ ಪ್ರಗತಿಯನ್ನು ಸಾಧಿಸುತ್ತಿದೆ. ಶಿಕ್ಷಣವು, ಸುಸ್ಥಿರ ರಾಷ್ಟ್ರೀಯ ಅಭಿವೃದ್ಧಿಯ ಅಡಿಪಾಯವಾಗಿ ಉಳಿದಿದೆ ಎಂದರು.

ಕಾರ್ಯಕ್ರಮದಲ್ಲಿ ಕುಲಸಚಿವರಾದ ಎಂ.ಕೆ. ಸವಿತಾ, ಪರೀಕ್ಷಾಂಗ ಕುಲಸಚಿವ ಪ್ರೊ.ಎನ್. ನಾಗರಾಜ, ಸಿಂಡಿಕೇಟ್ ಸದಸ್ಯರು, ಶೈಕ್ಷಣಿಕ ಮಂಡಳಿ ಸದಸ್ಯರು, ಎಲ್ಲಾ ನಿಕಾಯ ಡೀನ್, ನಿರ್ದೇಶಕರು, ಪ್ರಾಂಶುಪಾಲರು, ವಿಭಾಗಗಳ ಮುಖ್ಯಸ್ಥರು, ಅಧ್ಯಾಪಕರು, ಅಧ್ಯಾಪಕೇತರರು, ಸಂಶೋಧಕರು, ವಿದ್ಯಾರ್ಥಿಗಳು, ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶಕರಾದ ಪ್ರೊ.ಸಿ.ಗುರುಸಿದ್ದಯ್ಯ, ಡಾ. ಸುಷ್ಮಾ ಎಸ್.ಎನ್. ಹಾಗೂ ನಿರ್ದೇಶನಾಲಯದ ಸಿಬ್ಬಂದಿ ವರ್ಗ ಭಾಗವಹಿಸಿದ್ದರು.

ಸಮಸಮಾಜ ನಿರ್ಮಾಣ ಈಗ ಎಲ್ಲರ ಗುರಿಯಾಗಬೇಕು

ರಾಜ್ಯ ಮುಕ್ತ ವಿವಿ ಕುಲಪತಿ ಪ್ರೊ. ಶರಣಪ್ಪ ವಿ.ಹಲಸೆ ಪ್ರತಿಪಾದನೆ



ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆಡಳಿತ ಭವನದ ಬಳಿ ಆಯೋಜಿಸಿದ್ದ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ. ಹಲಸೆ ಧ್ವಜಾರೋಹಣ ನೆರವೇರಿಸಿದರು.

ಮೈಸೂರು,ಜ.27(ಎಂಟಿವೈ)– ಸಮಸಮಾಜ ನಿರ್ಮಾಣಕ್ಕೆ ಎಲ್ಲರೂ ಒಟ್ಟಾಗಿ ದುಡಿಯುವ ಸಂಕಲ್ಪ ಮಾಡಬೇಕು ಎಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಕುಲಪತಿ ಪ್ರೊ.ಶರಣಪ್ಪ ವಿ. ಹಲಸೆ ಮನವಿ ಮಾಡಿದ್ದಾರೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಆಡಳಿತ ಭವನದ ಬಳಿ ಆಯೋಜಿಸಿದ್ದ 77ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿದ ಬಳಿಕ, ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ, ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಮ ಸಮಾಜ ನಿರ್ಮಾಣಕ್ಕೆ ನಾವು ನಮ್ಮ ಮನಸ್ಥಿತಿಯನ್ನು ಬದಲಿಸಿಕೊಳ್ಳಬೇಕು. ಭ್ರಾತೃತ್ವ ಭಾವನೆಯ ಮೂಲಕ ಸದೃಢ ಸಮಾಜ ನಿರ್ಮಿಸಬೇಕು. ಡಾ.ಬಿ.ಆರ್. ಅಂಬೇಡ್ಕರ್ ಅವರು ನೀಡಿರುವ ಸಂವಿಧಾನವನ್ನು ಕಾರ್ಯರೂಪಕ್ಕೆ ತರುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು.

ಸ್ವಾತಂತ್ರ್ಯಪೂರ್ವದಲ್ಲಿ ಭಾರತ 560 ರಾಜ್ಯಗಳಾಗಿ ಹರಿದು ಹಂಚಿ ಹೋಗಿತ್ತು. ನಮ್ಮಲ್ಲಿನ ಒಳ ಜಗಳದ ಲಾಭ ಪಡೆದು ಬ್ರಿಟಿಷರು, ಮೊಘಲರು, ನಿಜಾಮರು ಬಲವಾಗಿ ಬೇರೂರಿದರು. ಆಡಳಿತ ನಡೆಸುತ್ತಿದ್ದರು. ಮತ್ತೆ ಆ ಸ್ಥಿತಿ ಬರಬಾರದು. ದೇಶ ಅಖಂಡವಾಗಿ ಉಳಿಯಬೇಕು. ರಾಮರಾಜ್ಯ ನಿರ್ಮಾಣವಾಗಬೇಕು. ಆ ಮೂಲಕ ಗಾಂಧೀಜಿ ನೇತೃತ್ವದಲ್ಲಿ ಗಳಿಸಿದ ಸ್ವಾತಂತ್ರ್ಯ, ಡಾ.ಅಂಬೇಡ್ಕರ್ ಅವರು ರಚಿಸಿಕೊಟ್ಟಿರುವ ಸಂವಿಧಾನ ಸಾರ್ಥಕವಾಗಬೇಕು ಎಂದು ಹೇಳಿದರು.

ಎಲ್ಲಾ ಪ್ರತಿಕೂಲ ಹವಾಮಾನ ಪರಿಸ್ಥಿತಿಯಲ್ಲಿಯೂ ಗಡಿ ಕಾಯುವ ಸೈನಿಕರು ಹಾಗೂ ಅನ್ನನೀಡುವ ರೈತರನ್ನು ಸ್ಮರಿಸುವ ಕೆಲಸ ಆಗಬೇಕು. ಸ್ವಾತಂತ್ರ್ಯ ನಂತರ ದೇಶದಲ್ಲಿ ಸಾಕಷ್ಟು ಬದಲಾವಣೆಗಳು ಆಗಿದ್ದರೂ ಸಂಶೋಧನಾ ಕ್ಷೇತ್ರದಲ್ಲಿ ಮತ್ತಷ್ಟು ಪ್ರಗತಿ ಆಗಬೇಕು ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಕುಲಸಚಿವ ಪ್ರೊ. ಎಸ್.ಕೆ. ನವೀನ್ ಕುಮಾರ್, ಶೈಕ್ಷಣಿಕ ಡೀನ್ ಪ್ರೊ.ರಾಮನಾಥಂ ನಾಯ್ಡು, ಪರೀಕ್ಷಾಂಗ ಕುಲಸಚಿವ ಡಾ.ಸಿ.ಎಸ್. ಆನಂದಕುಮಾರ್, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಅಧ್ಯಯನ ಕೇಂದ್ರದ ಡೀನ್ ಡಾ.ಎನ್.ಆರ್. ಚಂದ್ರೇಗೌಡ, ರಾಜೀವ್‌ಗಾಂಧಿ ಆರೋಗ್ಯ ವಿವಿ ಸಿಂಡಿಕೇಟ್ ಸದಸ್ಯ ಡಾ.ರಾಮನಾಥ್ ಉಪಸ್ಥಿತರಿದ್ದರು.

ಲಾರಿ ಡ್ರೈವರ್ - 3 Nos
ಬೇಕಾಗಿದ್ದಾರೆ
ಕಾವೇರಿ ಕಾಂಕ್ರೀಟ್ ಪ್ರೊಡಕ್ಟ್ಸ್ – ಚಿಲ್ಕುಂದ
ಮೈಸೂರು ಮಡಿಕೇರಿ ಮುಖ್ಯರಸ್ತೆ, ಹುಣಸೂರು ತಾಲೂಕು - 571 113
ಭತ್ಯ ಸೇರಿ ತಿಂಗಳಿಗೆ ಸಂಬಳ : ರೂ. 25,000/-
ಉಚಿತ ವಸತಿ ಸೌಕರ್ಯ, ಫ್ಯಾಮಿಲಿ ಕ್ವಾರ್ಟರ್ಸ್, ಬೇಕಿದ್ದರೆ ಲಭ್ಯವಿದೆ.
Call: 96862 44144 / 94490 04191

ಬೇಕಾಗಿದ್ದಾರೆ
ಸಿಬ್ಬಂದಿ–4, ಕರ್ತವ್ಯಗಳು– ರೊಟ್ಟಿ, ಮುದ್ದೆ, ಚಪಾತಿ ಮಾಡುವುದು ಮತ್ತು ತರಕಾರಿ ಹೆಚ್ಚುವುದು. ಪಾಳಿಗಳು- 6 am, 3 pm, 1-10 pm, ನೇರ ಭೇಟಿನೀಡಿ
KELLATTY kitchen
#6 ಜೋಡಿ ಬಸವಣ್ಣ ರಸ್ತೆ, ಕುವೆಂಪುನಗರ, ಮೈಸೂರು
9986758555

ಶ್ರೀ ಸಂಜೀವಿನಿ ಗೋಲ್ಡ್ ಕಂಪನಿ
ನೀವು ಗಿರವಿ ಇಟ್ಟು ಬಿಡಿಸಿಕೊಳ್ಳಲಾಗದ ಚಿನ್ನವನ್ನು ಬಿಡಿಸಿ, ಚಿನ್ನದ ಗುಣಮಟ್ಟದ ಆಧಾರದ ಮೇಲೆ ಕೊಂಡುಕೊಳ್ಳಲಾಗುತ್ತದೆ. ಉಳಿದ ಹಣವನ್ನು ನಿಮ್ಮ ಸ್ಥಳದಲ್ಲೇ ನೀಡಲಾಗುತ್ತದೆ.
ಚಿನ್ನದ ದರ– 15000(24CT)
9108146123

G9 projects
Designing your Dreams
V Developers
POORVA SHELTERS PHASE - I, II & III
Price Starts from ₹ 2,299/-sq.ft
20×30 | 30×40 & 20×40 | 30×50
Near to Marvel PU College
Lalithadripura Ring road Mysuru
8055-004-400

ಸವಿನೆನಪು


ಶ್ರೀಮತಿ ಚೆಲುವಮ್ಮ   ಯಜಮಾನ್ ಶ್ರೀ ವೆಂಕಟೇಶ್‌ಗೌಡ್ರು
ನೀವು ನಮ್ಮನ್ನಗಲಿ ಹಲವು ವರ್ಷಗಳಾಗಿದ್ದರೂ ನಿಮ್ಮ ಮಾರ್ಗದರ್ಶನ, ಕೃಪಾಶೀರ್ವಾದದಿಂದ ಮುನ್ನಡೆಯುತ್ತಿದ್ದೇವೆ. ಭೌತಿಕವಾಗಿ ನೀವಿಲ್ಲದಿದ್ದರೂ ನಮ್ಮ ಮನದಲ್ಲಿ ಸದಾ ಚಿರ ಸ್ಥಾಯಿಯಾಗಿ ನೆಲೆಸಿದ್ದೀರಿ.
ಉಸ್ತಾದ್ ಡಿ. ಯಾಲಕ್ಕಿಗೌಡರ ಕುಟುಂಬ ವರ್ಗ, ಕೆ.ಜಿ.ಕೊಪ್ಪಲು


NOT GETTING YOUR
STAR OF MYSORE & ಮೈಸೂರು ಮಿತ್ರ
Call: 98452-96447 / 99003-82840

ಮೈಸೂರು ಮಿತ್ರ
46
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

WANTED IMMEDIATELY
For a reputed resort in Mysuru City
> FRONT OFFICE ASSOCIATE
> HOUSE KEEPING STAFFS
> ASST.COOKS
> WAITERS
> SECURITY GUARD
Contact:- 99455 46713

Dollar Estate Properties Pvt. Ltd. Mysuru
WE ARE HIRING FOR
- Team Leader
- Sales Executives
- Tele Calling

Any Degree with property relevant experience
20,000 + Salary

- Sales Manager 25,000 + Salary

with Attractive salary + Incentives
Call : 95383 85049, 91486 90763
0821 - 4247004

FOR SALE
Wholesale & Retail Sale
Fancy Store
10 Lakhs Less from Total Amount
Tailoring, Gift, Fancy, Plastic Items at Hunsur-Mysore Road, Near Ganapathy Temple, Hinkal, Mysore.
Call: 9243580623

CRETA CAR FOR SALE
Company Executive maintained, single handed TOP END, fully loaded with 10.3" screen, 360 degree camera, new battery, new tyre, diesel car 2016 model, silver colour, in Excellent condition for Sale @ 10.5 lakh (negotiable)
Contact - 9900718924

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ

ಶ್ರೀ ಎಂ.ಎಸ್. ಏಕಾಂಬರೀಶ
ಮಾಲೀಕರು, ಸಾನ್ವಿ ಮತ್ತು ವೈಷ್ಣವಿ ಲೇಔಟ್
(ಶ್ರೀಮತಿ ಲೇಟ್ ಪುಟ್ಟತಾಯಮ್ಮ, ಉ॥ ಬೋರಮ್ಮ ಮತ್ತು ಶ್ರೀ ಲೇಟ್ ಯ॥ಛೇ॥ ಎಂ.ಜೆ. ಸಿದ್ದೇಗೌಡರ ಮಗ)

ಇವರು ದಿನಾಂಕ: 18–01–2026 ಶನಿವಾರ ದೈವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ತತ್ಸಂಬಂಧವಾಗಿ ಉತ್ತರ ಕ್ರಿಯಾದಿ ಭೂಶಾಂತಿ ಕಾರ್ಯವನ್ನು ದಿನಾಂಕ: 28–01–2026 ಬುಧವಾರ ಬೆಳಿಗ್ಗೆ 10–30 ಗಂಟೆಗೆ ನಮ್ಮ ಸ್ವಗೃಹ, ಮರಟಿಕ್ಯಾತನಹಳ್ಳಿ ಗ್ರಾಮದಲ್ಲಿ ಏರ್ಪಡಿಸಿರುವುದರಿಂದ ಆಹ್ವಾನ ಪತ್ರಿಕೆ ತಲುಪದವರು ಇದನ್ನೇ ಆಹ್ವಾನ ಎಂದು ತಿಳಿದು, ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿಸುತ್ತೇವೆ.

ದುಃಖತಪ್ತರು : ಶ್ರೀಮತಿ ಲೇಟ್ ನಿಂಗಮ್ಮ ಮತ್ತು ಶ್ರೀ ಲೇಟ್ ॥ಯ॥ ಜೋಗೇಗೌಡರ ಕುಟುಂಬವರ್ಗದವರು, ಶ್ರೀಮತಿ ಲೇಟ್ ಪುಟ್ಟತಾಯಮ್ಮ ॥ಉ॥ ಬೋರಮ್ಮ ಮತ್ತು ಶ್ರೀ ಲೇಟ್ ॥ಯ॥ ॥ಛೇ॥ ಎಂ.ಜೆ. ಸಿದ್ದೇಗೌಡರ ಕುಟುಂಬವರ್ಗದವರು, ಮೃತರ ಪತ್ನಿ ಶ್ರೀಮತಿ ಪುಷ್ಪಾಲತಾ, ಶ್ರೀಮತಿ ಶಾರದಮ್ಮ ಮತ್ತು ಶ್ರೀ ॥ಯ॥ ಎಂ.ಎಸ್. ಗಂಗಾಧರ್, ಶ್ರೀಮತಿ ಸಾವಿತ್ರಮ್ಮ ಮತ್ತು ಶ್ರೀ ಎಂ.ಎಸ್. ಜಗದೀಶ್, ಗಂಡು ಮಕ್ಕಳು, ಹೆಣ್ಣು ಮಕ್ಕಳು, ಅಳಿಯಂದಿರು, ಮೊಮ್ಮಕ್ಕಳು, ಮರಟಿಕ್ಯಾತನಹಳ್ಳಿ ಗ್ರಾಮಸ್ಥರು ಹಾಗೂ ಬಂಧು ಮಿತ್ರರು
ಹರಿಕಥೆ : ರಾತ್ರಿ 9–00 ಗಂಟೆಗೆ

STAR OF MYSORE
SPECIAL ISSUE
Star of Mysore is completing 48 years of service on 16th February 2026 and entering 49th year of publication. As in the past, this year too we will be publishing a Special Issue.
We request our advertisers & patrons to release their advertisements before 5th February to facilitate printing as per schedule.
HEAD OFFICE
0821-2496520 (5-LINES) Ad Dept. - 0821-2496522 / 23
Email : ad@starofmysore.com
Maria G. Fernandes - Advt. Manager: 94485-25060/80730-30835
Joy Anthony Dove - Sr. Executive-Ad Sales - 89516-68960
Prema - Sr. Executive Advertising - 98805-49879
• K.R. Circle Office : 0821-2431774 • D.D. Urs Road Office : 0821-2428695
• Kodagu Office : 97314-69871 • Mandya Office : 87629-60325
• Chamarajanagar : 92422-65657 • T.N. Pura : 94483-05750
• Nanjangud : 98805-09200 • Bengaluru : 98440-46761

PREMIUM SITE FOR SALE @ KNS CALISTO
Dimension: 60x40
Facing: East
Road Width: 60 Feet
Call: 9886048471

WANTED
Receptionist
For a Reputed Hotel in Ittigegud, Mysore.
Contact: 8296792009

4ನೇ ವರ್ಷದ ಸವಿನೆನಪು

ಆರ್. ವಿಶ್ವನಾಥ
ಸದಾ ನಿಮ್ಮ ನೆನಪಿನಲ್ಲಿರುವ
ಪತ್ನಿ: ರತ್ನ, ಮಗ: ಸುನಿಲ್ ಕುಮಾರ್ ವಿ, ದೀಪಕ್, ಪ್ರೀತಿಯ ಮೊಮ್ಮಗಳು ನೇತ್ರಾವತಿ ಬಿ

24ನೇ ವರ್ಷದ ಸವಿನೆನಪು

ಭೋಗೇಶ್ ಎಂ.ಕೆ.
ನಿಧನ : 27.1.2002
ನೀವು ನಮ್ಮನ್ನಗಲಿ 24 ವರ್ಷ ಕಳೆದರೂ ನಿಮ್ಮ ಸವಿನೆನಪು ನಮ್ಮ ಹೃದಯದಲ್ಲಿ ಸದಾ ನೆಲೆಸಿದೆ. ಭಗವಂತನು ನಿಮ್ಮ ಆತ್ಮಕ್ಕೆ ಚಿರಶಾಂತಿಯನ್ನು ನೀಡಲೆಂದು ಬಯಸುವ,
ಪತ್ನಿ ಶಾಂತ, ರೇವಣ್ಣ, ರೂಪ ಹಾಗೂ ಕುಟುಂಬವರ್ಗದವರು

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ
ಶ್ರೀ ಡಾ|| ಎನ್. ವಿಜಯ್ ಚೆಲುವರಾಜ್.
ನಂ. 1246, 3ನೇ ಕ್ರಾಸ್, ಗಂಗೇ ರಸ್ತೆ, ಜಿ ಮತ್ತು ಹೆಚ್ ಬ್ಲಾಕ್, ಕುವೆಂಪುನಗರ ಮೈಸೂರು 570023
ಇವರು ಮಾಡುವ ವಿಜ್ಞಾಪನೆಗಳು
ನಮ್ಮ ಪೂಜ್ಯ ತಂದೆಯವರಾದ



ಶ್ರೀಯುತ ಶ್ರೀ ಸಿ. ನರಸೇಗೌಡ ರವರು
ಭಾನವಿ ಚಾರಿಟೇಬಲ್ ಟ್ರಸ್ಟ್ ಹಾಗೂ ಭಾನವಿ ಆಸ್ಪತ್ರೆ ಸಂಸ್ಥಾಪಕರು,
ಒಕ್ಕಲಿಗರ ಸಂಘದ ಮಾಜಿ ಅಧ್ಯಕ್ಷರು ಮತ್ತು ಹಿರಿಯ ಕಾಂಗ್ರೆಸ್ ನಾಯಕರು
(ಲೇಟ್ ಕೆಂಪಮ್ಮ ಮತ್ತು ಲೇಟ್ ಚಲುವೇಗೌಡ ರವರ ಪುತ್ರ)
ದಿನಾಂಕ: 17-01-2026 ನೇ ಶನಿವಾರದಂದು ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ದಿನಾಂಕ: 28-01-2026 ನೇ ಬುಧವಾರ ಬೆಳಿಗ್ಗೆ 09:30 ರಿಂದ 11:30 ಗಂಟೆಗೆ ಹೊಸಹುಂಡಿ ಗ್ರಾಮದ ನಮ್ಮ ಸ್ವಗೃಹದಲ್ಲಿ ಉತ್ತರ ಕ್ರಿಯಾದಿ ಭೂಶಾಂತಿ ಕಾರ್ಯವನ್ನು ನೆರವೇರಿಸಲಾಗುತ್ತದೆ. ತಾವುಗಳು ಆಗಮಿಸಿ ಅಗಲಿದ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ತಮ್ಮಲ್ಲಿ ಕೋರಿಕೊಳ್ಳುತ್ತೇವೆ.
ಭೋಜನ: ಮಧ್ಯಾಹ್ನ 01-00 ಗಂಟೆಗೆ
ಇಂತಿ ದುಃಖತಪ್ತರು: ಕುಟುಂಬವರ್ಗದವರು ಹಾಗೂ ಬಂಧು ಮಿತ್ರರು

ಶ್ರೀಯುತ ಶ್ರೀ ಸಿ. ನರಸೇಗೌಡ
ಜನನ : 14-01-1942   ನಿಧನ : 17-01-2026

ಇದನ್ನು ನಮ್ಮ ವೈಯಕ್ತಿಕ ವಿನಂತಿ ಮತ್ತು ವಿನಮ್ರ ಆಹ್ವಾನ ಎಂದು ಭಾವಿಸಿ.